ಸಂಪುಟ: 04 ಸಂಚಿಕೆ: 295 ಪುಟಗಳು: 08 ಮಂಗಳವಾರ 07 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ವ್ಯಕ್ತಿಯು ತನ್ನ ಸ್ವಂತ ಮೋಕ್ಷಕ್ಕಾಗಿ ಕೆಲಸ ಮಾಡಬೇಕು; ಬೇರೆ ದಾರಿಯಿಲ್ಲ, ಮತ್ತು ಸಮಾಜದೊಂದಿಗೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಎಲ್ಲರೂ ಊಟಕ್ಕೆ ಸೇರಿದರೆ ರಾಜಕೀಯ ಏಕೆ ಬೆರೆಸುತ್ತಿರಿ

• ಉದಯವಾಹಿನಿ, ನವದೆಹಲಿ

ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕುಟುಂಬದ ಜೊತೆಗೆ ವಿದೇಶಕ್ಕೆ ತೆರಳಿದ್ದರು. ಇದೆ ಸಂದರ್ಭದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಮನೆಯಲ್ಲಿ ಔತಣಕೂಟ ಏರ್ಪಡಿಸಿಲಾಗಿತ್ತು. ಸೇರಿದಂತೆ 35 ಶಾಸಕರು ಹಲವು ಸಚಿವ ಭಾಗಿಯಾಗಿದ್ದರು. ಈ ವಿಚಾರವಾಗಿ ಡಿಸಿಎಂ ಡಿಕೆ ಶಿವಕುಮಾರ್ ಔತಣಕೂಟಕ್ಕೆ ಸೇರಿದರೆ ಅದಕ್ಕೆ ರಾಜಕೀಯ ಏಕೆ ಬೇರೆಸುತ್ತಿರಿ ಎಂದು ಸಿಡಿಮಿಡಿಗೊಂಡಿದ್ದಾರೆ. ನಾಲ್ಕು ವರ್ಷದಿಂದ ಎಲ್ಲೂ ಹೊರಗೆ ಹೋಗಿರಲಿಲ್ಲ. ಹೀಗಾಗಿ ಕುಟುಂಬದ ಜೊತೆಗೆ ಹೊಸ ವರ್ಷಕ್ಕೆ ವಿದೇಶಕ್ಕೆ ತೆರಳಿದ್ದ. ಔತಣಕೂಟಕ್ಕೆ ಸೇರಿದ್ದನ್ನೂ ರಾಜಕೀಯ ಯಾಕೆ ಬೆರೆಸುತ್ತೀರಿ. ಎಲ್ಲಾರೂ ಊಟಕ್ಕೆ ಸೇರಿದರೆ ತಪ್ಪೇನು ನಾನು ಕೆಲವು ಬಾರಿ ಊಟಕ್ಕೆ ಕರೆದಿದ್ದೇನೆ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಕ್ಯಾಬಿನೆಟ್ ಪುನರ್ ರಚನೆ ನಿಮ್ಮನ್ನು ಬ್ಯುಸಿಯಲ್ಲಿಡಲು ದಾರಿ ತಪ್ಪಿಸುತ್ತಿದ್ದಾರೆ ಎಂದರು.

## ಸೋಂಕು ಹರಡದಂತೆ ಸರ್ಕಾರ ಮುಂಜಾಗ್ರತಾ ಕ್ರಮ: ಸಿಎಂ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಹೆಚ್‌ಎಂಪಿವಿ ವೈರಸ್‌ನ ಎರಡು ಪ್ರಕರಣ ಪತ್ತೆಯಾದ ಹಿನ್ನಲೆಯಲ್ಲಿ, ಸೋಂಕು ಹರಡದಂತೆ ಸರ್ಕಾರ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಚೈನಾ ದೇಶದಲ್ಲಿ ಹೆಚ್ ಎಂ ಪಿ ವಿ ವೈರಸ್ ಕಾಣಿಸಿಕೊಂಡಿದ್ದು. ಕರ್ನಾಟಕದಲ್ಲಿ ಈ ವೈರಸ್ ಪತ್ತೆಯಾಗಿರುವ ಮಾಹಿತಿ ದೊರೆತಿದೆ. ಆದ್ದರಿಂದ ಈ ವೈರಸ್ ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ. ಆರೋಗ್ಯ ಸಚಿವರು ಈಗಾಗಲೇ ಸಭೆ ನಡೆಸುತ್ತಿದ್ದು ವೈರಸ್ ತಡೆಗೆ ಆರೋಗ್ಯ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗಳು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂದರು. ಸೋಂಕು ತಡೆಯ ಕ್ರಮವಾಗಿ ವಿಮಾನ ನಿಲ್ದಾಣಗಳಲ್ಲಿ ಸ್ಕ್ರೀನಿಂಗ್ ಪುನ: ಪ್ರಾರಂಭಿಸುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ಆರೋಗ್ಯ ಸಚಿವರು ಸಭೆ ನಡೆಸುತ್ತಿದ್ದು ರಾಜ್ಯದಲ್ಲಿ ತೆಗೆದುಕೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ತೀರ್ಮಾನಿಸಲಾಗುವುದು ಎಂದರು. ನಕ್ಸಲರು ಶರಣಾಗುವ ಸಾಧ್ಯತೆಯಿದೆ.ನಕ್ಸಲರ ಶರಣಾಗತಿಗೆ ಸರ್ಕಾರ ಸಿದ್ಧವಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ, ನಕ್ಸಲರು ಶರಣಾಗಲಿ ಎಂದು ಕರೆ ನೀಡಿದ್ದೇನೆ ಹಾಗೂ ನಕ್ಸಲರ ಮನಃಪರಿವರ್ತನೆಯಾಗಿ ಶರಣಾಗುವ ಸಾಧ್ಯತೆಯಿದೆ. ಸಮಾಜದ ಮುಖ್ಯವಾಹಿನಿಗೆ ಅವರನ್ನು ಕರೆತರುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದರು.

## ಕೋಲ್ಕತ್ತಾದಿಂದ ಬೆಂಗಳೂರಿನತ್ತ ಚಾಲಕ ರಹಿತ ರೈಲು




• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಬಹುನಿರೀಕ್ಷಿತ ಹಳದಿ ಮಾರ್ಗದಲ್ಲಿ ಸಂಚಾರ ಮಾಡಲಿರುವ ರೈಲು ಕೊಲ್ಕತ್ತಾದ ಟಿಟಾಘರ್‌ನಿಂದ ಬೆಂಗಳೂರಿನತ್ತ ಹೊರಟಿದೆ. ಇನ್ನು 15 ದಿನದಲ್ಲಿ ಬೆಂಗಳೂರಿನ ಹೆಬ್ಬಗೋಡಿ ಡ್ರೈವರ್ ಲೆಸ್ ರೈಲು ತಲುಪಲಿದೆ.

ಆ ಮೂಲಕ ಹಳದಿ ಮಾರ್ಗದ ಉದ್ಘಾಟನೆಗೆ ಕಾಯುತ್ತಿದ್ದವರಿಗೆ ನಮ್ಮ ಮೆಟ್ರೋ ಗುಡ್ ನ್ಯೂಸ್ ನೀಡಿದೆ. ಆರ್ವಿ ರೋಡ್ ಟು ಬೊಮ್ಮಸಂದ್ರ ನಡುವಿನ ಹಳದಿ ಮಾರ್ಗದಲ್ಲಿ ಈ ರೈಲು ಸಂಚಾರ ಮಾಡಲಿದೆ. ಕೊಲ್ಕತ್ತಾದ ಟಿಟಾಘರ್‌ನಲ್ಲಿ ಆತ್ಮನಿರ್ಭರ ಭಾರತದ ಅಡಿಯಲ್ಲಿ ತಯಾರಿಸಲಾಗಿದೆ. ಹಳದಿ ಮಾರ್ಗಕ್ಕೆ ರೈಲು ಸೆಟ್ ಪೂರೈಕೆಗೆ ಬಿಎಂಆರ್‌ಸಿಎಲ್ ಅಧಿಕಾರಿಗಳ ಸಮ್ಮುಖದಲ್ಲಿ ಕೇಂದ್ರ ಸಚಿವ ಮನೋಹರ್ ಲಾಲ್ ಖಟ್ಟರ್ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಕೊಲ್ಕತ್ತಾದ ಘಟಕದಿಂದ ರೈಲು ಸೆಟ್ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದು, ಇನ್ನು ಮುಂದಿನ ದಿನಗಳಲ್ಲಿ ಇಲ್ಲಿಂದಲೇ ತಿಂಗಳಿಗೆ 1 ಮೆಟ್ರೋ ರೈಲು ವಿತರಿಸಲು ತಯಾರಿ ನಡೆಸಲಾಗುತ್ತಿದೆ. ನಂತರ ಸೆಪ್ಟೆಂಬರ್ ತಿಂಗಳಿನಿಂದ 2 ರೈಲು ಸೆಟ್‌ಗಳನ್ನು ಪೂರೈಸಲು ಟಿಟಾಘರ್ ಸಿದ್ಧತೆ ನಡೆಸಿದೆ ಎಂದು ತಿಳಿಸಿದ್ದರು.



• ಎಚ್‌ಎಂಪಿವಿ ವೈರಸ್ ತಡೆಗೆ ಮಾರ್ಗಸೂಚಿ ಬಿಡುಗಡೆ • ದೇಶದಲ್ಲಿ 3 ಎಚ್‌ಎಂಪಿವಿ ಸೋಂಕಿತ ಪ್ರಕರಣಗಳು ಪತ್ತೆ • ದೃಢಪಡಿಸಿದ ಆರೋಗ್ಯ ಸಚಿವಾಲಯ

# ಚೀನಾ HMPV ಸೃಷ್ಟಿ ಭಾರತಕ್ಕೆ ವಕ್ರದೃಷ್ಟಿ

**ಬೆಂಗಳೂರಲ್ಲಿ ಎಚ್‌ಎಂಪಿವಿ ವೈರಸ್**

**ಸೋಂಕಿತ ಮಕ್ಕಳು ಆಸ್ಪತ್ರೆಯಿಂದ ಡಿಸ್ಚಾರ್ಜ್ ಎಲ್ಲರಿಗೂ ಬಂತು ಆತ್ಮಸ್ಥೈರ್ಯ!**

**ರಾಜ್ಯಗಳಿಗೆ ಸೂಚನೆ**

ಎಚ್‌ಎಂಪಿವಿ ಕುರಿತಂತೆ ಜನಜಾಗೃತಿ ಮೂಡಿಸಬೇಕು ಹಾಗೂ ಎಚ್ಚರಿಕೆಯಿಂದ ಇರಬೇಕು ಎಂದು ಕೇಂದ್ರ ಸರ್ಕಾರ ಎಲ್ಲಾ ರಾಜ್ಯ ಸರ್ಕಾರಗಳಿಗೆ ಸೂಚನೆ ನೀಡಿದೆ. ಜ.6ರಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ಅದರ ಬೆನ್ನಲ್ಲೇ ರಾಜ್ಯಾದ್ಯಂತ ಎಚ್ ಎಂಪಿವಿ ವೈರಸ್ ತಡೆಗೆ ಕೆಲವು ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಾಗಿದೆ. ಅದರಂತೆ, ಕೆಮ್ಮು, ಶೀತ, ನೆಗಡಿ, ಉಸಿರಾಟದ ತೊಂದರೆ ಇತ್ಯಾದಿಗಳು ಕಂಡುಬಂದರೆ ಕೂಡಲೇ ವೈದ್ಯರನ್ನು ಸಂಪರ್ಕಿಸುವಂತೆ ಸಾರ್ವಜನಿಕರಿಗೆ ಸೂಚಿಸಿದ್ದಾರೆ.




1 ಬೆಂಗಳೂರಿನಲ್ಲಿ ಹೊಸ ಎಚ್‌ಎಂಪಿವಿ ವೈರಸ್ ಸೋಂಕಿನ ಎರಡು ಕೇಸ್ ಗಳು ಪತ್ತೆಯಾಗಿದ್ದು, ಸಾರ್ವಜನಿಕರಲ್ಲಿ ಆತಂಕ ಸೃಷ್ಟಿ.

2 ಸೋಂಕಿತ ಮಕ್ಕಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ

3 ಇದೀಗ ಆರೋಗ್ಯ ಚೇತರಿಸಿಕೊಂಡಿದ್ದು, ಆಸ್ಪತ್ರೆಯಿಂದ ಡಿಸ್ಚಾರ್ಜ್

4 ಕೇಂದ್ರ ಸರ್ಕಾರ ಎಚ್‌ಎಂಪಿವಿ ಸೋಂಕು ಮಾರಣಾಂತಿಕವಲ್ಲ: ಸಾಮಾನ್ಯ ಶೀತ, ಕೆಮ್ಮು ಮತ್ತು ಜ್ವರ ಕಾಣಿಸಿಕೊಳ್ಳಬಹುದು ತಜ್ಞರ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಚೀನಾದಲ್ಲಿ ಹೊಸದಾಗಿ ಹರಡಿರುವ ಎಚ್‌ಎಂಪಿವಿ ವೈರಸ್ ಸೋಂಕಿನ ಎರಡು ಕೇಸ್ ಗಳು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ರಾಜ್ಯದ ಜನರಲ್ಲಿ ಭಾರೀ ಆತಂಕ ಸೃಷ್ಟಿಸಿತ್ತು. ಬೆಂಗಳೂರಿನಲ್ಲಿ ಇಬ್ಬರು ಮಕ್ಕಳಿಗೆ ಸೋಂಕು ತಗುಲಿ ಆ ಎರಡೂ ಮಕ್ಕಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿರುವ ವಿಚಾರ ಬೆಳಕಿಗೆ ಬಂದಿತ್ತು. ಜ.6ರ ಮಧ್ಯಾಹ್ನದ ನಂತರದಲ್ಲಿ ಹೊರಬಿದ್ದ ಮಾಹಿತಿಯ ಪ್ರಕಾರ, ಆ ಇಬ್ಬರೂ ಮಕ್ಕಳು ಅನಾರೋಗ್ಯದಿಂದ ಚೇತರಿಸಿಕೊಂಡಿದ್ದಾರೆ. ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಅಲ್ಲಿಗೆ, ಬೆಂಗಳೂರು ಸೇರಿದಂತೆ ರಾಜ್ಯದ ಜನತೆ ನಿಟ್ಟುಸಿರು ಬಿಡುವಂತಾಗಿದ್ದು, ಅದು ಜನರಲ್ಲಿ ಆತ್ಮಸ್ಥೈರ್ಯ ಹೆಚ್ಚಿಸಿದೆ.

ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ್ ಕರ್ನಾಟಕದಲ್ಲಿ ಹ್ಯೂಮನ್ ಮೆಟಾಪ್ನ್ಯೂಮೋ ವೈರಸ್ ಎರಡು ಪ್ರಕರಣಗಳು ಪತ್ತೆಯಾಗಿವೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಸೋಮವಾರ ತಿಳಿಸಿದೆ.

ಮೊದಲ ಪ್ರಕರಣವು ಬೆಂಗಳೂರಿನಲ್ಲಿ 3 ತಿಂಗಳ ಹೆಣ್ಣುಮಗುವಿನಲ್ಲಿ ಪತ್ತೆಯಾಗಿತ್ತು. ಕೋಪ್ನ್ಯೂಮೋನಿಯಾದೊಂದಿಗೆ ಆಸ್ಪತ್ರೆಗೆ ದಾಖಲಾದ ನಂತರ ಎಚ್‌ಎಂಪಿವಿ ರೋಗನಿರ್ಣಯ ಮಾಡಲಾಯಿತು. ಸಚಿವಾಲಯದ ಮಾಹಿತಿ ಪ್ರಕಾರ ಆಕೆಯನ್ನು ಡಿಸ್ಚಾರ್ಜ್ ಮಾಡಲಾಗಿದೆ. ಎರಡನೇ ಪ್ರಕರಣವು 8 ತಿಂಗಳ ಗಂಡು ಶಿಶುವಿನಲ್ಲಿ ಪತ್ತೆಯಾಗಿದ್ದು, ಪ್ರಸ್ತುತ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದೆ.

**ಆರೋಗ್ಯ ಸಚಿವಾಲಯ ಹೇಳಿಕೆ:** ಭಾರತದಲ್ಲಿ ಮೂರು ಶಿಶುಗಳಲ್ಲಿ ಎಚ್‌ಎಂಪಿವಿ ವೈರಸ್ ಪತ್ತೆಯಾದ ನಂತರ, ಆರೋಗ್ಯ ಸಚಿವಾಲಯವು ಹೇಳಿಕೆ ಬಿಡುಗಡೆ ಮಾಡಿದೆ. ರೋಗಿಗಳಿಗೆ ಅಂತಾರಾಷ್ಟ್ರೀಯ ಪ್ರಯಾಣ ಮಾಡಿರುವ ಕುರಿತು ಯಾವುದೇ ವಿವರವಿಲ್ಲ ಎಂದು ಸ್ಪಷ್ಟಪಡಿಸಿದೆ. ಈಗಾಗಲೇ ಭಾರತ ಸೇರಿದಂತೆ ಪ್ರಪಂಚದಾದ್ಯಂತ ಎಚ್‌ಎಂಪಿವಿ ವೈರಸ್ ಹಾಗೂ ಎಚ್‌ಎಂಪಿವಿ-ಸಂಬಂಧಿತ ಉಸಿರಾಟದ ಕಾಯಿಲೆಗಳ ಪ್ರಕರಣಗಳು ವಿವಿಧ ದೇಶಗಳಲ್ಲಿ ವರದಿಯಾಗಿವೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಇದಲ್ಲದೇ, ಐಸಿಎಂಆರ್ ಮತ್ತು ಇಂಟಿಗ್ರೇಟೆಡ್ ಡಿಸೀಸ್ ಸರ್ವೆಲೆನ್ಸ್ ಪ್ರೋಗ್ರಾಂ ನೆಟ್‌ವರ್ಕ್‌ನಿಂದ ಅಸ್ತಿತ್ವದಲ್ಲಿರುವ ಡೇಟಾದ ಪ್ರಕಾರ, ದೇಶದಲ್ಲಿ ಇನ್ಫ್ಲುಯೆನ್ಸ್ ತರಹದ ಅನಾರೋಗ್ಯ ಅಥವಾ ತೀವ್ರ ಉಸಿರಾಟದ ಕಾಯಿಲೆ ಪ್ರಕರಣಗಳಲ್ಲಿ ಯಾವುದೇ ಅಸಾಮಾನ್ಯ ಹೆಚ್ಚಳ ಕಂಡುಬಂದಿಲ್ಲ. ಪೀಡಿತ ರೋಗಿಗಳಲ್ಲಿ ಯಾರೂ ಅಂತಾರಾಷ್ಟ್ರೀಯ ಟ್ರಾವೆಲ್ ಹಿಸ್ಟರಿ ಹೊಂದಿಲ್ಲ ಎಂಬುದನ್ನು ಗಮನಿಸಬೇಕಾಗುತ್ತದೆ.

### ವೈರಸ್ ಹಡುವಿಕೆಯನ್ನು ತಡೆಯಲು ಏನು ಮಾಡಬೇಕು

- ಕೆಮ್ಮುವಾಗ ಅಥವಾ ಸೀನುವಾಗ ಬಾಯಿ ಮತ್ತು ಮೂಗನ್ನು ಮುಚ್ಚಿಕೊಳ್ಳಬೇಕು.
- ಆಗಾಗ್ಗೆ ಕೈಗಳನ್ನು ಸಾಬೂನಿನಿಂದ ತೊಳೆಯಬೇಕು.
- ಜ್ವರ, ಕೆಮ್ಮು ಮತ್ತು ಸೀನುವಿಕೆ ಇದ್ದಲ್ಲಿ ಸಾರ್ವಜನಿಕ ಸ್ಥಳಗಳಿಂದ ದೂರವಿರಬೇಕು.
- ಅನಾರೋಗ್ಯ ಪೀಡಿತ ವ್ಯಕ್ತಿಗಳೊಂದಿಗಿನ ನಿಕಟ ಸಂಪರ್ಕದಿಂದ ದೂರವಿರಬೇಕು.

### ವೈರಸ್ ಹರಡುವಿಕೆ ತಡೆಯಲು ಏನು ಮಾಡಬಾರದು

- ಟಿಶ್ಯೂ ಪೇಪರ್‌ಗಳು ಅಥವಾ ಕರವಸ್ತ್ರಗಳನ್ನು ಮರುಬಳಕೆ ಮಾಡಬೇಡಿ.
- ಟವೆಲ್ ಮತ್ತು ಲಿನಿನ್ ಬಟ್ಟೆಯನ್ನು ಇತರರೊಂದಿಗೆ ಹಂಚಿಕೊಳ್ಳಬೇಡಿ
- ಸಾರ್ವಜನಿಕ ಸ್ಥಳಗಳಲ್ಲಿ ಉಗುಳಬೇಡಿ
- ಕಣ್ಣು, ಮೂಗು ಮತ್ತು ಬಾಯಿಯನ್ನು ಸ್ಪರ್ಶಿಸಬೇಡಿ

### ಬೇಗನೇ ವೈದ್ಯರ ಸಲಹೆ ಪಡೆದರೆ ಒಳಿತು

ಇತ್ತೀಚೆಗೆ, ಕೇಂದ್ರ ಸರ್ಕಾರ ಕೂಡ ಎಚ್‌ಎಂಪಿವಿ ಸೋಂಕು ಮಾರಣಾಂತಿಕವಲ್ಲ ಎಂಬ ಸ್ಪಷ್ಟನೆಯನ್ನು ನೀಡಿತ್ತು. ಭಾರತದಲ್ಲಿ ಹೊಸ ಬಗೆಯ ವೈರಸ್ ಬಗ್ಗೆ ಆತಂಕ ಹೆಚ್ಚಾಗುತ್ತಿದ್ದಂತೆ ಕೇಂದ್ರ ಆರೋಗ್ಯ ಇಲಾಖೆಯ ತಜ್ಞರ ಸಮಿತಿಯ ಈ ಕುರಿತಾದ ಪ್ರಕಟಣೆ ಹೊರಡಿಸಿ, ಎಚ್‌ಎಂಪಿವಿ ಸೋಂಕಿನಿಂದ ಯಾವುದೇ ಮಾರಣಾಂತಿಕ ತೊಂದರೆಯಾಗುವುದಿಲ್ಲ ಎಂದು ತಿಳಿಸಿತ್ತು. ಈ ಸೋಂಕು ತಾಗಿದವರಿಗೆ ಸಾಮಾನ್ಯ ಶೀತ, ಕೆಮ್ಮು, ಜ್ವರ ಕಾಣಿಸಬಹುದು. ಅಲ್ಲದೆ, ಸ್ವಲ್ಪ ಉಸಿರಾಟದ ತೊಂದರೆಯಾಗಬಹುದು. ಅದರಿಂದ ಆತಂಕಗೊಳ್ಳಬಾರದು ಎಂದು ತಜ್ಞರು ಹೇಳಿದ್ದಾರೆ. ಬೇಗನೇ ವೈದ್ಯರ ಸಲಹೆ ಪಡೆದರೆ ಆಸ್ಪತ್ರೆಗೆ ಸೇರಿಸುವುದನ್ನು ತಪ್ಪಿಸಬಹುದು. ಒಂದೊಮ್ಮೆ ಆಸ್ಪತ್ರೆಗೆ ಸೇರಿದರೂ ಬೇಗನೇ ಹುಷಾರಾಗಬಹುದು ಎಂದು ಹೇಳಿದ್ದಾರೆ.

### ಎಚ್‌ಎಂಪಿವಿ ಹೊಸ ವೈರಸ್ ಅಲ್ಲ



ಎಚ್‌ಎಂಪಿವಿ ಹೊಸ ವೈರಸ್ ಅಲ್ಲ. ಇದು ಅಸ್ತಿತ್ವದಲ್ಲಿರುವ ವೈರಸ ಆಗಿದೆ. ಆಂತಕ ಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಸೋಮವಾರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಗುವೊಂದರಲ್ಲಿ ಎಚ್‌ಎಂಪಿವಿ ಸೋಂಕು ಪತ್ತೆಯಾಗಿರುವ ವರದಿ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಭಾರತದಲ್ಲಿ ಇದು ಮೊದಲ ಪ್ರಕರಣ ಎಂದು ಹೇಳಲಾಗುತ್ತಿದೆ. ಆದರೆ, ಇದು ನಿಜವಲ್ಲ. ಎಚ್‌ಎಂಪಿವಿ ಹೊಸ ವೈರಸ್ ಅಲ್ಲ. ಅಸ್ತಿತ್ವದಲ್ಲಿರು ವೈರಸ್. ಹೀಗಾಗಿ ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು. ಈ ವೈರಸ್ ನಿಂದ ಉಸಿರಾಟದ ತೊಂದರೆ ಸಮಸ್ಯೆ ಸಾಧ್ಯತೆ ಇದೆ. ಈ ವೈರಸ್ ಕಡಿಮೆ ಇಮ್ಯೂನಿಟಿ ಹೊಂದಿರುವ ಮಕ್ಕಳಿಗೆ ಬರುತ್ತೆ. ಮಗುವಿಗೆ ಟ್ರಾವೆಲ್ ಹಿಸ್ಟರಿ ಇಲ್ಲ. ಮಗು ಹಾಗೂ ಪೋಷಕರು ಸ್ಥಳೀಯರಾಗಿದ್ದಾರೆ. ಇಲ್ಲಿ ಕಂಡುಬಂದಿರುವ ವೈರಸ್‌ಗೂ, ಚೀನಾ ವೇರಿಯಂಟ್‌ಗೂ ಸಂಬಂಧವಿಲ್ಲ. ಇದರ ಬಗ್ಗೆ ಜನರು ಆತಂಕಪಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

## 60% ಕಮೀಷನ್ ಆರೋಪಕ್ಕೆ ಹೆಚ್‌ಡಿಕೆ ದಾಖಲಾತಿ ಕೊಟ್ಟಿದ್ದಾರಾ?



**ಮೊದಲು ಗುತ್ತಿಗೆದಾರರ ಸಂಘ ಆರೋಪ**

• ಉದಯವಾಹಿನಿ, ಬೆಂಗಳೂರು

ನಮ್ಮ ಸರ್ಕಾರದ ಮೇಲೆ 60% ಕಮೀಷನ್ ಆರೋಪ ಮಾಡುವ ಕುಮಾರಸ್ವಾಮಿ ದಾಖಲೆ ಕೊಟ್ಟಿದ್ದಾರಾ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನೆ ಮಾಡಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಸರ್ಕಾರದ ಮೇಲೆ 60% ಕಮೀಷನ್ ಆರೋಪದ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ನಮ್ಮ ಮೇಲೆ ಆರೋಪ ಮಾಡುವ ಕುಮಾರಸ್ವಾಮಿ ಏನು ದಾಖಲಾತಿ ಕೊಟ್ಟಿದ್ದಾರೆ? ಅವರು ದಾಖಲಾತಿ ಕೊಟ್ಟು ಆರೋಪ ಮಾಡಿದ್ದಾರಾ? ಎಂದು ಪ್ರಶ್ನೆ ಮಾಡಿದ್ದರು.

ಬಿಜೆಪಿ ಮೇಲೆ 40% ಆರೋಪ ಮಾಡಿದ್ದು ಗುತ್ತಿಗೆದಾರ ಸಂಘದವರು, ನಾವಲ್ಲ. ಮೊದಲು ಗುತ್ತಿಗೆದಾರರ ಸಂಘ ಆರೋಪ ಮಾಡಿತ್ತು. ಆಮೇಲೆ ನಾವು ಹೇಳಿದ್ದು. ಹಿಂದಿನ ಸರ್ಕಾರದವರು ಕಮಿಷನ್ ತೆಗೆದುಕೊಳ್ಳುತ್ತಿದ್ದರು ಎಂದು ಬಿಜೆಪಿ ವಿರುದ್ಧ ಕಿಡಿಕಾರಿದರು.

## ರಾಜ್ಯಾಧ್ಯಕ್ಷನಾಗಬೇಕೆನ್ನುವ ಬಯಕೆ ನನಗಿಲ್ಲ: ನಿಖಿಲ್

• ಉದಯವಾಹಿನಿ, ರಾಯಚೂರು



ಪಕ್ಷದ ರಾಜ್ಯಾಧ್ಯಕ್ಷನಾಗಬೇಕೆನ್ನುವ ಬಯಕೆ ನನಗಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನ ಸೇರಿದಂತೆ ಇತರ ಯಾವುದೇ ಹತ್ಯೆಗಾಗಿ ಹಪಾಹಪಿಸುತ್ತಿಲ್ಲ ಎಂದರು. ಜೆಡಿಎಸ್ ರಾಜ್ಯಾಧ್ಯಕ್ಷ ಬದಲಾವಣೆ ಕುರಿತು ಪಕ್ಷದ ವೇದಿಕೆಯಲ್ಲಿ ಯಾವುದೇ ಚರ್ಚೆಯಾಗಿಲ್ಲ. ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದು, ಪಕ್ಷದ ರಾಜ್ಯಾಧ್ಯಕ್ಷರಾಗಿದ್ದಾರೆ. ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಮಾಡುವಂತಿದ್ದರೆ ಪಕ್ಷದಲ್ಲಿ ಹಿರಿಯರು, ಅನುಭವಿಗಳು ಇದ್ದಾರೆ. ಅವರಿಗೆ ಆದ್ಯತೆ ನೀಡಲಾಗುತ್ತದೆ ಎಂದು ಹೇಳಿದರು.

## 2028ಕ್ಕೆ ನಾನೇ ಸಿಎಂ ಅಭ್ಯರ್ಥಿ: ಜಾರಕಿಹೊಳಿ



• ಉದಯವಾಹಿನಿ, ರಾಯಚೂರು

2028ಕ್ಕೆ ನಾನೇ ಸಿಎಂ ಅಭ್ಯರ್ಥಿ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ರಾಯಚೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಈ ಅವಧಿಗೆ ಸಿಎಂ ಆಗಲು ಬರುವುದಿಲ್ಲ. ಈಗ ಮುಖ್ಯಮಂತ್ರಿಗಳು ಇದ್ದಾರೆ. ಹಾಗಾಗಿ ಅಂತಹ ಅವಶ್ಯಕತೆ ಬರಲ್ಲ. ಮುಂದಿನ ಅವಧಿಗೆ ನಾನು ಸಿಎಂ ಆಕಾಂಕ್ಷಿ, ಸಿಎಂ ಸ್ಥಾನದ ವಿಚಾರಗಳು ಈಗ ಇಲ್ಲ ಎಂದಿದ್ದಾರೆ.

ಡಿಸಿಎಂ ಡಿ.ಕೆ.ಶಿವಕುಮಾರ್ ಅನುಪಸ್ಥಿತಿಯಲ್ಲಿ ರಹಸ್ಯ ಸಭೆ ವಿಚಾರವಾಗಿ, ರಹಸ್ಯ ಸಭೆ ಏನು ಇರಲಿಲ್ಲ. ಎಲ್ಲಾರೂ ಕೂಡಿಯೇ ಸಭೆ ಮಾಡಿದ್ದೇವೆ. ರಹಸ್ಯ ಸಭೆ ಎನ್ನುವ ಪ್ರಶ್ನೆಯೇ ಇಲ್ಲ. ಅದು ಊಟದ ಸಭೆ ಅಷ್ಟೇ. ಸಭೆಯಲ್ಲಿ ಅಂತಾ ರಾಜಕೀಯ ಚರ್ಚೆ ಯಾವುದು ಆಗಿಲ್ಲ.

**ಸಂಪುಟ ವಿಸ್ತರಣೆ ಇಲ್ಲ**

ಸಂಪುಟ ವಿಸ್ತರಣೆಯೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ 60% ಕಮಿಷನ್ ಸರ್ಕಾರವಿದೆ ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿ, ಅವರೆಲ್ಲ ಆರೋಪ ಮಾಡುತ್ತಾರೆ. ಅದನ್ನು ಸಾಬೀತು ಮಾಡಬೇಕು. ಸುಮ್ಮನೇ ಹೇಳುವುದರಿಂದ ಏನೂ ಆಗುವುದಿಲ್ಲ ಎಂದಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಬಿಜೆಪಿ ಒತ್ತಾಯ ವಿಚಾರವಾಗಿ, ಅವರ ಆಪ್ತನ ಹೆಸರು ಇದೆ. ಈಶ್ವರಪ್ಪನದ್ದು ನೇರವಾಗಿ ಪತ್ರದಲ್ಲಿ ಹೆಸರು ಇತ್ತು. ಆಪ್ತರು, ಪಿಎಗಳ ಹೆಸರು ಇದ್ರೆ ಸಚಿವರು ನೇರವಾಗಿ ಹೊಣೆಗಾರರು ಆಗಲ್ಲ. ತನಿಖೆ ನಡೆಯುತ್ತಿದೆ ನಡೆಯಲಿ ಎಂದು ಹೇಳಿದ್ದಾರೆ.

## ಕಾಂಗ್ರೆಸ್ ಸರ್ಕಾರದ ವಿರುದ್ಧ 100% ಕಮಿಷನ್ ಆರೋಪ ಮಾಡಿದ ಅಶ್ವಥ್ ನಾರಾಯಣ

• 60% ಕಮೀಷನ್ ಸರ್ಕಾರ ಎಂದು ಕೇಂದ್ರ ಸಚಿವ ಆರೋಪ • 100% ಕಮಿಷನ್ ಹೊಡೆಯುವುದರಲ್ಲಿ ಕಾಂಗ್ರೇಸಿಗರು ನಿಸ್ಸಿಮರು



• ಉದಯವಾಹಿನಿ, ಬೆಂಗಳೂರು

ಪ್ರತಿಯೊಂದು ಇಲಾಖೆಯಲ್ಲೂ ವ್ಯವಸ್ಥಿತವಾಗಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಕಾಂಗ್ರೆಸ್ನದು ಶೇ.100ರಷ್ಟು ಕಮೀಷನ್ ಸರ್ಕಾರ ಎಂದು ಮಾಜಿ ಸಚಿವ, ಶಾಸಕ ಅಶ್ವಥ್ ನಾರಾಯಣ ಗಂಭೀರ ಆರೋಪ ಮಾಡಿದರು. ಈಗಿನದು 60% ಕಮೀಷನ್ ಸರ್ಕಾರ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ ಮಾಡಿದ ಬೆನ್ನಲ್ಲೇ 100% ಕಮಿಷನ್ ಹೊಡೆಯುವುದರಲ್ಲಿ ಕಾಂಗ್ರೇಸಿಗರು ನಿಸ್ಸಿಮರು. ಎಲ್ಲಾ ಇಲಾಖೆಗಳಲ್ಲೂ ಇದು ಜಗಜ್ಜಾಹಿರವಾಗಿದೆ ಎಂದು ದೂರಿದರು. ಎಚ್.ಡಿ.ಕುಮಾರಸ್ವಾಮಿ ಅವರು ಸುಖಾಸುಮನೆ ಸರ್ಕಾರದ ವಿರುದ್ಧ ಆರೋಪ ಮಾಡಿಲ್ಲ. ಹಿಟ್ ಅಂಡ್ ರನ್ ಮಾಡಿಲ್ಲ. ಎಲ್ಲಾ ಇಲಾಖೆಗಳಲ್ಲೂ ವ್ಯವಸ್ಥಿತವಾಗಿ ಕಮಿಷನ್ ನಡೆಯುತ್ತಲೇ ಇದೆ. ಇದರಲ್ಲಿ ಸುಳ್ಳೇನಿಲ್ಲ. ವಿಧಾನಸೌಧದ ಕಂಬಗಳು ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಿಂದ ಕೂಡಿವೆ. ಇದಕ್ಕಿಂತ ಬೇರೆ ಸಾಕ್ಷಿ ಏನು ಬೇಕಾಗಿದೆ ಎಂದು ಪ್ರಶ್ನಿಸಿದರು. ಈ ಸರ್ಕಾರ ಆರಂಭದಿಂದಲೂ ಹಗರಣಗಳ ಮೇಲೆ ಹಗರಣ ನಡೆಸುತ್ತಿದೆ. ಬರೀ ಭ್ರಷ್ಟಾಚಾರ ಆಪಾದನೆಯಲ್ಲ. ಎಲ್ಲಾ ಇಲಾಖೆಗಳಲ್ಲೂ ಭ್ರಷ್ಟಾಚಾರ ನಡೆಯುತ್ತಿದೆ. ವಾಲೀಕಿ ನಿಗಮದಲ್ಲಿ 100% ಭ್ರಷ್ಟಾಚಾರ ಅವರೇ ಒಪ್ಪಿಕೊಂಡಿದ್ದಾರೆ. ಚಂದ್ರಶೇಖರ್ ಆತಹತ್ಯೆಯಿಂದ ಈ ಪ್ರಕರಣ ಹೊರಗೆ ಬಂತು ಎಂದು ಹೇಳಿದರು. ಪರಶುರಾಮ್ ಆತಹತ್ಯೆ ಮಾಡಿಕೊಂಡಿದ್ದೇಕೆ ಎಸ್‌ಐ ಪೋಸ್ಟ್ ವರ್ಗಾವಣೆಗೆ 35 ಲಕ್ಷ. ಇದರಲ್ಲೂ ಸಾಕ್ಷ್ಯ ಇದೆಯಲ್ಲವೇ ಮುಡಾದಲ್ಲೂ ಸಾಕ್ಷಿ ಇದೆ. ಗುತ್ತಿಗೆದಾರ ಸಚಿನ್ ಆತಹತ್ಯೆ ಪ್ರಕರಣದಲ್ಲೂ ಸಾಕ್ಷಿ ಇದೆ. ಬೆಳಗಾವಿಯಲ್ಲೂ ಸಚಿವರ ಪಿಎಯಿಂದ ಎಎ ನೌಕರ ಆತಹತ್ಯೆ, ಅಬಕಾರಿ, ಆರೋಗ್ಯ ಇಲಾಖೆ ಗಳಲ್ಲೂ ಕಮೀಷನ್, ಭ್ರಷ್ಟಾಚಾರ ನಡೆಯತ್ತಿದೆ. ಸಚಿವರಿಗೂ ಕಮೀಷನ್ ಕೊಡಬೇಕು. ಏನಾದರೂ ಮಾಡಿ ಇವರಂತೂ ಭಂಡರಾಗಿದ್ದಾರೆ, ನಾವಿರುವುದೇ ಅನ್ನುತ್ತಿದಾರೆ. ಒಂದು ಕಡೆ ಸಮಾಜದಲ್ಲಿ ಒಡಕು ಮೂಡಿಸುತ್ತಿದ್ದಾರೆ. ಭ್ರಷ್ಟಾಚಾರ ಮಾಡುವುದಕ್ಕೂ ಜಾತಿ ಹೆಸರು ಬಳಸುತ್ತಿದ್ದಾರೆ. ಜಾತಿ ಹೆಸರಲ್ಲಿ ಅನುಕಂಪ ಪಡೆದು ಭ್ರಷ್ಟಾಚಾರ ನಡೆಸುತ್ತಿದ್ದಾರೆ. ನಮ್ಮ ಮೇಲೆ 40% ಆರೋಪ ಮಾಡಿದರು. ಲೋಕಾಯುಕ್ತ ಈಗ ನಮಮೇಲಿನ ಆರೋಪಕ್ಕೆ ಕ್ಲೀನ್‌ಚಿಟ್ ಕೊಟ್ಟಿದೆ. ನಮ್ಮ ಸಿಎಂ ಮೇಲೆ ಪೇಸಿಎಂ, 40% ಆರೋಪ ಏಡಿದ್ದಾರಲ್ಲ, ಯಾವ ದಾಖಲೆ ಕೊಟ್ಟರು ಇವರು ಎಂದು ಪ್ರಶ್ನಿಸಿದರು. ಈಗ ಇವರ ಮೇಲಿನ ಆರೋಪಗಳಿಗೆ ದಾಖಲೆ ಎಲ್ಲಾ ಇದೆ. ಲೈಸೆನ್ಸ್ ಪಡೆದು ಭ್ರಷ್ಟಾಚಾರ ಮಾಡುತ್ತಿದ್ದಾರೆ. ಇವರು ಭಂಡ ಬಿದ್ದಿದ್ದಾರೆ, ಭಂಡರ ವಿರುದ್ಧ ಏನು ಹೋರಾಟ ಮಾಡುತ್ತೀರಿ ಹೇಳಿ ಎಂದರು.

**ವಾಲೀಕಿ ನಿಗಮದಲ್ಲಿ 100% ಭ್ರಷ್ಟಾಚಾರ**

### ದುಡ್ಡು ಹೊಡೀತಾರಲ್ಲ, ಒಳ್ಳೆಯ ಆಡಳಿತ ಕೊಡಿ

ಬೆಂಗಳೂರಿನಲ್ಲಿ ಎಂಟು ತಿಂಗಳ ಮಗುವಿನಲ್ಲಿ ಹೆಚ್‌ಎಂಪಿವಿ ವೈರಸ್ ಪತ್ತೆ ವಿಚಾರಕ್ಕೆ ಪ್ರತಿಕ್ರಿಯಿಸುತ್ತಾ, ಇದನ್ನ ನಾವು ಹೇಳಲು ಆಗಲ್ಲ.ವೈರಾಲಾಜಿ ಡಿಪಾರ್ಟ್‌ಮೆಂಟ್ ಹೇಳಬೇಕು ಏನೇ ಮ್ಯುಟೇಷನ್‌ಆಗಿದ್ರೂ ಪತ್ತೆ ಹಚ್ಚಿ ಸಂಬಂಧಿಸಿದ ಸಂಸ್ಥೆಗಳು ಹೇಳ್ತವೆ. ಸಂಬಂಧಿಸಿದ ಇಲಾಖೆಗಳು ಹೇಳಿಕೆ ಕೊಡಬೇಕು. ನಾನು ಹೇಳೋದು ತಪ್ಪಾಗುತ್ತದೆ. ಸರ್ಕಾರ ಇದರ ಬಗ್ಗೆ ಗಮನ ಹರಿಸಬೇಕು. ಎಲ್ಲಾದರಲ್ಲೂ ದುಡ್ಡು ಹೊಡೀತಿದ್ದಾರೆ. ದುಡ್ಡು ಹೊಡೀತಾರಲ್ಲ, ಒಳ್ಳೆಯ ಆಡಳಿತ ಕೊಡಿ ಅಂದರೆ ಅದೂ ಕೊಡುತ್ತಿಲ್ಲ.ಒಳ್ಳೆಯ ಚಿಕಿತ್ಸೆಯಾದರೂ ಕೊಡ್ರಪ್ಪ ಎಂದು ಸಲಹೆ ಮಾಡಿದರು.

## ಎನ್‌ಐಎ ಕಾರ್ಯಾಚರಣೆ ಶಂಕಿತ ಉಗ್ರನ ಸೆರೆ

• ಉದಯವಾಹಿನಿ, ಬೆಂಗಳೂರು

ದೇಶದಲ್ಲಿ ನಿಷೇಧಿತ ಪಿಎಫ್‌ಐ ಸಂಘಟನೆಯ ಉಗ್ರ ಕೃತ್ಯಗಳಿಗೆ ದುಬೈನಿಂದ ಹಣ ಸಂಗ್ರಹಿಸಿ ಕರ್ನಾಟಕ ಹಾಗೂ ಕೇರಳದ ಕಾರ್ಯಕರ್ತರ ಮೂಲಕ ಬಿಹಾರಕ್ಕೆ ತಲುಪಿಸುತ್ತಿದ್ದ ಶಂಕಿತ ಉಗ್ರನನ್ನು ಎನ್‌ಐಎ ಅಧಿಕಾರಿಗಳು ಬಂಧಿಸಿದ್ದಾರೆ. ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯ ಮೊಹಮ್ಮದ್ ಸಜ್ಜಾದ್ ಆಲಂ ಬಂಧಿತ ಆರೋಪಿ. ಈತ ಯುಎಇನಿಂದ ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆ ಬಂಧಿಸಲಾಗಿದೆ. ದೇಶ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿದ್ದ ಪಿಎಫ್‌ಐ ಕಾರ್ಯಕರ್ತರ ವಿರುದ್ಧ 2022ರ ಜುಲೈನಲ್ಲಿ ಬಿಹಾರದ ಫುಲ್ವಾರಿ ಷರೀಫ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಬಳಿಕ ಪ್ರಕರಣದ ತನಿಖೆಯನ್ನು ಎನ್‌ಐಎ ಕೈಗೆತ್ತಿಕೊಂಡಿತ್ತು. ಆರೋಪಿಗಳು ಪಿಎಫ್‌ಐ ಸಂಘಟನೆಯ ಮೂಲಕ ಜನರ ನಡುವೆ ಧರ್ಮ, ಮತೀಯ ದ್ವೇಷ ಮೂಡಿಸುತ್ತಿದ್ದಾರೆ. ಆ ಮೂಲಕ ದೇಶದ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆಯುಂಟು ಮಾಡುತ್ತಿದ್ದಾರೆ ಎಂಬುದು ಎನ್‌ಐಎ ತನಿಖೆ ವೇಳೆ ಬಹಿರಂಗವಾಗಿತ್ತು. ಅಲ್ಲದೆ, 2047ರ ವೇಳೆಗೆ ಭಾರತವನ್ನು ಇಸ್ಲಾಂ ರಾಷ್ಟ್ರವನ್ನಾಗಿಸುವ ಗುರಿಯೊಂದಿಗೆ ನಿಷೇಧಿತ ಪಿಎಫ್‌ಐ ಸಂಘಟನೆ ಕಾರ್ಯ ನಿರ್ವಹಿಸುತ್ತಿತ್ತು ಎಂಬ ಅಂಶಗಳನ್ನು ಉಲ್ಲೇಖಿಸಿ ಎನ್‌ಐಎ ಅಧಿಕಾರಿಗಳು ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಪ್ರಕರಣದಲ್ಲಿ ಇದುವರೆಗೂ 17 ಆರೋಪಿಗಳನ್ನು ಬಂಧಿಸಲಾಗಿತ್ತು. ಮೊಹಮ್ಮದ್ ಸಜ್ಜಾದ್‌ನನ್ನು 18ನೇ ಆರೋಪಿಯಾಗಿ ಬಂಧಿಸಲಾಗಿದೆ ಎಂದು ಎನ್‌ಐಎ ಪ್ರಕಟಣೆ ತಿಳಿಸಿದೆ.

## ನಕ್ಷೆಗೆ ವ್ಯತಿರಿಕ್ತವಾಗಿ, ಅನಧಿಕೃತವಾಗಿ ಕಟ್ಟಡ ನಿರ್ಮಿಸಿದ್ದವರಿಗೆ ಬಿಬಿಎಂಪಿ, ಶಾಕ್

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ, ಪೂರ್ವ ವಲಯ ಪೂರ್ವ ವಲಯ ಆಯುಕ್ತರಾದ ಸ್ನೇಹಲ್ ಆರ್. ಅವರ ನಿರ್ದೇಶನದಂತೆ ಪೂರ್ವ ವಲಯದಲ್ಲಿ ದಿನಾಂಕ:04.01.2025 ರಿಂದ ಈವರೆಗೆ ಕಟ್ಟಡ ನಕ್ಷೆಗೆ ವ್ಯತಿರಿಕ್ತವಾಗಿ ನಿರ್ಮಾಣ ಮಾಡಿರುವ 16 ಕಟ್ಟಡಗಳಿಗೆ ಬೀಗಮುದ್ರೆ ಹಾಕಲಾಗಿರುತ್ತದೆ.ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂರ್ವ ವಲಯದ 6 ವಿಭಾಗಗಳಲ್ಲಿ ನಕ್ಷೆ ಮಂಜೂರಾತಿಗೆ ವ್ಯತಿರಿಕ್ತವಾಗಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಬಗ್ಗೆ, ಉಪವಿಭಾಗಗಳ ಅಭಿಯಂತರರು ಹಾಗೂ ವಲಯದ ನಗರ ಯೋಜನೆ ಅಭಿಯಂತರರು ನಕ್ಷೆ ಮಂಜೂರಾತಿಗೆ ವ್ಯತಿರಿಕ್ತವಾಗಿ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿರುವುದನ್ನು ಗಮನಿಸಿ, ನಗರ ಯೋಜನೆ ಶಾಖೆಯಿಂದ ಹಾಗೂ ಉಪವಿಭಾಗದ ವತಿಯಿಂದ ಬಿಬಿಎಂಪಿ ಕಾಯ್ದೆ 2020ರ ಅಡಿ ನೋಟೀಸ್‌ಗಳನ್ನು ಜಾರಿ ಮಾಡಲಾಗಿರುತ್ತದೆ. ತದನಂತರ ಮಾನ್ಯ ಮುಖ್ಯ ಆಯುಕ್ತರು, ಅಪೀಲು ಮೇಲ್ಮನವಿ ಪ್ರಾಧಿಕಾರ ಬಿಬಿಎಂಪಿ ರವರು ಮೇಲ್ಮನವಿಗಳನ್ನು ವಜಾಗೊಳಿರುವುದರಿಂದ ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ಮತ್ತು ಮಾನ್ಯ ವಲಯ ಆಯುಕ್ತರು (ಪೂರ್ವ) ವಲಯ ಅವರ ಆದೇಶದ ರೀತ್ಯಾ ದಿನಾಂಕ:04/01/2025 ರಿಂದ ಈವರೆಗೂ 16 ಕಟ್ಟಡಗಳು ಹಾಗೂ ಅವುಗಳ ಹೆಚ್ಚುವರಿ ಅಂತಸ್ತುಗಳಿಗೆ ಬೀಗ ಮುದ್ರೆ ಹಾಕಲಾಗಿರುತ್ತದೆ ಎಂದು ತಿಳಿಸಿದೆ.

## ಕೆಎಸ್‌ಆರ್‌ಟಿಸಿ ನೌಕರರಿಗೆ ನಗದು ರಹಿತ ಚಿಕಿತ್ಸಾ ಯೋಜನೆ ಜಾರಿ

• ಉದಯವಾಹಿನಿ, ಬೆಂಗಳೂರು

ಕೆಎಸ್‌ಆರ್‌ಟಿಸಿ ನೌಕರರಿಗೆ ಸಾರಿಗೆ ಇಲಾಖೆ ಹೊಸ ವರ್ಷದ ಗಿಫ್ಟ್ ನೀಡಿದೆ. ನೌಕರರ 20 ವರ್ಷಗಳ ಬೇಡಿಕೆಯಾಗಿದ್ದ ನಗದು ರಹಿತ ಚಿಕಿತ್ಸಾ ಯೋಜನೆಗೆ 'ಕೆಎಸ್‌ಆರ್‌ಟಿಸಿ ಆರೋಗ್ಯ' ಚಾಲನೆ ಸಿಕ್ಕಿದೆ. ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಎಸ್ ಆರ್‌ಟಿಸಿ ಆರೋಗ್ಯ ಯೋಜನೆಗೆ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಿದರು. ಈ ಯೋಜನೆ ಅಡಿ ನೌಕರನ ಕುಟುಂಬದಲ್ಲಿ ತಂದೆ-ತಾಯಿ, ಹೆಂಡತಿ ಮಕ್ಕಳು ಎಲ್ಲರಿಗೂ ಚಿಕಿತ್ಸೆ ಸಿಗಲಿದೆ. ಯಾವುದೇ ಕಾಯಿಲೆ ಮತ್ತು ಎಷ್ಟೇ ಖರ್ಚಾದರೂ ಈ ಯೋಜನೆ ಅಡಿ ಚಿಕಿತ್ಸೆ ಸಿಗಲಿದೆ. ನೌಕರರು ಪ್ರತಿ ತಿಂಗಳು 650ರಂತೆ ವಾರ್ಷಿಕ 8 ಸಾವಿರ ರೂ. ಕಟ್ಟಬೇಕು. ಈ ಯೋಜನೆ ಅಡಿ ರಾಜ್ಯದ ಯಾವುದೇ ಜಿಲ್ಲೆಯಲ್ಲಿ ನೋಂದಾಯಿತ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ. 250 ಆಸ್ಪತ್ರೆಗಳು 24 ಡಯಾಗ್ನಸ್ಟಿಕ್ ಸೆಂಟರ್, 6 ಆಯುರ್ವೇದ ಆಸ್ಪತ್ರೆಗಳು ಈ ಯೋಜನೆ ಅಡಿ ಸರ್ಕಾರ ಎಮ್‌ಒಯು ಮಾಡಿಕೊಂಡಿದೆ.

ಯೋಜನೆ ಉದ್ಘಾಟನೆ ಮಾಡಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಇದೊಂದು ಒಳ್ಳೆ ಕಾರ್ಯಕ್ರಮ. ಬಹಳ ದಿನದಿಂದ ಇದರ ಬೇಡಿಕೆ ಇತ್ತು. ಜಾರಿ ಮಾಡಿದ್ದೇವೆ. ನೌಕರರು ಮತ್ತು ಅವರ ಕುಟುಂಬಗಳಿಗೂ ಅನ್ವಯ ಆಗಲಿದೆ, ಉಪಯೋಗ ಆಗಲಿದೆ. ಎಲ್ಲಿ ಬೇಕಾದರೂ ಚಿಕಿತ್ಸೆ ಪಡೆಯಬಹುದು. ಕಾರ್ಡ್ ತೋರಿಸಿದರೆ ಚಿಕಿತ್ಸೆ ಕೊಡುತ್ತಾರೆ. ಏನೇ ಕಾಯಿಲೆ ಇದ್ದರೂ ಚಿಕಿತ್ಸೆ ಸಿಗಲಿದೆ ಎಂದು ತಿಳಿಸಿದರು.

## ರೈತರಿಗೆ ಉಪಯುಕ್ತ ಮಾಹಿತಿ: ರೈತಮಿತ್ರ ಎರೆಹುಳು, ಅದರ ಪ್ರಯೋಜನಗಳು

• ಉದಯವಾಹಿನಿ, ಬೆಂಗಳೂರು

ಎರೆಹುಳುಗಳನ್ನು ರೈತ ಮಿತ್ರ ಎಂಬುದಾಗಿಯೇ ಕರೆಯಲಾಗುತ್ತದೆ. ಮಣ್ಣಿನಲ್ಲಿ ಫಲವತ್ತತೆ ಹೆಚ್ಚಿಸಿ, ಫಸಲು ಉತ್ತಮ ಇಳುವರಿಯೊಂದಿಗೆ ಬರೋದಕ್ಕೆ ಸಹಾಯ ಮಾಡುತ್ತಾರೆ. ಹಾಗಾದ್ರೆ ರೈತನ ಮಿತ್ರನಾಗಿರುವ ಎರೆಹುಳು ಮತ್ತು ಅದರ ಪ್ರಯೋಜನಗಳನ್ನು ಮುಂದೆ ಓದಿ. ಎರೆಹುಳುವನ್ನು ರೈತರ ಮಿತ್ರ, ರೈತ ಬಂಧು ಎಂದು ಕರೆಯಲಾಗುತ್ತದೆ. ರೈತನಂತೆ ಭೂಮಿಯಲ್ಲಿ ನಿರಂತರವಾಗಿ ಕೆಲಸ ಮಾಡುವ ಹುಳುಗಳು ನೈಸರ್ಗಿವಾಗಿ ಪೋಷಕಾಂಶಯುಕ್ತ ಗೊಬ್ಬರವನ್ನು ರೈತರಿಗೆ ಒದಗಿಸುತ್ತವೆ. ಎರೆಹುಳು ಗೊಬ್ಬರವು ರೈತರಿಗೆ ಸಹಾಯಕವಾಗಿದೆ. ಎಲ್ಲಾ ಸಾವಯವ ಬೆಳೆಗಳ ಕಸಕಡ್ಡಿ ಮಿಗಿಲು ಪದಾರ್ಥಗಳನ್ನು ಬಳಸಿಕೊಂಡು ಎರೆಹುಳು ಸಹಾಯದಿಂದ ಒಳ್ಳೆಯ ಗೊಬ್ಬರ ತಯಾರಿಸಬಹುದು. ಮಣ್ಣಿನ ಫಲವತ್ತತೆ ಹೆಚ್ಚಿಸಲು ಈ ಗೊಬ್ಬರ ಉಪಯುಕ್ತವಾಗಿದೆ. ಎರೆಹುಳದ ಗೊಬ್ಬರವನ್ನು ಬೆಳೆಯ ಯಾವುದೇ ಸಮಯದಲ್ಲಿ ಕೃಷಿ, ತೋಟಗಾರಿಕೆ, ಹೂವುಗಳು ಮತ್ತು ತರಕಾರಿಯಲ್ಲಿ ಉಪಯೋಗ ಮಾಡಬಹುದು. ಕೃಷಿ/ತೋಟಗಾರಿಕೆ ಬೆಳೆಗಳಿಗೆ **ಉಪಯೋಗಿಸುವ ಕ್ರಮ:** ಎರೆಹುಳು ಗೊಬ್ಬರವನ್ನು ಬೆಳೆದು 12-15 ಸೆಂ. ಮೀ. ಎತ್ತರದಲ್ಲಿದ್ದಾಗ ಭೂಮಿಯ ಮೇಲ್ಗಡೆ ಹರಡಬೇಕು ಮತ್ತು ಸಾಧ್ಯವಿದ್ದರೆ ನೀರನ್ನು ಹರಿಸಬೇಕು. ಹೂವಿನ ಹಾಗೂ ತರಕಾರಿ ಮತ್ತು ಹಣ್ಣಿನ ಗಿಡಗಳಿಗೆ ಎರೆಹುಳದ ಗೊಬ್ಬರವನ್ನು ಗಿಡದ ಸುತ್ತು ಹಾಕಿ ಮಣ್ಣಿನಿಂದ ಮುಚ್ಚಬೇಕು ಮತ್ತು ನೀರನ್ನು ಕೊಡಬೇಕು.

## ತಿಪಟೂರು ಕಾಂಗ್ರೆಸ್ ಶಾಸಕರ ಕುರಿತು ಸಿಎಂಗೆ ಚಾಡಿ ಹೇಳಿದ ಬಿಜೆಪಿ ನಾಯಕ

• ಉದಯವಾಹಿನಿ, ಬೆಂಗಳೂರು

ತಿಪಟೂರಿನಲ್ಲಿ ಕಾಂಗ್ರೆಸ್ ಶಾಸಕರು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಬದಲಾಗಿ ಡಿಕೆಶಿ ಅವರನ್ನು ಮುಖ್ಯಮಂತ್ರಿ ಮಾಡಬೇಕು ಎಂದು ಮನಸ್ಸಿನಲ್ಲಿಟ್ಟುಕೊಂಡು ಓಡಾಡುತ್ತಿದ್ದಾರೆ ಎಂದು ಕ್ಷೇತ್ರದ ಪ್ರಮುಖ ಮುಖಂಡರೊಬ್ಬರು ಸಿದ್ದರಾಮಯ್ಯ ಅವರಿಗೆ ಛಾಡಿ ಹೇಳಿದ್ದಾರೆ.ನಿವೃತ್ತ ಪೊಲೀಸ್ ಅಧಿಕಾರಿ, ಬಿಜೆಪಿ ನಾಯಕ ಲೋಕೇಶ್ವರ್ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಿದ್ದರಾಮಯ್ಯನವರ ಜೊತೆ ಮಾತನಾಡುವ ವೇಳೆ ತಿಪಟೂರಿನ ಶಾಸಕ ಷಡಾಕ್ಷರಿ ವಿರುದ್ಧ ಛಾಡಿ ಹೇಳಿದ್ದು, ಡಿಕೆಶಿ ಅವರನ್ನು ಮುಖ್ಯಮಂತ್ರಿ ಮಾಡುವ ಪ್ರಯತ್ನಗಳ ಬಗ್ಗೆ ವಿವರಿಸಿದ್ದಾರೆ. ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಹೌದಾ! ಎಂದು ಪ್ರತಿಕ್ರಿಯಿಸಿದ್ದು. ತಕ್ಷಣವೇ ಬೇರೆ ವಿಚಾರಗಳತ್ತ ಗಮನ ಹರಿಸಿದ್ದಾರೆ. ಜ. 13 ರಿಂದ 19 ರವರೆಗೆ ದೆಹಲಿಯಲ್ಲಿ ಮೊದಲ ಬಾರಿಗೆ ಖೋ ಖೋ ವಿಶ್ವಕಪ್ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಭಾರತೀಯ ಖೋ ಖೋ ಒಕ್ಕೂಟದ ಉಪಾಧ್ಯಕ್ಷರು ರಾಜ್ಯ ಸಂಘಟನೆಯ ಅಧ್ಯಕ್ಷರಾಗಿರುವ ಲೋಕೇಶ್ ವರ್ಲ್ ಕಪ್ ಕ್ರೀಡಾಕೂಟ ಉದ್ಘಾಟನೆಗೆ ಸಿದ್ದರಾಮಯ್ಯನವರಿಗೆ ಆಹ್ವಾನಿಸಲು ಆಗಮಿಸಿದ್ದರು. ವಿಧಾನಸೌಧದ ಸಮೇಳನ ಸಭಾಂಗಣದಲ್ಲಿ ಸಿಕ್ಕ ಸಿದ್ದರಾಮಯ್ಯ ಮುಖ್ಯ ಕಾರ್ಯದರ್ಶಿ ಶಾಲಿನೀ ರಜನೀಶ್ ಅವರಿಗೆ ಆಹ್ವಾನ ಪತ್ರವನ್ನು ಲೋಕೇಶ್ವರ್ ನೀಡಿದರು.

# ಅರಣ್ಯ ಅಪರಾಧ ನಿಗ್ರಹಕ್ಕೆ ಬರಲಿದೆ ಗರುಡಾಕ್ಷಿ

### ಆನ್‌ಲೈನ್ ಎಫ್‌ಐಆರ್ ಪದ್ಧತಿ ಜಾರಿ; ಅರಣ್ಯ, ಜೀವಿಶಾಸ್ತ್ರ ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಈವರೆಗೆ ಪೊಲೀಸ್ ಇಲಾಖೆಯಂತೆ ಅರಣ್ಯ ಇಲಾಖೆಯಿಂದ ಅರಣ್ಯ ಅಪರಾಧಗಳ ಸಂಬಂಧ ಆನ್ ಲೈನ್ ಎಫ್‌ಐಆರ್ ವ್ಯವಸ್ಥೆ ಇರಲಿಲ್ಲ. ಅರಣ್ಯ ಮತ್ತು ವನ್ಯಜೀವಿ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಚಾಲ್ತಿಯಲ್ಲಿರುವ ಕಾನೂನು ಚೌಕಟ್ಟನ್ನು ಬಲಪಡಿಸಲು ಗರುಡಾಕ್ಷಿ ಆನ್ ಲೈನ್ ಎಫ್.ಐ.ಆರ್. ವ್ಯವಸ್ಥೆ ಅಭಿವೃದ್ಧಿಪಡಿಸಿದ್ದು, ಜ.7ರಂದು ವಿಧಾನಸೌಧದಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಉದ್ಘಾಟಿಲಿದ್ದಾರೆ.

ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣಾ ಕಾನೂನುಗಳ ಅಡಿಯಲ್ಲಿ ಅರಣ್ಯ ಅಪರಾಧ ಪ್ರಕರಣಗಳನ್ನು ನಿರ್ವಹಿಸಲು ಮತ್ತು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲು ಈ ತಂತ್ರಾಂಶವು ಸಹಕಾರಿಯಾಗಲಿದೆ. ಈಗಾಗಲೇ ರಾಜ್ಯ ಪೊಲೀಸ್ ಇಲಾಖೆಯಲ್ಲಿರುವಂತೆ ಅರಣ್ಯ ಇಲಾಖೆಯಲ್ಲಿ ಸಹ ಪ್ರಥಮ ವರ್ತಮಾನ ವರದಿಯನ್ನು (ಎಫ್‌ಐಆರ್) ಗಳನ್ನು ಆನ್‌ಲೈನ್ ನಲ್ಲಿ/ ಡಿಜಿಟಲ್ ಸ್ವರೂಪಕ್ಕೆ ಪರಿವರ್ತಿಸುವಂತೆ ಈಶ್ವರ ಖಂಡ್ರೆ, ಅವರು ಸೂಚಿಸಿದ್ದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಸಹಯೋಗದೊಂದಿಗೆ ಗರುಡಾಕ್ಷಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ.

**ಪ್ರಾಯೋಗಿಕವಾಗಿ 5 ವಿಭಾಗದಲ್ಲಿ ಜಾರಿ:** ಗರುಡಾಕ್ಷಿ ತಂತ್ರಾಂಶವನ್ನು ಪ್ರಾಯೋಗಿಕವಾಗಿ ಬೆಂಗಳೂರು ನಗರ ವಿಭಾಗ, ಬೆಂಗಳೂರು ಅರಣ್ಯ ಸಂಚಾರಿ ದಳ ವಿಭಾಗ, ಭದ್ರಾವತಿ ವಿಭಾಗ, ಶಿರಸಿ ವಿಭಾಗ, ಮಲೈ ಮಹದೇಶ್ವರ ವನ್ಯಜೀವಿ ವಿಭಾಗಗಳಲ್ಲಿ ಪ್ರಾಯೋಗಿಕವಾಗಿ ಜಾರಿಗೊಳಿಸಲಾಗತ್ತದೆ. ನಂತರ ಇದನ್ನು ಹಂತ ಹಂತವಾಗಿ ಎಲ್ಲಾ ವಿಭಾಗಕ್ಕೂ ವಿಸ್ತರಿಸಲಾಗುವುದು. ಗರುಡಾಕ್ಷಿ ಆನ್ ಲೈನ್ ಎಫ್.ಆರ್. ವ್ಯವಸ್ಥೆ ಅರಣ್ಯ ಮತ್ತು ವನ್ಯಜೀವಿ ಅಪರಾಧಗಳ ನಿರ್ವಹಣೆಯಲ್ಲಿ ಅತ್ಯಂತ ಮಹತ್ವದ ಮೈಲಿಗಲ್ಲಾಗಿದ್ದು, ಪಾರದರ್ಶಕ, ಸುವ್ಯವಸ್ಥಿತ, ಪರಿಹಾರವಾಗಿ ಅರಣ್ಯ ಅಪರಾಧ ತಡೆಯಲು ಇಲಾಖೆಗೆ ಬಲ ತುಂಬಲಿದೆ. ಏನಿದು ಗರುಡಾಕ್ಷಿ ಅರಣ್ಯ ಇಲಾಖೆಯ ಅರಣ್ಯ ಅಪರಾಧಗಳ ನಿಗ್ರಹಕ್ಕಾಗಿ ಆನ್ ಲೈನ್ ಎಫ್‌ಐಆರ್ ವ್ಯವಸ್ಥೆಯೇ ಗರುಡಾಕ್ಷಿ ಎಂಬುದಾಗಿದೆ. ಈವರೆಗೆ ಪೆನ್ನು, ಪೇಪರ್ ಮೂಲಕ ಸಲ್ಲಿಕೆ ಯಾಗುತ್ತಿದ್ದಂತ ಎಫ್‌ಐಆರ್, ಆನ್ ಲೈನ್ ಮೂಲಕ ಹಾಕುವಂತ ವ್ಯವಸ್ಥೆ ಜಾರಿಯಾಗಲಿದೆ. ಜನವರಿ 7ರಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಗರುಡಾಕ್ಷಿ ಆನ್ ಲೈನ್ ಎಫ್‌ಐಆರ್ ವ್ಯವಸ್ಥೆಗೆ ಚಾಲನೆ ನೀಡಿದ ಬಳಿಕ, ಅರಣ್ಯ ಅಪರಾಧಗಳ ನಿಗ್ರಹಕ್ಕಾಗಿ ಎಲ್ಲಾ ಎಫ್‌ಐಆರ್‌ಗಳನ್ನು ಆನ್ ಲೈನ್ ಮೂಲಕವೇ ದಾಖಲಿಸುವ ವ್ಯವಸ್ಥೆ ಆರಂಭಗೊಳ್ಳಲಿದೆ.




ರಾಜ್ಯದಲ್ಲಿ ಅರಣ್ಯ ಅಪರಾಧಗಳಿಗೆ ಸಂಬಂಧಿಸಿದಂತೆ ಎಲ್ಲಾ ದೂರಿನ ನಂತ್ರ, ಎಫ್‌ಐಆರ್‌ಗಳು ಗರುಡಾಕ್ಷಿ ಎನ್ನುವಂತ ಆನ್ ಲೈನ್ ಮೂಲಕ ದಾಖಲಿಸುವುದು ಕಡ್ಡಾಯವಾಗುತ್ತದೆ. ಸೀಜ್ ರಿಪೋರ್ಟ್, ಮಹಜರ್, ತನಿಖೆ, ಕೇಸ್ ಸ್ಥಿತಿಗತಿ ಏನು ಒಂದು ಪ್ರಕರಣವನ್ನು ಮುಕ್ತಾಯ ಗೊಳಿಸಲು ಕಾಲಮಿತಿ ಕೂಡ ನಿಗದಿಯಾಗಲಿದೆ.

ಈ ಕಾಲಮಿತಿಯಲ್ಲಿ ಕ್ಲೋಸ್ ಮಾಡದೇ ಇದ್ದರೇ ಅಂತಹ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧವೂ ಕ್ರಮ ಕೈಗೊಳ್ಳುವ ವ್ಯವಸ್ಥೆ ಜಾರಿಗೊಳ್ಳಲಿದೆ. ಆ ಮೂಲಕ ಅರಣ್ಯ ಇಲಾಖೆಯ ಅಧಿಕಾರಿಗಳ ಕಳ್ಳಾಟಕ್ಕೂ ಬ್ರೇಕ್ ಬೀಳಲಿದೆ.

> **ಕೇವಲ ಮ್ಯಾನುಯಲ್ ಆಗಿ ಹಾಕಲಾಗುತ್ತಿತ್ತು. ಈಗ ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಮತ್ತೊಂದು ಮೈಲುಗಲ್ಲು ಎನ್ನುವಂತೆ ಅರಣ್ಯ ಅಪರಾಧಗಳ ಆನ್ ಲೈನ್ ಎಫ್‌ಐಆರ್ ಗಾಗಿ ಗರುಡಾಕ್ಷಿ ಎನ್ನುವಂತ ವ್ಯವಸ್ಥೆ ನಾಳೆ ಲೋಕಾರ್ಪಣೆಗೊಳಲ್ಲಿದೆ ಆ ಮೂಲಕ ಕರ್ನಾಟಕದಲ್ಲಿ ಗರುಡಾಕ್ಷಿ ಆನ್ ಲೈನ್ ಎಫ್ ಐಆರ್ ವ್ಯವಸ್ಥೆ ಜಾರಿಗೊಳ್ಳಲಿದೆ.**

## ಸಿಲೆಂಡರ್ ಸ್ಫೋಟ, ಗೋಡೆಗಳು ಛಿದ್ರ, ಇಬ್ಬರು ಗಂಭೀರ

• ಉದಯವಾಹಿನಿ, ಆನೇಕಲ್

ಮನೆಯೊಂದರಲ್ಲಿ ಬೆಳ್ಳಂ ಬೆಳಗ್ಗೆ ಸಿಲಿಂಡರ್‌ನಿಂದ ಅನಿಲ್ ಸೋರಿಕೆಯಾಗಿ ಬೆಂಕಿ ಹೊತ್ತಿಕೊಂಡು ಸ್ಫೋಟಗೊಂಡ ಪರಿಣಾಮ ಇಬ್ಬರು ಯುವಕರು ಗಂಭೀರ ಗಾಯಗೊಂಡಿದ್ದು, ಸ್ಫೋಟದ ತೀವ್ರತೆಗೆ ಗೋಡೆಗಳು ಛಿದ್ರಗೊಂಡಿವೆ.



ತಾಲ್ಲೂಕಿನ ಬೊಮಸಂದ್ರ ಪುರಸಭೆ ವ್ಯಾಪ್ತಿಯ ಕಿತ್ತಗಾನಹಳ್ಳಿ ಗ್ರಾಮದಲ್ಲಿನ ಕೃಷ್ಣಪ್ಪ ಬಡಾವಣೆಯ ಮನೆಯೊಂದರಲ್ಲಿ ಬೆಳಿಗ್ಗೆ 8 ಗಂಟೆ ಸಮಯದಲ್ಲಿ ಸಿಲಿಂಡರ್ ಸ್ಫೋಟ ಗೊಂಡಿದೆ.

ಸ್ಫೋಟದ ರಭಸಕ್ಕೆ ಮನೆಯಲ್ಲಿ ಇದ್ದ ಕೇರಳ ಮೂಲದ ಮೂವರ ಪೈಕಿ ಸುನೀಲ್ ಮತ್ತು ವಿಷ್ಣು ಎಂಬುವರು ಗಂಭೀರ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಚಿಕಿತ್ಸೆಗೆ ರವಾನಿಸಲಾಗಿದೆ. ಕಟ್ಟಡದ ಮೊದಲನೇ ಮಹಡಿಯಲ್ಲಿ ಕೇರಳ ಮೂಲದ ಮೂವರು ಯುವಕರು ವಾಸವಾಗಿದ್ದರು. ಇಂದು ಬೆಳಗ್ಗೆ ಏಕಾಏಕಿ ಸಿಲಿಂಡರ್ ಸ್ಫೋಟಗೊಂಡಿದ್ದು, ಬಿಲ್ಡಿಂಗ್ ಸಂಪೂರ್ಣವಾಗಿ ಜಖಂಗೊಂಡಿದೆ. ಜೊತೆಗೆ ಗೋಡೆಗಳು ಸೀಳಿಕೊಂಡು ಕೆಳಗೆ ಬಿದ್ದ ಪರಿಣಾಮ ಮನೆಯ ಅಕ್ಕಪಕ್ಕದಲ್ಲಿ ನಿಲ್ಲಿಸಿದ್ದ ಬೈಕ್ ಹಾಗೂ ಕಾರು ಹಾನಿಗೊಂಡಿವೆ. ಸ್ಫೋಟದ ತೀವ್ರತೆಗೆ ಮನೆಯ ಕಿಟಬಂದು ನೋಡುವಷ್ಟರಲ್ಲಿ ಸ್ಫೋಟಗೊಂಡಿದ್ದ ಮನೆ ಕೇವಲ ಪಿಲ್ಲರ್ ಅಷ್ಟೇ ಕಾಣಿಸುತ್ತಿತ್ತು.

ಸುದ್ದಿ ತಿಳಿದು ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸುತ್ತಿದ್ದಾರೆ. ಸೂರ್ಯ ಸಿಟಿ ಪೊಲೀಸ್‌ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸಿಲಿಂಡರ್ ಸ್ಫೋಟಕ್ಕೆ ನಿಖರ ಕಾರಣ ಸದ್ಯಕ್ಕೆ ತಿಳಿದು ಬಂದಿಲ್ಲ. ಪೊಲೀಸರು ಹಾಗೂ ಅಗ್ನಿಶಾಮಕ ದಳ ಹೆಚ್ಚಿನ ಮಾಹಿತಿಗಳನ್ನು ಸಂಗ್ರಹಿಸುತ್ತಿದ್ದಾರೆ.ಕಿ, ಬಾಗಿಲು, ಗಾಜುಗಳು ಪೀಸ್ ಪೀಸ್ ಆಗಿವೆ. ಸ್ಫೋಟದ ಶಬ್ದ ಕೇಳಿ ಅಕ್ಕಪಕ್ಕದವರು ಮನೆಗಳಿಂದ ಹೊರಗೆ

## ಇಬ್ಬರು ಮಕ್ಕಳಿಗೆ ವಿಷವುಣಿಸಿ ಆತ್ಮಹತ್ಯೆಗೆ ಶರಣಾದ ದಂಪತಿ

• ಉದಯವಾಹಿನಿ, ಬೆಂಗಳೂರು

ಇಬ್ಬರು ಪುಟ್ಟ ಕಂದಮಗಳಿಗೆ ವಿಷವುಣಿಸಿ ಕೊಂದು ದಂಪತಿ ಆತಹತ್ಯೆಗೆ ಶರಣಾಗಿರುವ ದಾರುಣ ಘಟನೆ ಸದಾಶಿವನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ.

ಆರ್‌ಎಂವಿ ಎಕ್ಸ್‌ಟೆನ್ಶನ 2ನೇ ಹಂತದಲ್ಲಿ ಬಾಡಿಗೆ ಮನೆಯಲ್ಲಿ 2 ವರ್ಷಗಳಿಂದ ವಾಸವಾಗಿದ್ದ ಉತ್ತರಪ್ರದೇಶದ ಅಲಹಾಬಾದ್ ನಿವಾಸಿಗಳಾದ ಅನೂಪ್ ಕುಮಾರ್(38) ಪತ್ನಿ ರಾಖಿ (35) ಹಾಗೂ 5 ವರ್ಷದ ಹೆಣ್ಣು ಮಗು ಅನುಪ್ರಿಯಾ ಮತ್ತು 2 ವರ್ಷದ ಗಂಡು ಮಗು ಪ್ರಿಯಾಂಕ್ ಮೃತಪಟ್ಟವರು. ಅನೂಪ್ ಕುಮಾರ್‌ರವರು ಸಾಫ್ಟವೇರ್ ಎಂಜಿನಿಯರ್. ಹೆಣ್ಣು ಮಗುವಿಗೆ ಆರೋಗ್ಯ ಸಮಸ್ಯೆಯಿದ್ದ ಕಾರಣ ಮಕ್ಕಳನ್ನು ನೋಡಿಕೊಳ್ಳಲು ಹಾಗೂ ಮನೆಗೆಲಸಕ್ಕೆ ಇಬ್ಬರು ಕೆಲಸದವರನ್ನು ನೇಮಿಸಿಕೊಂಡಿದ್ದರು. ದಂಪತಿ ಅನ್ಯೋನ್ಯವಾಗಿಯೇ ಇದ್ದರು. ಆದರೆ ಈ ಕುಟುಂಬದಲ್ಲಿ ಏನಾಯಿತೋ ಏನೋ ಗೊತ್ತಿಲ್ಲ. ಬೆಳಗಾಗುವಷ್ಟರಲ್ಲಿ ಇಬ್ಬರು ಮಕ್ಕಳಿಗೆ ವಿಷವುಣಿಸಿ ಕೊಂದು ನಂತರ ದಂಪತಿ ನೇಣಿಗೆ ಶರಣಾಗಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಸದಾಶಿವನಗರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.



ಆತಹತ್ಯೆಗೆ ಮುನ್ನ ಅನೂಪ್ ಕುಮಾರ್ ಅವರು ತನ್ನ ಸಹೋದರನಿಗೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ಇ-ಮೇಲ್ ಮಾಡಿದ್ದಾರೆಂದು ಪೊಲೀಸರು ಹೇಳಿದ್ದಾರೆ. ಆತಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಕೌಟುಂಬಿಕ ಕಲಹದ ಹಿನ್ನಲೆಯಲ್ಲಿ ಆತಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಎಫ್‌ಎಸ್‌ಎಲ್ ಸಿಬ್ಬಂದಿ ಮನೆಯನ್ನೆಲ್ಲಾ ಶೋಧಿಸುತ್ತಿದ್ದು, ಡೆತ್ ನೋಟ್ ಏನಾದರೂ ಬರೆದಿರಬಹುದೇ ಎಂಬುದನ್ನು ಹುಡುಕುತ್ತಿದ್ದು, ಹೆಚ್ಚಿನ ಮಾಹಿತಿಗಳನ್ನು ಕಲೆ ಹಾಕುತ್ತಿದ್ದಾರೆ. ನಾಲ್ವರ ಮೃತದೇಹಗಳನ್ನು ಎಂಎಸ್ ರಾಮಯ್ಯ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಿ ಅನೂಪ್ ಕುಮಾರ್‌ಅವರ ಕುಟುಂಬಸ್ಥರಿಗೆ ವಿಷಯ ತಿಳಿಸಿದ್ದಾರೆ. ಸಂಜೆ ವೇಳೆಗೆ ನಗರಕ್ಕೆ ಕುಟುಂಬದವರು ಬರುವ ಸಾಧ್ಯತೆ ಇದೆ.

> **ಮನೆ ಕೆಲಸದವರಿಗೆ ನಾವು ಪಾಂಡಿಚರಿಗೆ ಹೋಗಬೇಕು. ಬೆಳಗ್ಗೆ ಬೇಗ ಬರುವಂತೆ ನಿನ್ನೆ ತಿಳಿಸಿದ್ದರಿಂದ ಬೆಳಗ್ಗೆ ಮನೆ ಕೆಲಸದಾಕೆ ಬಂದು ಕಾಲಿಂಗ್ ಬೆಲ್ ಒತ್ತಿದ್ದಾರೆ. ಮನೆಯೊಳಗಿನಿಂದ ಯಾವುದೇ ಪ್ರತಿಕ್ರಿಯೆ ಬಾರದಿದ್ದಾಗ ಬಾಗಿಲು ತಳ್ಳಿದ್ದಾರೆ. ಬಾಗಿಲು ತೆರೆದುಕೊಳ್ಳತ್ತಿದ್ದಂತೆ ಒಳಗೆ ಹೋಗಿ ನೋಡಿದಾಗ ಈ ಪ್ರಕರಣ ಬೆಳಕಿಗೆ ಬಂದಿದೆ. ತಕ್ಷಣ ನೆರೆಹೊರೆಯವರನ್ನು ಕರೆದು ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.**

## ನಕ್ಸಲರಿಗೆ ಶರಣಾಗಲು ನಾನೇ ಕರೆ ಕೊಟ್ಟಿದ್ದೇನೆ: ಸಿಎಂ ಸಿದ್ದರಾಮಯ್ಯ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕಳೆದ ಕೆಲವು ದಿನಗಳ ಹಿಂದೆ ಚಿಕ್ಕಮಗಳೂರು ಸುತ್ತ ಮುತ್ತ ಭಾಗದಲ್ಲಿ ನಕ್ಸಲರ ಚಟುವಟಿಕೆ ಪುನರಾರಂಭವಾಗಿತ್ತು. ಈ ಸಂದರ್ಭದಲ್ಲಿ ನಕ್ಸಲ್ ನಾಯಕ ವಿಕ್ರಂ ಗೌಡನನ್ನು ಎಂಟರ್ ಮಾಡಲಾಗಿತ್ತು. ಇದೀಗ ನಕ್ಸಲರಿಗೆ ಶರಣಾಗಲು ನಾನೇ ಕರೆ ಕೊಟ್ಟಿದ್ದೇನ ಎಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬೆಂಗಳೂರಿನ ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಕ್ಸಲ್ ಚಟುವಟಿಕೆ ಹಿನ್ನೆಲೆಯಲ್ಲಿ ಎಎನ್ಎಫ್ ನಕ್ಸಲ್ ಕಾರ್ಯಾಚರಣೆ ನಡೆಸುತ್ತಿದ್ದು ಇದೀಗ ಅವರಿಗೆ ಕಾರ್ಯಾಚರಣೆ ಸ್ಥಗಿತಗೊಳಿಸಲು ಸೂಚಿಸಲಾಗಿದೆ. ಅಲ್ಲದೆ ನಕ್ಸಲರಿಗೆ ಶರಣಾಗಲು ನಾನೇ ಕರೆಕೊಟ್ಟಿದ್ದೇನೆ.

ನಕ್ಸಲರ ಮನ ಪರಿವರ್ತನೆ ಆಗಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ನಕ್ಸಲರ ಶರಣಾಗತಿಗೆ ಸರ್ಕಾರ ಸಮಿತಿ ಕಳೆದ ಕೆಲವು ದಿನಗಳ ಹಿಂದೆ ಚಿಕ್ಕಮಂಗಳೂರು ಭಾಗದಲ್ಲಿ ನಕ್ಸಲ್ ಚಟುವಟಿಕೆ ಹೆಚ್ಚಾಗಿದ್ದು ಈ ವೇಳೆ ವಿಕ್ರಂ ಗೌಡನನ್ನು ಎಂಟರ್ ಮಾಡಿದ ಬಳಿಕ ಇದೀಗ 6 ನಕ್ಸಲರು ಚಿಕ್ಕಮಂಗಳೂರು ಜಿಲ್ಲಾಡಳಿತದ ಮುಂದೆ ಶರಣಾಗತಿಗೆ ನಿರ್ಧರಿಸಿದ್ದು, ಮುಂದಿನ ಮೂರು ದಿನಗಳಲ್ಲಿ ಆರು ನಕ್ಸಲರು ಶರಣಾಗೋ ಸಾಧ್ಯತೆ ಇದೆ ಎನ್ನಲಾಗಿದೆ. ಹೌದು ಚಿಕ್ಕಮಗಳೂರಿನ ಜಿಲ್ಲಾಡಳಿತದ ಮುಂದೆ ಶರಣಾಗತಿ ಆಗಲು ನಿರ್ಧಾರ ಮಾಡಿದ್ದಾರೆ. ಕರ್ನಾಟಕ, ಕೇರಳ, ಆಂಧ್ರಕ್ಕೆ ಬೇಕಾಗಿದ್ದ ಮೋಸ್ಟ್ ವಾಂಟೆಡ್ ನಕ್ಸಲರು ಇದೀಗ ಶರಣಾಗತಿಗೆ ನಿರ್ಧಾರ ಮಾಡಿದ್ದಾರೆ. ಕರ್ನಾಟಕದ ನಕ್ಸಲ್ ತುಂಗಾ ದಳದ ನಕ್ಸಲ್ ನಾಯಕಿ ಮುಂಡಗಾರು ಲತಾ, ಸುಂದರಿ, ವನಜಾಕ್ಷಿ ದಕ್ಷಿಣ ಭಾರತದ ಮೋಸ್ಟ್ ವಾಂಟೆಡ್ ನಕ್ಸಲ್ ಜೀಶ ಆಂಧ್ರಪ್ರದೇಶದ ಕೆ. ವಸಂತ್, ಮಾರಪ್ಪ ಅರೋಲಿ ಶರಣಾಗತಿಗೆ ನಿರ್ಧರಿಸಿದ್ದಾರೆ. ಹೀಗಾಗಿ ಸರ್ಕಾರ ಕೂಡ ನಕ್ಸಲರ ಶರಣಾಗತಿಗೆ ಸಮ್ಮತಿ ಸೂಚಿಸಿದೆ. ಈ ಬಗ್ಗೆ ಶಾಂತಿಗಾಗಿ ನಕ್ಸಲರು ನಾಗರೀಕ ವೇದಿಕೆಗೆ ಪತ್ರ ಬರೆದಿದ್ದಾರೆ ಎಂದು ತಿಳಿದುಬಂದಿದೆ. ಈ ಕುರಿತು ಸಿಎಂ ಸಿದ್ದರಾಮಯ್ಯ ಅವರ ಜೊತೆಗೆ ವೇದಿಕೆ ಸದಸ್ಯರು ಚರ್ಚಿಸಿದ್ದಾರೆ.


ಉದಯವಾಹಿನಿ ಚಿತ್ರ

> **ಮೂರು ದಿನಗಳಲ್ಲಿ ಆರು ನಕ್ಸಲರು ಶರಣಾಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಮೂರು ತಿಂಗಳಿನಿಂದ ಚಿಕ್ಕಮಂಗಳೂರು ಉಡುಪಿ ಭಾಗದಲ್ಲಿ ನಕ್ಸಲ್ ಚಟುವಟಿಕೆ ನಡೆಯುತ್ತಿತ್ತು. ವಿಕ್ರಂ ಎನ್ಕೌಂಟರ್ ಬಳಿಕ ಸರ್ಕಾರ ನಕ್ಸಲರಿಗೆ ಶರಣಾಗತಿಗೆ ಆದ್ಯತೆ ನೀಡಿತ್ತು. ಹಾಗಾಗಿ ಇದೀಗ 6 ನಕ್ಸಲರು ತಾವಾಗಿಯೇ ಶರಣಾಗತಿಗೆ ನಿರ್ಧಾರ ಕೈಗೊಂಡಿದ್ದಾರೆ.**

## ಭಜನ, ಪ್ರವಚನ, ಸಂಕೀರ್ತನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ಹಾಗೂ ಶ್ರೀ ರಾಘವೇಂದ್ರ ಸೇವಾ ಸಮಿತಿ, ಸುಧೀಂದ್ರನಗರ, ಮಲ್ಲೇಶ್ವರಂ ಇವುಗಳ ಸಂಯುಕ್ತಾಶ್ರಯದಲ್ಲಿ ಜನವರಿ 7 ರಿಂದ 11ರ ವರೆಗೆ ಧಾರ್ಮಿಕ/ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಅವುಗಳ ವಿವರಗಳು ಈ ರೀತಿ ಇವೆ : **ಜನವರಿ 7, ಮಂಗಳವಾರ :** ಮತ್ತಿಕೆರೆಯ ಶ್ರೀ ವೆಂಕಟೇಶ್ವರ ಭಜನಾ ಮಂಡಳಿ ಸದಸ್ಯರಿಂದ ಭಜನೆ, ನಂತರ ಮ॥ಶಾ॥ಸಂ॥ ಡಾ॥ ಆನಂದತೀರ್ಥಾಚಾರ್ಯ ಮಾಳಗಿ ಇವರಿಂದ ಸುಂದರ ಕಾಂಡ ಪ್ರವಚನ. (ಸಮಯ : ಸಂಜೆ 6 ರಿಂದ 8)

**ಜನವರಿ 8, ಬುಧವಾರ :** ವಿದ್ಯಾರಣ್ಯಪುರದ ಶ್ರೀ ವಿಜಯ ವಿಠಲ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ನಂತರ ಮ॥ಶಾ॥ಸಂ॥ ಡಾ॥ ಆನಂದತೀರ್ಥಾಚಾರ್ಯ ಮಾಳಗಿ ಇವರಿಂದ ಸುಂದರಕಾಂಡ ಪ್ರವಚನ. (ಸಂಜೆ 6 ರಿಂದ 8). **ಜನವರಿ 9, ಗುರುವಾರ :** ಮಲ್ಲೇಶ್ವರದ ಸ್ತುತಿ ವಾಹಿನಿ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ನಂತರ ಮ॥ಶಾ॥ಸಂ॥ ಡಾ॥ ಆನಂದತೀರ್ಥಾಚಾರ್ಯ ಮಾಳಗಿ ಇವರಿಂದ ಸುಂದರಕಾಂಡ ಪ್ರವಚನ. (ಸಮಯ : ಸಂಜೆ 6 ರಿಂದ 8) **ಜನವರಿ 10, ಶುಕ್ರವಾರ :** ವೈಕುಂಠ ಏಕಾದಶಿ ಪ್ರಯುಕ್ತ ಬೆಳಗ್ಗೆ 7-30 ರಿಂದ ರಾತ್ರಿ 12-00ರ ವರೆಗೆ ನಾಡಿನ ಪ್ರಸಿದ್ಧ ಹನ್ನೊಂದು ವಿದ್ವಾಂಸರುಗಳಿಂದ ಅಖಂಡ ಭಾಗವತ ಉಪನ್ಯಾಸ. **ಜನವರಿ 11, ಶನಿವಾರ, ಸಂಜೆ 6-30ಕ್ಕೆ :** ಯುವ ಗಾಯಕ ಶ್ರೀ ರಾಮ ರಕ್ಷಿತ್ ಇವರಿಂದ ಹರಿನಾಮ ಸಂಕೀರ್ತನೆ. ವಾದ್ಯ ಸಹಕಾರ : ಶ್ರೀ ಗಿರೀಶ್ ಕೊಳಲ (ಪಿಟೀಲು), ತಬಲಾ : ಶ್ರೀ ಸಂದೀಪ್. **ಕಾರ್ಯಕ್ರಮ ನಡೆಯುವ ಸ್ಥಳ:** ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003. ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಟಿ ಟಿ ಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ॥ ಪಿ. ಭುಜಂಗರಾವ್ ವಿನಂತಿಸಿದ್ದಾರೆ.

## ಬಸ್ ದರ ಏರಿಕೆ ಬಳಿಕ ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಸಾರಿಗೆ ಬಸ್‌ಗಳಲ್ಲಿ ಟಿಕೆಟ್ ದರ ಶೇಕಡಾ 15 ರಷ್ಟು ಏರಿಕೆ ಮಾಡಿ ರಾಜ್ಯ ಸರ್ಕಾರ ಆದೇಶಿಸಿದೆ. ಇದರ ಬೆನ್ನಲ್ಲೇ ಬೆಂಗಳೂರಿನ ನಮ್ಮ ಮೆಟ್ರೋ ಪ್ರಯಾಣಿಕರಿಗೆ ಮತ್ತೊಂದು ಬಿಗ್ ಶಾಕ್ ನೀಡುತ್ತಿದ್ರೂ, ಮೆಟ್ರೋ ಪ್ರಯಾಣದ ಟಿಕೆಟ್ ದರ ಶೇಕಡ 15 ರಿಂದ 20 ರಷ್ಟು ಹೆಚ್ಚಳ ಆಗುವ ಸಾಧ್ಯತೆ ಇದೆ ಎನ್ನಲಾಗಿದೆ.



ಹೌದು ನಮ್ಮ ಮೆಟ್ರೋ ಟಿಕೆಟ್ ದರ ಹೆಚ್ಚಿಸಲು ಬಿಎಂಆರ್ ಸಿಲ್ ಸಿದ್ಧತೆ ನಡೆಸಿದ್ದು, ಶೇ.15 ರಿಂದ 20 ರಷ್ಟು ಹೆಚ್ಚಿಸುವ ಸಾಧ್ಯತೆಯಿದೆ ಎನ್ನಲಾಗಿದೆ. ಜನವರಿ 17 ಕ್ಕೆ ದರ ಪರಿಷ್ಕರಣೆ ಸಮಿತಿ ಸಲ್ಲಿಸಲಿರುವ ಅಂತಿಮ ವರದಿ ಕುರಿತು ಸಮಾಲೋಚನೆ ನಡೆಯಲಿದೆ. ಜನವರಿ 17 ರ ಸಭೆಯಲ್ಲಿ ಟಿಕೆಟ್ ದರ ಫೈನಲ್ ಆಗಲಿದೆ ಎಂದು ತಿಳಿದುಬಂದಿದೆ.

ನಮ್ಮ ಮೆಟ್ರೋ 2017ರಲ್ಲಿ ಕೊನೆಯ ಬಾರಿ ದರ ಪರಿಷ್ಕರಣೆ ಮಾಡಿತ್ತು. 10-15 ಪ್ರತಿಶತ ಟಿಕೆಟ್ ದರ ಏರಿಕೆ ಮಾಡಲಾಗಿತ್ತು. ಬಳಿಕ ಹಣದುಬ್ಬರ ಹೆಚ್ಚಳ, ಕಾರ್ಯಾಚರಣೆ ವೆಚ್ಚ ಹೆಚ್ಚಳ ನಮ್ಮ ಮೆಟ್ರೋ ನಿರ್ವಹಣೆ ಮೇಲೆ ಪರಿಣಾಮ ಬೀರುತ್ತಿದ್ದು ನಷ್ಟವನ್ನು ತಪ್ಪಿಸಲು ದರ ಏರಿಕೆ ಒಂದೇ ದಾರಿ ಎನ್ನಲಾಗಿದೆ. ನಮ್ಮ ಮೆಟ್ರೋ ಪ್ರಯಾಣ ದರ ಈಗ ಕನಿಷ್ಠ 10 ರೂಪಾಯಿ ಇದ್ದರೆ ಗರಿಷ್ಠ 60 ರೂಪಾಯಿ ಆಗಿದೆ. ಮೆಟ್ರೋ ಕಾರ್ಡ್ ಮತ್ತು ಆನ್‌ಲೈನ್ ಟಿಕೆಟ್ ಬಳಕೆದಾರರಿಗೆ ಪ್ರಯಾಣ ವೆಚ್ಚದಲ್ಲಿ 5 ಪ್ರತಿಶತ ವಿನಾಯಿತಿ ಸಿಗುತ್ತಿದೆ. ಈಗ 20 ಪ್ರತಿಶತ ಬೆಲೆ ಏರಿಕೆಗೆ ಅನುಮೋದನೆ ಸಿಕ್ಕರೆ ಕನಿಷ್ಠ ದರ 12 ರೂಪಾಯಿಗೆ ಮತ್ತು ಗರಿಷ್ಠ ದರ 72 ರೂಪಾಯಿಗೆ ಏರಿಕೆಯಾಗಲಿದೆ.

# ಅಂತರರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಡೇಟ್ ಫಿಕ್ಸ್

### ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಸಂಘಟನಾ ಸಮಿತಿ ಸಭೆಯ ನಂತರ ಕರೆಯಲಾಗಿದ್ದ ಪತ್ರಿಕಾಗೋಷ್ಠಿ

• ಉದಯವಾಹಿನಿ, ಬೆಂಗಳೂರು

ಈ ಬಾರಿ ಸರ್ವ ಜನಾಂಗದ ಶಾಂತಿಯ ತೋಟ ಎಂಬ ವಿಷಯವನ್ನು ಆಧರಿಸಿ 16 ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವನ್ನು ಮಾರ್ಚ್ 1-8 ರವರೆಗೆ ಆಯೋಜಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಸಂಘಟನಾ ಸಮಿತಿ ಸಭೆಯ ನಂತರ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು.

ಸಿನಿಮಾಸಕ್ತರಿಗೆ ಸುವರ್ಣಾವಕಾಶ ಕಳೆದ ವರ್ಷ ಚಲನ ಚಿತ್ರೋತ್ಸವಕ್ಕೆ ಸಾಮಾಜಿಕ ನ್ಯಾಯ ಎಂಬ ಥೀಮ್ ಆಧರಿಸಿ ಚಲನಚಿತ್ರೋತ್ಸವವನ್ನು ಆಯೋಜಿಸಲಾಗಿತ್ತು ಈ ಬಾರಿಯೂ 60 ಕ್ಕೂ ಹೆಚ್ಚು ದೇಶಗಳ ಚಲನಚಿತ್ರಗಳು ಅಂತರರಾಷ್ಟ್ರೀಯ ಚಲನಚಿತ್ರೋತ್ಸದಲ್ಲಿ ಪಾಲ್ಗೊಳ್ಳಲಿದ್ದು, 200 ಚಲನಚಿತ್ರಗಳು 13 ಪರದೆಗಳಲ್ಲಿ ಪ್ರದರ್ಶನಗೊಳ್ಳಲಿವೆ. ಒರಾಯ್ ಮಾಲ್ ನಲ್ಲಿ 11 ಪರದೆಗಳು, ಸುಚಿತ್ರಾ ಫಿಲಂ ಸೊಸೈಟಿ ಹಾಗೂ ಡಾ: ಅಂಬರೀಶ್ ಆಡಿಟೋರಿಯಂ, ಚಾಮರಾಜಪೇಟೆ ಇಲ್ಲಿ ತಲಾ ಒಂದು ಪರದೆಯಲ್ಲಿ ಚಿತ್ರ ಪ್ರದರ್ಶನಗೊಳ್ಳಲಿವೆ. ಕನ್ನಡ ಸೇರಿದಂತೆ ಇತರೆ ಭಾಷೆಗಳ 400 ಚಿತ್ರ ಪ್ರದರ್ಶನಗಳು ನಡೆಯಲಿದ್ದು ಬೆಂಗಳೂರು ನಾಗರಿಕರಿಗೆ ಹಾಗೂ ರಾಜ್ಯದ ಎಲ್ಲರಿಗೂ ವಿವಿಧ ದೇಶಗಳ ನಾಗರಿಕತೆಯನ್ನು ಕಾಣಲು ಅವಕಾಶ ಲಭಿಸಲಿದೆ. ಸಿನಿಮಾಸಕ್ತರಿಗೆ ಇದೊಂದು ಸುವರ್ಣಾವಕಾಶ ಎಂದು ಮುಖ್ಯಮಂತ್ರಿಗಳು ತಿಳಿಸಿದರು.


ಉದಯವಾಹಿನಿ ಚಿತ್ರ

9 ಕೋಟಿ ರೂ.ಗಳ ವೆಚ್ಚ 2006 ರಿಂದ ಪ್ರಾರಂಭವಾದ ಚಲನಚಿತ್ರೋತ್ಸವ ಇದೀಗ 16ನೇ ಅಂತರರಾಷ್ಟ್ರೀಯ ಚಲನ ಚಿತ್ರೋತ್ಸವ. ಕಳೆದ ವರ್ಷ 7 ಕೋಟಿ ರೂ. ವೆಚ್ಚವಾಗಿತ್ತು. ಈ ವರ್ಷ 9 ಕೋಟಿ ರೂ.ಗಳ ವೆಚ್ಚದಲ್ಲಿ ಚಲನಚಿತ್ರೋಸವ ನಡೆಸಲು ಸಮಿತಿ ತೀರ್ಮಾನಿಸಿದೆ ಎಂದರು. 1 ರಂದು ಉದ್ಘಾಟನೆ, 8 ರಂದು ಸಮಾರೋಪ ಸಮಾರಂಭ ಜರುಗಲಿದೆ. ಸಮಿತಿಯು ಸಿನಿಮೋತ್ಸವದ ರಾಯಭಾರಿಯನ್ನು ತೀರ್ಮಾನಿಸಲಿದೆ. ಸಮಾರಂಭವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದು, ಸಮಾರೋಪ ಸಮಾರಂಭದಲ್ಲಿ ರಾಜ್ಯಪಾಲರು ಪಾಲ್ಗೊಳ್ಳವರು. ಬಜೆಟ್ ಪೂರ್ವಭಾವಿ ಚರ್ಚೆಗಳಿರುವುದರಿಂದ ಮಾರ್ಚ್ 1 ರಿಂದ ಚಲನಚಿತ್ರೋತ್ಸವವನ್ನು ಆಯೋಜಿಸಲಾಗುತ್ತಿದೆ ಎಂದು ಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ತಿಳಿಸಿದರು.

> **ಭೋಜನಕೂಟದಲ್ಲಿ ರಾಜಕೀಯ ಚರ್ಚೆಯಾಗಲಿಲ್ಲ ಸಚಿವ ಸತೀಶ್ ಜಾರಕಿಹೊಳಿಯವರ ಆಹ್ವಾನದ ಮೇರೆಗೆ ಭೋಜನಕೂಟದಲ್ಲಿ ಭಾಗಹಿಸಲಾಗಿತ್ತು ರಾಜಕೀಯ ವಿಚಾರಗಳು ಚರ್ಚೆಯಾಗಿಲ್ಲ. ಪಕ್ಷವನ್ನು ಗಟ್ಟಿಗೊಳಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು. ಮಾಧ್ಯಮಗಳಲ್ಲಿ ಊಹಾಪೋಹದ ವರದಿಗಳು ಬಂದಿವೆ. ಹೊಸ ವರ್ಷದ ಪ್ರಯುಕ್ತ ಭೋಜನಕೂಟ ಏರ್ಪಡಿಸಲಾಗಿತ್ತು ಎಂದರು.**

ಚಲನಚಿತ್ರಮಂದಿಗಳು ಮುಚ್ಚುವ ಪರಿಸ್ಥಿತಿಯಲ್ಲಿರುವಾಗ, ಚಿತ್ರರಂಗಕ್ಕೆ ಸರ್ಕಾರದ ಬೆಂಬಲದ ಕ್ರಮಗಳ ಬಗ್ಗೆ ಪ್ರತಿಕ್ರಿಯೆ ನೀಡಿ, ಇದು 16 ನೇ ಅಂತರರಾಷ್ಟ್ರೀಯ ಸಿನಿಮೋತ್ಸವ ಈ ಬಾರಿಯ ಸರ್ವ ಜನಾಂಗದ ಶಾಂತಿಯ ತೋಟ ಎಂಬ ವಿಷಯಾಧಾರಿತವಾದ ಚಲನಚಿತ್ರೋತ್ಸವವನ್ನು ಈ ಬಾರಿ ಏರ್ಪಡಿಸಲಾಗುವುದು. ಕನ್ನಡ ಚಲನಚಿತ್ರಗಳ ಉತ್ತೇಜನ ನೀಡುವಂತಹ ಹಲವು ಯೋಜನೆಗಳನ್ನು ಸರ್ಕಾರ ಜಾರಿಗೊಳಿಸುತ್ತಾ ಬಂದಿದೆ. ಕನ್ನಡ ಚಲನಚಿತ್ರಗಳ ಸಹಾಯಧನಕ್ಕಾಗಿ ಆಯ್ಕೆ ಸಮಿತಿಯನ್ನು ರಚಿಸಲಾಗಿದ್ದು ಸಮಿತಿ ಚಿತ್ರಗಳನ್ನು ವೀಕ್ಷಿಸುತ್ತಿದೆ. ಎಂದರು.

> **ಸದಭಿರುಚಿಯ ಚಿತ್ರಗಳನ್ನು ವೀಕ್ಷಿಸುವ ಈ ಬಾರಿಯ ಚಲನಚಿತ್ರೋತ್ಸವದಲ್ಲಿ ಮುಖ್ಯಮಂತ್ರಿಗಳು ಚಲನಚಿತ್ರಗಳನ್ನು ವೀಕ್ಷಿಸುವರೇ ಎಂಬ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಸಮಯಾವಕಾಶವಾದರೆ, ಸದಭಿರುಚಿಯ ಚಲನಚಿತ್ರಗಳನ್ನು ವೀಕ್ಷಿಸಲು ಪ್ರಯತ್ನಿಸುತ್ತೇನೆ ಎಂದರು. ನ ಎಂಎಲ್ ಸಿ ನಾಮನಿರ್ದೇಶನ ವಿಧಾನಪರಿಷತ್ ಸದಸ್ಯರ ನಾಮನಿರ್ದೇಶನದ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ, ಪಕ್ಷದ ವರಿಷ್ಠರು ನಿರ್ಧಾರವನ್ನು ಕೈಗೊಳ್ಳಲಿದ್ದು, ಸಿನಿಮಾ, ಸಾಹಿತ್ಯ, ಸಾಮಾಜಿಕ ಕ್ಷೇತ್ರಗಳೂ ಸೇರಿದಂತೆ ವಿವಿಧ ಕ್ಷೇತ್ರಗಳಿಂದ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು ಎಂದರು.**

ಮೈಸೂರಿನಲ್ಲಿ ಚಿತ್ರನಗರಿ ಮೈಸೂರಿನಲ್ಲಿ ಚಿತ್ರನಗರಿ ನಿರ್ಮಿಸಲು ಸರ್ಕಾರ ಈಗಾಗಲೇ 110 ಎಕರೆ ವಿಸ್ತೀರ್ಣದ ಜಮೀನನ್ನು ಮಂಜೂರು ಮಾಡಿದ್ದು ಪಿಪಿಪಿ ಮಾದರಿಯಲ್ಲಿ ಚಿತ್ರನಗರಿಯನ್ನು ನಿರ್ಮಾಣದ ಯೋಜನೆ ಅನುಷ್ಠಾನಗೊಳಿಸಲಾಗುವುದು ಎಂದರು.

# ಆನೆ- ಮಾನವ ಸಂಘರ್ಷ ತಡೆಗೆ ಹೊಸ ಯೋಜನೆ: ಬ್ಯಾರಿಕೇಡ್ ಹಾಕಲು ಪ್ರಸ್ತಾವ

## ಕಾಡಾನೆ– ಮಾನವ ಸಂಘರ್ಷವನ್ನು ತಡೆಯಲು ಸರ್ಕಾರ ಆನೆ ಸಂರಕ್ಷಣೆ, ಆರೈಕೆ ಮತ್ತು ಪುನರ್ವಸತಿ ಶಿಬಿರ ಸ್ಥಾಪಿಸಲು ಚಿಂತನೆ

• **ಉದಯವಾಹಿನಿ ಮಡಿಕೇರಿ**

ಕಾಡಾನೆ– ಮಾನವ ಸಂಘರ್ಷವನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಇದೀಗ ಆನೆ ಸಂರಕ್ಷಣೆ, ಆರೈಕೆ ಮತ್ತು ಪುನರ್ವಸತಿ ಶಿಬಿರ ಸ್ಥಾಪಿಸಲು ಚಿಂತನೆ ನಡೆಸಿದೆ.

ಈಗಾಗಲೇ ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಭಯಾರಣ್ಯ ವ್ಯಾಪ್ತಿಯಲ್ಲಿ ಆನೆ ಸಂರಕ್ಷಣೆ, ಆರೈಕೆ ಮತ್ತು ಪುನರ್ವಸತಿ ಶಿಬಿರ ಸ್ಥಾಪಿಸಲಾಗುತ್ತಿದೆ' ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಇದು ಆನೆಗಳಿಂದ ತೊಂದರೆಗೆ ಒಳಗಾದವರಲ್ಲಿ ಆಶಾಕಿರಣಗಳನ್ನು ಮೂಡಿಸಿದ್ದರೆ, ಪರಿಸರವಾದಿಗಳ ಕೆಂಗಣ್ಣಿಗೆ ಗುರಿಯಾಗಿದೆ. ವಿರೋಧಪಕ್ಷಗಳು ಇದು ಕಾರ್ಯಸಾಧುವೇ ಎಂದು ಪ್ರಶ್ನಿಸುತ್ತಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಆನೆ– ಮಾನವ ಸಂಘರ್ಷ ನಿರಂತರವಾಗಿ ಹೆಚ್ಚಾಗುತ್ತಲೇ ಇದೆ. ಹೊಸ ವರ್ಷದ ಆರಂಭದಲ್ಲಿ ಹೊಸ ಹೊಸ ಪ್ರದೇಶಗಳಲ್ಲಿ ಆನೆಗಳು ಕಾಣಿಸಿಕೊಳ್ಳುತ್ತಿವೆ. ಪುತ್ತೂರು, ಸುಳ್ಯ ಹಾಗೂ ಕೊಡಗಿನ ಮಲೆನಾಡು ಭಾಗಗಳಲ್ಲಿ ಕಾಣಿಸಿಕೊಂಡು ಹಾನಿ ಮಾಡುತ್ತಿವೆ. ಅಂದರೆ, ಆನೆಗಳ ಚಲನವಲನಗಳ ವ್ಯಾಪ್ತಿ ಹಿರಿದಾಗುತ್ತಲೇ ಇದೆ. ಮಡಿಕೇರಿ ವನ್ಯಜೀವಿ ವಲಯದ ವ್ಯಾಪ್ತಿಯಲ್ಲಿ 23 ಕಿ.ಮೀನಷ್ಟು ದೂರ ರೈಲ್ವೆ ಬ್ಯಾರಿಕೇಡ್ ಹಾಕಲಾಗಿದೆ. ಆರೆಂಜ್ ಕೌಂಟಿಯಿಂದ ಮಾಲ್ದಾರವರೆಗೆ ಹೊಸದಾಗಿ 15ಕಿ.ಮೀ ರೈಲ್ವೆ ಬ್ಯಾರಿಕೇಡ್ ಹಾಕಲು ಪ್ರಸ್ತಾವ ಸಲ್ಲಿಸಲಾಗಿದೆ. ಆದರೂ, ಆನೆಗಳ ಕಾಟ ನಿಯಂತ್ರಣಕ್ಕೆ ಬಂದಿಲ್ಲ.


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

### ವೈಜ್ಞಾನಿಕವೇ?

**ಈ ಯೋಜನ ವೈಜ್ಞಾನಿಕವೇ ಎಂಬ ಪ್ರಶ್ನೆಯನ್ನೂ ಪರಿಸರವಾದಿಗಳು ಕೇಳುತ್ತಿದ್ದಾರೆ. 2 ಸಾವಿರ ಹೆಕ್ಟೇರ್ ಪ್ರದೇಶದೊಳಗೆ ಆನೆಗಳನ್ನು ಬಿಟ್ಟ ಮೇಲೆ ಅವುಗಳ ಮಧ್ಯೆಯೇ ಸಂಘರ್ಷ ಏರ್ಪಟ್ಟು ಆನೆಗಳ ಸತ್ತರೆ ಯಾರು ಹೊಣೆ ಎಂದು ಅವರು ಪ್ರಶ್ನಿಸುತ್ತಿದ್ದಾರೆ.**

**ಏನಿದು ಹೊಸ ಯೋಜನೆ?:** ಆನೆ ಸಂರಕ್ಷಣೆ, ಆರೈಕೆ ಮತ್ತು ಪುನರ್ವಸತಿ ಶಿಬಿರ ದೇಶದಲ್ಲೇ ಮೊದಲು ಎಂದೇ ಬಣ್ಣಿಸಲಾಗುತ್ತಿದೆ. ಸುಮಾರು 2 ಸಾವಿರ ಹೆಕ್ಟೇರ್ ಪ್ರದೇಶವನ್ನು ಗುರುತಿಸಿ, ಅದರಲ್ಲಿ ಆನೆಗಳಿಗೆ ಆಹಾರ ಒದಗಿಸುವ ಸಸ್ಯ, ಮರಗಳನ್ನು ಬೆಳೆಸಿ, ಸುತ್ತಲೂ ಆನೆಗಳು ಹೊರಬಾರದಂತೆ ರಕ್ಷಣಾ ಬೇಲಿ ಹಾಕಿ ನಂತರ ಆನೆಗಳನ್ನು ಸೆರೆಹಿಡಿದು ಅದರಲ್ಲಿ ಬಿಡಲಾಗುತ್ತದೆ. ಇಲ್ಲಿ ಕಾಡಿನೊಳಗೆ ಇರುವ ಆನೆಗಳ ಬದಲಿಗೆ ತೋಟದಲ್ಲೇ ಜನಿಸಿ ಓಡಾಡುತ್ತಿರುವ ಸುಮಾರು 170 ಆನೆಗಳನ್ನು ಹಾಗೂ ಪದೇ ಪದೇ ಜನವಸತಿ ಪ್ರದೇಶಗಳತ್ತ ಬಂದು ತೊಂದರೆಕೊಡುತ್ತಿರುವ ಕಾಡಾನೆಗಳನ್ನು ಮಾತ್ರವೇ ಸೆರೆ ಹಿಡಿದು ಬಿಡಲಾಗುತ್ತದೆ. ಇದರಿಂದ ಜನವಸತಿ ಪ್ರದೇಶಗಳಲ್ಲಿ ಕಾಡಾನೆಗಳ ಉಪಟಳ ತಪ್ಪುತ್ತದೆ ಎಂಬುದು ಅರಣ್ಯಾಧಿಕಾರಿಗಳ ವಾದ.

### ಕಾರ್ಯಸಾಧುವೇ?

**ಇದು ಕಾರ್ಯಸಾಧುವೇ ಎಂಬ ಪ್ರಶ್ನೆಯನ್ನು ಹಲವು ಮಂದಿ ಕೇಳುತ್ತಿದ್ದಾರೆ. 2 ಸಾವಿರ ಹೆಕ್ಟೇರ್ ಪ್ರದೇಶದ ಸುತ್ತಲೂ ರೈಲ್ವೆ ಬ್ಯಾರಿಕೇಡ್ ಹಾಕುವುದು, ಅಲ್ಲಿ ಆನೆಗಳಿಗೆ ಬೇಕಾಗುವಷ್ಟು ನೀರು, ಆಹಾರ ಒದಗಿಸುವುದು, ಆನೆಗಳನ್ನೆಲ್ಲ ಸೆರೆ ಹಿಡಿಯುವುದು ಇದಕ್ಕೆಲ್ಲ ತಗುಲುವ ಕೋಟ್ಯಂತರ ರೂಪಾಯಿ ಖರ್ಚು. ಇಷ್ಟೆಲ್ಲ ದೊಡ್ಡ ಮಟ್ಟದ ವೆಚ್ಚ ತಗುಲುವ ಈ ಯೋಜನೆ ಕಾರ್ಯಸಾಧುವೇ ಎಂಬ ಪ್ರಶ್ನೆ ಹಲವರದ್ದಾಗಿದೆ.**

**ಆನೆಗಳು ಸತ್ತರೆ ಯಾರು ಹೊಣೆ?**

ಆನೆಗಳನ್ನು ಸೆರೆ ಹಿಡಿದ ಮೇಲೆ ಆ ಜಾಗಕ್ಕೆ ಮತ್ತೊಂದು ಆನೆ ಕಾಡಿನಿಂದ ಬಂದು ಸೇರುತ್ತದೆ. ಆಗ ಇದು ಶಾಶ್ವತ ಪರಿಹಾರ ಹೇಗಾಗುತ್ತದೆ ಎಂಬ ಪ್ರಶ್ನೆಯನ್ನೂ ಅವರು ಮುಂದಿಡುತ್ತಾರೆ. ಕೊಡಗಿನಲ್ಲಿವೆ 170 ತೋಟದಾನೆಗಳು, ಕಾಡು ಏನೆಂದು ಗೊತ್ತಿರದ ಸುಮಾರು 170 ಕಾಡಾನೆಗಳು ಕೊಡಗು ಜಿಲ್ಲೆಯ ವಿವಿಧ ತೋಟಗಳಲ್ಲಿ ವಾಸಿಸುತ್ತಿವೆ.

ಇವುಗಳು ಎಂದೂ ಕಾಡಿಗೆ ಹೋಗಿಲ್ಲ. 40-50 ವರ್ಷಗಳ ಹಿಂದೆ ತೋಟಗಳಿಗೆ ಬಂದ ಕಾಡಾನೆಗಳ ಮರಿಗಳಾದ ಇವು ಇಂದು ದೊಡ್ಡಾನೆಗಳಿವೆ. ಇಂತಹ ಆನೆಗಳನ್ನು ಸೆರೆ ಹಿಡಿದು ಶಿಬಿರದಲ್ಲಿ ಬಿಟ್ಟರೆ ತೋಟದೊಳಗೆ ವಾಸಿಸುವಂತಹ ತೋಟದಾನೆಗಳ ಸಮಸ್ಯೆ ನೀಗುತ್ತದೆ ಎಂಬುದು ಅರಣ್ಯ ಇಲಾಖೆ ಅಧಿಕಾರಿಗಳ ವಾದ.

---

# ಜೆಡಿಎಸ್ ರಾಜ್ಯಾಧ್ಯಕ್ಷನಾಗಬೇಕೆನ್ನುವ ಬಯಕೆ ನನಗಿಲ್ಲ

• **ಉದಯವಾಹಿನಿ ಚನ್ನಪಟ್ಟಣ**

ಪಕ್ಷದ ರಾಜ್ಯಾಧ್ಯಕ್ಷನಾಗಬೇಕೆನ್ನುವ ಬಯಕೆ ನನಗಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನ ಸೇರಿದಂತೆ ಇತರ ಯಾವುದೇ ಹುದ್ದೆಗಾಗಿ ಹಪಾಹಪಿಸುತ್ತಿಲ್ಲ ಎಂದರು.

ಜೆಡಿಎಸ್ ರಾಜ್ಯಾಧ್ಯಕ್ಷ ಬದಲಾವಣೆ ಕುರಿತು ಪಕ್ಷದ ವೇದಿಕೆಯಲ್ಲಿ ಯಾವುದೇ ಚರ್ಚೆಯಾಗಿಲ್ಲ. ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದು, ಪಕ್ಷದ ರಾಜ್ಯಾಧ್ಯಕ್ಷರಾಗಿದ್ದಾರೆ. ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಮಾಡುವಂತಿದ್ದರೆ ಪಕ್ಷದಲ್ಲಿ ಹಿರಿಯರು, ಅನುಭವಿಗಳು ಇದ್ದಾರೆ. ಅವರಿಗೆ ಆದ್ಯತೆ ನೀಡಲಾಗುತ್ತದೆ ಎಂದು ಹೇಳಿದರು.

**ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲೂ ಮೈತ್ರಿ :** ಜೆಡಿಎಸ್ ಪಕ್ಷ ಎನ್‌ಡಿಎ ಮೈತ್ರಿಕೂಟದ ಅಂಗವಾಗಿರುವುದರಿಂದ ಮುಂಬರುವ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳಲ್ಲೂ ಹೊಂದಾಣಿಕೆಯೊಂದಿಗೆ ಸ್ಪರ್ಧಿಸಲಾಗುವುದು. ವಿವಿಧ ಕ್ಷೇತ್ರಗಳಲ್ಲಿರುವ ಗೊಂದಲಗಳನ್ನು ರಾಜ್ಯ ನಾಯಕರು ಚರ್ಚೆ ಮಾಡಿ ಪರಿಹಾರ ಕಂಡುಕೊಳ್ಳಲಿದ್ದಾರೆ. ರಾಜ್ಯದ ಜನತೆ ಕಾಂಗ್ರೆಸ್ ತಿರಸ್ಕಾರ ಮಾಡುವ ಕಾಲ ದೂರವಿಲ್ಲ ಎಂದರು ತಿಳಿಸಿದರು.

**ಕಾಂಗ್ರೆಸ್ ತಿರಸ್ಕಾರ ಮಾಡುವ ಕಾಲ ದೂರವಿಲ್ಲ**



ರಾಜ್ಯದಲ್ಲಿ ಕಾಂಗ್ರೆಸ್ ಭ್ರಷ್ಟ ಆಡಳಿತ ನಡೆಸುತ್ತಿದ್ದು, ಮುಡಾ ಹಗರಣ, ಭೋವಿ ನಿಗಮ, ವಾಲೀಕಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ, ಹಾಲಿನ ದರ, ಬಸ್ ದರ ಏರಿಕೆ ಖಂಡಿಸಿ ಬಿಜೆಪಿಯೊಂದಿಗೆ ಜೊತೆಗೂಡಿ ರಾಜ್ಯದ ಜನತೆಯ ಪರ ಧ್ವನಿ ಎತ್ತುವ ಕೆಲಸ ಜೆಡಿಎಸ್ ಮಾಡುತ್ತಿದೆ. ಕಾಂಗ್ರೆಸನ್ನು ಆಡಳಿತದ ವಿರುದ್ಧ ಜನತೆ ಬೇಸತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಯುವ ಘಟಕದ ರಾಜ್ಯಾಧ್ಯಕ್ಷನಾಗಿ ರಾಜ್ಯಾದಾದ್ಯಂತ ಪಕ್ಷ ಸಂಘಟನೆಗೆ ಶ್ರಮಿಸುತ್ತಿದ್ದೇನೆ. ಈಗಾಗಲೇ ಏಳು ಜಿಲ್ಲೆಗಳಲ್ಲಿ ಪ್ರವಾಸ ಮಾಡಿದ್ದೇನೆ.

ಮೈಸೂರು ಪ್ರಾಂತ್ಯದಲ್ಲಿ ಜೆಡಿಎಸ್‌ಗೆ ರಾಜಕೀಯ ಶಕ್ತಿ ತುಂಬಿದೆ. ಈ ಭಾಗದಲ್ಲಿ ಜೆಡಿಎಸ್ ಪಕ್ಷಕ್ಕೆ ಉತ್ತಮ ಒಲವಿದೆ.

ಮುಂದಿನ ದಿನಗಳಲ್ಲಿ ಹಿರಿಯರ ಅನುಭವನಗಳನ್ನು ಪಡೆದು ಪಕ್ಷ ಸಂಘಟನೆಗೆ ದುಡಿಯುವೆ ಎಂದರು.

ಜೆಡಿಎಸ್ ಬಲಿಷ್ಠವಾಗಿದ್ದಾಗ ಮನೆಯವರು ನಿಂತುಕೊಂಡು ಚುನಾವಣೆ ಎದುರಿಸುತ್ತಾರೆ. ಸೋಲಿನ ಭೀತಿಯಿದ್ದರೆ ಕಾರ್ಯಕರ್ತರನ್ನು ಬಲಿ ಕೊಡುತ್ತಾರೆ ಎನ್ನುವ ವಿರೋಧಿಗಳ ಆರೋಪ ಸುಳ್ಳಾಗಿಸಲು ನಾನು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಸ್ಪರ್ಧೆ ಮಾಡಬೇಕಾಯಿತು ಎಂದು ಹೇಳಿದರು.

---

# ಗೌರಿಬಿದನೂರಿನಲ್ಲಿ ಮತ್ತೆ 'ಆಪರೇಷನ್' ಸದ್ದು

• **ಉದಯವಾಹಿನಿ ಗೌರಿಬಿದನೂರು**

ಇನ್ನೂ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆ ಘೋಷಣೆಯಾಗಿಲ್ಲ. ಆದರೆ ಗೌರಿಬಿದನೂರು ವಿಧಾನಸಭಾ ಕ್ಷೇತ್ರದಲ್ಲಿ ಮಾತ್ರ ಜಿ.ಪಂ, ತಾ.ಪಂ ಚುನಾವಣೆಗೆ ಪೂರ್ವಸಿದ್ಧತೆ ಎನ್ನುವಂತೆ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಮುಖಂಡರಿಗೆ ಆಪರೇಷನ್, ಸಭೆಗಳು, ವಾಕ್ಸಮರ ಸಹ ಹೆಚ್ಚಿದೆ.



ಶಾಸಕ ಕೆ.ಎಚ್.ಪುಟ್ಟಸ್ವಾಮಿ ಗೌಡ ಅವರು ಕಾಂಗ್ರೆಸ್ ಬೆಂಬಲಿಸಿದ್ದಾರೆ. ಮುಂಬರುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಅವರು ತಮ್ಮ 'ಕೆಎಚ್ ಪಿ ಬಣದಿಂದಲೇ ಎಲ್ಲಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸುತ್ತಾರೆಯೇ, ಕಾಂಗ್ರೆಸ್‌ನಿಂದ ತಮ್ಮ ಬೆಂಬಲಿಗರನ್ನು ಅಭ್ಯರ್ಥಿಗಳನ್ನಾಗಿ ಮಾಡುವರೊ ಅಥವಾ ಕಾಂಗ್ರೆಸ್ ಜೊತೆಗೆ ಸ್ಥಾನ ಹೊಂದಾಣಿಕೆ ಮಾಡಿಕೊಳ್ಳುವರೊ ಎನ್ನುವ ಚರ್ಚೆ ಗೌರಿಬಿದನೂರು ರಾಜಕೀಯದಲ್ಲಿ ಚರ್ಚೆಗೆ ಎಡೆ ಮಾಡಿಕೊಟ್ಟಿದೆ. ಈ ನಡುವೆ ಮತ್ತೆ ಕ್ಷೇತ್ರದಲ್ಲಿ ಶಾಸಕ ಪುಟ್ಟಸ್ವಾಮಿ ಗೌಡರು ಮುಖಂಡರನ್ನು ತಮ್ಮತ್ತ ಸೆಳೆಯುವ 'ಆಪರೇಷನ್ ಕೆಎಚ್‌ಪಿ' ಕಾರ್ಯಾಚರಣೆ ಆರಂಭಿಸಿದ್ದಾರೆ.

ಇದು ಕ್ಷೇತ್ರದ ರಾಜಕಾರಣವನ್ನು ರಂಗಾಗಿಸಿದೆ. ಈ ಹಿಂದೆ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿದ್ದ ವೇಳೆ ಹಳ್ಳಿಗಳಯೂ ಮುಖಂಡರನ್ನು ಸೆಳೆದಿದ್ದರು.

ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಮುಖಂಡರು ಅವರ ತೆಕ್ಕೆಗೆ ಸೇರಿದ್ದರು. ಆ ಕಾರಣದಿಂದ ದೊಡ್ಡ ಅಂತರದಿಂದ ಗೆಲುವು ಸಹ ಸಾಧಿಸಿದರು. ಈಗ ಮತ್ತೆ ಇಂತಹದ್ದೇ ಕಾರ್ಯಾಚರಣೆಗೆ ಶಾಸಕರು ಇಳಿದಂತೆ ಕಾಣುತ್ತಿದೆ. ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡ ಹಳ್ಳಿಗಳಲ್ಲಿನ ಮುಖಂಡರನ್ನು ಮತ್ತೆ ತಮ್ಮತ್ತ ಸೆಳೆಯುತ್ತಿದ್ದಾರೆ. ಬಲ ಹೆಚ್ಚಳಕ್ಕೆ ಮುಂದಾಗಿದ್ದಾರೆ.

---

# ಬ್ಯಾರಿಕೇಡ್, ಸೌರಬೇಲಿ ಲೆಕ್ಕಿಸದ ಕಾಡಾನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ರಾಮನಗರ**

ಕಾಡಾನೆಗಳು ತಮ್ಮ ಆವಾಸಸ್ಥಾನ ಬಿಟ್ಟು ನಾಡಿನತ್ತ ಬಾರದಂತೆ ತಡೆಯಲು ಅರಣ್ಯ ಇಲಾಖೆ ರೈಲು ಕಂಬಿಗಳಿಂದ ರೈಲ್ವೆ ಬ್ಯಾರಿಕೇಡ್, ಸೌರಶಕ್ತಿ ವಿದ್ಯುತ್ ಬೇಲಿ (ಟೆಂಟಿಕಲ್ ಸೋಲಾರ್ ಫೆನ್ಸಿಂಗ್) ಹಾಗೂ ಆನೆ ನಿರೋಧಕ ಕಂದಕವನ್ನು ಕೆಲವೆಡೆ ನಿರ್ಮಾಣ ಮಾಡಿದೆ. ಆದರೆ, ನಾಡಿನಲ್ಲಿ ಸಿಗುವ ತರಹೇವಾರಿ ಬೆಳೆಗಳ ರುಚಿ ಕಂಡಿರುವ ಕಾಡಾನೆಗಳಿಗೆ ಮಾನವ ನಿರ್ಮಿತ ಕೃತಕ ತಡೆಗಳು ಲೆಕ್ಕವಿಲ್ಲದಂತಾಗಿದೆ.

ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ ವ್ಯಾಪ್ತಿಯಲ್ಲಿರುವ ಕಾವೇರಿ ವನ್ಯಜೀವಿಧಾಮ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ, ಅರಣ್ಯ ಪ್ರದೇಶದಲ್ಲಿ ರೈಲ್ವೆ ಬ್ಯಾರಿಕೇಡ್, ಚನ್ನಪಟ್ಟಣ ಭಾಗದಲ್ಲಿರುವ ಸೌರ ವಿದ್ಯುತ್ ಶಕ್ತಿಯ ಬೇಲಿ ಇದ್ದರೂ, ಅವುಗಳನ್ನು ಲೆಕ್ಕಿಸದೆ ಕಾಡಾನೆಗಳು ನಾಡಿಗೆ ಬರುತ್ತಿವೆ. ರೈತರ ಜಮೀನಿಗಳಲ್ಲಿ ಓಡಾಡಿ ಜೀವಹಾನಿ ಜೊತೆಗೆ ಪ್ರಾಣಹಾನಿ ಸಹ ಮಾಡುತ್ತಿವೆ.

**28.25 ಕಿ.ಮೀ. ಬ್ಯಾರಿಕೇಡ್:** ಆನೆಗಳ ನಿಯಂತ್ರಣಕ್ಕಾಗಿ ಜಿಲ್ಲೆಯ ನಿರ್ಮಾಣಕ್ಕೆ ಇಲಾಖೆ ಅಸ್ತು ಎಂದಿದೆ. ಈ ಪೈಕಿ, ಕಾವೇರಿ ವನ್ಯಜೀವಿಧಾಮದಲ್ಲಿ 20 ಕಿ.ಮೀ. ಹಾಗೂ ಅರಣ್ಯ ಉಪ ವಿಭಾಗ ವ್ಯಾಪ್ತಿಯಲ್ಲಿ 8.25 ಕಿ.ಮೀ. ಉದ್ದದ ಬ್ಯಾರಿಕೇಡ್ ಇದೆ.'ವನ್ಯಜೀವಿಧಾಮಕ್ಕೆ ಮಂಜೂರಾಗಿರುವ 20ಕಿ.ಮೀ. ಬ್ಯಾರಿಕೇಡ್ ಪೈಕಿ, ಹನೂರು ಭಾಗದಲ್ಲಿ 3 ಕಿ.ಮೀ. ಇದೆ. ಕನಕಪುರ ವ್ಯಾಪ್ತಿಯಲ್ಲಿ 2023–24ರಲ್ಲಿ 17 ಕಿ.ಮೀ. ಮಂಜೂರಾಗಿದೆ. ಇದರಲ್ಲಿ 12 ಕಿ.ಮೀ. ಪೂರ್ಣಗೊಂಡಿದ್ದು, ಉಳಿದ 5 ಕಿ.ಮೀ. ಪ್ರಗತಿಯಲ್ಲಿದೆ.

### ಮಾನವ ನಿರ್ಮಿತ ಕೃತಕ ತಡೆಗಳು ಲೆಕ್ಕವಿಲ್ಲ

ಶಿಂಷಾ, ಹಲಗೂರು, ಸಂಗಮ ಹಾಗೂ ಮುನ್ನೂರು ಭಾಗದಲ್ಲಿ ಬ್ಯಾರಿಕೇಡ್ ಅಳವಡಿಕೆ ನಡೆಯುತ್ತಿದೆ' ಎಂದು ಕಾವೇರಿ ವನ್ಯಜೀವಿಧಾಮದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನಾಗೇಂದ್ರ ಪ್ರಸಾದ್ ತಿಳಿಸಿದರು.ಕಂದಕ, ತಡೆಗೋಡೆ: ಕಾಡಾನೆಗಳ ತಡೆಗೆ ಹಿಂದೆ ಆನೆ ನಿರೋಧಕ ಕಂದಕ ಮತ್ತು ತಡೆಗೋಡೆಗಳನ್ನು ನಿರ್ಮಿಸಲಾಗಿತ್ತು. ಇದರಿಂದ ಆನೆಗಳು ಹೊರಬರುವುದು ತಗ್ಗಿತು. ಸಮಸ್ಯೆಗೆ ಪರಿಹಾರ ಸಿಕ್ಕಿತು ಎಂದು ಇಲಾಖೆ ನಂತರ ಕಂದಕಗಳನ್ನು ಸರಿಯಾಗಿ ನಿರ್ವಹಣೆ ಮಾಡಲಿಲ್ಲ. ಇದರಿಂದಾಗಿ ಬಹುತೇಕ ಕಂದಕಗಳು ಮುಚ್ಚಿ ಹೋಗಿ ನಾಮಾವಶೇಷಗೊಂಡವು. ಇನ್ನು ಅರಣ್ಯದಂಚಿನಲ್ಲಿ ನರೇಗಾದಡಿ ಬೃಹತ್ ತಡೆಗೋಡೆಗಳನ್ನು ನಿರ್ಮಿಸುವ ಪ್ರಯತ್ನಕ್ಕೆ ಹಿಂದಿನ ಸಂಸದ ಡಿ.ಕೆ. ಸುರೇಶ್ ಅವರು ಮುಂದಾಗಿದ್ದರು.

---

# ಮೈಸೂರಲ್ಲಿ ಈ ವರ್ಷ 237 ಪ್ರಕರಣ: 42 ಕೋಟಿ ವಂಚಕರ ಪಾಲು

• **ಉದಯವಾಹಿನಿ ಮೈಸೂರು**

ಆನ್‌ಲೈನ್ ವಂಚನೆ ಪ್ರಕರಣಗಳು ಜಿಲ್ಲೆಯಲ್ಲಿ ಏರುಮುಖವಾಗಿದ್ದು, ಕಳೆದೊಂದು ವರ್ಷದಲ್ಲಿಯೇ 60 ಕೋಟಿಗೂ ಅಧಿಕ ಹಣ ಸೈಬರ್ ಕಳ್ಳರ ಪಾಲಾಗಿದೆ. ಆನ್‌ಲೈನ್ ವಂಚಕರ ಬಲೆಗೆ ಬೀಳುತ್ತಿರುವ ಜನಸಾಮಾನ್ಯರು ತಮ್ಮ ವೇತನ–ಪಿಂಚಣಿಯ ಉಳಿತಾಯದ ಪಾಲು, ಮಕ್ಕಳ ವಿದ್ಯಾಭ್ಯಾಸ ಹಾಗೂ ಮದುವೆಗೆ ಕೂಡಿಟ್ಟ ಹಣವನ್ನೂ ಕಳೆದುಕೊಳ್ಳುತ್ತಿದ್ದಾರೆ. ವಂಚಕರ ಜಾಲಕ್ಕೆ ಸಿಲುಕಿ, ಹಂತಹಂತವಾಗಿ ಹಣ ಕಳೆದುಕೊಂಡು, ಅದಕ್ಕೆ ಮತ್ತಿಷ್ಟು ಸಾಲ ಮಾಡಿ, ಬಡ್ಡಿಯ ಸುಳಿಗೆ ಸಿಲುಕಿ ಒದ್ದಾಡುತ್ತಿರುವ ನಿದರ್ಶನಗಳೂ ಸಾಕಷ್ಟಿವೆ.

**ಎಷ್ಟು ಪ್ರಕರಣ:** ಮೈಸೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿ ಒಂದರಲ್ಲಿಯೇ 2024ರಲ್ಲಿ 237 ಸೈಬರ್ ವಂಚನೆ ಪ್ರಕರಣ ದಾಖಲಾಗಿದ್ದು, ಸಂತ್ರಸ್ತರು 42 ಕೋಟಿ ಕಳೆದುಕೊಂಡಿದ್ದಾರೆ. ಇದರಲ್ಲಿ 5 ಕೋಟಿಯನ್ನು ಹಣವನ್ನು ವಾರಸುದಾರರಿಗೆ ಹಿಂದಿರುಗಿಸಲಾಗಿದೆ. 'ಹಣ ಕಳೆದುಕೊಂಡವರು ಪ್ರಕರಣ ದಾಖಲಿಸಲು ತಡ ಮಾಡುತ್ತಿರುವುದರಿಂದ ಅದನ್ನು ಮರಳಿ ಪಡೆಯಲು ಸಾಧ್ಯವಾಗುತ್ತಿಲ್ಲ' ಎನ್ನುತ್ತಾರೆ ಪೊಲೀಸರು.

**ವಿದ್ಯಾವಂತರೇ ಹೆಚ್ಚು:** ವಂಚಕರು ಅನೇಕ ರೀತಿಯಲ್ಲಿ ಜನರನ್ನು ಆಕರ್ಷಿಸಿ ಹಣ ವಸೂಲಿ ಮಾಡುತ್ತಿದ್ದು, ಬುದ್ಧಿವಂತರೆಂಬ ಭ್ರಮೆಯಲ್ಲಿರುವ ವಿದ್ಯಾವಂತರೇ ಈ ಜಾಲಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಿಲುಕುತ್ತಿದ್ದಾರೆ. ಎಲ್ಲಾ ವಯಸ್ಸಿನವರ್ಗದ ಜನರಿಗೂ ವಿವಿಧ ರೀತಿಯಲ್ಲಿ ವಂಚಕರು ಬಲೆ ಬೀಸುತ್ತಿರುತ್ತಾರೆ.



ಉದಯವಾಹಿನಿ ಚಿತ್ರ

ಪೊಲೀಸರು ಅನೇಕ ಕಡೆ ನೀಡುತ್ತಿರುವ ಎಚ್ಚರಿಕೆಯನ್ನೂ ನಿರ್ಲಕ್ಷಿಸಿ, ಕಡಿಮೆ ಸಮಯದಲ್ಲಿ ಹೆಚ್ಚು ಹಣ ಮಾಡುವ ಉದ್ದೇಶದಿಂದ ಹಲವರು ಮೋಸದ ಜಾಲಕ್ಕೆ ಬಲಿಯಾಗುತ್ತಲೇ ಇದ್ದಾರೆ.

**ಹೂಡಿಕೆಯ ನೆಪ:** ಕೈಯಲ್ಲಿರುವ ಸಣ್ಣ ಉಳಿತಾಯವನ್ನು ಹೂಡಿಕೆ ಮಾಡಿ ಹೆಚ್ಚು ಆದಾಯಗಳಿಸಬೇಕು ಎಂಬ ಆಸೆ ಎಲ್ಲರಲ್ಲೂ ಇರುತ್ತದೆ. ಅದೇ ವಿಷಯದ ಪರಿಣತರೂ ಇರುತ್ತಾರೆ. ಇದನ್ನು ಉಪಯೋಗಿಸಿಕೊಳ್ಳುವ ವಂಚಕರು, ನಕಲಿ ಆಯಪ್‌ಗಳನ್ನು ಸೃಷ್ಟಿಸುತ್ತಿದ್ದಾರೆ. ಇಲ್ಲಿ ಸಾಮಾಜಿಕ ಜಾಲತಾಣದಲ್ಲಿ ಜಾಹೀರಾತಿನ ಮೂಲಕ ಜನರನ್ನು ಸೆಳೆದು ನಂತರ ವಾಟ್ಸ್ ಆಯಪ್ ಅಥವಾ ಟೆಲಿಗ್ರಾಂನಲ್ಲಿ ಗುಂಪುಗಳನ್ನು ರಚಿಸಿ ಅಲ್ಲಿಗೆ ಸದಸ್ಯರನ್ನು ಸೇರಿಸಿಕೊಳ್ಳುತ್ತಾರೆ. ಅಲ್ಲಿರುವವರು ತಮಗೆ ಹೂಡಿಕೆ ಮಾಡಿದ ಹಣ ದಪ್ಪಟ್ಟಾಗಿ ದೊರಕಿರುವ ಬಗ್ಗೆ ನಕಲಿ ಸ್ಕ್ರೀನ್ ಶಾಟ್ ಹಾಕುತ್ತಾರೆ.

ಅದನ್ನು ನಂಬಿದ ಆಸಕ್ತ ಸದಸ್ಯ ತಾನೂ ಹೂಡಿಕೆ ಮಾಡುವುದಾಗಿ ತಿಳಿಸಿದರೆ ಆತನನ್ನು ವೈಯಕ್ತಿಕವಾಗಿ ಸಂಪರ್ಕಿಸಿ ಹಣ ಹೂಡಿಕೆ ಮಾಡಿಸುತ್ತಾರೆ.

ಅವರ ಆ್ಯಪ್‌ನಲ್ಲಿ ಹಣ ದುಪ್ಪಟ್ಟಾಗುತ್ತಿರುವುದು ಕಾಣಿಸುತ್ತಿರುತ್ತದೆ. ಆದರೆ ಅದನ್ನು ನಮ್ಮ ಖಾತೆಗೆ ಪರಿವರ್ತಿಸುವಂತೆ ಕೇಳಿಕೊಂಡಾಗ ಖಾತೆ ನಿಷ್ಕ್ರಿಯವಾಗಿದೆ ಎಂದು ತೋರಿಸುತ್ತದೆ. ಇಲ್ಲಿ ಹೂಡಿಕೆಯ ಬಗ್ಗೆ ಆಸಕ್ತಿ ಇರುವ ಯುವ ಸಮೂಹವನ್ನು ಗುರಿಯಾಗಿಸಿ ವಂಚಿಸುತ್ತಾರೆ.

### ಡಿಜಿಟಲ್ ಬಂಧನ

**ಕಳೆದ ಆರು ತಿಂಗಳಿನಿಂದ ಹೆಚ್ಚಾಗಿ ಕೇಳಿಬರುತ್ತಿರುವ ಆನ್‌ಲೈನ್ ವಂಚನೆಯ ಪ್ರಕಾರವೇ ಡಿಜಿಟಲ್ ಬಂಧನ ಇಲ್ಲಿ ವಂಚಕರು ನಿವೃತ್ತಿಗೊಂಡ ಹಾಗೂ ಮನೆಯಲ್ಲೇ ಕಾಲ ಕಳೆಯುತ್ತಿರುವ ಹಿರಿಯ ನಾಗರಿಕರನ್ನೇ ಗುರಿಯಾಗಿಸಿ ಲಕ್ಷಾಂತರ ರೂಪಾಯಿ ದೋಚುತ್ತಿದ್ದಾರೆ. ವಂಚಕರು ಕರೆ ಮಾಡಿ ನಾವು ಸಿಬಿಐ, ಐಟಿ ಅಥವಾ ಮುಂಬೈ ಪೊಲೀಸರು ಎಂದು ಪರಿಚಯಿಸಿಕೊಳ್ಳುತ್ತಾರೆ. ನಿಮ್ಮ ಆಧಾರ್ ಸಂಖ್ಯೆ ಬಳಸಿ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ಬಗ್ಗೆ ಪ್ರಕರಣ ದಾಖಲಾಗಿದೆ. ನೀವು ತಕ್ಷಣ ವಿಚಾರಣೆಗೆ ದಾಖಲಾಗಬೇಕು. ಇಲ್ಲದಿದ್ದರೆ ಪ್ರಕರಣದ ಸಲುವಾಗಿ ಭದ್ರತಾ ಠೇವಣಿ ಇಡಬೇಕು ಎನ್ನುತ್ತಾರೆ. ಅವರ ಬಗ್ಗೆ ನಂಬಿಕೆ ಬರಲು ನಕಲಿ ಎಫ್‌ಐಆರ್‌ಗಳನ್ನೂ ಕಳಿಸುತ್ತಾರೆ. ಹಣ ಪಡೆದ ಬಳಿಕ ಸಂಪರ್ಕಕ್ಕೆ ಸಿಗುವುದಿಲ್ಲ.**

---

# ಎಂಜಿನಿಯರಿಂಗ್ ಕಾಲೇಜು ಕಟ್ಟಡಕ್ಕೆ ಆಡಳಿತಾತ್ಮಕ ಅನುಮೋದನೆ

• **ಉದಯವಾಹಿನಿ ಚಿಂತಾಮಣಿ**

ಚಿಂತಾಮಣಿಯಲ್ಲಿ ಪ್ರಸಕ್ತ ಸಾಲಿನಿಂದ ಆರಂಭವಾಗಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸಂಯೋಜಿತ ಎಂಜಿನಿಯರಿಂಗ್ ಕಾಲೇಜಿನ ನೂತನ ಕಟ್ಟಡ ನಿರ್ಮಾಣಕ್ಕಾಗಿ 149.75 ಕೋಟಿ ಯೋಜನೆಗೆ ರಾಜ್ಯ ಸಚಿವ ಸಂಪುಟ ಗುರುವಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸಂಯೋಜಿತ ಎಂಜಿನಿಯರಿಂಗ್ ಕಾಲೇಜು ಅವಿಭಜಿತ ಕೋಲಾರ ಜಿಲ್ಲೆಯ ಪ್ರಥಮ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು. ಚಿಂತಾಮಣಿಯ ಪ್ರಥಮಗಳ ಸಾಲಿಗೆ ಮತ್ತೊಂದು ಗರಿ ಮೂಡಿದೆ. ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಬೇಕು ಎಂಬ ದಶಕಗಳ ಕನಸು ನನಸಾಗಿದ್ದು, ನಗರದ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪ್ರಸಕ್ತ ಸಾಲಿನಿಂದಲೇ ಕಾಲೇಜು ಕಾರ್ಯಾರಂಭ ಮಾಡಿದೆ. ನಗರದ ಬೆಂಗಳೂರು ರಸ್ತೆಯಲ್ಲಿರುವ ಕನಂಪಲ್ಲಿ ಕೆರೆಯ ಪಕ್ಕದಲ್ಲಿ ಕೈಲಾಸಗಿರಿಗೆ ಹೋಗುವ ರಸ್ತೆಯಲ್ಲಿರುವ ಗುಡ್ಡದ ಮೇಲೆ 12.5 ಎಕರೆ ಜಮೀನು ಮಂಜೂರಾಗಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸ್ವಂತ ಸಂಪನ್ಮೂಲದಲ್ಲಿ ಕಟ್ಟಡ ನಿರ್ಮಾಣಕ್ಕಾಗಿ 149.75 ಕೋಟಿ ವೆಚ್ಚದ ಯೋಜನೆಯನ್ನು ಕಾರ್ಯಕಾರಿ ಮಂಡಳಿಯಲ್ಲಿ ಒಪ್ಪಿಗೆ ನೀಡಿ ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿತ್ತು. ಟೆಂಡರ್ ಪ್ರಕ್ರಿಯೆ ಮುಗಿದ ಕೂಡಲೇ ಕಟ್ಟಡ ಕಾಮಗಾರಿ ಆರಂಭವಾಗಲಿದೆ. ಕಟ್ಟಡ ಕಾಮಗಾರಿಗೆ ಪೂರಕವಾಗಿ ಈಗಾಗಲೇ 12 ಕೋಟಿ ವೆಚ್ಚದಲ್ಲಿ ರಸ್ತೆಗಳ ಕಾಮಗಾರಿ ಪ್ರಗತಿಯಲ್ಲಿದೆ. ಕಟ್ಟಡ ಎತ್ತರದ ಪ್ರದೇಶದಲ್ಲಿ ನಿರ್ಮಾಣವಾಗುತ್ತಿರುವುದರಿಂದ ಉತ್ತಮ ರಸ್ತೆಯ ಅಗತ್ಯವಿತ್ತು. ನೂತನ ಕಾಲೇಜಿನ ಸುಸಜ್ಜಿತ ಕ್ಯಾಂಪಸ್ ನಿರ್ಮಿಸಲಾಗುವುದು. ವಿವಿಧ ವಿಭಾಗ, ಆಡಳಿತ ಕಚೇರಿ, ಸ್ಮಾರ್ಟ್ ತರಗತಿ ಕೊಠಡಿ, ಆಡಿಟೋರಿಯಂ, ವಿದ್ಯಾರ್ಥಿನಿಯರ ಮತ್ತು ವಿದ್ಯಾರ್ಥಿಗಳ ಪ್ರತ್ಯೇಕ ವಿದ್ಯಾರ್ಥಿನಿಲಯ, ಸಿಬ್ಬಂದಿಯ ವಸತಿಗೃಹಗಳುಳ್ಳ ಕಟ್ಟಡಗಳನ್ನು ಆಧುನಿಕ ಶೈಲಿಯಲ್ಲಿ ನಿರ್ಮಿಸಲು ನೀಲನಕ್ಷೆ ತಯಾರಿಸಲಾಗಿದೆ. ಸಾಮಾನ್ಯವಾಗಿ ಶಾಲಾ ಕಾಲೇಜು ಆರಂಭವಾಗಿ ಎಷ್ಟೋ ವರ್ಷಗಳಾದರೂ ಸ್ವಂತ ಕಟ್ಟಡ ಇರುವುದಿಲ್ಲ ಎರಡು ವರ್ಷದಲ್ಲಿ ಕಟ್ಟಡ ಕಾಮಗಾರಿ ಮುಕ್ತಾಯಗೊಳಿಸುವ ಗುರಿ ಇದೆ. ಕಾಲೇಜು ಕ್ಯಾಂಪಸ್ ಅಕ್ಕಪಕ್ಕದಲ್ಲಿ ಇತರೆ ಸರ್ಕಾರಿ ಕಚೇರಿಗಳಿಗೂ ಸ್ಥಳಾವಕಾಶ ಒದಗಿಸಲಾಗುವುದು. ಈಗಾಗಲೇ ಪ್ರವಾಸಿ ಮಂದಿರಕ್ಕೆ ಎರಡು ಎಕರೆ ಜಾಗ ಮಂಜೂರು ಮಾಡಿಸಿದ್ದು, ನಗರದಲ್ಲಿರುವ ಪ್ರವಾಸಿ ಮಂದಿರ ಇಲ್ಲಿಗೆ ಸ್ಥಳಾಂತರವಾಗುತ್ತದೆ ಎನ್ನುತ್ತಾರೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್.


ಉದಯವಾಹಿನಿ ಚಿತ್ರ

---

# ಬೇಸಿಗೆ ಬಂದರೆ ಬೆಟ್ಟಕ್ಕೆ ಬೆಂಕಿ: ಹೊತ್ತಿ ಉರಿಯುವ ಗುಡ್ಡಗಳು

## ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆಲ ಪ್ರದೇಶ ಗುಡ್ಡಗಳಿಂದ ಕೂಡಿದೆ, ಜನವರಿ ಬಂದರೆ ಸಾಕು ಬಹುತೇಕ ಗುಡ್ಡಗಳು ಹೊತ್ತಿ ಉರಿಯುತ್ತವೆ

• **ಉದಯವಾಹಿನಿ ಹುಳಿಯಾರು**

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆಲ ಪ್ರದೇಶ ಗುಡ್ಡಗಳಿಂದ ಕೂಡಿದೆ. ಜನವರಿ ಬಂದರೆ ಸಾಕು ಬಹುತೇಕ ಗುಡ್ಡಗಳು ಹೊತ್ತಿ ಉರಿಯುತ್ತವೆ. ತಾಲ್ಲೂಕಿನ ಮದಲಿಂಗನ ಕಣಿವೆಯ ಗುಡ್ಡಗಳಿಂದ ಹಿಡಿದು ಬೋರನಕಣಿವೆ ಜಲಾಶಯ ಮಾರ್ಗವಾಗಿ ಹಿರಿಯೂರು ಹಾಗೂ ಹೊಸದುರ್ಗ ತಾಲ್ಲೂಕುಗಳ ಗಡಿ ಭಾಗದವರೆಗೆ ಗುಡ್ಡಗಳ ಸಾಲು ಇದೆ. ಈ ಮಾರ್ಗದಲ್ಲಿ ನೂರಾರು ಗುಡ್ಡಗಳಿದ್ದು ಪ್ರತಿ ವರ್ಷ ಬೇಸಿಗೆ ಬಂತೆಂದರೆ ಸಾಕು ಬೆಂಕಿಗೆ ಆಹುತಿಯಾಗುತ್ತಿವೆ. ಬೆಂಕಿಯಿಂದ ಸಾವಿರಾರು ಸಸ್ಯ, ಪ್ರಬೇಧಗಳು, ನೂರಾರು ಸಣ್ಣ ಪುಟ್ಟ ಜಾತಿಯ ಕಾಡುಪ್ರಾಣಿಗಳು, ಸರಿಸೃಪಗಳು ಬೆಂಕಿಯಲ್ಲಿ ಬೆಂದು ಹೋಗುತ್ತಿವೆ.

**ಸಸಿಗಳು ಬೆಂಕಿಯಲ್ಲಿ ನಲುಗಿ ಹೋಗುತ್ತಿವೆ**

ಇವುಗಳ ಜತೆ ಅರಣ್ಯ ಇಲಾಖೆಯ ಮರಗಳು, ಪ್ರತಿ ವರ್ಷ ನೆಡುತ್ತಿರುವ ಸಸಿಗಳು ಬೆಂಕಿಯಲ್ಲಿ ನಲುಗಿ ಹೋಗುತ್ತಿವೆ. ಇನ್ನೂ ಬಾದೆ ಹುಲ್ಲುಗಾವಲು ಸಂಪೂರ್ಣ ಸುಟ್ಟು ಕರಕಲಾಗುತ್ತಿದೆ. ಗುಡ್ಡಗಳಿಗೆ ಇಡುವ ಬೆಂಕಿಯಿಂದ ಕಾಡಂಚಿನ ಜಮೀನುಗಳಲ್ಲಿ ಮನೆ ಕಟ್ಟಿಕೊಂಡಿರುವ ರೈತರ ಮನೆಗಳು ಸಹ ಬೆಂಕಿಗೆ ನಾಶವಾಗುವ ಸಾಧ್ಯತೆ ದಟ್ಟವಾಗಿವೆ.

ಮಂಗಳೂರು– ವಿಶಾಖಪಟ್ಟಣ ರಾಷ್ಟ್ರೀಯ ಹೆದ್ದಾರಿಯ ಶಿರಾ– ಹುಳಿಯಾರು ರಸ್ತೆ ಇಕ್ಕೆಲಗಳಲ್ಲಿ ಅರಣ್ಯ ಇಲಾಖೆಯಿಂದ ನೆಟ್ಟಿರುವ ಮಹಾಘನಿ, ಆಲ, ಅರಳಿ ಸೇರಿದಂತೆ ವಿವಿಧ ಜಾತಿಯ ಗಿಡಗಳು ಕಳೆದ ವರ್ಷ ಸುಟ್ಟು ಹೋಗಿದ್ದವು.

**ಬೆಂಕಿಯಿಡುವ ಪರಿಪಾಠ:** ಗುಡ್ಡಗಳಿಗೆ ಬೆಂಕಿಯಿಡುವ ಪರಿಪಾಠ ಅನಾದಿ ಕಾಲದಿಂದಲೂ ನಡೆದು ಬಂದಿದೆ.

ಗುಡ್ಡಗಳಲ್ಲಿನ ಬಾದೆ ಹುಲ್ಲು ಮುಂಗಾರು ಮಳೆ ಬಿದ್ದ ತಕ್ಷಣ ಹುಲುಸಾಗಿ ಚಿಗುರುತ್ತದೆ ಎಂಬ ತಪ್ಪು ಕಲ್ಪನೆಯಿಂದ ಕುರಿಗಾಹಿಗಳು ಬೆಂಕಿಯಿಡುತ್ತಾರೆ. ಗುಡ್ಡಗಳಿಗೆ ಶಿಕಾರಿಗೆ ಹೋಗುವ ಬೇಟೆಗಾರರು, ಗುಡ್ಡಗಳ ಪಕ್ಕ ರಸ್ತೆಯಿದ್ದು ಜನರು ಸಂಚರಿಸುವ ವೇಳೆ ಬೀಡಿ ಅಥವಾ ಸಿಗರೇಟ್ ಸೇದಲು ಹಚ್ಚಿದ ಬೆಂಕಿಕಡ್ಡಿಯನ್ನು ಹಾಗೆಯೇ ಎಸೆಯುವುದರಿಂದಲೂ ಅವಘಡಗಳು ಸಂಭವಿಸುತ್ತಿವೆ. ಮಹಮದ್ ಹುಸೇನ್ ಚಿಕ್ಕನಾಯಕನಹಳ್ಳಿ ಬೆಂಕಿ ಇಡುವವರು ಒಮ್ಮೊಮ್ಮೆ ಸಾರ್ವಜನಿಕರ ಕೈಗೆ ಸಿಕ್ಕಿ ಬಿದ್ದರೂ ಅವರ ವಿರುದ್ಧ ಕಾನೂನಿನ ಕ್ರಮ ಜರುಗಿಸದಿರುವುದು ಗುಡ್ಡಗಳಿಗೆ ಬೆಂಕಿ ಹಚ್ಚುವವರಿಗೆ ಇಂಬು ನೀಡಿದಂತಾಗಿದೆಡಿ. ಯೋಗೀಶ್ ಕಂಪನಹಳ್ಳಿ ತೋಟದಮನೆಪಟ್ಟಣದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ಬದಿ ನೆಟ್ಟಿದ್ದ ಸಾಲು ಗಿಡಗಳು ಕಳೆದ ವರ್ಷ ಬೆಂಕಿಗೆ ಆಹುತಿಯಾಗಿದ್ದವು. ಅರಣ್ಯ ಇಲಾಖೆ ಗಿಡಗಳ ಸುತ್ತ ಬೆಳೆದಿರುವ ಹುಲ್ಲು ತೆರವುಗೊಳಿಸಿ ಮುಂದೆ ಸಂಭವಿಸುವ ಬೆಂಕಿ ಅನಾಹುತ ತಪ್ಪಿಸಬೇಕುಬಿ. ಎನ್.ಲೋಕೇಶ್ ಬಡ ಕೇಗುಡ್ಡು ಗುಡ್ಡಗಳಿಗೆ ಬೆಂಕಿಯಿಡುವ ಸಂಸ್ಕೃತಿಯಿಂದ ತೊಂದರೆಯಾಗುತ್ತಿದೆ.


ಉದಯವಾಹಿನಿ ಚಿತ್ರ

### ಕಳ್ಳಬೇಟೆ ನಿಗ್ರಹ ದಳದ ಕ್ಯಾಂಪ್

**ಗುಡ್ಡಗಳ ಸಮೀಪ ಕೃಷಿ ಭೂಮಿ ಹೊಂದಿರುವ ರೈತರು ಜಮೀನು ಒತ್ತವರಿಗೆ ಹಾಗೂ ಕಾಡುಪ್ರಾಣಿಗಳು ಜಮೀನಿಗೆ ಬಾರದಂತೆ ಹಾಕುವ ಬೆಂಕಿಯಿಂದಲೂ ಗುಡ್ಡಗಳಿಗೆ ಬೆಂಕಿ ಬೀಳುತ್ತದೆ ಎನ್ನಲಾಗುತ್ತಿದೆ. ಪ್ರತಿ ವರ್ಷ ಬೆಂಕಿಗೆ ಸಿಲುಕಿದ ಮರಗಳು ಕುರುಚಲು ಗಿಡಗಳಾಗಿ ಪರಿವರ್ತನೆಯಾದರೆ ಇನ್ನೂ ಕೆಲವು ಮರಗಳು ಮೈತುಂಬಾ ಸುಟ್ಟ ಗಾಯದಿಂದ ತತ್ತರಿಸಿ ಹೋಗಿವೆ. ಈಗಾಗಲೇ ತಾಲ್ಲೂಕು ವ್ಯಾಪ್ತಿಯಲ್ಲಿ ಕಳ್ಳಬೇಟೆ ನಿಗ್ರಹ ದಳದ ಕ್ಯಾಂಪ್ ಸ್ಥಾಪಿಸಲಾಗಿದೆ. ಗುಡ್ಡದ ಎತ್ತರ ಪ್ರದೇಶದಲ್ಲಿ ಕಟ್ಟಡ ಇರುವುದರಿಂದ ಅಲ್ಲಿಗೆ ಕಾವಲುಗಾರರನ್ನು ಅರಣ್ಯ ಇಲಾಖೆ ನೇಮಿಸಿ ಬೆಂಕಿ ಬೀಳುವ ಪ್ರದೇಶವನ್ನು ಗುರ್ತಿಸಬಹುದಾಗಿದೆ. ವಿವಿಧ ಮಾರ್ಗಗಳನ್ನು ಅನುಸರಿಸಿ ಬೆಂಕಿ ಅನಾಹುತ ತಪ್ಪಿಸುವ ಕೆಲಸ ಇಲಾಖೆ ಶ್ರಮಿಸಬೇಕು ಎನ್ನುವುದು ಪರಿಸರಾಸಕ್ತರ ಒತ್ತಾಯ.**

**ಸರ್ಕಾರ ವಿಮಾನಗಳ ಮೂಲಕ ನೀರು ಸುರಿದು ಬೆಂಕಿ ನಂದಿಸುವ ಯೋಜನೆ ಅಳವಡಿಸಿದರೆ ಹೆಚ್ಚು ಪರಿಣಾಮಕಾರಿ ರಾಮಕೃಷ್ಣಪ್ಪ ನಿವೃತ್ತ ಶಿಕ್ಷಕ ಯಗಚಿಹಳ್ಳಿ,ಈ ಬಾರಿ ಸೆಪ್ಟೆಂಬರ್ ಅಕ್ಟೋಬರ್ ತಿಂಗಳಲ್ಲಿಯೇ ಕೆಲ ಗುಡ್ಡಗಳು ಹೊತ್ತಿ ಉರಿದವು. ಪರಿಸರಾಸಕ್ತರು ಹಾಗೂ ಅರಣ್ಯ ಇಲಾಖೆ ಗುಡ್ಡಗಾಡುಗಳ ಅಕ್ಕಪಕ್ಕದ ಗ್ರಾಮಗಳಿಗೆ ತೆರಳಿ ಬೆಂಕಿಯಿಂದ ಆಗುವ ಅನಾಹುತಗಳ ಬಗ್ಗೆ ಜಾಗೃತಿ ಮೂಡಿಸಬೇಕು ಬೆಳುಗುಲಿ ಶಶಿಭೂಷಣ್ ಉಪನ್ಯಾಸಕ ಚಿಕ್ಕನಾಯಕನಹಳ್ಳಿ ಮದಲಿಂಗನ ಕಣಿವೆ ಸುಂದರ ಪರಿಸರ ತಾಣವಾಗಿದ್ದು ಹೆಚ್ಚು ಜನರು ಸಂಚರಿಸುತ್ತಾರೆ. ಈ ವೇಳೆ ಸಾರ್ವಜನಿಕರು ಬೆಂಕಿ ಅವಘಡಗಳಿಗೆ ಅಸ್ಪದ ನೀಡಬಾರದು.**

---

ಉದಯವಾಹಿನಿ

ಪ್ರಾದೇಶಿಕ

ಮಂಗಳವಾರ 07 ಜನವರಿ 2025 | 03

## ಮಿನಿ ನ್ಯೂಸ್

### ರಾಜಕೀಯ ಗಾಳಕ್ಕೆ ನಲುಗಿದ ರಸ್ತೆ ವಿಸ್ತರಣೆ

• **ಉದಯವಾಹಿನಿ ಮಾಗಡಿ**

ಬೆಂಗಳೂರಿನ ನೈಸ್ ರಸ್ತೆಯಿಂದ ಮಾಗಡಿ ಮಾರ್ಗವಾಗಿ ಸೋಮವಾರಪೇಟೆವರೆಗೂ ಕೆ–ಶಿಫ್ ವತಿಯಿಂದ ನಾಲ್ಕು ಪಥದ ರಸ್ತೆ ಕಾಮಗಾರಿ 2018ರಲ್ಲಿ ಆರಂಭಗೊಂಡು ಆರು ವರ್ಷ ಕಳೆದರೂ ಕಾಮಗಾರಿ ಮಾತ್ರ ಪೂರ್ಣಗೊಂಡಿಲ್ಲ. ಈಗ ಮಾಗಡಿ ಪಟ್ಟಣದಲ್ಲಿ ರಸ್ತೆ ವಿಸ್ತರಣೆ ಬಗ್ಗೆ ಪರ–ವಿರೋಧ ಚರ್ಚೆ ನಡೆದಿದೆ. 2015ರಲ್ಲಿ ಡಿಪಿಆರ್: 2015ರಲ್ಲಿ ಬೆಂಗಳೂರಿನ ನೈಸ್ ರಸ್ತೆ ಗೊಲ್ಲರಹಳ್ಳಿಯಿಂದ ಮಾಗಡಿ ಮಾರ್ಗವಾಗಿ ಸೋಮವಾರಪೇಟೆವರೆಗೂ ನಾಲ್ಕು ಪಥ ರಸ್ತೆ ಕಾಮಗಾರಿಗೆ ಡಿಪಿಆರ್ ಮಾಡಲಾಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದ ಕೊನೆ ಅವಧಿಯಲ್ಲಿ ರಸ್ತೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ನಂತರ ಜೆಡಿಎಸ್–ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವಧಿಯಲ್ಲಿ 2018ರಲ್ಲಿ ಲೋಕೋಪಯೋಗಿ ಸಚಿವರಾಗಿದ್ದ ಎಚ್.ಡಿ.ರೇವಣ್ಣ ನಾಲ್ಕು ಪಥದ ರಸ್ತೆ ಕಾಮಗಾರಿಗೆ ಮತ್ತೆ ಎರಡನೇ ಭಾರಿಗೆ ಮಾಗಡಿ ಕೋಟೆ ಮೈದಾನದಲ್ಲಿ ಶಂಕುಸ್ಥಾಪನೆ ನೆರವೇರಿಸಿ ಕಾಮಗಾರಿ ಆರಂಭಗೊಂಡಿತ್ತು. ಮಾಗಡಿ ಪಟ್ಟಣದ ಸೋಮೇಶ್ವರ ಕಾಲೊನಿಯಿಂದ ಹುಲಿಯೂರುದುರ್ಗ ರಸ್ತೆ ಕಾಮಗಾರಿ ಮುಕ್ತಾಯದ ಹಂತದಲ್ಲಿ ಇದೆ. ಆದರೆ, ಮಾಗಡಿ– ಬೆಂಗಳೂರು ಮುಖ್ಯ ರಸ್ತೆ ಕಾಮಗಾರಿ ಮಾತ್ರ ಪೂರ್ಣವಾಗದೆ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ.

### ಡಿಸಿ ಕಚೇರಿ ಬಳಿ ಪ್ರತಿಭಟನೆಗೆ ನಿಷೇಧಾಜ್ಞೆ ರೈತ ಸಂಘದಿಂದ ಮೆರವಣಿಗೆ

• **ಉದಯವಾಹಿನಿ ರಾಮನಗರ**

ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸದಂತೆ ನಿಷೇಧಾಜ್ಞೆ ವಿಧಿಸಿ ಡಿ.ಸಿ ಹೊರಡಿರುವ ಆದೇಶ ಹಿಂಪಡೆಯುವುದು ಸೇರಿದಂತೆ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ಸೋಮವಾರ ನಗರದಲ್ಲಿ ಪ್ರತಿಭಟನೆ ನಡೆಸಿದವು. ನಗರದ ಎಸ್.ಪಿ ಕಚೇರಿ ವೃತ್ತದಲ್ಲಿರುವ ಕಂದಾಯ ಭವನದ ಆವರಣದಲ್ಲಿ ಜಮಾಯಿಸಿದ ಕಾರ್ಯಕರ್ತರು, ಅಲ್ಲಿಂದ ಡಿ.ಸಿ ಕಚೇರಿ ಪ್ರವೇಶ ದ್ವಾರದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು. ನಿಷೇಧಾಜ್ಞೆ ಇರುವುದರಿಂದ ಪ್ರತಿಭಟನಾಕಾರರು ಕಚೇರಿ ಆವರಣ ಪ್ರವೇಶಿಸದಂತೆ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಡ್ಡವಾಗಿಟ್ಟು ನಿಗಾ ವಹಿಸಿದರು. ಅಹಿತರ ಘಟನೆ ನಡೆಯದಂತೆ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯ ಪೊಲೀಸರನ್ನು ನಿಯೋಜಿಸಲಾಗಿದೆ. ಪರಿಸ್ಥಿತಿ ವಿಕೋಪಕ್ಕೆ ಹೋದರೆ ಪ್ರತಿಭಟನಾಕಾರರನ್ನು ಬಂಧಿಸಲು ಪೊಲೀಸ್ ಬಸ್ ಗಳು ಸನ್ನದ್ದ ಸ್ಥಿತಿಯಲ್ಲಿ ನಿಂತಿವೆ. ಹಿರಿಯ ಪೊಲೀಸ್ ಅಧಿಕಾರಿಗಳು ಸೇರಿದಂತೆ ಜಿಲ್ಲೆಯ ಪೊಲೀಸ್ ಇನ್ಸ್‌ಪೆಕ್ಟರ್ ಗಳು ಹಾಗೂ ಸಿಬ್ಬಂದಿಯನ್ನು ಕರೆಯಿಸಿಕೊಳ್ಳಲಾಗಿದೆ.

### ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆಗೆ ಖಂಡನೆ : ಇಂದು ಮೈಸೂರು ಬಂದ್

• **ಉದಯವಾಹಿನಿ, ಮೈಸೂರು**

ಕೇಂದ್ರ ಸಚಿವ ಅಮಿತ್ ಷಾ ಬಿಆರ್ ಅಂಬೇಡ್ಕರ್ ಅವರ ಕುರಿತು ಅವಹೇಳನಕಾರಿ ಹೇಳಿಕೆಗೆ ಇದೀಗ ತೀವ್ರ ಖಂಡನೆ ವ್ಯಕ್ತವಾಗುತ್ತಿದ್ದು ಅಮಿತ್ ಶಾ ಹೇಳಿಕೆ ಖಂಡಿಸಿ ನಾಳೆ ಮೈಸೂರು ಜಿಲ್ಲೆ ಬಂದ್ ಮಾಡಿ ಹಲವು ಸಂಘಟನೆಗಳು ಕರೆ ನೀಡಿವೆ.

ಹೌದು ಮೈಸೂರು ಬಂದ್ ಗೆ ಕರ್ನಾಟಕ ರಾಜ್ಯ ರೈತ ಸಂಘಟನೆಗಳು, ದಲಿತ ಸಂಘಟನೆಗಳು, ಮುಸ್ಲಿಂ, ಹಿಂದುಳಿದ ಸಮುದಾಯಗಳ ವೇದಿಕೆ, ದೇವರಾಜ ಮಾರುಕಟ್ಟೆ ವರ್ತಕರ ಸಂಘ,ಮೈಸೂರು ಪಾಲಿಕೆ ಪೌರಕಾರ್ಮಿಕ ಹಾಗೂ ಪಳಚರಂಡಿ ಖಾಯಂ ಹಾಗೂ ಗುತ್ತಿಗೆ ಕಾರ್ಮಿಕ ಸಂಘಗಳು ಬೆಂಬಲ ವ್ಯಕ್ತಪಡಿಸಿದ್ದಾರೆ.ಮುಂಜಾನೆ 7 ಗಂಟೆಯಿಂದಲೆ ಮೈಸೂರು ಬಂದ್ ಬಿಸಿ ತಟ್ಟಲಿದ್ದು ಪ್ರತಿಭಟನೆಗೆ ಹಲವು ಸಂಘಟನೆಗಳ 10 ತಂಡ ಮಾರ್ಪಾಡು ಮಾಡಿಕೊಳ್ಳಲಾಗಿದೆ. ಕೆಂದ್ರೀಯ ಬಸ್ ನಿಲ್ದಾಣದಲ್ಲಿ ಒಂದು ತಂಡ ನಗರ ಬಸ್ ನಿಲ್ದಾಣದಲ್ಲಿ ಒಂದು ತಂಡ ಹೀಗೆ ಮೈಸೂರು ನಗರಕ್ಕೆ ಬರುವ ಪ್ರಮುಖ ರಸ್ತೆ ತಡೆಗೆ ಯೋಚನೆ ಮಾಡಲಾಗಿದೆ.

### ಕುಸಿದು ಬಿದ್ದು ವಿದ್ಯಾರ್ಥಿನಿ ಸಾವು

• **ಉದಯವಾಹಿನಿ ಚಾಮರಾಜನಗರ**

ಶಾಲೆಯಲ್ಲಿ ಶಿಕ್ಷಕರಿಗೆ ನೋಟ್ಸ್ ತೋರಿಸುತ್ತಿದ್ದಂತ ಸಂದರ್ಭದಲ್ಲೇ 3ನೇ ತರಗತಿ ವಿದ್ಯಾರ್ಥಿನಿಗೆ ಹೃದಯಾಘಾತ ಉಂಟಾಗಿದೆ. ಇದರಿಂದ ಕುಸಿದು ಬಿದ್ದಂತ ವಿದ್ಯಾರ್ಥಿನಿಯ ಸಾವನ್ನಪ್ಪಿರುವಂತ ಘಟನೆ ಚಾಮರಾಜನಗರದಲ್ಲಿ ನಡೆದಿದೆ. ಚಾಮರಾಜನಗರ ತಾಲ್ಲೂಕಿನ ಬನದಗುಪ್ಪೆ ಗ್ರಾಮದ ತೇಜಸ್ವಿನಿ ಇಂದು ಶಾಲೆಗೆ ತೆರಳಿದ್ದರು. ಸೇಂಟ್ ಫ್ರಾನ್ಸಿಸ್ ಶಾಲೆಯಲ್ಲಿ 3ನೇ ತರಗತಿ ಓದುತ್ತಿದ್ದಂತ ಆಕೆ, ಇಂದು ನೋಟ್ಸ್ ತೋರಿಸಲು ತೆರಳಿದಂತ ಸಂದರ್ಭದಲ್ಲೇ ತೀವ್ರ ಹೃದಯಾಘಾತಕ್ಕೆ ಒಳಗಾಗಿ ಕುಸಿದು ಬಿದ್ದಿದ್ದಾಳೆ. ಶಾಲೆಯಲ್ಲೇ ಕುಸಿದು ಬಿದ್ದಂತ 3ನೇ ತರಗತಿ ವಿದ್ಯಾರ್ಥಿನಿ ತೇಜಸ್ವಿಯನ್ನು ಕೂಡಲೇ ಶಾಲಾ ಶಿಕ್ಷಕರು ಸಮೀಪದ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೇ ತೇಜಸ್ವಿಯನ್ನು ಪರೀಕ್ಷಿಸಿದಂತ ವೈದ್ಯರು ಮಾರ್ಗಮಧ್ಯದಲ್ಲೇ ಸಾವನ್ನಪ್ಪಿರುವುದಾಗಿ ತಿಳಿಸಿದ್ದಾರೆ. ಮೃತ ತೇಜಸ್ವಿನಿ ಬನದಗುಪ್ಪಿ ಗ್ರಾಮ ಲಿಂಗರಾಜು ಹಾಗೂ ಶ್ರುತಿ ಎಂಬುವರ ದಂಪತಿಯ ಪುತ್ರಿಯಾಗಿದ್ದಾರೆ. ಆಕೆಯ ಪಾರ್ಥೀವ ಶರೀರವನ್ನು ಆಸ್ಪತ್ರೆಯಿಂದ ಊರಿಗೆ ಪೋಷಕರು ಕೊಂಡೊಯ್ಯುತ್ತಿದ್ದಾರೆ. ಈಗ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ.

### ಗ್ರಾ.ಪಂ. ಮಾಜಿ ಉಪಾಧ್ಯಕ್ಷನ ಹತ್ಯೆ

• **ಉದಯವಾಹಿನಿ, ಪಾವಗಡ**

ತಾಲ್ಲೂಕಿನ ದೇವಲಕೆರೆ ಗ್ರಾಮದ ಗ್ರಾಮ ಪಂಚಾಯ್ತಿಯ ಮಾಜಿ ಉಪಾಧ್ಯಕ್ಷ ನರಸಿಂಹಯ್ಯ ಎಂಬುವರೇ ಕೊಲೆಯಾಗಿರುವ ದುರ್ದೈವಿ. ತಾಲ್ಲೂಕಿನ ಕೆ.ಟಿ. ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೇವಲಕೆರೆ ಗ್ರಾಮದ ಮಾಜಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಿಂಹಪ್ಪ ಗ್ರಾಮದ ಹೊರವಲಯದ ಬೆಟ್ಟದಲ್ಲಿ ಮೇಕೆಗಳನ್ನು ಮೇಯಿಸುವಾಗ ಪಕ್ಕದ ಕರಿಯಮ್ಮನಪಾಳ್ಯ ಗ್ರಾಮದ ಮಣಿಕಂಠ ಎಂಬಾತ ಕುಡುಗೋಲಿನಿಂದ ಅವರನ್ನು ಬರ್ಬರವಾಗಿ ಕೊಲೆಗೈದು 30 ಮೇಕೆಗಳನ್ನು ಹೊಡೆದುಕೊಂಡು ಹೋಗಿದ್ದಾರೆ ಎಂದು ಹೇಳಲಾಗಿದೆ. ನಂತರ ಚಿತ್ರದುರ್ಗ ಜಿಲ್ಲೆಯ ಹಿರಿಯೂರಿನ ಕುರಿಸಂತೆಯಲ್ಲಿ ಮಾರಾಟ ಮಾಡುತ್ತಿರುವಾಗ ನರಸಿಂಹಪ್ಪನ ಮಗ ಮಂಜುನಾಥ್ ಮೇಕೆಗಳನ್ನು ಗುರುತಿಸಿ ಮಣಿಕಂಠನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದು, ಅರಸೀಕೆರೆ ಪೊಲೀಸರು, ಹಿರಿಯೂರಿನಲ್ಲಿ ಆರೋಪಿಯನ್ನು ಬಂಧಿಸಿ ಕರೆ ತಂದು ವಿಚಾರಣೆ ನಡೆಸಿದಾಗ ಕೊಲೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ. ಅರಣ್ಯ ಪ್ರದೇಶದಲ್ಲಿ ನರಸಿಂಹಪ್ಪನನ್ನು ಕೊಲೆ ಮಾಡಿದ್ದ ಸ್ಥಳಕ್ಕೆ ಪೊಲೀಸರನ್ನು ಕರೆತಂದು ತೋರಿಸಿದ್ದಾನೆ ಎನ್ನಲಾಗಿದೆ.

ಅಂತರಾಳದಿಂದ... EDITORIAL

# ಶ್ರೀರಾಮಸೇನೆ ಶಸ್ತ್ರಾಸ್ತ್ರ ತರಬೇತಿ : ಸರಕಾರ ಪಾಲಿಸುತ್ತಿರುವ ಅಪಾಯಕಾರಿ ಮೌನ!

ಶ್ರೀರಾಮಸೇನೆ ಎನ್ನುವ ಉಗ್ರವಾದಿ ಸಂಘಟನೆಯು ತನ್ನ ನೂರಕ್ಕೂ ಅಧಿಕ ಕಾರ್ಯಕರ್ತರಿಗೆ ಆರುದಿನಗಳ ಕಾಲ ಶಸ್ತ್ರಾಸ್ತ್ರ ತರಬೇತಿ ನೀಡಿರುವುದು ಕೆಲವು ಮಾಧ್ಯಮಗಳ ಮೂಲಕ ಬಹಿರಂಗವಾಗಿದೆ. ಬಾಗಲಕೋಟೆಯ ಜಮಖಂಡಿ ತಾಲ್ಲೂಕಿನ ತೊಲಬಾಗಿಯಲ್ಲಿ ಈ ತರಬೇತಿ ನೀಡಿರುವ ಬಗ್ಗೆ ಮಾಹಿತಿಗಳು ಲಭ್ಯವಾಗಿದ್ದು ಎರ್ಗನ್ ಮೂಲಕ ಗನ್ ಟ್ರೈನಿಂಗ್, ಬಂದೂಕು ಬಳಕೆ ಸೇರಿದಂತೆ ಹಲವು ತರಬೇತಿಗಳನ್ನು ಈ ಸಂದರ್ಭದಲ್ಲಿ ನೀಡಲಾಗಿದೆ ಎನ್ನಲಾಗಿದ್ದು, ಈ ಕುರಿತ ಛಾಯಾಚಿತ್ರಗಳೂ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈ ತರಬೇತಿಯ ಉದ್ದೇಶ ಏನು ಎನ್ನುವುದನ್ನು ರಾಮಸೇನೆಯ ಮುಖಂಡರು ಈವರೆಗೆ ಬಹಿರಂಗಪಡಿಸಿಲ್ಲ. ಈ ತರಬೇತಿಯನ್ನು ವ್ಯಕ್ತಿತ್ವ ವಿಕಸನವೆಂದು ಸಂಘಟನೆ ಕರೆದುಕೊಂಡಿದೆ. ರಾಮಸೇನೆ ಎನ್ನುವ ಸಂಘಟನೆಯ ಹಿನ್ನೆಲೆ ಬಲ್ಲ ಯಾವನೂ ಈ ವರದಿಯನ್ನು ಹಗುರವಾಗಿ ತೆಗೆದುಕೊಳ್ಳಲಾರ. ಈ ತರಬೇತಿ ಪಡೆದ ದುಷ್ಕರ್ಮಿಗಳು ಕರ್ನಾಟಕದ ಪಾಲಿಗೆ ಭಾರೀ ಅಪಾಯಗಳನ್ನು ತಂದೊಡ್ಡಬಲ್ಲರು ಎನ್ನುವ ಆತಂಕ ರಾಜ್ಯದ ಶ್ರೀಸಾಮಾನ್ಯರದ್ದಾಗಿದೆ. ಸ್ಥಳೀಯರು ಈ ಬಗ್ಗೆ ಈಗಾಗಲೇ ತಮ್ಮ ಕಳವಳವನ್ನು ವ್ಯಕ್ತಪಡಿಸಿದ್ದಾರಾದರೂ ಪೊಲೀಸ್ ಇಲಾಖೆಗಾಗಲಿ, ಸರಕಾರಕ್ಕಾಗಲಿ ಆ ಕಳವಳ, ಆತಂಕ ತಟ್ಟಿದಂತಿಲ್ಲ ಶ್ರೀರಾಮಸೇನೆ ರಾಜ್ಯದಲ್ಲಿ ಮಾತ್ರವಲ್ಲ ಹೊರರಾಜ್ಯದಲ್ಲೂ ಕ್ರಿಮಿನಲ್ ಕೃತ್ಯಗಳಿಗಾಗಿ ಗುರುತಿಸಲ್ಪಟ್ಟಿದೆ. ಶ್ರೀರಾಮಸೇನೆಯ ಮುಖಂಡ ಎಂದು ಗುರುತಿಸಿಕೊಳ್ಳುವ ಪ್ರಮೋದ್ ಮುತಾಲಿಕನಿಗೆ ಗೋವಾದ ಬಿಜೆಪಿ ಸರಕಾರವೇ ನಿಷೇಧವನ್ನು ಹೇರಿದೆ. ನಮ್ಮದೇ ರಾಜ್ಯದ ಕೋರ್ಟ್ ಆವರಣದಲ್ಲಿ ಬಾಂಬ್ ದಾಳಿ ಸೇರಿದಂತೆ ರಾಜ್ಯದ ಹಲವೆಡೆ ಎಸಗಿರುವ ಕ್ರಿಮಿನಲ್ ಪ್ರಕರಣಗಳಿಗಾಗಿ ಹಲವು ರಾಮಸೇನೆ ಕಾರ್ಯಕರ್ತರು ಬಂದಿಸಲ್ಪಟ್ಟಿದ್ದರು. ಅವರಲ್ಲಿ ಜಂಬಗಿ ಎಂಬಾತ ಜೈಲಿನಲ್ಲೇ ತನ್ನ ಸಹವರ್ತಿಯಿಂದ ಭೀಕರವಾಗಿ ಕೊಲೆಗೈಯಲ್ಪಟ್ಟಿದ್ದ ದೇಶದ್ರೋಹದಂತಹ ಪ್ರಕರಣಗಳಲ್ಲೂ ಈ ಸಂಘಟನೆಯ ಹೆಸರು ಕೇಳಿ ಬಂದಿತ್ತು. ಸಿಂಧಗಿಯಲ್ಲಿ ತಹಶೀಲ್ದಾರ್ ಕಚೇರಿಯ ಮುಂದೆ ಪಾಕಿಸ್ತಾನ ಧ್ವಜ ಹಾರಿಸಿದ ಹೆಗ್ಗಳಿಕೆ ರಾಮಸೇನೆ ಕಾರ್ಯಕರ್ತರದ್ದು ಕೋಮುಗಲಭೆಗಳನ್ನು ಹುಟ್ಟಿಸಿ ಹಾಕಲೆಂದು ಪಾಕಿಸ್ತಾನ ಧ್ವಜವನ್ನು ಹಾರಿಸಿ, ಬಳಿಕ ತಾನೇ ಇದರ ವಿರುದ್ಧ ಪ್ರತಿಭಟನೆ ನಡೆಸಿತ್ತು. ಸ್ಥಳೀಯ ಮುಸ್ಲಿಮರ ತಲೆಗೆ ಈ ಆರೋಪವನ್ನು ಕಟ್ಟಲು ಮುಂದಾಗಿತ್ತು ಆದರೆ ತನಿಖೆಯಲ್ಲಿ ಪಾಕಿಸ್ತಾನ ಧ್ವಜ ಹಾರಾಟದ ಹಿಂದೆ ರಾಮಸೇನೆ ಕಾರ್ಯಕರ್ತರ ಪಾತ್ರವಿರುವುದು ಬೆಳಕಿಗೆ ಬಂತು. ರಾಮಸೇನೆ ಕಾರ್ಯಕರ್ತರಲ್ಲಿ ಬಹುತೇಕರ ಮೇಲೆ ಕ್ರಿಮಿನಲ್ ಆರೋಪಗಳಿವೆ. ಅದು ಇತರ ಯುವಕರನ್ನೂ ತನ್ನ ಕ್ರಿಮಿನಲ್ ತೆಕ್ಕೆಗೆ ತೆಗೆದುಕೊಳ್ಳಲು ಪ್ರಯತ್ನಿಸುತ್ತಿದೆ. ಅದರಭಾಗವಾಗಿಯೇ ಬಾಗಲಕೋಟೆಯಲ್ಲಿ ಶ್ರೀರಾಮಸೇನೆ ಸಂಘಟನೆ ಉಗ್ರಗಾಮಿ ತರಬೇತಿ ಶಿಬಿರವನ್ನು ಹಮ್ಮಿಕೊಂಡಿದೆ ಎಂದು ಸ್ಥಳೀಯರು ಶಂಕಿಸುತ್ತಿದ್ದಾರೆ. ಆದರೆ ಪೊಲೀಸ್ ಇಲಾಖೆ ಕಂಡೂ ಕಾಣದಂತೆ ವರ್ತಿಸುತ್ತಿದೆ.

**ದಾವಣಗೆರೆಯಲ್ಲಿ ರಾಜ್ಯ ಮಟ್ಟದ ಯುವಜನೋತ್ಸವವನ್ನು ಉದ್ಘಾಟಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 'ಸಮಾಜದಲ್ಲಿ ಶಾಂತಿ ಭಂಗ ಮಾಡುವವರ ಮಾತಿಗೆ ಮರುಳಾಗದೆ ಅವರ ವಿರುದ್ಧ ಧ್ವನಿ ಎತ್ತುವ ಕಾರ್ಯ ಯುವಪಡೆಯಿಂದ ಆಗಬೇಕು' ಎಂದು ಕರೆ ನೀಡಿದ್ದಾರೆ.**

ಹೇಮಂತ್ ಕರ್ಕರೆ ತನಿಖಾ ತಂಡ, ಈ ದೇಶದಲ್ಲಿ ಕೇಸರಿ ಉಗ್ರವಾದಿ ಸಂಘಟನೆ ಅಸ್ತಿತ್ವದಲ್ಲಿರುವುದನ್ನು ಮೊದಲಬಾರಿಗೆ ಬಹಿರಂಗ ಪಡಿಸಿತ್ತು. ವಿದೇಶಿ ಉಗ್ರಗಾಮಿಗಳಿಂದ ನಡೆದಿದೆ ಎಂದು ಭಾವಿಸಿದ ಮಕ್ಕಾ ಮಸೀದಿ ಸ್ಫೋಟ, ಅಜೀರ್ ಸ್ಫೋಟ ಸಂಝೌತಾ ರೈಲು ಸ್ಫೋಟಗಳ ಹಿಂದೆ ಕೇಸರಿ ಉಗ್ರವಾದಿ ಸಂಘಟನೆಗಳ ಕೈವಾಡವಿರುವುದು ಅವರಿಂದ ಬೆಳಕಿಗೆ ಬಂತು ಪ್ರಜ್ಞಾಸಿಂಗ್ ಪುರೋಹಿತ್, ಅಸೀಮಾನಂದ ಸಹಿತ ಹಲವು ಉಗ್ರವಾದಿಗಳ ಬಂಧನವೂ ನಡೆಯಿತು. ಈ ಉಗ್ರರು ವಿವಿಧ ತರಬೇತಿ ಶಿಬಿರಗಳನ್ನು ನಡೆಸಿರುವುದು ಕೂಡ ತನಿಖೆಯ ಸಂದರ್ಭದಲ್ಲಿ ಬಹಿರಂಗವಾಯಿತು. ತನಿಖೆ ನಿರ್ಣಾಯಕ ಹಂತ ತಲುಪಬೇಕು ಎನ್ನುವಷ್ಟರಲ್ಲಿ ಕರ್ಕರೆ ಮತ್ತು ಅವರ ಎಲ್ಲಾಸಹವರ್ತಿಗಳು ಬರ್ಬರವಾಗಿ ಹತ್ಯೆಗೈಯಲ್ಪಟ್ಟರು. ಮುಂಬೈ ದಾಳಿ ಸಂದರ್ಭದಲ್ಲಿ ಪಾಕಿಸ್ತಾನಿ ಉಗ್ರರು ಈ ದಾಳಿಯನ್ನು ನಡೆಸಿದ್ದಾರೆ ಎಂದು ಹೇಳಲಾಗುತ್ತಿದೆ. ಆದರೆ ತನಿಖಾ ತಂಡದ ಸಾಮೂಹಿಕ ಹತ್ಯೆಯಿಂದ ನಿಜಕ್ಕೂ ಲಾಭವಾದದ್ದು ಸ್ವದೇಶಿ ಕೇಸರಿ ಉಗ್ರರಿಗೆ, ಕರ್ಕರೆ ತಂಡದ ಹತ್ಯೆಯ ಬಳಿಕ ಕೇಸರಿ ಉಗ್ರರ ಕುರಿತ ತನಿಕೆಗೆ ಭಾರೀ ಹಿನ್ನಡೆಯಾಯಿತು. ಇಂದಿಗೂ ಕೇಸರಿ ಉಗ್ರ ಸಂಘಟನೆಗಳು ಅಸ್ತಿತ್ವದಲ್ಲಿದ್ದು ಆಗಾಗ ತಮ್ಮ ಉಪಸ್ಥಿತಿಯನ್ನು ಬಹಿರಂಗಪಡಿಸುತ್ತಿರುತ್ತವೆ. ಮಹಾತ್ಮಾಗಾಂಧೀಜಿಯ ಹತ್ಯೆಯಾದ ದಿನವನ್ನು ಇವುಗಳು ಸಂಭ್ರಮದಿಂದ ಆಚರಿಸುವ ಮೂಲಕ ಮಾಧ್ಯಮಗಳಲ್ಲಿ ಸುದ್ದಿಯಾಗುತ್ತವೆ. ಈ ಹಿನ್ನೆಲೆಯಲ್ಲೇ, ಬಾಗಲಕೋಟೆಯಲ್ಲಿ ಶ್ರೀರಾಮಸೇನೆ ನಡೆಸಿರುವ ಶಸ್ತ್ರಾಸ್ತ್ರ ತರಬೇತಿಯನ್ನು ಸರಕಾರ ಗಂಭೀರವಾಗಿ ತೆಗೆದುಕೊಳ್ಳಬೇಕಾಗಿದೆ. ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ದಿನದಿಂದ ಕೋಮು ಉದ್ವಿಗ್ನತೆಗೆ ಅವಕಾಶ ನೀಡುವುದಿಲ್ಲ ಎಂದು ಹೇಳುತ್ತಲೇ ಬರುತ್ತಿದೆ. ಅಂತಹ ಪ್ರಯತ್ನ ಯಾರೇ ನಡೆಸಿದರೂ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಗೃಹ ಸಚಿವರೂ ಹಲವು ಬಾರಿ ಹೇಳಿಕೆ ನೀಡಿದ್ದಾರೆ ಈ ರಾಜ್ಯದಲ್ಲಿ ಇಸ್ರೇಲ್ ಹತ್ಯಾಕಾಂಡವನ್ನು ವಿರೋಧಿಸಿ, ಫೆಲೆಸ್ತೀನ್ ಪರವಾಗಿ ಪ್ರತಿಭಟನೆ ನಡೆಸಿದರೆ ಅವರ ವಿರುದ್ಧ ಮೊಕದ್ದಮೆಯನ್ನು ದಾಖಲಿಸಲಾಗುತ್ತದೆ. ಫೆಲೆಸ್ತೀನ್ ಪರವಾಗಿ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿದ ಕಾರಣಕ್ಕಾಗಿ ಯುವಕರನ್ನು ಬಂಧಿಸಲಾಗುತ್ತದೆ ಫೆಲೆಸ್ತೀನ್ ಪರವಾಗಿ ಯಾವುದೇ ಪ್ರತಿಭಟನೆಯನ್ನು ರಾಜ್ಯದಲ್ಲಿ ಸರಕಾರ ಪರೋಕ್ಷವಾಗಿ ನಿಷೇಧಿಸಿದೆ. ಸಾರ್ವಜನಿಕ ಬೇಡಿಕೆಗಳನ್ನು ಮುಂದಿಟ್ಟು ಪ್ರತಿಭಟನೆ ನಡೆಸಿದ ಕಾರ್ಮಿಕ ಮುಖಂಡರ ಮೇಲೆ ಪ್ರಕರಣ ದಾಖಲಿಸಲಾಗುತ್ತದೆ. ಅಂತಹ ಪ್ರತಿಭಟನಲಿಗೆ ಅನುಮತಿಯನ್ನು ನಿಷೇಧಿಸಲಾಗುತ್ತದೆ. ಆದರೆ ಕ್ರಿಮಿನಲ್ ಹಿನ್ನೆಲೆಯಿರುವ ಸಂಘಟನೆಯೊಂದು 180ಕ್ಕೂ ಅಧಿಕ ಮಂದಿಗೆ ಶಸ್ತ್ರಾಸ್ತ್ರ ತರಬೇತಿ ನೀಡುವುದಕ್ಕೆ ಕಾಂಗ್ರೆಸ್ ಸರಕಾರದ ಅಡಿಯಲ್ಲಿ ಯಾವುದೇ ಅಡ್ಡಿಯಿರುವುದಿಲ್ಲ ಪೊಲೀಸರ ಬಳಿ ಈ ಬಗ್ಗೆ ಕೇಳಿದರೆ ಅವರಿಗೆ ಮಾಹಿತಿಯೇ ಇರುವುದಿಲ್ಲ ಗೃಹ ಸಚಿವರ ಕಡೆಯಿಂದ ಕನಿಷ್ಠ ತನಿಖೆ ನಡೆಸುತ್ತೇವೆ' 'ಕ್ರಮ ತೆಗೆದುಕೊಳ್ಳುತ್ತೇವೆ' ಎನ್ನುವ ಹೇಳಿಕೆಯೂ ಹೊರ ಬೀಳುವುದಿಲ್ಲ. ಯಾವುದೋ ಒಬ್ಬ ಸ್ಥಳೀಯ ಬಿಜೆಪಿ ಕಾರ್ಯಕರ್ತನ ಹತ್ಯೆಯಾದಾಗ ಅದನ್ನು ಎನ್‌ಐಎ ತನಿಖೆ ನಡೆಸುತ್ತದೆ. ಕಂಡಕಂಡವರನ್ನೆಲ್ಲ ತನಿಖೆಯ ಹೆಸರಿನಲ್ಲಿ ಬಂಧಿಸುತ್ತದೆ.

---

## ರಾಮಾಯಣ



### ದಶರಥ ರಾಜನು ಮಿಥಿಲಾ ಪುರಿಗೆ ಬಂದದ್ದು

• ಹಿಂದಿನ ಸಂಚಿಕೆಯಿಂದ 66 ನೆಯ ಅಧ್ಯಾಯ

ಈ ಪ್ರಕಾರದಲ್ಲಿ ವಶರಥಮಹಾರಾಜನು ರಥಾರೂಢನಾಗಿ ಪ್ರಯಾಣಮಾಡಿ ಮಾರ್ಗದಲ್ಲಿ ಮೂರು ರಾತ್ರಿಗಳು ನಿಂತು ನಾಲ್ಕನೆಯ ದಿವಸ ಮಿಥಿಲಾಪಟ್ಟಣವನ್ನು ಪ್ರವೇಶಿಸಿದನು ವಶರಥ ರಾಜನು ಬಂದ ವೃತ್ತಾಂತವನ್ನು ಕೇಳಿ ಜನಕರಾಜನು ಆತನನ್ನು ಇದಿರುಗೊಂಡು ಅತಿಹರ್ಷದಿಂದ ಮಹಾರಾಜ, ನಿನಗೆ ಸ್ವಾಗತ, ನಿನ್ನ ಆಗಮನದಿಂದ ನನಗೆ ಆನಂದವಾಯಿತು. ನಿನ್ನ ಮಕ್ಕಳ ಪರಾಕ್ರಮವನ್ನು ನೋಡಿ ಮಹಾಸಂತೋಷವಾಯಿತು ದೇವೇಂದ್ರನು ಸಮಸ್ತದೇವತೆಗಳನ್ನೂ ಕೂಡಿಕೊಂಡು ಬರುವ ಹಾಗೆ ವಿಶ್ವಾಮಿತ್ರಮುನೀಶ್ವರನು ಸಮಸ್ತ ಋಷಿಗಳನ್ನು ಕೂಡಿಕೊಂಡು ಅದೃಷ್ಟವಶದಿಂದ ಇಲ್ಲಿಗೆ ಬಂದನು. ನನಗೆ ಬಂದ ವಿಘ್ನಗಳು ದೇವರ ಕೃಪೆಯಿಂದ ಪರಿಹಾರ ವಾದವು. ನನಗೆ ಮಹಾಪರಾಕ್ರಮಿಗಳೂ ಮಹಾತ್ಮರೂ ಆದ ರಘುವಂಶದ ರಾಜರ ಸಂಬಂಧವು ದೊರಕಿತು! ನನ್ನ ಯಜ್ಞವು ಸಮಾಪ್ತಿಯಾದಮೇಲೆ ಸಮಸ್ತ ಋಷಿಗಳಿಗೂ ಸಮ್ಮತವಾಗುವ ಪ್ರಕಾರದಲ್ಲಿ ವಿವಾಹವನ್ನು ಮಾಡಿಸು ಎಂದು ಹೇಳಿದನು.

ಆಗ ದಶರಥರಾಜನು ಜನಕರಾಜನನ್ನು ಕುರಿತು ಮಹಾರಾಜ, ಲೋಕದಲ್ಲಿ ದಾನವೂ ಪ್ರತಿಗ್ರಹವೂ ಕೊಡುವವರ ಅಧೀನವಲ್ಲದೆ ಮತ್ತೊಂದಲ್ಲ. ಧರ್ಮಿಷ್ಟನಾದ ನೀನು ಹೇಗೆ ಹೇಳುವೆಯೋ ಹಾಗೆ ನಾನು ಕೇಳುತ್ತೇನೆ ಎಂದು ಹೇಳಿದನು. ಸತ್ಯಸಂಧನಾದ ದಶರಥರಾಜನ ಮಾತನ್ನು ಕೇಳಿ ಜನಕಮಹಾರಾಜನು ಸಂತೋಷಿಸಿದನು ಆಗ ಅಲ್ಲಿದ್ದ ಋಷಿಗಳು ಜನಕರಾಜನಿಗೂ ದಶರಥರಾಜನಿಗೂ ಅನ್ಯೋ ಬಂಧುತ್ವವಾದದ್ದ ಅತ್ಯಂತ ಹರ್ಷಪಟ್ಟರು ವಶರಥರಾಜನು ತನ್ನ ಕುಮಾರರಾದ ರಾಮಲಕ್ಷ್ಮಣರ ಪರಾಕ್ರಮಗಳನ್ನು ಕೇಳಿ ಅತಿಹರ್ಷಗೊಂಡು ಜನಕರಾಜನಿಂದ ಸತ್ಕಾರಗಳನ್ನು ಪಡೆದು ತನ್ನ ಬಿಡಾರಕ್ಕೆ ಬಿಜಯಂಗೈದನು ಆಮೇಲೆ ಕ್ರಿಯಾಕಾಂಡವನ್ನೂ ಧರ್ಮರಹಸ್ಯಗಳನ್ನೂ ಬಲ್ಲವನಾದ ಜನಕರಾಜನು ಯಜ್ಞ ಸಮಾಪ್ತಿ ಮಾಡಿ ನಮ್ಮನ್ನ ಅರಸರನ್ನೂ ಋಷಿಗಳನ್ನೂ ಸತ್ಕರಿಸಿ ಯಜ್ಞಶಾಲೆಯಿಂದ ತನ್ನ ಮನೆಗೆ ಬಂದು ಸುಖದಿಂದ ಆ ರಾತ್ರಿಯನ್ನು ಕಳೆದನು.

#### ದಶರಥ ರಾಯನ ವಂಶಾವಳಿ

ಮಾರನೆಯ ದಿವಸ ಪ್ರಾತಃಕಾಲದಲ್ಲಿ ಸಂಧ್ಯಾವಂದನಾದಿ ನಿಖಿಲ ಕರ್ಮಗಳನ್ನು ತೀರಿಸಿಕೊಂಡು ಋಷಿಗಳನ್ನು ಕೂಡಿಕೊಂಡು ಜನಕರಾಯನು ತನ್ನ ಪುರೋಹಿತನಾದ ಶತಾನಂದನನ್ನು ಕುರಿತು ''ನನ್ನ ಒಡಹುಟ್ಟಿದ ತಮ್ಮನೂ ಅತ್ಯಂತ ಧಾರ್ಮಿಕನೂ ಆದ ಕುಶಧ್ವಜನು ಸಾಂಕಾತ್ಯ ಎಂಬ ಪಟ್ಟಣದಲ್ಲಿ ರಾಜ್ಯವನ್ನಾಳಿಕೊಂಡಿದ್ದಾನೆ ಬೇಲದರ ನೇರಳೆಮರ ತೆಂಗಿನಮರ ಮೊದಲಾದ ಮರಗಳುಳ್ಳ ವಸಗಳಿಂದ ಮನೋಹರವಾದ ಆ ಪಟ್ಟಣದ ನಮೀಪದಲ್ಲಿ ಇಕ್ಷು ಎಂಬ ನದಿಯುಂಟು.ಆ ನದಿಯ ಉದಕವು ಕಬ್ಬಿನ ಹಾಲಿನ ಹಾಗಿದೆ. ಅಂಥ ನದಿಯಿಂದ ಪವಿತ್ರವಾದ ಆ ಪಟ್ಟಣದಲ್ಲಿರುವ ನನ್ನ ತಮ್ಮನಾದ ಕುಶಧ್ವಜನನ್ನು ನೋಡಬೇಕೆಂದು ಇಚ್ಛೆಯಾಗುತ್ತಿದೆ. **ಮುಂದುವರಿಯುವುದು...**

---

# ಮಕ್ಕಳ ಕಡಿಮೆ ಬೇಡಿಕೆ ಪಾಲನೆ



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಇತ್ತೀಚೆಗೆ ಒಂದು ಚಟ. ಮನೆಯಲ್ಲಿ ಮಾಡಿದ ಅಡುಗೆ ಬೇರೆ. ಮಕ್ಕಳಿಗೆ ಮಾಡುವ ಅಡುಗೆ ಬೇರೆ. ಮನೆಯವರಿಗೆಲ್ಲ ಉಪ್ಪಿಟ್ಟು. ಮಗು ಮೂಗು ಮುರಿಯುತ್ತದೆ. ಅಳುತ್ತದೆ. ಬೇರೆ ಏನನ್ನೋ ಬೇಡುತ್ತದೆ. ಅಮ್ಮ ಅದರ ಅಪೇಕ್ಷೆ ಕೇಳುತ್ತಾಳೆ. ಅದಕ್ಕೆ ನೂಡಲ್ಸ್ ಬೇಕು. ಅಥವಾ ಪಿಜ್ಜಾ, ಬರ್ಗರ್. ಇನ್ನೇನೋ.

ಮಗು ಅಳಬಾರದು. ಅಂತೂ ಅದರ ಅಪೇಕ್ಷೆ ಒದಗಿಸಬೇಕು. ಇದೀಗ ಎಲ್ಲಾಮನೆಗಳ ಕಥೆ. ಮಗುವಿನ ಅಪೇಕ್ಷೆಗೆ ಆದ್ಯತೆ. ಅದು ಅತ್ತರೆ ಅಪ್ಪ ಬಯ್ಯುವುದು ಅಮ್ಮನನ್ನೆ.

ಹೀಗೆ ಮಾಡಿದರೆ ಏನು ತಪ್ಪು ಹಿಂದೆ ಅಷ್ಟು ಸೌಕರ್ಯ ಇರಲಿಲ್ಲ. ಬಡತನ ಇತ್ತು. ಈಗ ಕೊಡುವ ತಾಕತ್ತು ಇದೆ ಕೊಡಿಸಲಿ ನಾವು ಹಾಕಿದ್ದು ತಿಂದಿದ್ದೇವೆ ಅಂತ ಅವರು ಯಾಕೆ ತಿನ್ನಬೇಕು ನಮಗೆ ಬೇರೆ ಗತಿಯಿರಲಿಲ್ಲ. ಹೀಗೆ ಒಂದು ವಾದವೂ ಇದೆ. ಬಹಳ ಹಿಂದೆ ಅಶ್ವತ್ಥಾಮ ಎಂಬ ಮಗು ಇದ್ದ. ಮಹಾತಪಸ್ವಿಯ ಮಗ. ಹೊಲದಲ್ಲಿ ಬಿದ್ದ ಧಾನ್ಯ ಆರಿಸಿ ತಂದು ಊಟ ಮಾಡತ್ತಿದ್ದವ ದ್ರೋಣ. ಅಂತಿಂಥ ತಪಸ್ವಿ ಅಲ್ಲ. ನಿಜವಾದ ಬ್ರಾಹ್ಮಣ.

ಅವನಿಗೆ ಕೃಪಾಚಾರ್ಯರ ತಂಗಿ ಕೃಪಿ ಹೆಂಡತಿ. ಈ ಕೃಪಾಚಾರ್ಯರು ಧೃತರಾಷ್ಟ್ರನ ಅರಮನೆಯವರು. ದ್ರೋಣಾಚಾರ್ಯರು ಇದರಿಂದ ತುಂಬಾ ದೂರ. ಆದರೆ ಮಗುವಿಗೆ ಕೃಪಾಚಾರ್ಯರು ಮಾವ. ಈ ಮಾತುಲ ಅರಮನೆಗೆ ಹತ್ತಿರ. ಮಾವನ ಕಾರಣಕ್ಕೆ ಈ ಮಗುವೂ ಅರಮನೆ ಹೊಕ್ಕಿತು. ಅಲ್ಲಿ ಅದು ನೋಡಿದ್ದು



☛ ಉದಯವಾಹಿನಿ ಚಿತ್ರ

ದೊಡ್ಡವರನ್ನು. ದೊಡ್ಡವರ ಊಟವೇ ಬೇರೆ. ಪೇಯವೂ ಬೇರೆ. ಮಗು ಅವರಲ್ಲಿ ಹಾಲು ಕುಡಿಯಿತು.

ಈ ಹಾಲನ್ನು ಮನೆಯಲ್ಲಿ ಕೇಳಿತು. ಎಲ್ಲಿಂದ ಕೊಡಬೇಕು ಈ ತಪಸ್ವಿಯ ಹೆಂಡತಿ ಅವಳು ಹಿಟ್ಟಿಗೆ ನೀರು ಸೇರಿಸಿ ಕೊಟ್ಟಳು. ಮಗು ಇದು ಅದಲ್ಲ ಎಂದಿತು. ಹೋಲಿಕೆ. ಎಲ್ಲಾದುಃಖದ ಮೂಲ. ಮಗು ಆ ಅದೇ ಹಾಲನ್ನು ಕೇಳಿತು. ನಿತ್ಯ ಒತ್ತಾಯ. ತಾಯಿಗೆ ಸಂಕಟ. ಗಂಡನನ್ನು ಮೊರೆಹೊಕ್ಕಳು. ಜೀವನದಲ್ಲಿ ಹೊಟ್ಟೆಗೆ

**ಹಾಲಿನ ಅಪೇಕ್ಷೆಗೆ ಅಪ್ಪನನ್ನು ದೂಡಿದ ಮಗ. ಅಪ್ಪ ಕೊಟ್ಟ ಬ್ರಹ್ಮಾಸ್ತ್ರವನ್ನು ಹಸುಳೆಯನ್ನು ಕೊಲ್ಲಲು ಬಳಸಿದ. ಹೋಗಲಿ, ಮುಕ್ತನಾದನಾ ಕೃಷ್ಣ ಶಾಪ ಹೊತ್ತು ನಾಯಿಯಂತೆ ಅಲೆದ. ''ಹಸಿದು ತಿರುಗಾಡು, ಅರಣ್ಯದಲ್ಲಿ ಹುಚ್ಚನಂತೆ ಅಲೆ. ಮೈ ಬಾಯಿ ದುರ್ಗಂಧ ಬರಲಿ. ಯಾರೂ ಸೇರದಿರಲಿ. ಅದೂ ಎಷ್ಟು ಸಮಯ. ಮೂರು ಸಾವಿರ ವರ್ಷ ಹೀಗೆ ಅಂಡಲೆ''**

ಊಟ ಬೇಡದವ. ಕಾಳು ಆರಿಸಿ ಉಂಡವ. ಮಗನಿಗಾಗಿ ಬೇಡಲು ಹೊರಟ.ಅದೂ ಯಾರ ಬಳಿ ಖಾಸಾ ಗೆಳೆಯನ ಹತ್ತಿರ. ಅವನು ಈಗ ರಾಜ. ಕೇಳಿದ್ದು ಒಂದು ದನ, ಅವನು ಕೊಟ್ಟಿದ್ದು ಅವಮಾನ. ಕೊಡದಿದ್ದರೆ ಚಿಂತೆ ಇಲ್ಲ, ಅವಮಾನ ಕೊಡಬಾರದು. ಮಗನ ಮೋಹಕ್ಕೆ ತಂದೆಗೆ ಸಿಕ್ಕ ಫಲ. ಎಲ್ಲಿಗೆ ಎಳೆದೊಯ್ದಿತು ನಿಷ್ಠಾವಂತ ತಪಸ್ವಿ ಕ್ಷತ್ರಿಯನಾದ. ಅಂತಿಂಥ ಕ್ಷತ್ರಿಯನಲ್ಲ. ಕೌರವ ಪಾಂಡವರಿಗೆ ಬಿಲ್ವಿದ್ಯೆಯ ಗುರು. ಬ್ರಹ್ಮಾಸ್ತ್ರದ ಉಡುಗೊರೆ ಕೊಡುವಷ್ಟು ಧೀರ. ಬ್ರಾಹ್ಮಣ ಕ್ಷತ್ರಿಯನಾದದ್ದು ಮಗನ ಆಸೆಗೆ. ಎಲ್ಲಿಗೆ ಬಂತು ಅವನ ಸ್ಥಿತಿ ಸಹಸ್ರಾರು ಯೋಧರನ್ನು ಕೊಂದ. ಕಡೆಗೂ ಅಶ್ವತ್ಥಾಮ ಸತ್ತ ಎಂಬ ಸುದ್ದಿ ಕೇಳಿಯೇ ಸತ್ತ. ಅಲ್ಲಿಯೂ ಮಗನ ಮೋಹ.

ಈ ಹಾಲುಂಡ ಮಗನಾದರೂ ಬೆಳೆದನಾ ಎಂಥಾ ದುರವಸ್ಥೆ. ಅಪ್ಪ ಬ್ರಹ್ಮಾಸ್ತ್ರ ಕೊಡುವಾಗಲೂ ಮನಸ್ಸಿಲ್ಲದೆ ಕೊಟ್ಟ. ಸರಿಯಾಗಿ ಸಮಯಕ್ಕೆ ಉಪಯೋಗ ಆಗದಂತೆ ಹೇಳಿದ. ಇಂಥ ದುಷ್ಟ ಶಾಪ ಪಡೆದು ಅರಣ್ಯ ಸೇರಿದ. ಈಗಲೂ ಅಲೆಯುತ್ತಾನೆ. ಅಲ್ಲಿ ಇಲ್ಲಿ ಊಟಕ್ಕೆ ಬಂದು ಹೋಗುತ್ತಾನೆ. ಹುಚ್ಚನಂತೆ ಇರುತ್ತಾನೆ ಎಂಬ ಪ್ರತೀತಿ ಇದೆ.

ಒಂದು ದೃಷ್ಟಿಯಿಂದ ಎಂಥಾ ತಪಸ್ವಿಯ ಕುಲ ಯಾವ ಅಧಃಪತನವನ್ನು ಕಂಡಿತು ಮೂಲ ಶೋಧಿಸಿದರೆ ಅದು ಅಮ್ಮ ಕೊಟ್ಟಿದ್ದನ್ನು ತಿನ್ನದ ತಪ್ಪಿನ ಫಲ. ದುರ್ಯೋಧನನ ಮನೆಯ ಹಾಲು ಮಾಡಿದ ಪರಿಣಾಮ. ಬಹಳ ದೊಡ್ಡ ಬ್ರಾಹ್ಮಣ ಕನಿಷ್ಠ ಕ್ಷತ್ರಿಯನಾದ ಕಥೆ. ಒಬ್ಬ ಕೌಶಿಕ ವಿಶ್ವಾಮಿತ್ರನಾದ ಆದರ್ಶಕ್ಕೆ ತದ್ವಿರುದ್ಧ. ಬಯಸಿದರೂ ದೊಡ್ಡದನ್ನು ಬಯಸಬೇಕು. ಬೇಡಿದರೆ ಪರಮವನ್ನು ಬೇಡಬೇಕು. ಹಾಗಾದಾಗ ಕೌಶಿಕ ವಿಶ್ವಾಮಿತ್ರನಾಗುತ್ತಾನೆ. ಕೇಡಿನ ಬೇಡುವಿಕೆಗೆ ಕೆಡುಕಿನ ಕಿಡಿ. ಅದೇ ಬೆಂಕಿಯಾಗಿ ಕುಲ ಸುಟ್ಟೀತು. ದ್ರೋಣಾಚಾರ್ಯರ ವಂಶವೇ ಸುಟ್ಟು ಭಸ್ಮ ಆಯಿತು. ಅಮ್ಮನನ್ನು ಕಾಡಿದ ಪಾಪಕ್ಕೆ.

ಈಗ ದುರ್ಯೋಧನನ ಅರಮನೆ ಜಾಗದಲ್ಲಿ ಹೋಟೆಲ್‌ಗಳು ಇವೆ. ಅಮ್ಮ ಮಾಡಿದ ಆಹಾರ ಬೇಡವೆನಿಸಿದೆ. ಪ್ರತೀ ಮನೆಯಲ್ಲಿ ಅಶ್ವತ್ಥಾಮರ ಕಾಟ. ತಾಯಿ ತಂದೆಯರೆಲ್ಲ ದ್ರೋಣ ಕೃಪಿಗಳೇ. ವಂಶದಿಂದ ಬಂದ ಆಹಾರ ವ್ರತ ನಿಯಮ ತೂರಿಯಾಯಿತು. ಇನ್ನೇನು ಉಳಿದದ್ದು ಕುಲನಾಶ. ಈಗ ನಾಶ ಆಗಲಿಕ್ಕೆ ಇರುವುದು ಒಂದು ದ್ರೋಣ ಕುಟುಂಬ ಅಲ್ಲ. ಮನುಕುಲವೇ ಆ ಕಡೆಗೆ ಇದೆ. ನಾಲಿಗೆ ಚಪಲಕ್ಕೆ ಇದಕ್ಕಿಂತ ದೊಡ್ಡ ಬೆಲೆ ಇನ್ನೇನು ತೆರಬೇಕು ವಿಷಾದದ ಅನುಕಂಪ ಈ ಅಶ್ವತ್ಥಾಮ ಕುಲಕ್ಕೆ.

---

# ನೀರು ಎಷ್ಟು ಕುಡಿದರೆ ಉತ್ತಮ?

• ಉದಯವಾಹಿನಿ, ಬೆಂಗಳೂರು



**ಆಯುರ್ವೇದದ ಪ್ರಕಾರ ಮೂತ್ರ ವಿಸರ್ಜನೆಯ ನಂತರ ನೀರು ಕುಡಿಯುವುದು ಒಳ್ಳೆಯದಲ್ಲ. ಆದರೆ ಮೂತ್ರ ವಿಸರ್ಜನೆಯು ಮೂತ್ರಪಿಂಡ ವೈಫಲ್ಯದ ಪ್ರಕ್ರಿಯೆಯಾಗಿದೆ. ಶೌಚಕ್ಕೆ ಹೋದ ತಕ್ಷಣನೀರು ಕುಡಿಯುವುದರಿಂದ ಮೂತ್ರಕೋಶದ ಮೇಲೆ ಒತ್ತಡ ಹೆಚ್ಚುತ್ತದೆ ಎನ್ನುತ್ತಾರೆ ತಜ್ಞರು. ಅಲ್ಲದೆ, ಮೂತ್ರಪಿಂಡಗಳ ಸಾಮಾನ್ಯ ಕಾರ್ಯನಿರ್ವಹಣೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದರು.**

ಆರೋಗ್ಯವಾಗಿರಲು, ನಾವು ಪ್ರತಿದಿನ ಸರಿಯಾದ ಪ್ರಮಾಣದ ನೀರು ಕುಡಿಯಬೇಕು ಎಂದು ವೈದ್ಯಕೀಯ ತಜ್ಞರು ನಮಗೆ ಹೇಳುತ್ತಲೇ ಇರುತ್ತಾರೆ. ದೇಹದಲ್ಲಿರುವ ಕಲ್ಮಶಗಳನ್ನ ಹೊರ ಹಾಕಲು ನೀರು ತುಂಬಾ ಪ್ರಯೋಜನಕಾರಿ. ಇದು ದೇಹವನ್ನು ಹೈಡ್ರೇಟ್ ಆಗಿಯೂ ಇಡುತ್ತದೆ. ಆದರೆ ಕುಡಿಯುವ ನೀರಿನಲ್ಲಿ ಕೆಲವು ನಿಯಮಗಳನ್ನ ಪಾಲಿಸಬೇಕು. ನಿಂತಲ್ಲೇ ಕುಡಿಯಬಾರದು, ತಿಂದ ತಕ್ಷಣ ನೀರು ಕುಡಿಯಬಾರದು, ಸುಸ್ತಾಗಿ ನೀರು ಕುಡಿಯಬಾರದು, ಓಡಿದ ತಕ್ಷಣ ನೀರು ಕುಡಿಯಬಾರದು ಎಂದು ಹೇಳಲಾಗುತ್ತದೆ. ಶೌಚಾಲಯಕ್ಕೆ ಹೋದ ನಂತ್ರ ಬಾಯಾರಿಕೆಯಾಗುತ್ತದೆ.

ಕೆಲವರು ಸ್ನಾನಗೃಹಕ್ಕೆ ಹೋಗಿ ಬಂದ ನಂತರ ನೀರು ಕುಡಿಯುತ್ತಾರೆ. ವಿಶೇಷವಾಗಿ ಕಚೇರಿಗಳಲ್ಲಿ ಕೆಲಸ ಮಾಡುವ ಉದ್ಯೋಗಿಗಳು ವಿರಾಮದ ಸಮಯದಲ್ಲಿ ವಾಶ್ ರೂಂಗೆ ಹೋಗಿ ತಕ್ಷಣ ನೀರು ತೆಗೆದುಕೊಳ್ಳುತ್ತಾರೆ. ಇದು ಹಲವರ ಅಭ್ಯಾಸವಾಗಿದ್ದು ಹೀಗೆ ನೀರು ಕುಡಿಯುವುದು ಒಳ್ಳೆಯದೇ ಎಂಬ ಅನುಮಾನಗಳಿಗೆ ತಜ್ಞರು ಕೊಟ್ಟ ಉತ್ತರ ಕೇಳಿದರೆ ಬೆಚ್ಚಿ ಬೀಳುತ್ತೀರಿ. ಮೂತ್ರ ವಿಸರ್ಜನೆ ಆದ ತಕ್ಷಣ ನೀರು ಕುಡಿಯಬಾರದು ಎನ್ನಲಾಗುತ್ತಿದೆ. ಅಲ್ಲದೇ ಶ್ವಾಸಕೋಶಕ್ಕೆ ಸಂಬಂಧಿಸಿದ ಕಾಯಿಲೆಗಳಂತಹ ಸಮಸ್ಯೆಗಳು ಎದುರಾಗುವ ಅಪಾಯವಿದೆ ಎನ್ನಲಾಗಿದೆ. ಮೂತ್ರ ವಿಸರ್ಜನೆಯ ನಂತರ ದೇಹದಲ್ಲಿನ ದ್ರವದ ಮಟ್ಟವು ಸ್ವಲ್ಪ ಕಡಿಮೆಯಾಗುತ್ತದೆ.

ಹೊಟ್ಟೆ ಉಬ್ಬುವುದು, ಹೊಟ್ಟೆಯಲ್ಲಿ ನೋವು, ಅಹಿತಕರ ಭಾವನೆ ಜೀರ್ಣಾಂಗವ್ಯೂಹದ ಮೇಲೆ ಪರಿಣಾಮ ಬೀರಬಹುದು. ಅಲ್ಲದೆ ಉರಿಯೂತ ಮತ್ತು ಹೈಪೋನಾಟ್ರಿಮಿಯಾದಂತಹ ಸಮಸ್ಯೆಗಳು ಬರುತ್ತವೆ. ಶೌಚದ ನಂತರ ಎಷ್ಟು ನೀರು ಸೇವಿಸಬೇಕು ಎಂದೂ ತಜ್ಞರು ಹೇಳಿದ್ದಾರೆ. ಶೌಚಾಲಯದ ನಂತರ ನೀವು ಸುಮಾರು 20 ನಿಮಿಷಗಳ ಗ್ಯಾಪ್ ನಂತರ ನೀರನ್ನು ಕುಡಿಯಬೇಕು ಎಂದು ತಿಳಿದುಬಂದಿದೆ. ಗ್ಯಾಪ್ ನಲ್ಲಿ ನೀರು ಕುಡಿದರೆ ದೇಹಕ್ಕೂ ನೆಮ್ಮದಿ ಸಿಗುತ್ತದೆ ಎನ್ನುತ್ತಾರೆ ತಜ್ಞರು.

---

# ಪಾಲಕ್..! ಇಂತಹ ಜನರಿಗೆ ವಿಷಕ್ಕೆ ಸಮ

• ಉದಯವಾಹಿನಿ, ಬೆಂಗಳೂರು

ಪಾಲಕ್ ಸೊಪ್ಪಿನಲ್ಲಿ ಹಲವು ಪೋಷಕಾಂಶಗಳು ಅಡಗಿವೆ. ಅದಕ್ಕೇ... ತಜ್ಞರು ಹೆಚ್ಚಾಗಿ ಪಾಲಕ್‌ನ್ನ ಸೂಪರ್ ಫುಡ್ ಎಂದು ಕರೆಯುತ್ತಾರೆ. ಇದರಲ್ಲಿರುವ ಕಬ್ಬಿಣ, ಕ್ಯಾಲ್ಸಿಯಂ, ಫೈಬರ್ ಮತ್ತು ವಿಟಮಿನ್'ಗಳು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ.



ಆದಾಗ್ಯೂ, ಪಾಲಕ್ ತಿನ್ನುವುದು ಕೆಲವು ಜನರಿಗೆ ಗಂಭೀರ ಹಾನಿಯನ್ನುಂಟು ಮಾಡುತ್ತದೆ ಎಂದು ಹೇಳಲಾಗುತ್ತದೆ, ವಾಸ್ತವವಾಗಿ, ಪಾಲಕ್ ದೇಹಕ್ಕೆ ಅಗತ್ಯವಿರುವ ಅನೇಕ ಪೋಷಕಾಂಶಗಳನ್ನ ಹೊಂದಿರುತ್ತದೆ. ಇದು ವಿಟಮಿನ್ ಎ, ವಿಟಮಿನ್ ಸಿ, ವಿಟಮಿನ್ ಕೆ. ಕ್ಯಾಲ್ಸಿಯಂ, ಮೆಗ್ನಿಸಿಯಮ್ ಮತ್ತು ಕಬ್ಬಿಣವನ್ನ ಹೆಚ್ಚಿನ ಪ್ರಮಾಣದಲ್ಲಿ ಹೊಂದಿರುತ್ತದೆ. ಇದು ಕಡಿಮೆ ಕ್ಯಾಲೋರಿಗಳನ್ನ ಹೊಂದಿರುತ್ತದೆ. ಅದಕ್ಕಾಗಿಯೇ.. ನಿಯಮಿತವಾಗಿ ಪಾಲಕ್ ತೆಗೆದುಕೊಳ್ಳಲು ಶಿಫಾರಸು ಮಾಡಲಾಗಿದೆ. ಆದರೆ, ಕೆಲವರಿಗೆ ಈ ಪಾಲಕ್ ಹಾನಿಕಾರಕ.. ಕೆಲವು ಸಮಸ್ಯೆಗಳಿಂದ ಬಳಲುತ್ತಿರುವವರು ಪಾಲಕ್ ತಿನ್ನುವುದು ಅಪಾಯಕಾರಿ ಎನ್ನುತ್ತಾರೆ ತಜ್ಞರು. ಸೊಪ್ಪಿನ ಪ್ರಯೋಜನಗಳ ಜೊತೆಗೆ ಕೆಲವು ಅಡ್ಡ ಪರಿಣಾಮಗಳನ್ನೂ ಹೊಂದಿದೆ. ಕೆಲವು ಸಮಸ್ಯೆಗಳಿಂದ ಬಳಲುತ್ತಿರುವವರು ಪಾಲಕ್ ತಿನ್ನಲೇಬಾರದು. ಇದರಿಂದ ಅವರ ಸ್ಥಿತಿ ಇನ್ನಷ್ಟು ಹದಗೆಡಬಹುದು. ಹಾಗಿದ್ರೆ, ಪಾಲಕ್ ಯಾರು ತಿನ್ನಬಾರದು. ಡಯೆಟಿಷಿಯನ್'ಗಳು ಏನು ಹೇಳುತ್ತಾರೆ.

**ಕಿಡ್ನಿ ಸ್ಟೋನ್ ರೋಗಿಗಳು**

**ಪಾಲಕ್'ನಲ್ಲಿ ಆಕ್ಸಲೇಟ್ ಅಧಿಕವಾಗಿರುತ್ತದೆ. ಇದು ಕ್ಯಾಲ್ಸಿಯಂ ಜೊತೆಗೆ ಮೂತ್ರಪಿಂಡದ ಕಲ್ಲುಗಳ ರಚನೆಯ ಸಾಧ್ಯತೆಯನ್ನ ಹೆಚ್ಚಿಸುತ್ತದೆ. ಮೂತ್ರಪಿಂಡದ ಕಲ್ಲುಗಳಿಂದ ಬಳಲುತ್ತಿರುವ ಜನರು ಪಾಲಕ್ ತಿನ್ನಬಾರದು. ಯಾಕಂದ್ರೆ ಅದು ಅವರ ಸ್ಥಿತಿಯನ್ನ ಇನ್ನಷ್ಟು ಹದಗೆಡಿಸುತ್ತದೆ.**

**ಅಧಿಕ ಯೂರಿಕ್ ಆಸಿಡ್ ಹೊಂದಿರುವ ರೋಗಿಗಳು : ಯೂರಿಕ್ ಆಸಿಡ್ ಸಮಸ್ಯೆ ಇರುವವರಿಗೆ ಪಾಲಕ್ ಹಾನಿಕಾರಕ. ಪಾಲಕ್'ನಲ್ಲಿ ಪ್ಯೂರಿನ್ ಅಧಿಕವಾಗಿದೆ. ಇದು ದೇಹದಲ್ಲಿ ಯೂರಿಕ್ ಆಮ್ಲದ ಮಟ್ಟವನ್ನ ಹೆಚ್ಚಿಸುತ್ತದೆ. ಗೌಟ್'ನಂತಹ ಸಮಸ್ಯೆಗಳಿಗೆ ಕಾರಣವಾಗುತ್ತದೆ.**

---

# ಶ್ರೀಗುರುರಾಘವೇಂದ್ರರ ಉತ್ಸವ

• ಉದಯವಾಹಿನಿ, ಬೆಂಗಳೂರು



☛ ಉದಯವಾಹಿನಿ ಚಿತ್ರ

ಜಯನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಹತ್ತಿರದಲ್ಲಿರುವ ಶಾಲಿನಿ ಮೈದಾನದಲ್ಲಿ ಶ್ರೀ ಗುರುರಾಘವೇಂದ್ರರ ಉತ್ಸವ ವೈಭವದ ರೂವಾರಿಯಾದ ಖ್ಯಾತ ಚಲನಚಿತ್ರ ನಿರ್ದೇಶಕರಾದ ಡಾ|| ಮಧುಸೂದನ್ ಹವಾಲ್ದಾರ್ , ಸಿರಿ ಕನ್ನಡ ಟಿವಿ ಚಾನೆಲ್ ಮುಖ್ಯಸ್ಥರಾದ ಶ್ರೀ ಸಂಜಯ್ ಸಿಂಧ್ಯಾ, ಮತ್ತು ಸಿ ಆರ್ ಮುರಳಿ ಇವರುಗಳ ತಂಡದಿಂದ ಶ್ರೀ ರಾಘವೇಂದ್ರರ ಉತ್ಸವದ ವಿಶೇಷ ಅತ್ಯಂತ ಸುಂದರ ವೈಭವದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ವಿಶೇಷವಾಗಿ ಮಂತ್ರಾಲಯ ಕ್ಷೇತ್ರದ ಮರು ನಿರ್ಮಾಣವನ್ನೇ ಈ ಮೈದಾನದಲ್ಲಿ ಶ್ರೀ ರಾಘವೇಂದ್ರ ಉತ್ಸವಕ್ಕಾಗಿ ಮಾಡಲಾಗಿತ್ತು. ಮುಖ್ಯಪ್ರಾಣ ದೇವರ ಗುಡಿ, ರಾಯರು ಬೃಂದಾವನ , ಸುವರ್ಣದ ಗೋಪುರ, ರಾಯರ ಜೀವನ ಚರಿತ್ರೆ, ಮತ್ತು ಮಂತ್ರಾಲಯ ಶ್ರೀಗಳ ಜೀವನ ಚರಿತ್ರೆ, ಹಾಗೂ ಶ್ರೀಗಳಿಂದ ಅನುಗ್ರಹ ಸಂದೇಶ ಗಣ್ಯರಿಗೆ ನಟ ನಟಿಯರಿಗೆ ರಾಜಕಾರಣಿಗಳಿಗೆ ಮತ್ತು ಭಕ್ತರಿಗೆ ಶ್ರೀ ರಾಘವೇಂದ್ರರ ಅನುಗ್ರಹ ಪ್ರಶಸ್ತಿಯನ್ನು ಆಯೋಜಿಸಲಾಗಿತ್ತು.



ಈ ಒಂದು ಕಾರ್ಯಕ್ರಮಕ್ಕೆ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರನ್ನು ಭವ್ಯ ಮೆರವಣಿಯೊಂದಿಗೆ ಸ್ವಾಗತಿಸಿ ತದನಂತರ ಶ್ರೀಪಾದಂಗಳವರ ಅಧ್ಯಕ್ಷತೆಯಲ್ಲಿ ಅವರ ಅಮೃತ ಹಸ್ತದಿಂದ ಈ ಮಹೋತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ರಾಯರ ಬೃಂದಾವನಕ್ಕೆ ಪುಷ್ಪಾರ್ಚನೆ ಮಹಾ ಮಂಗಳಾರತಿಯೊಂದಿಗೆ ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸಿ, ಭಕ್ತರಿಗೆ ಅನುಗ್ರಹ ಸಂದೇಶವನ್ನು ನೀಡುತ್ತಾ ಶ್ರೀ ರಾಘವೇಂದ್ರ ಸ್ವಾಮಿಗಳವರು ಪ್ರತಿಯೊಬ್ಬ ಭಕ್ತರಿಗೂ ಪೂಜ್ಯ ಗುರುಗಳು ಗುರು ರಾಯರನ್ನು ಯಾರು ಭಕ್ತಿಭಾವದಿಂದ ನಿಷ್ಕಲ್ಮಶದಿಂದ ಪ್ರಾರ್ಥಿಸುತ್ತಾರೋ ಅಂತಹ ಭಕ್ತರಿಗೆ ಶೀಘ್ರವಾಗಿ ಫಲವನ್ನು ಕೊಡುವಂತಹ ಗುರುಗಳು ನಮ್ಮ ನಿಮ್ಮ ರಾಯರು ಕಲಿಯುಗದ ಕಾಮಧೇನು ಕಲ್ಪವೃಕ್ಷ ಗುರು ರಾಘವೇಂದ್ರರು.

**ಮಂತ್ರಾಲಯದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಗಳಿಂದ ಉದ್ಘಾಟನೆ**

ಆದ್ದರಿಂದ ಪ್ರತಿಯೊಬ್ಬ ಭಕ್ತರ ಮನಸ್ಸಿಗೆ ಹತ್ತಿರವಾಗುವ ಗುರುಗಳು ರಾಘವೇಂದ್ರರು ಇಂತಹ ರಾಘವೇಂದ್ರರ ಉತ್ಸವವನ್ನು ಅತ್ಯಂತ ವೈಭವವಾಗಿ ಆಚರಿಸಿ ಮನೆಯೇ ಮಂತ್ರಾಲಯ ಮನಸೇ ದೇವಾಲಯ ಎಂಬ ಮಾತಿನಂತೆ ಮಂತ್ರಾಲಯ ಕ್ಷೇತ್ರವನ್ನು ಮರು ನಿರ್ಮಾಣವಾಗಿ ಬೆಂಗಳೂರಿನ ಮಹಾನಗರದಲ್ಲಿ ಮಾಡಲಾಗಿದ್ದು ನೋಡಿ ಬಹಳ ಸಂತೋಷವನ್ನು ವ್ಯಕ್ತಪಡಿಸುತ್ತಾ ಪಂಡಿತರಿಗೆ, ಹಿರಿಯರಿಗೆ, ಗಣ್ಯರಿಗೆ ಮತ್ತು ಕಲಾವಿದರಿಗೆ ಭಕ್ತರಿಗೂ ಅನುಗ್ರಹ ಸಂದೇಶವನ್ನು ನೀಡಿ ಫಲ ಮಂತ್ರಾಕ್ಷತೆ ಶೇಷವಸ್ತ್ರ ಕೊಟ್ಟು ಅನುಗ್ರಹಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕದ ಉಚ್ಚನ್ಯಾಯಾಧೀಶರಾದ ಶ್ರೀಯುತ ವಿ, ಶ್ರೀಶಾನಂದರವರು ಹಾಗೂ ಡಾ|| ಮಧುಸೂದನ್ ಹವಾಲ್ದಾರ್, ಸಿರಿ ಚಾನೆಲ್ ಮುಖ್ಯಸ್ಥರಾದ ಶ್ರೀಯುತ ಸಂಜಯ್ ಸಿಂದ್ಯಾ , ಆಡಿಟರ್ ಸಿ ಆರ್ ಮುರಳಿ , ಸುಬ್ಬನರಸಿಂಹ, ಸಿ ಕೆ ರಾಮಮೂರ್ತಿ, ವಿದ್ವಾನ್ ಅರಳು ಮಲ್ಲಿಗೆ ಪಾರ್ಥಸಾರಥಿ, ಡಾ|| ವ್ಯಾಸನಕೆರೆ ಪ್ರಭಂಜನಾಚಾರ್, ಡಿ ಪಿ ಅನಂತ, ಚಿತ್ರನಟರಾದ ಡಾಲಿ ಧನಂಜಯ, ಆಶಿಕಾ ರಂಗನಾಥ್, ವಿಜಯ ಕೃಷ್ಣ ಅರ್ಚನಾ ಉಡುಪ, ರಾಯಚೂರು ಶೇಷಗಿರಿದಾಸ್, ಮಂಜುಳಾ ಗುರುರಾಜ್, ಅನಂತ ಕುಲಕರ್ಣಿ, ವರದೇಂದ್ರ, ಗಂಗಾಗೇಡ್, ಆರ್. ಕೆ. ವಾದಿಂದ್ರಾಚಾರ್ , ಅಪ್ರಮೇಯ ಆಚಾರ್ ನಂದಕಿಶೋರಾಚಾರ್ , ಬಂಡಿ ಶಾಮಾಚಾರ್, ಅಗ್ನಿಹೋತ್ರಿ ವೇಣುಗೋಪಾಲಾಚಾರ್ , ಹಾಗೂ ಹಲವಾರು ಗಣ್ಯರಿಗೆ ಭಕ್ತರಿಗೆ ಫಲ ಮಂತ್ರಾಕ್ಷತೆ ಕೊಟ್ಟು ಶ್ರೀಪಾದರು ಅನುಗ್ರಹಿಸಿದರು.

**ಈ ವಿಶೇಷವಾದ ಉತ್ಸವಕ್ಕೆ ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಸಹಕಾರ ಪರಮಪೂಜ್ಯ ಶ್ರೀಪಾದಂಗಳವರ ಆಶೀರ್ವಾದ ಅನುಗ್ರಹದೊಂದಿಗೆ ಈ ಉತ್ಸವದ ಕಾರ್ಯಕ್ರಮವು ಶ್ರೀಯುತ ಡಾ|| ಮಧುಸೂದನ್ ಹವಾಲ್ದಾರ್ ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ನೆರವೇರಿತು, ಈ ಕಾರ್ಯಕ್ರಮದಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಿದ ಭಕ್ತರು ಗುರು ರಾಯರ ದರ್ಶನ ಶ್ರೀಪಾದಂಗಳವರ ಅನುಗ್ರಹವನ್ನು ಪಡೆದುಕೊಂಡು ಕೃತಾರ್ಥರಾದರು. ಈ ಸಂದರ್ಭದಲ್ಲಿ ಪ್ರತಿಯೊಬ್ಬ ಸಹಸ್ರಾರು ಭಕ್ತರಿಗೂ ಕೂಡ ಮಂತ್ರಾಲಯದ ಮಂತ್ರಾಕ್ಷತೆ ಮಂತ್ರಾಲಯದ ಪರಿಮಳ ಪ್ರಸಾದ ಸ್ವೀಕರಿಸಿ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು**

---

# ಸಿದ್ಧಾರೂಢ ಜ್ಯೋತಿಗೆ ಭವ್ಯ ಸ್ವಾಗತ

• ಉದಯವಾಹಿನಿ, ವಿಶೇಷ

ಹುಬ್ಬಳ್ಳಿಯ ಸಿದ್ಧಾರೂಢ ಮಠದ ಸಿದ್ಧಾರೂಢ ಜ್ಯೋತಿಗೆ ಬೆಂಗಳೂರು ದಕ್ಷಿಣ ತಾಲ್ಲೂಕಿನ ರಾಮೋಹಳ್ಳಿಯಲ್ಲಿ ಭವ್ಯ ಸ್ವಾಗತ ನೀಡಲಾಯಿತು. ಸಿದ್ಧಾರೂಢ ಸ್ವಾಮಿಗಳ 190ನೇ ಜಯಂತಿ, ಅವರ ಶಿಷ್ಯರಾದ ಗುರುನಾಥಾರೂಢ ಸ್ವಾಮಿಗಳ 155ನೇ ಜಯಂತಿಯ ನಿಮಿತ್ತ ಈ ಜ್ಯೋತಿರಥಯಾತ್ರೆ, ಕಳೆದ ಡಿಸೆಂಬರ್ 23 ರಿಂದ ಸಿದ್ಧಾರೂಢರ ಜನ್ಮಸ್ಥಳ ಬೀದರ್ ಜಿಲ್ಲೆಯ ಚಳಕಾಪುರದಿಂದ ಆರಂಭವಾಗಿದ್ದು ಆಂಧ್ರ ಹಾಗೂ ಮಹಾರಾಷ್ಟ್ರಗಳಲ್ಲಿ ಸಂಚರಿಸಿ ಇಂದು ಬೆಳಿಗ್ಗೆ 11 ಕ್ಕೆ ರಾಮೋಹಳ್ಳಿಯನ್ನು ತಲುಪಿತು.

ಜ್ಯೋತಿ ಆಗಮಿಸುತ್ತಲೇ ಪುಳಕಿತಗೊಂಡ ನೆರೆದ ಭಕ್ತ ಸ್ತೋಮ ಜಯ ಜಯಕಾರಗೈದರು . ಸಿದ್ಧಾರೂಢ ಮಿಷನ್ ಆಶ್ರಮದ ಅಧ್ಯಕ್ಷ ಡಾ ಆರೂಢಭಾರತೀ ಸ್ವಾಮೀಜಿಯವರ ನೇತೃತ್ವದಲ್ಲಿ ಬೇಲಿಮಠದ ಶಿವರುದ್ರ ಸ್ವಾಮೀಜಿ, ರಾಮಕೃಷ್ಣ ಯೋಗಾಶ್ರಮದ ಸ್ವಾಮಿ ಯೋಗೇಶ್ವರಾನಂದಜಿ, ಸಂಗಮಾನಂದ ಸ್ವಾಮೀಜಿ, ಇಮ್ಮಡಿ ಮಹಾಂತ ಸ್ವಾಮೀಜಿ, ಮುಮ್ಮಡಿ ಷಡಕ್ಷರ ಸ್ವಾಮೀಜಿ, ಮಾತೃಶ್ರೀ ಉಮಾಭಾರತೀ, ಸಾಧ್ವಿ ಉನ್ಮೇಷಭಾರತೀ, ಮೊದಲಾದವರ ಸಮ್ಮುಖದಲ್ಲಿ ಜ್ಯೋತಿಯನ್ನು ಸ್ವಾಗತಿಸಲಾಯಿತು.

ಸುಮಂಗಲೆಯರು ಪೂರ್ಣ ಕುಂಭಕಲಶಗಳನ್ನು, ಸಿದ್ಧಾರೂಢ ಕಥಾಮೃತ ಗ್ರಂಥಗಳನ್ನು ಹೊತ್ತುಸಾಗಿದರು. ಮಂಗಳವಾದ್ಯ ವೀರಗಾಸೆ ಸಾಂಸ್ಕೃತಿಕ ಕಲಾ ತಂಡಗಳು ಯಾತ್ರೆಯ ಸಂತಸ ಸಂಭ್ರಮಗಳನ್ನು ಇಮ್ಮಡಿ ಗೊಳಿಸಿದವು. ಶುಭಂ ಕರೋತಿ ಹಾಗೂ ಸ್ವಾಮಿ ವಿವೇಕಾನಂದ ಗುರುಕುಲದ ಮಕ್ಕಳು ಸಮವಸ್ತ್ರದಲ್ಲಿದ್ದು ಓಂಕಾರ ಧ್ವಜ ಹಿಡಿದು ವೇದ ಘೋಷ ಭಜನೆಗೈಯ್ಯುತ್ತಾ ಹೆಜ್ಜೆ ಹಾಕಿದರು. ರಥಯಾತ್ರೆಯೊಂದಿಗಿದ್ದ ಭಕ್ತರ ಸಿದ್ಧಾರೂಢರ ಭಜನೆ ಜನರನ್ನು ಭಾವುಕಗೊಳಿಸಿತು. ಭವ್ಯ ಮೆರವಣಿಗೆಯೊಂದಿಗೆ ಜ್ಯೋತಿಯನ್ನು

**ಸಿದ್ಧಾರೂಢ ಸ್ವಾಮಿಗಳ 190ನೇ ಜಯಂತಿ**



☛ ಉದಯವಾಹಿನಿ ಚಿತ್ರ



ಸಿದ್ಧಾರೂಢ ಮಿಷನ್ ಆಶ್ರಮಕ್ಕೆ ಕರೆತರಲಾಯಿತು.

ರಾಮಕೃಷ್ಣ ಯೋಗಾಶ್ರಮದ ಸ್ವಾಮಿ ಯೋಗೇಶ್ವರಾನಂದಜಿ ಮಾತನಾಡಿ ರಾಮಕೃಷ್ಣ ಪರಮಹಂಸರು , ಸಿದ್ಧಾರೂಢರು, ಶಿರಡಿ ಸಾಯಿಬಾಬಾ ಈ ಮೂವರು ಹುಟ್ಟಿದ್ದು 1836ರಲ್ಲಿ. ಈ ಮೂವರ ಸಂದೇಶವೂ ಒಂದೇ ಎಂದು ನುಡಿದರು. ಬೇಲಿಮಠದ ಶಿವರುದ್ರ ಸ್ವಾಮೀಜಿ ಮಾತನಾಡಿ ಹೊರಗಿನ ಕತ್ತಲೆಯನ್ನು ಬೆಳಕು ಕಳೆಯುವುದು. ಆದರೆ ನಮ್ಮೊಳಗಿನ ಅಜ್ಞಾನ ಕತ್ತಲೆಯನ್ನು ಹೊರಗಿನ ಬೆಳಕು ಕಳೆಯಲಾದು. ಅದನ್ನು ಜ್ಞಾನದ ಬೆಳಕು ಮಾತ್ರ ಕಳೆಯಬಲ್ಲುದು.

ಸದ್ಗುರು ಸಿದ್ಧಾರೂಢರ ಜ್ಞಾನದ ಬೆಳಕು ಜಗತ್ತಿನಾದ್ಯಂತ ಪ್ರಸರಿಸಿ ಜನರೆದೆಯ ಕಶ್ಮಲವನ್ನು ತೊಳೆದು ಹಾಕಲಿ ಎಂದು ಆಶೀರ್ವದಿಸಿದರು. ಹುಬ್ಬಳ್ಳಿ ಸಿದ್ಧಾರೂಢ ಮಠದ ಚೇರ್ಮನ್ . ಬಸವರಾಜ ಕಲ್ಯಾಣ ಶೆಟ್ಟರ್ ಮಾತನಾಡಿ ಬರುವ ಫೆಬ್ರುವರಿ 21 ರಿಂದ 27 ರವರೆಗೆ ಹುಬ್ಬಳ್ಳಿಯ ಶ್ರೀಮಠದಲ್ಲಿ ವಿಶ್ವವೇದಾಂತ ಪರಿಷತ್ ನಡೆಯಲಿದ್ದು ರಾಷ್ಟ್ರಾದ್ಯಂತ ಐದು ನೂರಕ್ಕೂ ಹೆಚ್ಚು ಸಂತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಜನ ಭಾಗವಹಿಸಬೇಕೆಂದು ಕರೆ ನೀಡಿದರು. ಖ್ಯಾತವಾಗ್ಮಿ ಚಲನಚಿತ್ರ ನಟ ಡಾ. ಚಿಕ್ಕ ಹೆಜ್ಜಾಜಿ ಮಹಾದೇವ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಶ್ರೀಮತಿ ಗೀತಾ ಶಂಕರ ಅವರ ದ್ವಾದಶ ಉಪನಿಷತ್ಪ್ರದೀಪಿಕೆ ಗ್ರಂಥವನ್ನು ಬಿಡುಗಡೆ ಮಾಡಲಾಯಿತು.

ವಿಜಯನಗರ ಶಾಸಕ ಎಂ ಕೃಷ್ಣಪ್ಪ, ಜ್ಯೋತಿ ಯಾತ್ರಾ ಸಮಿತಿಯ ಅಧ್ಯಕ್ಷ ಉದಯಕುಮಾರ್ ಡಿ ನಾಯಕ್, ಸ್ವಾಗತ ಸಮಿತಿಯ ಅಧ್ಯಕ್ಷ ಸಿ ಸಂಜಯ ಕುಮಾರ್, ಶುಭಂ ಕರೋತಿ ಗುರುಕುಲದ ಮುಖ್ಯಸ್ಥ ಪ್ರಮೋದ ಕಾಮತ್, ಗಾಯತ್ರಿನಗರ ಸಿದ್ಧಾಶ್ರಮದ ಲಕ್ಷ್ಮೀಮೂರ್ತಿ, ಸಾಹಿತಿ ಹೆಚ್ ಜಯರಾಮ್, ಡಾ. ಜಿ ಶಿವಣ್ಣ ನೂರಾರು ಭಕ್ತಾದಿಗಳು ಉಪಸ್ಥಿತರಿದ್ದರು.

**ಬಳಿಕ ನಡೆದ ಸ್ವಾಗತ ಸಮಾರಂಭದಲ್ಲಿ ಡಾ.ಆರೂಢಭಾರತೀ ಸ್ವಾಮೀಜಿ ಮಾತನಾಡಿ ಸಿದ್ಧಾರೂಢರು ಬಸವಣ್ಣ ನಂತರದ ಸಾಮಾಜಿಕ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕ್ರಾಂತಿಕಾರಿ. 15 ನೇ ಶತಮಾನದ ಕನ್ನಡದ ಪ್ರಪ್ರಥಮ ವೇದಾಂತ ಗ್ರಂಥಗಳಾದ ನಿಜಗುಣ ಶಿವಯೋಗಿಗಳ ಕೃತಿಗಳನ್ನು ಬೆಳಕಿಗೆ ತಂದವರು. ಅವರು ಹುಟ್ಟಿ ಬರದಿದ್ದಲ್ಲಿ ಸಂಸ್ಕೃತದ ವೇದಾಂತ ವಿದ್ಯೆಯನ್ನು ದ್ವಿಜರಲ್ಲದವರು ಜನಸಾಮಾನ್ಯರು ತಿಳಿಯಲು ಅಸಾಧ್ಯವಾಗುತ್ತಿತ್ತು ಎಂದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:40 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

**ವೃಷಭ** ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ಯಾವುದೇ ಹಳೆಯ ಸ್ನೇಹಿತ ಇಂದು ನಿಮ್ಮ ಬಳಿ ಹಣವನ್ನು ಕೇಳಬಹುದು.

**ಮಿಥುನ** ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ. ನೀವು ಇಂದು ಹಾಜರಾಗುವ ಉಪನ್ಯಾಸಗಳು ಮತ್ತು ವಿಚಾರಗೋಷ್ಠಿಗಳು ಬೆಳವಣಿಗೆಗೆ ಹೊಸ ವಿಚಾರಗಳನ್ನು ತರುತ್ತವೆ.

**ಕರ್ಕಾಟಕ** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

**ಸಿಂಹ** ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ನಿಮ್ಮ ಬಿಡುವಿರದ ಕೆಲಸದಿಂದ ಸ್ವಲ್ಪ ಸಮಯ ತೆಗೆದುಕೊಳ್ಳಿ.

**ಕನ್ಯಾ** ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತು ರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು.

**ತುಲಾ** ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು.

**ವೃಶ್ಚಿಕ** ನೀವು ಇಡೀ ಕುಟುಂಬಕ್ಕೆ ಏಳಿಗೆ ತರುವ ಯೋಜನೆಗಳನ್ನು ಆರಿಸಿಕೊಳ್ಳಬೇಕು. ಮೂರನೇ ವ್ಯಕ್ತಿಯ ಹಸ್ತಕ್ಷೇಪ ನೀವು ಮತ್ತು ನಿಮ್ಮ ಪ್ರೀತಿಪಾತ್ರರಲ್ಲಿ ಕಂದಕ ತರಬಹುದು.

**ಧನಸ್ಸು** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ.

**ಮಕರ** ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ. ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ.

**ಕುಂಭ** ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ.

**ಮೀನ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

## ಮಾರಕಾಸ್ತ್ರಗಳಿಂದ ಕೊಚ್ಚಿ ಮಹಿಳೆಯ ಬರ್ಬರ ಹತ್ಯೆ

• ಉದಯವಾಹಿನಿ ಹಾಸನ

ಮಾರಕಾಸ್ತ್ರಗಳಿಂದ ಕೊಚ್ಚಿ ಮಹಿಳೆಯೊಬ್ಬಳನ್ನು ಬರ್ಬರವಾಗಿ ಹತ್ಯೆಗೈದ ಘಟನೆ ಸಕಲೇಶಪುರದ ಇಬ್ಬಡಿ ಕೊಣ್ಣೂರು ಗ್ರಾಮದ ಬಳಿ ನಡೆದಿದೆ. ಕೊಲೆಯಾದ ಮಹಿಳೆಯನ್ನು ಅನಿತಾ (35) ಎಂದು ಗುರುತಿಸಲಾಗಿದೆ. ಬಾಕ್ಸ್‌ನಲ್ಲಿ ಊಟ ತುಂಬಿಕೊಂಡು ಗದ್ದೆ ಕೆಲಸಕ್ಕೆ ಮಹಿಳೆ ತೆರಳಿದ್ದಳು. ಆದರೆ ರಾತ್ರಿಯಾದರೂ ಆಕೆ ವಾಪಸ್ ಬಂದಿರಲಿಲ್ಲ. ಈ ಬಗ್ಗೆ ಮಹಿಳೆಯ ಪತಿ ಚಂದ್ರಶೇಖರ್ ಪೊಲೀಸರಿಗೆ ಮಾಹಿತಿ ನೀಡಿದ್ದ. ಬಳಿಕ ಹುಡುಕಾಟ ನಡೆಸಿದ್ದ. ಹುಡುಕಾಟ ನಡೆಸುತ್ತಿದ್ದ ವೇಳೆ ಹೊಳೆ ಸಾಲಿನಲ್ಲಿ ಅನಿತಾ ಮೃತದೇಹ ಪತ್ತೆಯಾಗಿತ್ತು. ಹನ್ನೆರಡು ವರ್ಷದ ಹಿಂದೆ ಇಬ್ಬಡಿ ಕೊಣ್ಣೂರು ಗ್ರಾಮದ ಚಂದ್ರಶೇಖರ್ ಹೆಬ್ಬಸಾಲೆ ಗ್ರಾಮದ ಅನಿತಾ ಜೊತೆ ಮದುವೆಯಾಗಿದ್ದ. ಅಕ್ರಮ ಸಂಬಂಧದ ವಿಚಾರಕ್ಕೆ ಪತ್ನಿಯನ್ನೇ ಚಂದ್ರಶೇಖರ್ ಕೊಲೆಗೈದಿರುವ ಶಂಕೆ ವ್ಯಕ್ತವಾಗಿದೆ.

## ರಿಮ್ಸ್ ಆಸ್ಪತ್ರೆಯಲ್ಲಿ ಬಾಣಂತಿ ಸಾವು

• ಉದಯವಾಹಿನಿ ರಾಯಚೂರು

ಜಿಲ್ಲೆಯಲ್ಲಿ ಬಾಣಂತಿಯರ ಸರಣಿ ಸಾವು ಮುಂದುವರೆದಿದ್ದು, ಇದೀಗ ಮತ್ತೋರ್ವ ಬಾಣಂತಿ ಸಾವನ್ನಪ್ಪಿರುವ ಘಟನೆ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ನಡೆದಿದೆ. ಮೃತ ಬಾಣಂತಿಯನ್ನು ದೇವದುರ್ಗ ತಾಲ್ಲೂಕಿನ ಹದ್ದಿನಾಳ ಗ್ರಾಮದ ಸರಸ್ವತಿ (24) ಎಂದು ಗುರುತಿಸಲಾಗಿದೆ.ಜ.2 ರಂದು ರಿಮ್ಸ್ ಆಸ್ಪತ್ರೆಯಲ್ಲಿ ಸಿಸೇರಿಯನ್ ಹೆರಿಗೆಯಾಗಿತ್ತು. ಅಧಿಕ ರಕ್ತದೊತ್ತಡ ಸಮಸ್ಯೆಯಿಂದ ಜ.5 ಸಾವನ್ನಪ್ಪಿದ್ದಾರೆ. ಸದ್ಯ ವೆಂಟಿಲೇಟರ್‌ನಲ್ಲಿ ಶಿಶುವಿಗೆ ಚಿಕಿತ್ಸೆ ಮುಂದುವರೆದಿದೆ. ನಾಲ್ಕನೇ ಮಗುವಿಗೆ ಜನ್ಮ ನೀಡಿದ್ದ ತಾಯಿ ಸರಸ್ವತಿ ಸಾವಿನಿಂದ ಕುಟುಂಬಸ್ಥರು ಕಂಗಾಲಾಗಿದ್ದಾರೆ. ಜಿಲ್ಲೆಯಲ್ಲಿ ಕಳೆದ ನಾಲ್ಕು ತಿಂಗಳಲ್ಲಿ ಒಟ್ಟು 12 ಬಾಣಂತಿಯರು ಮೃತಪಟ್ಟಿದ್ದಾರೆ.

# ಕೇಂದ್ರ ಗೃಹ ಸಚಿವ ಅಮಿತ್ ಶಾ ವಿವಾದಾತ್ಮಕ ಹೇಳಿಕೆ ನೀಡಿದ್ದು ಖಂಡನೀಯ

### ಅಂಬೇಡ್ಕರ್ ಬಗ್ಗೆ ಅಮಿತ್ ಶಾ ವಿವಾದಾತ್ಮಕ ಹೇಳಿಕೆ, ಸಚಿವ ಸಂಪುಟದಿಂದ ವಜಾಗೊಳಿಸುವಂತೆ ಆಗ್ರಹಿಸಿ ಚಿಂಚೋಳಿ ಬಂದ್ ಯಶಸ್ವಿ

• ಉದಯವಾಹಿನಿ ಚಿಂಚೋಳಿ

ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿವಾದಾತ್ಮಕ ಹೇಳಿಕೆ ನೀಡಿದ್ದು ಖಂಡನೀಯ ಇಡಿ ಭಾರತ ದೇಶದ ಬಹುಜನರ ಭಾವನೆಗಳಿಗೆ ಧಕ್ಕೆ ತಂದಿದ್ದು ತಕ್ಷಣವೇ ಅಮಿತ್ ಶಾಗೆ ಸಚಿವ ಸಂಪುಟದಿಂದ ವಜಾಗೊಳಿಸಿ ಕಾನೂನಿನ ಅಡಿಯಲ್ಲಿ ಕ್ರಮಕ್ಕೆಗೊಳ್ಳಬೇಕು ಎಂದು ದಲಿತ ಸೇನೆ ಜಿಲ್ಲಾ ಉಪಾಧ್ಯಕ್ಷ ಕಾಶಿನಾಥ ಸಿಂದೆ ಆಗ್ರಹಿಸಿದರು.

ಪಟ್ಟಣದಲ್ಲಿ ನಾಗರಿಕ ಹಿತರಕ್ಷಣಾ ಸಮಿತಿ ಮತ್ತು ದಲಿಪರ ವಿವಿಧ ಸಂಘಟನೆಗಳು, ಕನ್ನಡಪರ ಸಂಘಟ ನೆಗಳು,ವಿವಿಧ ಸಮೂದಾಯದ ಮುಖಂಡರ ನೇತೃತ್ವದಲ್ಲಿ ಅಂಬೇಡ್ಕರ್ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ ಅಮಿತ್ ಶಾ ಸಚಿವ ಸಂಪುಟದಿಂದ ವಜಾಗೊಳಿಸಿ ಅವರ ವಿರುದ್ಧ ಕ್ರಮಕ್ಕೆಗೊಳ್ಳುವಂತೆ ಆಗ್ರಹಿಸಿ ಚಿಂಚೋಳಿ ಬಂದ್ ಮಾಡಿ ಅಂಬೇಡ್ಕರ್ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ಅಮಿತಾ ಶಾ ಅವರ ಅಣುಕು ಶವಯಾತ್ರೆ ನಡೆಸಿ ಬೆಂಕಿಯಲ್ಲಿ ದಹಿಸಿ ಬೃಹತ್ ಪ್ರತಿಭಟನೆಯನ್ನು ಬೆಳಿಗ್ಗೆ 07ಗಂಟೆಯಿಂದ ಸಾಯಂಕಾಲ 4ಗಂಟೆಯವರೆಗೆ ಕೈಗೊಂಡು ತಹಸೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿಪತ್ರ ಸಲ್ಲಿಸಿ ಪ್ರತಿಭಟನಾಕಾರರು ಮಾತನಾಡಿದರು.

ಮಾರುತಿ ಗಂಜಗಿರಿ ಮಾತನಾಡಿ ಅಮಿತಾ ಶಾ ಅವರು ಉದ್ದೇಶಪೂರ್ವಕವಾಗಿ ಮಾತನಾಡಿ ಅಪಮಾನಿಸುವ ರೀತಿಯಲ್ಲಿ ಮಾತನಾಡಿ ಇಡಿ ಭಾರತ ದೇಶದ ಜನರಿಗೆ ನೊಂವುಂಟಾಗಿದೆತಕ್ಷಣವೇ ಕೇಂದ್ರ ಸರ್ಕಾರ ಅವರ ರಾಜೀನಾಮೆ ಸ್ವಿಕರಿಸಿ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು.

ಗೋಪಾಲ ರಾಂಪೂರೆ ಮಾತನಾಡಿ ಅಂಬೇಡ್ಕರ್ ದೇಶದ ಮೂಲನಿವಾಸಿಗಳ ಜೀವದ ಜೀವಾಳಾವಾಗಿದ್ದು ಸ್ವಾಭಿಮಾನದ ಸಂಕೇತವಾಗಿದ್ದಾರೆ,ಧ್ವನಿ ಇಲ್ಲದವರಿಗೆ ಧ್ವನಿನೀಡಿ ಮಹಾತ್ಮರಾಗಿದ್ದಾರೆ,ಅಧಿಕಾರ ವಂಚಿತರ ಭಾಗ್ಯವಿದಾತರಾಗಿದ್ದು,ಸಾವಿರಾರು ವರ್ಷಗಳಿಂದ ಶೋಷಣೆಗೊಳಾದ ಬಹುಜನರ ಬದುಕನ್ನು ನರಕವನ್ನಾಗಿಸಿ ವಿದ್ಯೆ ಆಸ್ತಿ ಅಂತಸ್ತುದಿಂದ ವಂಚಿತ ಅಂಧ ಭಕ್ತಿಯಲ್ಲಿ ದೇವರು ದಿಂಡಿರುಗಳ ಹೆಸರಿನಿಂದ ಗುಲಾಮರನ್ನಾಗಿ ಮಾಡಿದ ಮನುವಾದಿಗಳಿಂದ ಸಂವಿಧಾನದ ಮೂಲಕ ಭೂಮಿಯಲ್ಲಿ ಸ್ವರ್ಗ ತಂದಿಟ್ಟದ್ದು ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಎಂದರು.



ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ



**ಚಿಂಚೋಳಿ ಸಂಪೂರ್ಣ ಸ್ತಬ್ಧ**

ಬಿಎಸ್ಪಿ ಮುಖಂಡ ಗೌತಮ್ ಬೊಮ್ಮನಳ್ಳಿ ಮಾತನಾಡಿ ಸಂಸತ್ತಿನಲ್ಲಿ ಅಮಿತ್ ಶಾ ಅಂಬೇಡ್ಕರ್ ಅವಮಾನಿಸುವ ರೀತಿಯಲ್ಲಿ ಮಾತನಾಡಿದ್ದು ದೇಶದ ಶೋಷಿತ ಬಂದುಗಳ ಆಸ್ಮಿತಿಗೆ ದಕ್ಕೆತಂದು ಸಾಮಾಜಿಕ ಸಾಮರಸ್ಯಕ್ಕೆ ಬೆಂಕಿ ಹಚ್ಚಿ ದೇಶದಾದ್ಯಂತ ಜ್ವಾಲೆಗೆ ಕಾರಣನಾದ ಅಮಿತಾ ಶಾಗೆ ರಾಷ್ಟ್ರಪತಿಗಳು ಮಧ್ಯೆಪ್ರವೇಶಿಸಿ ಸಂಸದ ಸದಸ್ಯತ್ವ ರದ್ದುಗೊಳಿಸಿ ಎಸ್ಸಿ ಎಸ್ಟಿ ದೌರ್ಜನ್ಯ ತಡೆ ಕಾಯ್ದೆ 1989ರ ಅಡಿ ಮತ್ತು 2016ರ ಆಟ್ರಾಸಿಟಿ ಏಕ್ಟ್ ಕಾಯ್ದೆಯಲ್ಲಿ ಪ್ರಕರಣ ದಾಖಲಿಸಿ ಬಂಧಿಸಬೇಕು ಎಂದರು.

ಕಾಂಗ್ರೆಸ್ ಮುಖಂಡರು ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಮಾತನಾಡಿ ಅಂಬೇಡ್ಕರ್ ಅವರು 32ಡಿಗ್ರಿ ಪಡೆದಿದ್ದು,ಜಗತ್ತಿನಲ್ಲಿ ಅತಿದೊಡ್ಡ ಅವರ ಮನೆಯ ಗ್ರಾಂಥಾಲಯದಲ್ಲಿ 52ಸಾವಿರ ಪುಸ್ತಕಗಳಿದ್ದವು,ಅಂಥಹ ಮಹಾನ್ ವ್ಯಕ್ತಿ ದೇವತೆ ದೇಶಕ್ಕೆ ಸಂವಿಧಾನ ನೀಡಿದ ಅಂಬೇಡ್ಕರ್ ವಿರುದ್ಧ ಅಮಿತಾ ಶಾ ಅವಹೇಳನಕಾರಿ ಹೇಳಿಕೆ ನೀಡಿದ್ದು ಖಂಡನೀಯವಾಗಿದೆ.

ಅಂಬೇಡ್ಕರರವರು ಮಹಿಳೆಯರ ಹಕ್ಕು,ಆಸ್ತಿಯಲ್ಲಿ ಹಕ್ಕು ನೀಡುವಂತೆ ಬಿಲ್ಲುಪಾಸ್ ಮಾಡಿದಾಗ ಸಂಘ ಪರಿವಾರದವರು ಅಂಬೇಡ್ಕರ್ ಪೋಟೋಗಳು ಸುಡುತ್ತಿದರು,ಅಂಬೇಡ್ಕರರವರು ಬರೆದ ಸಂವಿಧಾನದಿಂದಲ್ಲೇ ನಾವೆಲ್ಲರೂ ಜೀವನ ಕಳೆಯುತ್ತಿದ್ದೇವೆ, ಶಾರವರು ಕೂಡ ಸಂವಿಧಾನದಿಂದಲ್ಲೆ ಸಂಸದರಾಗಿ ಆಯ್ಕೆಯಾಗಿದ್ದು ಮರೆತಿದ್ದಾರೆ,ಅಂಥವರಿಗೆ ತಕ್ಕಪಾಠ ಕಲಿಸಬೇಕು ಎಂದರು.

ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್, ಲಕ್ಷ್ಮಣ ಆವುಂಟಿ,ಶರಣುಪಾಟೀಲ,ಅಬ್ದುಲ್ ಬಾಷೀದ್,ಶರಣಬಸಪ್ಪಾ ಮಮಶೆಟ್ಟಿ, ಹಣಮಂತ ಪೂಜಾರಿ, ಗೋಪಾಲ ರಾಂಪೂರೆ, ರೇವಣಸಿದ್ದ ಅಣಕಲ್, ಪ್ರವೀಣ ಟಿಟಿ, ಅಭಿಜಿತ್ ಕೊರವಿ, ಚೇತನ ನೀರಾಳ್ಕರ್, ಆರ್.ಗಣಪತರಾವ, ಮಾರುತಿ ಗಂಜಗಿರಿ, ಮಾಣಿಕರಾವ ಗುಲಗುಂಜಿ, ಹಾಫೀಜ್ ಅಬ್ದುಲ್ ಹಮೀದ್, ಸಂತೋಷ ಗುತ್ತೇದಾರ, ಸಚಿನ ಚವ್ಹಾಣ,ಮಾತನಾಡಿದರು.

ಈ ಸಂದರ್ಭದಲ್ಲಿ ಬಸವರಾಜ ಮಾಲಿ, ಮಹೇಮೂದ್ ಪಟೇಲ, ಓಮನರಾವ ಕೊರವಿ, ಶಾಮರಾವ ಕೊರವಿ, ಪಾಂಡುರಂಗ ಲೋಡನೂರ, ಅನ್ವರ್ ಖತೀಬ್, ಸುರೇಶ ಭಂಟ್ವಾ, ವಿಶ್ವ ಬೀರನಳ್ಳಿ, ನಾಗೇಶ ಗುಣಾಜೀ, ಅಂಕಿತಾ, ಯಲ್ಲಾಲಿಂಗ, ಅಜರೊದ್ದೀನ್, ಸೈಯದ್ ಶಬ್ಬೀರ, ಬಸವರಾಜ ಸಿರಸಿ, ಗೋಪಾಲ ಪೂಜಾರಿ, ಕಾಶಿರಾಮ ತಳವಾರ, ರಾಮಶೆಟ್ಟಿ ಪವ್ವಾರ, ಅಜೀತ ಪಾಟೀಲ, ತುಕ್ಕರಾಮ ಪವ್ವಾರ, ಉಲ್ಲಾಸಕುಮಾರ, ಶ್ರೀಕಾಂತ ಜಾನಕಿ, ಜಗದೇವ ಗೌತಮ್,ಅನೀಲಕುಮಾರ ಹುಡದಳ್ಳಿ, ವಸಿಂ ಗಾರಂಪಳ್ಳಿ,ಸಾಗರ ಆನಂದಿ, ನೀಲಕಂಠ ಕೆಕೆ, ಖಲೀಲ್ ಪಟೇಲ, ಅಹೇಮದ್ ಬಾಗಬಾನ್, ರಾಘವೇಂದ್ರ ಹೂವಿನಭಾವಿ, ಲಿಂಬಾಜೀ ಚವ್ಹಾಣ, ಸುನೀಲ ತ್ರಿಪಾಠಿ, ವಿಜಯಕುಮಾರ ಘಾಟಗೆ, ಶಿವು ಕಟ್ಟಿಮನಿ, ರಾಜಶೇಖರ ಹೊಸಮನಿ, ತುಳಸಿ ರಾಮ ಪೋಳ್, ರೇವಣಸಿದ್ದ ಬೀರನಳ್ಳಿ, ಮತೀನ್ ಸೌಧಾಗಾರ, ಭಂಡಪ್ಪಾ ಯಂಗನೂರ, ಶುಕುರ್ ಪಟೇಲ,ಮಹಿಳೆಯರು ಸೇರಿದಂತೆ ಸಾವಿರಾರು ಜನಸಂಖ್ಯೆ ಇದ್ದರು.

ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಮಹೇಶ ಮೇಘಣನೋರ ನೇತೃತ್ವದಲ್ಲಿ,ಡಿವೈಎಸ್ಪಿ ಸಂಗಮನಾಥ ಹಿರೇಮಠ ಆದೇಶದಂತೆ ಸಿಪಿಐ ಕಪಿಲದೇವ ಸಮ್ಮುಖದಲ್ಲಿ ಪಿಎಸ್ಐ ಗಂಗಮ್ಮಾ ಸೇರಿದಂತೆ ಸುತ್ತಮುತ್ತಲಿನ ಠಾಣೆಯ ಪಿಎಸ್ಐ ಸಿಪಿಐ ಪೋಲಿಸ್ ಸಿಬ್ಬಂದಿ ಸೇರಿದಂತೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಪ್ರತಿಭಟನಾಕರರಿಗೆ ಸೂಕ್ತ ಬಂದೋಬಸ್ತ್ ಕೈಗೊಂಡರು.

### ಪ್ರತಿಭಟನಾಕಾರರು ಕೈಯಲ್ಲಿ ಅಂಬೇಡ್ಕರ್ ಭಾವಚಿತ್ರ ಹಿಡಿದು ಪ್ರತಿಭಟನೆ

ಚಿಂಚೋಳಿ: ಪಟ್ಟಣದ್ಯಂತ ಬೆಳಿಗ್ಗೆ 6ಗಂಟೆಯಿಂದ ಪ್ರತಿಭಟನಾಕಾರರು ಆಗಮಿಸಿ ಪ್ರತಿಯೊಂದು ವೃತ್ತದಲ್ಲಿ ಟೈರ್ ಗೆ ಬೆಂಕಿ ಹಚ್ಚಿ ಪ್ರತಿಭಟನೆ ಪ್ರಾರಂಭಿಸಿದ್ದರು,6ಗಂಟೆಯಿಂದಲ್ಲೆ ಸಂಪೂರ್ಣ ಚಿಂಚೋಳಿ ಸ್ತಬ್ದವಾಗಿ ಸಾಯಂಕಾಲ 4ಗಂಟೆಯವರೆಗೆ ಬಂದ್ ಆಗಿ ಕಾಣಿಸಿತು, ಪ್ರಯಾಣಿಕರು ಮಹಿಳೆಯರು ವೃದ್ದರು ಬೇರೆ ಬೇರೆ ಗ್ರಾಮ ನಗರಗಳಿಗೆ ತೆರಳುವ ಪ್ರಯಾಣಿಕರು ನಡೆದುಕೊಂಡು ಹೋಗುವುದು ಕಂಡುಬಂತ್ತು, ರೋಗಿಗಳಿಗೆ ಅತಿ ತುರ್ತು ಸೇವಾ ಕೇಂದ್ರಗಳಾದ ಆಸ್ಪತ್ರೆಗಳು, ಮೆಡಿಕಲ್ ಅಂಗಡಿ, ಪೆಟ್ರೋಲ್ ಬಂಕ್ ಮಾತ್ರ ಸೇವೆ ಸಲ್ಲಿಸುವುದು ಕಂಡರೆ ಉಳಿದ ಎಲ್ಲಾ ಅಂಗಡಿ ಮುಂಗಟ್ಟುಗಳು ಬಂದ್ ಮಾಡಿ ಸಂಪೂರ್ಣ ಬಂದ್ ಗೆ ಬೆಂಬಲ ಸೂಚಿಸಿದ್ದು ಕಂಡುಬಂತ್ತು ಬೃಹತ್ ಪ್ರತಿಭಟನೆ ಯಶಸ್ವಿಯಾಗಿ ಅಮಿತಾ ಶಾ ವಿರುದ್ಧ ಘೋಷಣೆ ಕೂಗಿ ಪ್ರತಿಭಟನಾಕಾರರು ಅಂಬೇಡ್ಕರ್ ಭಾವಚಿತ್ರಗಳು ಕೈಯಲ್ಲಿ ಹಿಡಿದುಕೊಂಡು ಆಕ್ರೋಶ ವ್ಯಕ್ತಪಡಿಸಿ ಅಮಿತ್ ಶಾಗೆ ರಾಜೀನಾಮೆಗೆ ಒತ್ತಾಯಿಸಿ,ಅಮಿತ್ ಶಾ ಅಣುಕು ಶವಯಾತ್ರೆ ನಡೆಸಿ ಬೆಂಕಿಯಲ್ಲಿ ದಹಿಸಿದ್ದರು.

> ಸಂಸತ್ತಿನಲ್ಲಿ ಅಮಿತ್ ಶಾ ಅಂಬೇಡ್ಕರ್ ಅವಮಾನಿಸುವ ರೀತಿಯಲ್ಲಿ ಮಾತನಾಡಿದ್ದು ದೇಶದ ಶೋಷಿತ ಬಂದುಗಳ ಆಸ್ಮಿತಿಗೆ ದಕ್ಕೆತಂದು ಸಾಮಾಜಿಕ ಸಾಮರಸ್ಯಕ್ಕೆ ಬೆಂಕಿ ಹಚ್ಚಿ ದೇಶದಾದ್ಯಂತ ಜ್ವಾಲೆಗೆ ಕಾರಣನಾದ ಅಮಿತಾ ಶಾಗೆ ರಾಷ್ಟ್ರಪತಿಗಳು ಮಧ್ಯೆಪ್ರವೇಶಿಸಿ ಸಂಸದ ಸದಸ್ಯತ್ವ ರದ್ದುಗೊಳಿಸಿ ಎಸ್ಸಿ ಎಸ್ಟಿ ದೌರ್ಜನ್ಯ ತಡೆ ಕಾಯ್ದೆ 1989ರ ಅಡಿ ಮತ್ತು 2016ರ ಆಟ್ರಾಸಿಟಿ ಏಕ್ಟ್ ಕಾಯ್ದೆಯಲ್ಲಿ ಪ್ರಕರಣ ದಾಖಲಿಸಿ ಬಂಧಿಸಬೇಕು -ಆನಂದಕುಮಾರ ಟೈಗರ್, ಅಧ್ಯಕ್ಷರು ಪುರಸಭೆ ಚಿಂಚೋಳಿ.

## ಮೂಢನಂಬಿಕೆಗೆ ಕಡಿವಾಣ ಹಾಕಿ ಮೂಲವನ್ನು ನಂಬಿ: ಬಿ.ಮೂಗಪ್ಪ

• ಉದಯವಾಹಿನಿ ಚಿತ್ರದುರ್ಗ

ತಂತ್ರಜ್ಞಾನ ಯುಗದಲ್ಲಿ ಜೀವನ ಶೈಲಿ ಬದಲಾವಣೆ ಮಾಡಿಕೊಂಡು ಮೂಢನಂಬಿಕೆಯನ್ನು ಬದಿಗೊತ್ತಿ ಮೂಲವನ್ನ ನಂಬಬೇಕೆಂದು ಬಿ. ಮೂಗಪ್ಪ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಗೊಲ್ಲರಹಟ್ಟಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಆರೋಗ್ಯ ಇಲಾಖೆಯಿಂದ ಆಯೋಜಿಸಿದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು ಹದಿಹರೆಯದ ಹೆಣ್ಣು ಮಕ್ಕಳು ಋತುಮತಿಯಾದಾಗ ಮತ್ತು ತಾಯಂದಿರು ಹೆರಿಗೆಯಾದ ಸಂದರ್ಭದಲ್ಲಿ ಮನೆಯಿಂದ ಹೊರಗಡೆ ಪ್ರತ್ಯೇಕವಾಗಿಟ್ಟು ಅವರನ್ನು ಆರೈಕೆ ಮಾಡುತ್ತಿರುವುದು ಇನ್ನೂ ಕೂಡ ಕಂಡುಬರುತ್ತಿರುವುದು ವಿಷಾದನೀಯ ಸಂಗತಿ.

ಮೈನಡುಕ ಹುಟ್ಟುವ ಚಳಿ, ಕೀಟಗಳ ಹಾವಳಿ ಹಾಗೂ ಮೊಬೈಲ್‌ಗಳ ಬಳಕೆಯಿಂದ ಹೆಣ್ಣು ಮಕ್ಕಳಿಗೆ ಅಪಾಯ ಬರುವ ಸಾಧ್ಯತೆ ಇದೆ ಜೀವನದಲ್ಲಿ ಹೆಣ್ಣು ಮಕ್ಕಳಿಗೆ ಋತುಚಕ್ರ ಇದೊಂದು ಬಂದು ಹೋಗುವ ಸಹಜಕ್ರಿಯೆ ಎಂಬುದನ್ನು ಅರಿತು ನಮ್ಮ ಮನೆಯ ಹೆಣ್ಣು ಮಕ್ಕಳನ್ನು ರಕ್ಷಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಭಕ್ತಿ ಭಾವ ಪೂಜೆ- ಪುರಸ್ಕಾರ ಬಿಡಬೇಡಿ ಆದರೆ ಹೆಣ್ಣು ಮಕ್ಕಳನ್ನು ಹೊರಗಡೆ ಇಡಬೇಡಿ ಎಂದರು ಅನಿರೀಕ್ಷಿತ ಸಂದರ್ಭದಲ್ಲಿ ಈ ಪಿಡುಗು ತೊಲಗಬೇಕಾದರೆ ಹಿರಿಯರು ಇದರ ಬಗ್ಗೆ ಚಿಂತನೆ ಮಾಡುವುದರ ಜೊತೆಗೆ ಮುಂದಿನ ಪೀಳಿಗೆ ಆರೋಗ್ಯವಂತರಾಗಲು ಉತ್ತಮ ಮಾರ್ಗದರ್ಶನ ನೀಡಿ ಎಂದರು.ಪರಿಸರ ಸ್ವಚ್ಛತೆ, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಂಡು ಪೌಷ್ಟಿಕ ಆಹಾರ ಸೇವನೆ ಮಾಡಿ, ಜಂಕ್ ಫುಡ್ ಗಳಿಗೆ ಕಡಿವಾಣ ಹಾಕಿ ಉತ್ತಮ ಆರೋಗ್ಯ ಹೊಂದಬೇಕೆಂದರು .

ಡಾಕ್ಟರ್ ಆರ್.ಸಿ.ಅಣ್ಣೇಶ್ ನೇತ್ರ ತಜ್ಞರು ಮತ್ತು ತಂಡ ವಿಶ್ವ ಬಂದು ಕಣ್ಣಿನ ಆಸ್ಪತ್ರೆ ಚಿತ್ರದುರ್ಗ ಇವರು 30 ಜನರ ಉಚಿತ ಕಣ್ಣಿನ ಆರೋಗ್ಯ ತಪಾಸಣೆ ಮಾಡಿ 25 ಜನರಿಗೆ ಕಣ್ಣಿನ ಔಷಧಿ ವಿತರಿಸಿದರು. ಹಾಗೂ ಕಣ್ಣಿನ ಪೊರೆ ಇರುವ ನಾಲ್ಕು ಜನರನ್ನು ಮೇಲ್ದರ್ಜೆ ಆಸ್ಪತ್ರೆಗೆ ರೆಫರ್ ಮಾಡಿದರು ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಪುಟ್ಟಸ್ವಾಮಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಗಂಗಮ್ಮ ಆಶಾ ಕಾರ್ಯಕರ್ತೆ ಸಿದ್ದಮ್ಮ ಇವರು 27 ಜನರಿಗೆ ಎನ್ ಸಿ ಡಿ ಕಾರ್ಯಕ್ರಮದ ತಪಾಸಣೆ ಮಾಡಿದರು. ಕಾರ್ಯಕ್ರಮದಲ್ಲಿ 60ಕ್ಕೂ ಹೆಚ್ಚು ಸಾರ್ವಜನಿಕರು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

> ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ವತಿಯಿಂದ ಹೇಮಾವತಿ ಅಮ್ಮನವರ ಕನಸು ನನಸಾಗಬೇಕಾದರೆ ಸಾರ್ವಜನಿಕ ತಾಯಂದಿರು ಆರ್ಥಿಕ ಅಭಿವೃದ್ಧಿಯ ಜೊತೆಗೆ ಜ್ಞಾನಾಭಿವೃದ್ಧಿ ಪಡೆದು ಉತ್ತಮ ಕೌಶಲ್ಯಗಳನ್ನು ಆಯ್ದುಕೊಂಡು ಆರೋಗ್ಯ ಕಾಪಾಡಿ ಕೊಳ್ಳಬೇಕೆಂದರು -ಶ್ರೀಮತಿ ಶಿವಲೀಲಾ, ಜ್ಞಾನವಿಕಾಸ ಸಮಿತಿ ಸಮನ್ವಯಾಧಿಕಾರಿ

## ಹವಾಮಾನ ವೈಪರೀತ್ಯ: ಗಗನಕ್ಕೇರಿದ ತರಕಾರಿ ಬೆಲೆ

• ಉದಯವಾಹಿನಿ ಹಾಸನ

ಹವಾಮಾನ ವೈಪರೀತ್ಯದಿಂದಾಗಿ ತರಕಾರಿ ಉತ್ಪಾದನೆಯಲ್ಲಿ ಕುಸಿತವಾಗಿದ್ದು, ಬೆಲೆ ಗಗನಕ್ಕೆ ಏರುತ್ತಿದೆ. ದಿನಬಳಕೆ ವಸ್ತುಗಳ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಗ್ರಾಹಕರು, ಅನಿವಾರ್ಯವಾಗಿ ತರಕಾರಿ ಖರೀದಿಸುವಂತಾಗಿದೆ. ವಿಪರೀತ ಚಳಿಯ ವಾತಾವರಣ ಹಾಗೂ ಚಂಡಮಾರುತದ ಕಾರಣ, ಜಿಲ್ಲೆಯಲ್ಲಿ ಬೆಳೆ ನಾಶವಾಗಿದ್ದು ತರಕಾರಿಗಳ ಉತ್ಪಾದನೆಯೂ ಕುಸಿತವಾಗಿದೆ. ಹೀಗಾಗಿ ಮಾರುಕಟ್ಟೆಗೆ ಬರುವ ಅಷ್ಟಿಷ್ಟು ತರಕಾರಿಗೆ ಎಲ್ಲಿಲ್ಲದ ಬೇಡಿಕೆ ಎದುರಾಗಿದೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ವರ್ತಕರು ವಿಪರೀತ ಬೆಲೆ ಏರಿಕೆ ಮಾಡಿದ್ದು ನಮ್ಮ ಜೇಬಿಗೆ ಕತ್ತರಿ ಬೀಳುತ್ತಿದೆ ಎಂದು ಗ್ರಾಹಕರು ದೂರುತ್ತಿದ್ದಾರೆ. ದಿನಬಳಕೆಯ ತರಕಾರಿ ಬೆಲೆ ಏರಿಕೆಯ ಬಿಸಿ ಎಲ್ಲಾ ವರ್ಗದ ಜನರಿಗೂ ತಟ್ಟಿದೆ. ಜಿಲ್ಲೆಯ ಪ್ರಮುಖ ತರಕಾರಿ ಬೆಳೆಯುವ ಹಾಸನ, ಬೇಲೂರು, ಅರಕಲಗೂಡು, ಚನ್ನರಾಯಪಟ್ಟಣ, ಅಡಗೂರು, ಹಳೇಬೀಡು,ಸಾಲಗಾಮೆ ಸುತ್ತಮುತ್ತ ವಿಪರೀತ ಮಳೆ ಹಾಗೂ ಶೀತದ ವಾತಾವರಣದಿಂದ ತರಕಾರಿ ಇಳುವರಿಯಲ್ಲಿ ಕುಂಠಿತವಾಗಿದೆ' ಎನ್ನುತ್ತಾರೆ ಸ್ಥಳೀಯ ತರಕಾರಿ ವರ್ತಕ ಮಂಜುನಾಥ್.ಮಾರುಕಟ್ಟೆಗೆ ನಿಗದಿತ ಪ್ರಮಾಣದಲ್ಲಿ ತರಕಾರಿ ವಹಿವಾಟು ಆಗದ ಕಾರಣ ವಾರದ ಸಂತೆ ಹಾಗೂ ಸ್ಥಳೀಯ ಮಾರುಕಟ್ಟೆಯಲ್ಲಿ ತರಕಾರಿ ಬೆಲೆ ಗಗನಕ್ಕೇರಿದೆ. ಕೆಲವು ವಾರಗಳ ಹಿಂದೆ 100ಗೆ 5-6 ಕೆ.ಜಿ.ಗೆ ಮಾರಾಟ ಆಗುತ್ತಿದ್ದ ಈರುಳ್ಳಿ, ಈಗ 100ಕ್ಕೆ 2 -3 ಕೆ.ಜಿ.ಗೆ ಇಳಿದಿದೆ. ಬೆಳ್ಳುಳ್ಳಿ ಬೆಲೆಯಂತೂ ವಿಪರೀತವಾಗಿದ್ದು ನಾಟಿ ಬೆಳ್ಳುಳ್ಳಿ ಕೆ.ಜಿ.ಗೆ 700- 800 ತಲುಪಿದ್ದು, ಕರಿಬೇವು, ಕೊತ್ತಂಬರಿ, ಪುದಿನಾ ಸೊಪ್ಪಿನ ಧಾರಣೆಯಲ್ಲಿ ಕೊಂಚ ಇಳಿಕೆಯಾಗಿದ್ದು, ಒಂದು ಕಟ್ಟಿಗೆ 5- 8ರವರೆಗೆ ಮಾರಾಟವಾಗುತ್ತಿದೆ.

## ಗಟಾರ ಸ್ವಚ್ಛತೆಗೆ 200 ರೂ. ಕೇಳಿದ ಪಂಚಾಯತ್ ಒಳಚರಂಡಿ ಸ್ವಚ್ಛಗೊಳಿಸುತ್ತಿದ್ದಾರೆ ವೃದ್ಧ ದಂಪತಿ

• ಉದಯವಾಹಿನಿ, ಬೆಳಗಾವಿ



ಉದಯವಾಹಿನಿ ಚಿತ್ರ

ಗ್ರಾಮ ಪಂಚಾಯತ್ ಒಳಚರಂಡಿ ಸ್ವಚ್ಛಗೊಳಿಸದ್ದಕ್ಕೆ ವೃದ್ಧ ದಂಪತಿಯೇ ಗಟಾರಕ್ಕೆ ಇಳಿದು ಸ್ವಚ್ಛಗೊಳಿಸುವ ಮೂಲಕ ಸುದ್ದಿಯಾಗಿದ್ದಾರೆ.

ರಾಯಬಾಗ ತಾಲ್ಲೂಕಿನ ಇಟನಾಳ ಗ್ರಾಮದಲ್ಲಿ ಸೊಳ್ಳೆ ಕಾಟ ವಿಪರೀತವಾಗಿದೆ ಇದರ ಜೊತೆ ಕೆಟ್ಟ ಕೊಳೆತ ವಾಸನೆ ಬರುವುದು ಈಗ ಹೆಚ್ಚಾಗಿದೆ. ಇದರಿಂದಾಗಿ ಗ್ರಾಮದ ಹಲವು ಜನರು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಗ್ರಾಮದಲ್ಲಿ ಹೆಚ್ಚಾದ ಸಾಂಕ್ರಾಮಿಕ ರೋಗಗಳ ಭೀತಿಯಿಂದ ಗ್ರಾಮಸ್ಥರು ಪಂಚಾಯತ್‌ಗೆ ಹಲವು ಬಾರಿ ಒಳಚರಂಡಿ ಸ್ವಚ್ಛಗೊಳಿಸುವಂತೆ ಮನವಿ ಮಾಡಿದ್ದರು. ಗ್ರಾಮ ಪಂಚಾಯತಿಯ ಅಧ್ಯಕ್ಷ ಹಾಗೂ ಪಿಡಿಓಗೆ ಮನವಿ ಮಾಡಿದರೂ ಕ್ಯಾರೇ ಅಂದಿಲ್ಲ. ಅಷ್ಟೇ ಅಲ್ಲದೇ ಗಟಾರಗಳ ಸ್ವಚ್ಛತೆಗಾಗಿ ಸಿಬ್ಬಂದಿಗೆ 200 ರೂ. ನೀಡಬೇಕೆಂದು ಹೇಳಿದ್ದಾರೆ. ಇದರಿಂದ ಸಿಟ್ಟಾದ ಗ್ರಾಮದ ವೃದ್ಧ ದಂಪತಿ ಲಕ್ಷ್ಮಣ ಭಜಂತ್ರಿ ಹಾಗೂ ಮಹಾದೇವಿ ಅವರು ಟ್ಟಿ, ಸಣಿಕೆ ತೆಗೆದುಕೊಂಡು ಗಟಾರ ಸ್ವಚ್ಛಗೊಳಿಸುತ್ತಿದ್ದಾರೆ.

## ಶಾಲೆಯತ್ತ ಸುಳಿಯದ 11,137 ಮಕ್ಕಳು

• ಉದಯವಾಹಿನಿ, ಕಲಬುರಗಿ

ಪ್ರಸಕ್ತ ಶೈಕ್ಷಣಿಕ ವರ್ಷ ಜಿಲ್ಲೆಯಲ್ಲಿ ಕಲಬುರಗಿ ನಗರ ಹೊರತುಪಡಿಸಿ 6ರಿಂದ 14 ವರ್ಷ ವಯಸ್ಸಿನ 11,137 ಮಕ್ಕಳು ಶಾಲೆಯಿಂದ ಹೊರಗೆ ಉಳಿದಿರುವುದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಆರ್‌ಡಿಪಿಆರ್) ನಡೆಸಿದ ಸಮೀಕ್ಷೆಯಲ್ಲಿ ತಿಳಿದುಬಂದಿದೆ.

2024-25ನೇ ಸಾಲಿನಲ್ಲಿ ಶಾಲೆಯಿಂದ ಹೊರಗೆ ಉಳಿದ ಮಕ್ಕಳನ್ನು ಗುರುತಿಸಿ, ಅವರನ್ನು ಮುಖ್ಯವಾಹಿನಿಗೆ ಕರೆತರುವ ಉದ್ದೇಶದಿಂದ ಆರ್‌ಡಿಪಿಆರ್ ಈ ವರ್ಷ ಮನೆ-ಮನೆ ಸಮೀಕ್ಷೆ ಮಾಡಿಸಿತ್ತು ಮೊಬೈಲ್ ಆ್ಯಪ್ ಮೂಲಕ ಮನೆ-ಮನೆಗೆ ತೆರಳಿ ನಡೆಸಿದ ಸಮೀಕ್ಷೆಯಲ್ಲಿ ಶಾಲೆಯ ಮುಖ ನೋಡದ ಮಕ್ಕಳ ಸಂಖ್ಯೆಯಲ್ಲಿ ಗಣನೀಯ ಏರಿಕೆ ಕಂಡುಬಂದಿದೆ.

ಆರ್‌ಡಿಪಿಆರ್ ಸಮೀಕ್ಷೆಯಲ್ಲಿ 11,137 ಮಕ್ಕಳು ಶಾಲೆಗೆ ಬಾರದವರು ಇದ್ದರೆ, ಶಾಲಾ ಶಿಕ್ಷಣ ಇಲಾಖೆಯ ಇದೇ ವರ್ಷದ ಸಮೀಕ್ಷೆಯಲ್ಲಿ 370 ಮಕ್ಕಳಿದ್ದಾರೆ.



ಉದಯವಾಹಿನಿ ಚಿತ್ರ

ಈ ಹಿಂದಿನ ವರ್ಷದಲ್ಲಿ (2023-24) 374 ಮಕ್ಕಳು ಶಾಲೆಯಿಂದ ಹೊರಗೆ ಉಳಿದಿದ್ದರು. ಈ ವರ್ಷದ ಸಮೀಕ್ಷೆಯು ಪ್ರಶ್ನಾರ್ಹವಾಗಿದೆ ಎನ್ನುತ್ತಾರೆ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು.

**ಸಮೀಕ್ಷೆ ನಡೆಸಿದ್ದು ಹೇಗೆ?:** ಗ್ರಾಮ ಪಂಚಾಯಿತಿಯು ಪ್ರತಿ 300 ಮನೆಗಳಿಗೆ ಇಬ್ಬರು ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆ ಇರುವ ಮತ್ತುಸ್ಮಾರ್ಟ್ ಫೋನ್ ಹೊಂದಿರುವ ಮಹಿಳೆಯರನ್ನು ಗುರುತಿಸಿತ್ತು.

ಸ್ಮಾರ್ಟ್ ಫೋನ್‌ಗಳಲ್ಲಿ ಆಯಪ್ ಮೂಲಕ ದತ್ತಾಂಶ ಕಲೆ ಹಾಕುವ ಬಗ್ಗೆ ಮಹಿಳೆಯರಿಗೆ ಮಾಸ್ಟರ್ ತರಬೇತಿ ಕೊಡಲಾಗಿತ್ತು.

ತಾಲ್ಲೂಕು ಪಂಚಾಯಿತಿ ಇಒ, ಸಹಾಯಕ ನಿರ್ದೇಶಕರು, ಪಿಡಿಒಗಳಿಗೂ ಆ್ಯಪ್ ಕುರಿತು ತರಬೇತಿ ನೀಡಲಾಗಿದ್ದು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮುಖ್ಯಶಿಕ್ಷಕರು ಹಾಗೂ ಸಿಆರ್‌ಪಿಗಳನ್ನೂ ತೊಡಗಿಸಿಕೊಳ್ಳಲಾಗಿತ್ತು.

> ಸಮೀಕ್ಷೆಗೆ ಆಯ್ಕೆಯಾದವರು ಮನೆ-ಮನೆಗೆ ತೆರಳಿ, ಪಡಿತರ ಚೀಟಿಯಲ್ಲಿನ ಮಕ್ಕಳ ಸಂಖ್ಯೆಯನ್ನು ಮುಂದಿಟ್ಟುಕೊಂಡು ದತ್ತಾಂಶ ಸಂಗ್ರಹಿಸಿದ್ದಾರೆ. ಶಾಲೆಗೆ ತೆರಳಿ, ನಿಖರವಾದ ಮಕ್ಕಳ ಸಂಖ್ಯೆಯನ್ನು ಪಡೆದಿಲ್ಲ. ಕೆಲವು ಮಕ್ಕಳ ಸಂಖ್ಯೆ ಎರಡೆರಡು ಬಾರಿ ನಮೂದಾಗಿದೆ' ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ಅಧಿಕಾರಿಯೊಬ್ಬರು ತಿಳಿಸಿದರು.

# ಜಿಲ್ಲೆಯ ಐವರು ರೈತರಿಗೆ ನೂತನ ಪಹಣಿ ವಿತರಣೆ

### • ಮೂರು ದಶಕದ ಸಮಸ್ಯೆ ನಿವಾರಣೆಯಾಗಿ ರೈತರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ

• ಉದಯವಾಹಿನಿ ಯಾದಗಿರಿ

ಯಾದಗಿರಿ ತಾಲ್ಲೂಕಿನ 5 ಜನ ರೈತರಿಗೆ ಸೋಮವಾರ ಹೊಸ ಹಿಸ್ಸಾ ಸರ್ವೆ ನಂಬರ್ ನ ಪಹಣಿಯನ್ನು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ವಿತರಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹೊಸ ಪಹಣಿ ವಿತರಣೆ ಕುರಿತು ಸಭೆ ನಡೆಸಿ ,ಯಾದಗಿರಿ ತಾಲ್ಲೂಕಿನ ಕಿಲ್ಲನ್ ಕೇರಾ,ಗೌಡಗೇರಾ, ಬೊಮ್ಮರಾಲ್ ದೊಡ್ಡಿ, ಬಾಲಚೇಢ ರೈತರಿಗೆ ಜಮೀನಿನ ಪ್ರತ್ಯೇಕ ಪಹಣಿ ಪತ್ರಿಕೆ, ಫಾರ್ಮ್-10, ಆಕಾರ್ ಬಂದ್, ಸ್ಕೆಚ್ ನಕಾಶೆ ವಿತರಣೆ ಮಾಡಿದರು.

ಯಾದಗಿರಿ ತಾಲ್ಲೂಕಿನ ಕಿಲ್ಲನಕೇರಾ ಗ್ರಾಮದ ಸ.ನಂ22★/★ ಒಟ್ಟು ಕ್ಷೇತ್ರ 4ಎಕರೆ,/33 ಗುಂಟೆ ಇದ್ದು-ಸದರಿ ಜಮೀನು ಮಲ್ಲಪ್ಪ ತಂದೆ ತಿಮ್ಮಪ್ಪ ಹರಿಜನರವರ ಹೆಸರಿನಲ್ಲಿ 2003ನೇ ಸಾಲಿನಲ್ಲಿ 3ಎಕರೆ ಜಮೀನು ಮಂಜೂರಾತಿಯಾಗಿದೆ.ಈ ಜಮೀನು ಸದರಿಯವರ ಹೆಸರಿನಲ್ಲಿಯೇ ಪಟ್ಟಾ ಇರುತ್ತದೆ.ಈ ಜಮೀನಿಗೆ ಫಾರಂ.ನಂ10 ಮಾಡಿ ಸ.ನಂ.22★/★2ಎಂದು ಹೊಸ ಹಿಸ್ಸಾ ಸರ್ವೆ ನಂ. ಮಾಡಿದ್ದು,ಬಾಕಿ ಉಳಿದ 1-33ಎಕರೆ/ ಗುಂಟೆ ಜಮೀನು. 22/ ★/1 ಸಾರ್ವಜನಿಕ ರುದ್ರಭೂಮಿಗಾಗಿ ಭೂ ಮಂಜೂರಾತಿಯಾಗಿದೆ.

ಗೌಡಗೇರಾ ಗ್ರಾಮದ ಸ.ನಂ171/★ /★ ರ ಒಟ್ಟು ಕ್ಷೇತ್ರ 11-05 ಎಕರೆ . ಗುಂ ಇದ್ದು ಇದರಲ್ಲಿ 4--37ಎಕರೆ, ಗುಂ ಜಮೀನು ಮಲ್ಲಪ್ಪ ತಂದೆ ಬುಗಪ್ಪ ರವರ ಹೆಸರಿನಲ್ಲಿ 1977-78ನೇ ಸಾಲಿನಲ್ಲಿ ಭೂ ಮಂಜೂರಾತಿ ಯಾಗಿರುತ್ತದೆ. ಸದರಿ ಜಮೀನು ನಾರಾಯಣ ತಂದೆ ಬೀರಪ್ಪ ಹಾಗೂ ಮಲ್ಲಯ್ಯ ಕುರುಬರು ರವರ ಜಂಟಿ ಪಟ್ಟಾ ಇದ್ದು, ಸದರಿಯವರ ಜಮೀನಿಗೆ ಫಾರಂ 10ಮಾಡಿ ಸಿ.ನಂ 171/★/ ★2ಎಂದು ಹೊಸ ಹಿಸ್ಸಾ ಸರ್ವೆ ನಂ ನೀಡಲಾಗಿದೆ.

ಗೌಡಗೇರಾ ಗ್ರಾಮದ ಸ.ನಂ 297/★ /★ ರ ಒಟ್ಟು ಕ್ಷೇತ್ರ 3-10 ಎಂ.ಗುಂ ಇದ್ದು, ಇದರಲ್ಲಿ 2-13ಎ. ಗುಂ ಜಮೀನು ಶರಣಮ್ಮ ಗಂಡ ಭದ್ರಪ್ಪ ಭೋಳಿ ಅವರು ಹೆಸರಿನಲ್ಲಿ 2003-04ರಲ್ಲಿ ಮಂಜೂರಾತಿಯಾಗಿದೆ. ಈ ಜಮೀನು ಸದರಿಯರ ಹೆಸರಿನಲ್ಲಿ ಪಟ್ಟಾ ಇದ್ದು, ಈ ಜಮೀನಿಗೆ ಫಾರಂ.ನಂ10 ಮಾಡಿ ಸಿ.ನಂ297/★ /★ 2ಎಂದು ಹೊಸ ಹಿಸ್ಸಾ ಸ.ನಂ ನೀಡಲಾಯಿತು.

ಬೊಮ್ಮರಾಲ್ ದೊಡ್ಡಿ ಗ್ರಾಮದ ಸ.ನಂ21/★ /★ ಒಟ್ಟು ಕ್ಷೇತ್ರ 1-07 ಎಂ/ ಗುಂಟೆ ಇದ್ದು,0-27 ಎಂ.ಗುಂ ಜಮೀನು ಮಗದುಂ ಅಲಿ ತಂದೆ ಖತಲಸಾಬ ರವರ ಹೆಸರಿನಲ್ಲಿ 1991-92ನೇ ಸಾಲಿನಲ್ಲಿ ಭೂ ಮಂಜೂರಾತಿ ಯಾಗಿದೆ.ಪ್ರಸ್ತುತ ಈ ಜಮೀನು ಸದರಿಯರ ಹೆಸರಿನಲ್ಲಿ ಪಟ್ಟಾ ಇದ್ದು,ಇವರಿಗೆ ಫಾರಂ 10ಮಾಡಿ ಸಿ.ನಂ.21/★/2ಎಂದು ಹೊಸ ಹಿಸ್ಸಾ ಸರ್ವೆ ನಂ ನೀಡಲಾಗಿದೆ. ಬಾಲಚೇಢ ಗ್ರಾಮದ ಸ.ನಂ.41ರ ಒಟ್ಟು ಕ್ಷೇತ್ರ 1-18ಎ/ ಗುಂಟೆ ಇದ್ದು,ಈ ಜಮೀನು ಮಲ್ಲಪ್ಪ ತಂದೆ ಹನುಮಂತ ರವರ ಹೆಸರಿನಲ್ಲಿ 1977ನೇ ಸಾಲಿನಲ್ಲಿ ಭೂ ಮಂಜೂರಾತಿ ಯಾರಗಿದೆ. ಸದರಿಯವರ ಹೆಸರಿನಲ್ಲಿ ಪಟ್ಟಾ ಇದ್ದು, ಫಾರಂ 10ಮಾಡಿ ಸಿ.ನಂ 41/★/ 2ಎಂದು ಹೊಸ ಹಿಸ್ಸಾ ಸ.ನಂ ನ ಪಹಣಿಯನ್ನು ಇಂದು ಸಚಿವರು ವಿತರಿಸಿದರು. ಇತ್ತೀಚೆಗೆ ರಾಜ್ಯ ಸರ್ಕಾರ ತನ್ನ ಆಯವ್ಯಯದಲ್ಲಿ ಘೋಷಿಸಿದಂತೆ ಕಳೆದ ನವೆಂಬರ್ 25 ರಂದು ದರಖಾಸ್ತು ಪೋಡಿ ದುರಸ್ತಿಯ ಕಾರ್ಯವಿಧಾನಗಳಲ್ಲಿ ಸರಳೀಕರಣಗೊಳಿಸಿದ ಪರಿಣಾಮ ಇಂದಿಲ್ಲಿ ರೈತರು ತಮ್ಮ ಹೆಸರಿಗೆ ಪ್ರತ್ಯೇಕ ಪಹಣಿ ಪತ್ರಿಕೆ, ಫಾರ್ಮ್-10, ಆಕಾರ್ ಬಂದ್, ಸ್ಕೆಚ್ ನಕಾಶೆ ಪಡೆಯುವ ಭಾಗ್ಯ ದೊರೆಯಿತು.

ರೈತರಿಗೆ ತಮ್ಮ ಜಮೀನಿನ ಹಕ್ಕಿನ ದಾಖಲೆಗಳು ಸಿಕ್ಕಂತಾಗಿದೆ. ಇದರಿಂದ ಮೂರು ದಶಕದ ಸಮಸ್ಯೆ ನಿವಾರಣೆಯಾಗಿ ರೈತರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ಡಿ.ಸಿ. ಡಾ.ಸುಶೀಲ.ಬಿ ಮಾತನಾಡಿ ರಾಜ್ಯ ಸರ್ಕಾರವು ದರಖಾಸ್ತು ಪೋಡಿ ವಿತರಣೆಗೆ ಸರಳೀಕರಣಗೊಳಿಸಿದ್ದರಿಂದ ಇಂದು ಈ ರೈತರಿಗೆ ಹೊಸ ಪಹಣಿ ದೊರೆಯುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ್, ಶರಣಗೌಡ ಕಂದಕೂರ,ಜಿ.ಪಂ.ಸಿಇಓ ರವೀಶ ಒರಡಿಯಾ, ತಹಸೀಲದಾರ್ ಸುರೇಶ್ ಅಂಕಲಗಿ, ಎಡಿಎಲ್ಆರ್ ವೆಂಕಟೇಶ ಸೇರಿದಂತೆ ಕಂದಾಯ, ಭೂಮಾಪನಾ ಇಲಾಖೆಯ ಸಿಬ್ಬಂದಿಗಳು ಇದ್ದರು.



ಉದಯವಾಹಿನಿ ಚಿತ್ರ

### ಸರ್ಕಾರಿ ಸೌಲಭ್ಯ ಪಡೆಯಲು ಸಹಕಾರಿಯಾಗಲಿದೆ

ಹಲವು ವರ್ಷದ ಸಮಸ್ಯೆಗೆ ಈಗಿನ ಸರ್ಕಾರ ಪರಿಹಾರ ನೀಡಿದೆ. ಇದರಿಂದ ಸಾಲ-ಸೌಲಭ್ಯ ಪಡೆಯಲು ಸಹಾಯವಾಗಲಿದೆ. ಎಲ್ಲದಕ್ಕೂ ಮಿಗಿಲಾಗಿ ನಮ್ಮ ಹೆಸರಿಗೆ ಪ್ರತ್ಯೇಕ ಪಹಣಿ, ಹಿಸ್ಸಾ ದಾಖಲೆಗಳು ಬಂದಿದು ತುಂಬಾ ಸಂತೋಷವಾಗಿದೆ ಎಂದು ರೈತರು ತಿಳಿಸಿದರು.

**ಮೂರು ದಶಕದ ಸಮಸ್ಯೆ ನಿವಾರಣೆ**

## ಸಾಹಿತಿ ನಾ.ಡಿಸೋಜ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದ ಶಾಸಕ ಬೇಳೂರು

• ಉದಯವಾಹಿನಿ, ಶಿವಮೊಗ್ಗ

ನಿನ್ನ ಅನಾರೋಗ್ಯದಿಂದ ನಿಧನರಾದಂತ ಹಿರಿಯ ಸಾಹಿತಿ ನಾ.ಡಿಸೋಜ(87) ಅವರ ಪಾರ್ಥೀವ ಶರೀರವನ್ನು ಸಾಗರಕ್ಕೆ ಮಂಗಳೂರಿನಿಂದ ತರಲಾಗಿತ್ತು. ಇಂತಹ ನಾ.ಡಿಸೋಜ ಅವರ ಪಾರ್ಥೀವ ಶರೀರದ ಅಂತಿಮ ದರ್ಶನವನ್ನು ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಪಡೆದರು.

ಶಿವಮೊಗ್ಗ ಜಿಲ್ಲೆಯ ಸಾಗರದ ನೆಹರೂ ನಗರದ ಸ್ವಗೃಹಕ್ಕೆ ನಿನ್ನ ಮಂಗಳೂರಿನ ಫಾದರ್ ಮುಲ್ಲಾ ಆಸ್ಪತ್ರೆಯಲ್ಲಿ ನಿಧನರಾದಂತ ಹಿರಿಯ ಸಾಹಿತಿ ನಾ.ಡಿಸೋಜಾ ಅವರ ಪಾರ್ಥೀವ ಶರೀರವನ್ನು ತರಲಾಗಿತ್ತು. ಇಂದು ಅವರ ಸ್ವಗೃಹಕ್ಕೆ ತೆರಳಿದ್ದಂತ ಶಾಸಕ ಗೋಪಾಲಕೃಷ್ಣ ಬೇಳೂರು ಅವರು ಅಂತಿಮ ದರ್ಶನ ಪಡೆದರು.

ಇನ್ನೂ ಅವರ ನಿವಾಸದಲ್ಲಿ ಸಾರ್ವಜನಿಕರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಆ ಬಳಿಕ ಸಾಗರದ ನಗರಸಭೆ ಆವರಣದಲ್ಲಿನ ಗಾಂಧಿ ಮೈದಾನದಲ್ಲೂ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಹಿರಿಯ ಸಾಹಿತಿ ನಾ.ಡಿಸೋಜ ಅವರ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ನಾಳೆ ಹಿರಿಯ ಸಾಹಿತಿ ನಾ.ಡಿಸೋಜ ಅವರ ಪಾರ್ಥೀವ ಶರೀರವನ್ನು ಸಕಲ ಪೊಲೀಸ್ ಗೌರವಗಳೊಂದಿಗೆ ಸಾಗರದಲ್ಲಿ ಅಂತ್ಯಕ್ರಿಯೆಯನ್ನು ನೆರವೇರಿಸಲಾಗುತ್ತಿದೆ.



ಉದಯವಾಹಿನಿ ಚಿತ್ರ

# ವ್ಯತಿರಿಕ್ತ ಹವಾಮಾನದಿಂದ 200ಕ್ಕೂ ಹೆಚ್ಚು ವಿಮಾನ ಹಾರಾಟ ರದ್ದು

## ಅಮೆರಿಕದಲ್ಲಿ ಭೀಕರ ಹಿಮಗಾಳಿ: ವಿಮಾನ ಸಂಚಾರ ರದ್ದು, ಹೆದ್ದಾರಿಗಳು ಬಂದ್, ಶಾಲೆ-ಕಚೇರಿಗಳೂ ಕ್ಲೋಸ್



**8 ಇಂಚು ಹಿಮದ ರಾಶಿ ಬೀಳುವ ಎಚ್ಚರಿಕೆ**

**ಅಮೆರಿಕ:** ಮಧ್ಯ ಅಮೆರಿಕದಲ್ಲಿ ಭೀಕರ ಶೀತಮಾರುತವಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ಅಲ್ಲಿನ ಆಡಳಿತ ವರ್ಗಕ್ಕೂ ಇದನ್ನು ಎದುರಿಸುವುದು ಸವಾಲಾಗಿ ಹೋಗಿದೆ. ಪ್ರಮುಖ ರಸ್ತೆಗಳೇ ಹಿಮದಲ್ಲಿ ಮುಚ್ಚಿ ಹೋಗುತ್ತಿವೆ. ಇಂಡಿಯಾನಾದ ಹಲವು ಭಾಗ, ಪಶ್ಚಿಮ ನೆಬ್ರಾಸ್ಕ, ಸಂಪೂರ್ಣ ಕನ್ಸಾಸ್ ಹಿಮದಿಂದ ಆವೃತವಾಗಿವೆ.

ಸಾಮಾನ್ಯವಾಗಿ ಉತ್ತರ ಧ್ರುವದ ಸುತ್ತ ಸುತ್ತುವ ಅತಿ-ಶೀತ ಗಾಳಿಯ ಧ್ರುವೀಯ ಸುಳಿಯು ದಕ್ಷಿಣಕ್ಕೆ ವ್ಯಾಪಿಸುತ್ತಿರುವ ಹಿನ್ನೆಲೆ ಅಮೆರಿಕ, ಯೂರೋಪ್, ಏಷ್ಯಾ ಭಾಗದಲ್ಲಿ ಈ ಬಾರಿ ಹೆಚ್ಚು ಚಳಿಗೆ ಕಾರಣವಾಗಿದೆ.

**ದಶಕದ ದಾಖಲೆಯ ಹಿಮಪಾತ:** ಮಂಜುಗಡ್ಡೆ ಹಾಗೂ ಹಿಮದಿಂದ ಬಹುತೇಕ ರಸ್ತೆಗಳೇ ಮುಚ್ಚಿ ಹೋಗಿದ್ದು, ಕೆಲ ಭಾಗಗಳಲ್ಲಿ ದಶಕದ ದಾಖಲೆಯ ಹಿಮಪಾತವಾಗಿದೆ. ಇನ್ನು ಹಲವು ಕಡೆ ಹಿಮಪಾತದ ಮಧ್ಯೆ ಸಿಲುಕಿದ ವಾಹನ ಸವಾರರನ್ನು ರಕ್ಷಿಸಲು ದೇಶದ ಭದ್ರತಾ ಸಿಬ್ಬಂದಿಗಳನ್ನು ಸರ್ಕಾರ ನೇಮಿಸಿದೆ. ವ್ಯತಿರಿಕ್ತ ಹವಾಮಾನದಿಂದ 200 ಕ್ಕೂ ಹೆಚ್ಚು ವಿಮಾನ ಹಾರಾಟ ರದ್ದಾಗಿವೆ.

ಹವಾಮಾನ ಇಲಾಖೆಯು ಕನ್ಸಾಸ್ ಹಾಗೂ ಮಿಸೌರಿಗೆ ಚಳಿಗಾಲದ ಶೀತಮಾರುಗಳ ಎಚ್ಚರಿಕೆ ನೀಡಿದ್ದು, ಕನಿಷ್ಠ 8 ಇಂಚು ಹಿಮದ ರಾಶಿ ಬೀಳುವ ಎಚ್ಚರಿಕೆ ನೀಡಿದೆ. ನ್ಯೂ ಜೆರ್ಸಿಗೆ ಮಂಗಳವಾರದ ಮುಂಜಾನೆ ವರೆಗೂ ಈ ಅಲರ್ಟ್ ನೀಡಲಾಗಿದೆ.

### ಮುಂಜಾನೆವರೆಗೂ ಅಲರ್ಟ್

ಅಮೆರಿಕದ ಕೆಲವು ಕಡೆ ದಶಕದಲ್ಲೇ ದಾಖಲೆಯ ಚಳಿ ಉಂಟಾಗುತ್ತಿದ್ದು, ಹಿಮಪಾತವಾಗುತ್ತಿದೆ. ವ್ಯತಿರಿಕ್ತ ಹವಾಮಾನದಿಂದ 200 ಕ್ಕೂ ಹೆಚ್ಚು ವಿಮಾನ ಹಾರಾಟ ರದ್ದಾಗಿವೆ. ಹವಾಮಾನ ಇಲಾಖೆಯು ಕನ್ಸಾಸ್ ಹಾಗೂ ಮಿಸೌರಿಗೆ ಚಳಿಗಾಲದ ಶೀತಮಾರುಗಳ ಎಚ್ಚರಿಕೆ ನೀಡಿದ್ದು, ಕನಿಷ್ಠ 8 ಇಂಚು ಹಿಮದ ರಾಶಿ ಬೀಳುವ ಎಚ್ಚರಿಕೆ ನೀಡಿದೆ. ಇನ್ನು ನ್ಯೂ ಜೆರ್ಸಿಗೆ ಮಂಗಳವಾರದ ಮುಂಜಾನೆವರೆಗೂ ಈ ಅಲರ್ಟ್ ನೀಡಲಾಗಿದೆ.

- ಅಮೆರಿಕ ಹವಮಾನ ಸ್ಥಿತಿಯ ಸವಾಲು ಎದುರಿಸುತ್ತಿದ್ದು, ಭೀಕರ ಚಳಿ ಜನರನ್ನು ಕಂಗೆಡಿಸಿದೆ.
- 200 ಕ್ಕೂ ಹೆಚ್ಚು ವಿಮಾನಗಳು ರದ್ದಾಗಿವೆ.
- ಕೆಂಟುಕಿ ಗವರ್ನರ್ ಆಂಡಿ ಬೆಶಿಯರ್ ತುರ್ತು ಪರಿಸ್ಥಿತಿಯನ್ನು ಘೋಷಣೆ ಮಾಡಿದ್ದು, ಸೋಮವಾರ ಎಲ್ಲಾ ಕಚೇರಿಗಳನ್ನು ಬಂದ್ ಮಾಡ ಲಾಗಿದೆ.

ಕೆಲವು ಕಡೆ ದಶಕದ ಗರಿಷ್ಠ ಹಿಮಪಾತ ದಾಖಲಾಗಿದೆ.

ಕೆಂಟುಕಿ ಗವರ್ನರ್ ಆಂಡಿ ಬೆಶಿಯರ್ ರ ತುರ್ತು ಪರಿಸ್ಥಿತಿಯನ್ನು ಘೋಷಣೆ ಮಾಡಿದ್ದು, ಸೋಮವಾರ ಎಲ್ಲಾ ಕಚೇರಿಗಳನ್ನು ಬಂದ್ ಮಾಡಲಾಗಿದೆ. ವರ್ಜೀನಿಯಾ, ಇಂಡಿಯಾನ, ಕನ್ಸಾಸ್, ಮಿಸೌರಿ ಕೆಂಟುಕಿಯಲ್ಲಿ ನೂರಾರು ಕಾರು ಅಪಘಾತಗಳಾಗಿವೆ. ಹೈವೇಗಳು ಬಂದ್ ಆಗಿವೆ.

ಇಂಡಿಯಾನ, ಮೇರಿಲ್ಯಾಂಡ್ , ವರ್ಜೀನಿಯಾ, ಕೆಂಟುಕಿಯ ಜಿಲ್ಲೆಗಳ ಒಂದು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಶಾಲೆಗಳಲ್ಲಿ ತರಗತಿಗಳು,ಇತರ ಕಾರ್ಯಕ್ರಮಗಳೂ ಕೂಡಾ ರದ್ದಾಗಿವೆ. ಅಮೆರಿಕದ ಜನರನ್ನು ಚಳಿ ತತ್ತರಿಸುವಂತೆ ಮಾಡಿದೆ. ಸಂಚಾರಕ್ಕೆ ಮುಕ್ತ ಮಾಡಲು ಸರ್ಕಾರ ಹರಸಾಹಸ ಪಡುತ್ತಿದೆ. ದೊಡ್ಡ ದೊಡ್ಡ ವಾಹನಗಳ ಮೂಲಕ ಹಿಮಪಾತವನ್ನು ಸರಿಸುವ ಕೆಲಸ ಮಾಡುತ್ತಿದೆ.

ಇಲ್ಲಿನ ಚಳಿ ಮೈನಸ್ ಡಿಗ್ರಿಯಲ್ಲಿದೆ. ಅಮೆರಿಕದ ಹಲವು ಪ್ರದೇಶಗಳು , ವಾಹನಗಳು, ರಸ್ತೆ, ಮನೆಗಳ ಮೇಲೆ ಹಿಮರಾಶಿಯೇ ಆವರಿಸಿದ್ದು ಜನ ಹೊರ ಬರಲಾಗದೆ ಪರದಾಡುತ್ತಿದ್ದಾರೆ. ಉತ್ತರ ಧ್ರುವದಿಂದ ಸುಂಟರಗಾಳಿಯಂತೆ ಬೀಸುವ ಕುಳಿರ್ಗಾಳಿಯು ಸಾವಿರಾರು ಕಿ.ಮೀ ವರೆಗೆ ವ್ಯಾಪಿಸಿ ಈ ರೀತಿ ಶೀತ ಚಂಡಮಾರುತವಾಗಿ ಅಮೆರಿಕಕ್ಕೆ ಅಪ್ಪಳಿಸಿದೆ. ಹೀಗಾಗಿ ಜನ ಈ ಭೀಕರ ಚಳಿಗೆ ತತ್ತರಿಸಿದ್ದಾರೆ.

# ಭಾರತ ವಿರೋಧಿ ಟ್ರುಡೊ ರಾಜೀನಾಮೆ..?



**ಒಟ್ಟಾವಾ:** ಪಕ್ಷದ ಆಂತರಿಕ ಭಿನ್ನಾಭಿಪ್ರಾಯ ಮತ್ತು ಕಡಿಮೆ ಸಾರ್ವಜನಿಕ ಅಭಿಪ್ರಾಯಗಳ ನಡುವೆ ಭಾರತದ ಕಡು ವಿರೋಧಿ ಎಂದು ಗುರುತಿಸಿಕೊಂಡಿರುವ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರು ಈ ವಾರ ಲಿಬರಲ್ ಪಕ್ಷದ ನಾಯಕ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರೀಕ್ಷೆಯಿದೆ. 2015 ರಿಂದ ಕೆನಡಾದ ಪ್ರಧಾನ ಮಂತ್ರಿಯಾಗಿರುವ ಟ್ರುಡೊ ಅವರು ಯಾವಾಗ ಕೆಳಗಿಳಿಯುತ್ತಾರೆ ಎಂಬುದು ಸ್ಪಷ್ಟವಾಗಿಲ್ಲ ಎಂದು ಮೂಲಗಳನ್ನು ಉಲ್ಲೇಖಿಸಿ ಗ್ಲೋಬ್ ಮತ್ತು ಮೇಲ್ ಪತ್ರಿಕೆ ಹೇಳಿದೆ,ಆದರೆ ಬುಧವಾರದ ರಾಷ್ಟ್ರೀಯ ಕಾಕಸ್ ಸಭೆಯ ಸಂದರ್ಭದಲ್ಲಿ ಅವರು ರಾಜೀನಾಮೆ ನೀಡುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

ಟ್ರುಡೊ ಅವರನ್ನು ನಾಯಕನನ್ನಾಗಿ ಮಾಡಲು ಲಿಬರಲ್ ಪಕ್ಷದ ರಾಷ್ಟ್ರೀಯ ಕಾರ್ಯಕಾರಿಣಿಯು ಏನು ಮಾಡಲು ಯೋಜಿಸುತ್ತಿದೆ ಎಂಬುದರ ಕುರಿತು ಅವರು ಖಚಿತವಾಗಿಲ್ಲ ಎಂದು ಮೂಲಗಳು ತಿಳಿಸಿವೆ.

ಅವರು ತಕ್ಷಣವೇ ನಿರ್ಗಮಿಸುತ್ತಾರೆಯೇ, ಹೊಸ ನಾಯಕನನ್ನು ಆಯ್ಕೆ ಮಾಡುವವರೆಗೆ ಪ್ರಧಾ ನಿಯಾಗಿ ಉಳಿಯುತ್ತಾರೆಯೇ ಎಂಬುದು ಸ್ಪಷ್ಟ ವಾಗಿಲ್ಲ ಎಂದು ಮೂಲಗಳು ಹೇಳಿವೆ.

ನಾಯಕತ್ವದ ವಿಷ ಯಗಳ ಬಗ್ಗೆ ನಿರ್ಧರಿಸುವ ಲಿಬರಲ್ ಪಕ್ಷದ ರಾಷ್ಟ್ರೀಯ ಕಾರ್ಯಕಾರಿಣಿಯು ಈ ವಾರ ಸಭೆ ನಡೆಸಲು ಯೋಜಿ ಸಿದೆ, ಬಹುಶಃ ಕಾಕಸ್ ಅಧಿವೇಶನದ ನಂತರ ಅದು ನಡೆಯಲಿದೆ.

### ಪಕ್ಷಕ್ಕೆ ಎರಡು ಆಯ್ಕೆಗಳಿವೆ

ರಾಷ್ಟ್ರೀಯ ಸಭೆಯ ಶಿಫಾರಸಿನ ಮೇರೆಗೆ ಹಂಗಾಮಿ ನಾಯಕನನ್ನು ನೇಮಿಸುವುದು ಅಥವಾ ಸಂಕ್ಷಿಪ್ತ ನಾಯಕತ್ವ ಸ್ಪರ್ಧೆಯನ್ನು ನಡೆಸುವುದು. ನಾಯಕತ್ವದ ಸ್ಪರ್ಧೆಯು ಗವನರ್ರ-ಜನರಲ್ ಮೇರಿ ಸೈಮನ್ ಸಂಸತ್ತನ್ನು ಮುಂದೂಡುವಂತೆ ಪ್ರಧಾನಿ ವಿನಂತಿಸಬೇಕಾಗುತ್ತದೆ, ಇದು ಸಾಂವಿಧಾನಿಕ ತಜ್ಞರು ಹೇಳುವಂತೆ ಖಾತರಿಯಿಲ್ಲ ಎಂದು ಪತ್ರಿಕೆ ಹೇಳಿದೆ.

# ಅಹಮದಾಬಾದ್‌ನಲ್ಲಿ 2 ತಿಂಗಳ ಮಗುವಿನಲ್ಲಿ ಸೋಂಕು ಪತ್ತೆ



**ಅಹಮದಾಬಾದ್:** ಗುಜರಾತ್‌ನ ಅಹಮದಾಬಾದ್‌ನ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ 2 ತಿಂಗಳ ಮಗುವಿನಲ್ಲಿ ಹ್ಯೂಮನ್ ಮೆಟಾನ್ಯೂಮೊವೈರಸ್ ಸೋಂಕು ಪತ್ತೆಯಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ. ರಾಜಸ್ಥಾನದ ಡುಂಗರ್‌ಪುರ ಮೂಲದ ಈ ಮಗು ಶ್ವಾಸಕೋಶ ಸೋಂಕಿನಿಂದ ಬಳಲುತ್ತಿತ್ತು. ಅಹಮದಾಬಾದ್‌ನ ಚಾಂದ್‌ಖೇಡಾ ಪ್ರದೇಶದ ಆಸ್ಪತ್ರೆಯೊಂದರಲ್ಲಿ ಡಿ. 24ರಂದು ಚಿಕಿತ್ಸೆಗೆ ಈ ಮಗುವನ್ನು ದಾಖಲಿಸಲಾಗಿತ್ತು.

ತಪಾಸಣೆ ನಂತರ ಮಗುವಿನಲ್ಲಿ ಎಚ್‌ಎಂಪಿವಿ ಇರುವುದು ಪತ್ತೆಯಾಗಿತ್ತು ಎಂದು ಮಹಾನಗರ ಪಾಲಿಕೆಯ ವೈದ್ಯಕೀಯ ಅಧಿಕಾರಿ ಭವಾನಿ ಸೋಲಂಕಿ ತಿಳಿಸಿದ್ದಾರೆ. ಸೋಂಕು ಇರುವುದು ಡಿ. 26ರಂದೇ ಪತ್ತೆಯಾಗಿದೆ. ಆದರೆ ಖಾಸಗಿ ಆಸ್ಪತ್ರೆಯ ವಿಳಂಬದಿಂದಾಗಿ ಇಂದು ವರದಿ ಕೈಸೇರಿದೆ. ಸೋಂಕಿತ ಮಗುವನ್ನು ಪ್ರತ್ಯೇಕ ಕೊಠಡಿಯಲ್ಲಿ ಇರಿಸಲಾಗಿದೆ.

ಇದಕ್ಕೂ ಮೊದಲು ಮಗುವನ್ನು ವೆಂಟಿಲೇಟರ್‌ನಲ್ಲಿ ಇಡಲಾಗಿತ್ತು. ಸದ್ಯ ಮಗುವಿನ ಆರೋಗ್ಯ ಸ್ಥಿರವಾಗಿದೆ' ಎಂದಿದ್ದಾರೆ. ಇದಕ್ಕೂ ಮೊದಲು ಎಚ್‌ಎಂಪಿವಿ ಸೋಂ ಕಿನ ಎರಡು ಪ್ರಕರಣಗಳು ಕರ್ನಾಟಕದಲ್ಲಿ ಪತ್ತೆಯಾಗಿದ್ದವು.

ಎಚ್‌ಎಂಪಿವಿ ಈಗಾಗಲೇ ಜಗತ್ತಿನ ವಿವಿಧ ರಾಷ್ಟ್ರಗಳಲ್ಲಿ ಇದೆ. ಹೀಗೆ ಶ್ವಾಸಕೋಶ ಸೋಂಕು ಸಂಬಂಧಿತ ಸಮಸ್ಯೆ ಭಾರತದಲ್ಲೂ ಪತ್ತೆಯಾಗಿದೆ. ಚೀನಾದಲ್ಲಿನ ಸದ್ಯದ ಪರಿಸ್ಥಿತಿ, ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿಶ್ವ ಆರೋಗ್ಯ ಸಂಸ್ಥೆ ಕಾಲ ಕಾಲಕ್ಕೆ ಮಾಹಿತಿ ನೀಡುತ್ತಿದೆ. ಚೀನಾದಲ್ಲಿ ಕಳೆದ ಕೆಲ ವಾರಗಳಿಂದ ಉಲ್ಬಣಗೊಳ್ಳುತ್ತಿರುವ ಉಸಿರಾಟ ಸಂಬಂಧಿತ ಆರೋಗ್ಯ ಸಮಸ್ಯೆಗೆ ಸಂಬಂಧಿಸಿದಂತೆ ಭಾರತದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ಆರೋಗ್ಯ ಸೇವೆಗಳ ಮಹಾ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಜಂಟಿ ನಿರ್ವಹಣಾ ಸಮೂಹವು ಶನಿವಾರ ಸಭೆ ನಡೆಸಿತ್ತು.

### ಎಚ್‌ಎಂಪಿ ವೈರಾಣು ಸೋಂಕು

ವ್ಯಾಪಕವಾಗಿ ಹರಡ ಬಹುದಾದ ರೋಗಕಾರಕಗಳು, ತೀವ್ರವಾದ ಉಸಿರಾಟದ ಕಾಯಿಲೆ ದೇಶ ದಲ್ಲಿ ಪತ್ತೆಯಾಗಿಲ್ಲ ಎಂದು ಐಸಿಎಂಆರ್ ಮಾಹಿತಿ ನೀಡಿದೆ. ಸದ್ಯ ಪತ್ತೆಯಾಗಿರುವ ಎಚ್‌ಎಂಪಿ ವೈರಾಣು ಸೋಂಕಿಗೆ ಸಂಬಂಧಿಸಿದಂತೆ ಎಲ್ಲಾ ಆಯಾಮಗಳಿಂದಲೂ ನಿಗಾ ವಹಿಸಲಾಗಿದೆ.

# ಗುಜರಾತಿನಲ್ಲೂ ಎಚ್‌ಎಂಪಿ ಸೋಂಕು ಪತ್ತೆ



**ಅಹಮದಾಬಾದ್:** ಕರ್ನಾಟಕದಲ್ಲಿ ಇಬ್ಬರು ಮಕ್ಕಳಿಗೆ ಎಚ್‌ಎಂಪಿ ವೈರಸ್ ಕಾಣಿಸಿಕೊಂಡಿರುವ ಬೆನ್ನಲ್ಲೇ ಗುಜರಾತ್‌ನಲ್ಲೂ ಎರಡು ತಿಂಗಳ ಮಗುವಿನಲ್ಲೂ ಪತ್ತೆಯಾಗಿದೆ. ಅಹಮದಾಬಾದ್‌ನಲ್ಲಿ ದಾಖಲಾಗಿದ್ದ ಎರಡು ತಿಂಗಳ ಮಗುವಿನಲ್ಲಿ ಎಚ್‌ಎಂಪಿವಿ ಕಾಣಿಸಿಕೊಂಡಿರುವುದನ್ನು ಐಸಿಎಂಆರ್ ದೃಢ ಪಡಿಸಿದೆ. ಸದ್ಯ ಮಗುವಿನ ಆರೋಗ್ಯ ಸ್ಥಿತಿ ಸ್ಥಿರ ವಾಗಿದ್ದು, ಯಾವುದೇ ಆತಂಕ ಬೇಡ ಎಂದು ವೈದ್ಯರು ಸ್ಪಷ್ಟಪಡಿಸಿದ್ದಾರೆ.

ಮಗುವಿಗೆ ಚೀನಾ ಮಾದರಿಯ ಸೋಂಕು ಕಾಣಿಸಿಕೊಂಡ ಬೆನ್ನಲ್ಲೇ ಮುಖ್ಯಮಂತ್ರಿ ಭುಪೇಂದ್ರ ಪಟೇಲ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದ್ದಾರೆ. ಗುಜರಾತ್‌ನಲ್ಲೂ ಅಲ್ಲಿನ ಸರ್ಕಾರ ಮುಂಜಾಗ್ರತಾ ಕ್ರಮವಾಗಿ ಸೋಂಕು ಒಬ್ಬರಿಂದ ಮತ್ತೊಬ್ಬರಿಗೆ ಹರಡದಂತೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು ಆರೋಗ್ಯದ ಹಿತದೃಷ್ಟಿಯಿಂದ ಸಾರ್ವಜನಿಕರು ಇದನ್ನು ಉಲ್ಲಂಘಿಸಬಾರದು ಎಂದು ಮನವಿ ಮಾಡಿದೆ.

ಮಗುವಿಗೆ ಚೀನಾ ಮಾದರಿಯ ಸೋಂಕು ಕಾಣಿಸಿಕೊಂಡಿರುವುದರಿಂದ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು. ಕೇಂದ್ರ ಸರ್ಕಾರದ ಸೂಚನೆಯಂತೆ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ. ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಐಸಿಯು ಹಾಸಿಗೆಗಳು, ಔಷಧಗಳು ಸಂಗ್ರಹಣೆ ಮಾಡಿಕೊಳ್ಳಲಾಗಿದೆ. ಐಸಿಎಂಆರ್ ಹೊರತುಪಡಿಸಿ ಬೇರೆ ಯಾವುದೇ ಮಾಹಿತಿಯನ್ನು ನಂಬಬಾರದು.

ವಿಶೇಷವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ವದಂತಿಗಳಿಗೆ ಕಿವಿಗೊಡದಂತೆ ಮುಖ್ಯಮಂತ್ರಿ ಭುಪೇಂದ್ರ ಪಟೇಲ್ ಮನವಿ ಮಾಡಿದ್ದಾರೆ.

ನಾಲ್ಕು ದಿನಗಳ ಹಿಂದೆ ಜ್ವರ ಕಾಣಿಸಿಕೊಂಡ ಹಿನ್ನಲೆಯಲ್ಲಿ ಮಗುವನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಭಾನುವಾರ ಖಾಸಗಿ ಪ್ರಯೋಗಾಲಯಕ್ಕೆ ರಕ್ತಪರೀಕ್ಷೆಯನ್ನು ಕಳುಹಿಸಿಕೊಡಲಾಗಿತ್ತು. ಸೋಮವಾರ ಪ್ರಯೋಗಾಲಯದ ವರದಿಯಲ್ಲಿ ಎಚ್‌ಎಂಪಿವಿ ಇರುವುದು ದೃಢಪಟ್ಟಿದೆ.

# ಪ್ರಮುಖ ಆರೋಪಿ ಸುರೇಶ್ ಚಂದ್ರಕರ್ ಬಂಧನ



**ರಾಯ್‌ಪುರ:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಪತ್ರಕರ್ತನ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಗುತ್ತಿಗೆದಾರ ಸುರೇಶ್ ಚಂದ್ರಕರ್‌ನನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಹೈದರಾಬಾದ್‌ನಲ್ಲಿ ಬಂಧಿಸಿದೆ.

ಪತ್ರಕರ್ತ ಮುಖೇಶ್ ಚಂದ್ರಕರ್ ಹತ್ಯೆ ಪ್ರಕರಣ ಕಳೆದ ಜನವರಿ 3ರಂದು ಬೆಳಕಿಗೆ ಬಂದಾಗಿನಿಂದ ತಲೆಮರೆಸಿಕೊಂಡಿದ್ದ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪತ್ರಕರ್ತ ಮುಖೇಶ್ ಚಂದ್ರಕರ್ (33) ಕಳೆದ ಜ.1 ರಂದು ನಾಪತ್ತೆಯಾಗಿದ್ದರು ಹುಡುಕಾಟದ ನಂತರ ಅವರ ಶವ ಜ.3 ರಂದು ಬಿಜಾಪುರ ಪಟ್ಟಣದ ಚಟ್ಟನ್‌ಪಾರಾ ಬಸ್ತಿಯಲ್ಲಿ ಸುರೇಶ್ ಚಂದ್ರಕರ್ ಒಡೆತನದ ಶೆಡ್‌ನ ಸೆಪ್ಟಿಕ್ ಟ್ಯಾಂಕ್‌ನಲ್ಲಿ ಪತ್ತೆಯಾಗಿತ್ತು.

ಕಳೆದ ಡಿಸೆಂಬರ್ 25 ರಂದು ಎನ್‌ಡಿಟಿವಿಯಲ್ಲಿ ಬಿಜಾಪುರದ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎನ್ನಲಾದ ಸುದ್ದಿ ವರದಿಯೊಂದು ಮುಖೇಶ್ ಚಂದ್ರಕರ್ ಹತ್ಯೆಯ ಹಿಂದಿನ ಉದ್ದೇಶ ಎಂದು ಹೇಳಲಾಗುತ್ತಿದೆ. ಛತ್ತೀಸ್‌ಗಢದ ಉಪಮುಖ್ಯಮಂತ್ರಿ ವಿಜಯ್ ಶರ್ಮಾ ಅವರು ಸುರೇಶ್ ಚಂದ್ರಕರ್ ಕಾಂಗ್ರೆಸ್ ನಾಯಕ ಎಂದು ಹೇಳಿಕೊಂಡಿದ್ದರು. ಆದರೆ, ಆರೋಪಿಗಳು ಇತ್ತೀಚೆಗೆ ಆಡಳಿತಾರೂಢ ಬಿಜೆಪಿ ಸೇರಿದ್ದಾರೆ ಎಂದು ವಿರೋಧ ಪಕ್ಷ ಹೇಳಿದೆ. ಈ ಪ್ರಕರಣದಲ್ಲಿ ಅವರ ಸಹೋದರರಾದ ರಿತೇಶ್ ಚಂದ್ರಕರ್, ದಿನೇಶ್ ಚಂದ್ರಕರ್, ಮೇಲ್ವಿಚಾರಕ ಮಹೇಂದ್ರ ರಾಮ್ಟೆಕೆ ಅವರನ್ನು ಈಗಾಗಲೇ ಬಂಧಿಸಲಾಗಿದೆ. ಪ್ರಕರಣದ ತನಿಖೆ ನಡೆಸಲು ರಚಿಸಲಾಗಿದ್ದ ಎಸ್‌ಐಟಿ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿಗೆ ಹುಡುಕಾಟ ನಡೆಸಿತ್ತು.ಆತ ಹೈದರಾಬಾದ್‌ನಲ್ಲಿರುವ ಬಗ್ಗೆ ಸುಳಿವು ಪಡೆದು ಕಳೆದ ರಾತ್ರಿ ಕಾರ್ಯಾಚರಣೆ ನಡೆಸಿ ಸುರೇಶ್ ಚಂದ್ರಕರ್ ಅವರನ್ನು ಬಂಧಿಸಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

# ಬಿಪಿಎಸ್‌ಸಿ ಪರೀಕ್ಷೆ ರದ್ದತಿಗಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಪ್ರಶಾಂತ್ ಕಿಶೋರ್ ಬಂಧನ



**ಪಾಟ್ನಾ:** ಬಿಹಾರ ಪಿಎಸ್‌ಸಿ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಇಲ್ಲಿನ ಗಾಂಧಿ ಮೈದಾನದಲ್ಲಿ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಜನ್ ಸೂರಾಜ್ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಅವರನ್ನು ಇಂದು ಮುಂಜಾನೆ ಬಂಧಿಸಲಾಗಿದೆ. ಪೊಲೀಸ್ ಸಿಬ್ಬಂದಿ ಅವರನ್ನು ಮತ್ತು ಅವರ ಬೆಂಬಲಿಗರನ್ನು ಪ್ರತಿಭಟನಾ ಸ್ಥಳದಿಂದ ವೈದ್ಯಕೀಯ ಪರೀಕ್ಷೆಗಾಗಿ ಪಾಟ್ನಾ ಏಮ್ಸ್‌ಗೆ ಕರೆದುಕೊಂಡು ಹೋಗಿ ಚಿಕಿತ್ಸೆ ನೀಡಲಾಗಿದೆ.

ಮಾಧ್ಯಮದ ಜೊತೆ ಮಾತನಾಡಿದ ಪಾಟ್ನಾ, ಜಿಲ್ಲಾ ಮ್ಯಾಜಿಸ್ಟ್ರೇಟ್ (ಡಿಎಂ), ಚಂದ್ರಶೇಖರ್ ಸಿಂಗ್, ಗಾಂಧಿ ಮೈದಾನದಲ್ಲಿ ಧರಣಿ ಕುಳಿತಿದ್ದ ಕಿಶೋರ್ ಮತ್ತು ಅವರ ಬೆಂಬಲಿಗರನ್ನು ಸೋಮವಾರ ಬೆಳಿಗ್ಗೆ ಪೊಲೀಸರು ಬಂಧಿಸಿದ್ದಾರೆ. ಈಗ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು. ಅವರ ಧರಣಿ ಕಾನೂನುಬಾಹಿರ ಎಂದು ಅವರು ಹೇಳಿದರು. ಕಳೆದ ವರ್ಷ ಡಿ.13 ರಂದು ನಡೆದ ಬಿಹಾರ ಪಬ್ಲಿಕ್ ಸರ್ವಿಸ್ ಕಮಿಷನ್ (ಬಿಪಿಎಸ್‌ಸಿ) ಪರೀಕ್ಷೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸುತ್ತಿರುವ ನಾಗರಿಕ ಸೇವಾ ಆಕಾಂಕ್ಷಿಗಳಿಗೆ ಬೆಂಬಲವಾಗಿ ಕಿಶೋರ್ ಜ.2 ರಂದು ಆಮರಣಾಂತ ಉಪವಾಸವನ್ನು ಪ್ರಾರಂಭಿಸಿದರು.

ಆದರೆ, ಡಿಸೆಂಬರ್ 13ರಂದು ನಡೆದ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆರೋಪದಲ್ಲಿ ಸಿಲುಕಿದ್ದ ಆಯ್ದ ಅಭ್ಯರ್ಥಿಗಳಿಗೆ ಮರುಪರೀಕ್ಷೆ ನಡೆಸುವಂತೆ ಬಿಪಿಎಸ್‌ಸಿ ಆದೇಶಿಸಿತ್ತು.

ಅದರಂತೆ 22 ಕೇಂದ್ರಗಳಲ್ಲಿ ಶನಿವಾರ ಮರುಪರೀಕ್ಷೆ ನಡೆಯಿತು. 12,012 ಅಭ್ಯರ್ಥಿಗಳಲ್ಲಿ, ಸುಮಾರು 8, 111 ಆಕಾಂಕ್ಷಿಗಳು ಮರು ಪರೀಕ್ಷೆಗಾಗಿ ತಮ ಪ್ರವೇಶ ಕಾರ್ಡ್‌ಗಳನ್ನು ಡೌನ್‌ಲೋಡ್ ಮಾಡಿಕೊಂಡಿದ್ದಾರೆ. ಆದರೆ, ಜನವರಿ 4ರಂದು ನಡೆದ ಮರುಪರೀಕ್ಷೆಗೆ 5,943 ಅಭ್ಯರ್ಥಿಗಳು ಹಾಜರಾಗಿದ್ದರು.

ಮರುಪರೀಕ್ಷೆಯು ಯಾವುದೇ ಅವ್ಯವಹಾರ ವರದಿಯಿಲ್ಲದೆ ಎಲ್ಲಾ ಕೇಂದ್ರಗಳಲ್ಲಿ ಶಾಂತಿಯುತವಾಗಿ ನಡೆಯಿತು ಎಂದು ಬಿಪಿಎಸ್‌ಸಿ ತಿಳಿಸಿದೆ.

# ಪತ್ರಿಕಾಗೋಷ್ಠಿ ವೇಳೆ ಕಣ್ಣೀರಿಟ್ಟ ಆತಿಶಿ



**ಬಿಧೂಡಿ ಆಕ್ಷೇಪಾರ್ಹ ಹೇಳಿಕೆ**

**ನವದೆಹಲಿ:** ಬಿಜೆಪಿ ಮುಖಂಡ, ಕಾಲ್ಕಾಜಿ ಕ್ಷೇತ್ರದ ಅಭ್ಯರ್ಥಿ ರಮೇಶ್ ಬಿಧೂಡಿ ಅವರು ತಮ್ಮ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿರುವುದಕ್ಕೆ ದೆಹಲಿ ಮುಖ್ಯಮಂತ್ರಿ ಅತಿಶಿ ಅವರು ಕಣ್ಣೀರು ಹಾಕಿದ್ದಾರೆ. ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುವ ವೇಳೆ ತಮ್ಮ ತಂದೆ ಕುರಿತು ನೀಡಲಾದ ಆಕ್ಷೇಪಾರ್ಹ ಹೇಳಿಕೆ ಸಂಬಂಧ ಪ್ರಶ್ನೆಯೊಂದಕ್ಕೆ ಉತ್ತರಿಸುವ ವೇಳೆ ಆತಿಶಿ ಭಾವನಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ.

ರಮೇಶ್ ಬಿಧೂಡಿ ಅವರೇ, ನನ್ನ ತಂದೆ ಶಿಕ್ಷಕ ರಾಗಿದ್ದವರು. ಅವರು ಬಡ, ಮಧ್ಯಮ ವರ್ಗದ ಸಾವಿರಾರು ಮಕ್ಕಳಿಗೆ ವಿದ್ಯಾಭ್ಯಾಸ ಕಲಿಸಿದ್ದಾರೆ. ಅವರಿಗೆ ಈಗ 80 ವರ್ಷ ವಯಸ್ಸಾಗಿದೆ. ಅವರು ಅನಾರೋಗ್ಯದಿಂದ ಬಳಲುತ್ತಿದ್ದಾರೆ. ಚುನಾವಣೆಗಾಗಿ ವೃದ್ಧರ ವಿರುದ್ಧ ಇಂತಹ ಹೇಳಿಕೆ ನೀಡುವುದು ಸರಿಯೇ, ಎಂತಹ ಕೀಳುಮಟ್ಟಕ್ಕೆ ಇಳಿದಿದ್ದೀರಿ'? ಎಂದು ಆತಿಶಿ ಪ್ರಶ್ನಿಸಿದ್ದಾರೆ.

**ಆತಿಶಿ ವಿರುದ್ಧ ರಮೇಶ್ ಬಿಧೂಡಿ ಹೇಳಿದ್ದೇನು?:** ಅತಿಶಿ ಅವರು ತಮ್ಮ ತಂದೆಯನ್ನು ಬದಲಾಯಿಸಿಕೊಂಡಿದ್ದಾರೆ. ಮೊದಲು ಅವರು ಮಾರ್ಲೆನಾ ಆಗಿದ್ದರು. ಈಗ ಸಿಂಗ್ ಆಗಿದ್ದಾರೆ. ಅವರು ತಂದೆಯನ್ನು ಬದಲಾಯಿಸಿದ್ದಾರೆ. ಇದು ಅವರ ವ್ಯಕ್ತಿತ್ವ' ಎಂದು ದೆಹಲಿಯ ರ‍್ಯಾಲಿಯೊಂದರಲ್ಲಿ ಬಿಧೂಡಿ ಹೇಳಿದ್ದಾರೆ. ತಮ್ಮನ್ನು ಆತಿಶಿ ಎಂದಷ್ಟೇ ಕರೆದುಕೊಳ್ಳುತ್ತಿದ್ದರು. ಕೆಲವು ಕಾಲ ಅವರು ತಮ್ಮನ್ನು 'ಆತಿಶಿ ಸಿಂಗ್' ಎಂದೂ ಕರೆದುಕೊಂಡಿದ್ದರು ಎಂದು ಬಿಧೂಡಿ ಹೇಳಿದ್ದಾರೆ. ಬಿಧೂಡಿ ಅವರ ಮಾತುಗಳನ್ನು ಎಕ್ಸ್ ಮೂಲಕ ಹಂಚಿಕೊಂಡಿರುವ ಅರವಿಂದ ಕೇಜ್ರಿವಾಲ್, ಬಿಜೆಪಿ ನಾಯಕರು ಲಜ್ಜೆಗೇಡಿತನದ ಎಲ್ಲಾ ಮಿತಿಗಳನ್ನೂ ಮೀರಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೆಹಲಿಯ ಮುಖ್ಯಮಂತ್ರಿ ಅತಿಶಿ ಅವರಿಗೆ, ತಂದೆ-ತಾಯಿ 'ಅತಿಶಿ ಮಾರ್ಲೆನಾ' ಎಂಬ ಹೆಸರು ಇಟ್ಟಿದ್ದರು. ಮಾರ್ಕ್ಸ್ ಮತ್ತು ಲೆನಿನ್ ಹೆಸರನ್ನು ಒಗ್ಗೂಡಿಸಿ 'ಮಾರ್ಲೆನಾ' ಎಂಬ ಹೆಸರನ್ನು ಇವರಿಗೆ ನೀಡಲಾಗಿತ್ತು. ಆದರೆ ವಿರೋಧಿಗಳು, ಅತಿಶಿ ಕ್ರೈಸ್ತ ಧರ್ಮಕ್ಕೆ ಸೇರಿದವರು' ಎಂದು ಅಪಪ್ರಚಾರ ನಡೆಸಿದ ಕಾರಣಕ್ಕೆ 'ಮಾರ್ಲೆನಾ' ಪದವನ್ನು ಹೆಸರಿನಿಂದ ಕೈಬಿಟ್ಟಿದ್ದರು.

# ಪಾಲುದಾರಿಕೆ ಚೌಕಟ್ಟಿಗೆ ವಿಶ್ವ ಬ್ಯಾಂಕ್‌ನ ಆಡಳಿತ ಮಂಡಳಿ ಒಪ್ಪಿಗೆ

## ಪಾಕಿಸ್ತಾನದ ನೆರವಿಗೆ ಧಾವಿಸಿದ ವಿಶ್ವಬ್ಯಾಂಕ್, ನೆರೆಯ ದೇಶಕ್ಕೆ ನೀಡಲಿದೆ 1.71 ಲಕ್ಷ ಕೋಟಿ ಸಾಲ

**ತೀವ್ರ ಆರ್ಥಿಕ ಸಂಕಷ್ಟ**

**ಇಸ್ಲಾಮಾಬಾದ್:** ಮುಂದಿನ ಹತ್ತು ವರ್ಷಗಳಲ್ಲಿ ಪಾಕಿಸ್ತಾನದ ಜನರ ಜೀವನಮಟ್ಟದ ಸುಧಾರಣೆ ಗಾಗಿ 1.71 ಲಕ್ಷ ಕೋಟಿ ರೂ. ಸಾಲದ ಪ್ಯಾಕೇಜ್ ನೀಡಲು ವಿಶ್ವ ಬ್ಯಾಂಕ್ ಅನುಮೋದನೆ ನೀಡಿದೆ. ಈ ಮೂಲಕ ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ನೆರೆಯ ರಾಷ್ಟ್ರದ ನೆರವಿಗೆ ವರ್ಲ್ಡ್ ಬ್ಯಾಂಕ್ ಧಾವಿಸಿದೆ.

ಈ ಕಾರ್ಯಕ್ರಮಕ್ಕೆ ಪಾಕಿಸ್ತಾನ ರಾಷ್ಟ್ರೀಯ ಪಾಲುದಾರಿಕೆ ಚೌಕಟ್ಟು 2025 - 2035 ಎಂಬ ಶೀರ್ಷಿಕೆ ನೀಡಲಾಗಿದೆ ಎಂದು ಪಾಕಿಸ್ತಾನದ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಪ್ರಮುಖ ಆರು ವಲಯಗಳ ಅಭಿವೃದ್ಧಿಯನ್ನು ಗುರಿಯಾಗಿಟ್ಟುಕೊಂಡು ಈ ಪ್ಯಾಕೇಜ್ ಅನ್ನು ವಿಶ್ವ ಬ್ಯಾಂಕ್ ಪ್ರಕಟಿಸಿದೆ. ನಿಗದಿತ ಅವಧಿ ಮುಗಿಯುವವರೆಗೂ ಆರ್ಥಿಕ ನೆರವು ನೀಡಲಾಗುವುದು. ಹಾಗಾಗಿ, ದೇಶದಲ್ಲಿ ರಾಜಕೀಯ ಪಕ್ಷಗಳ ಅಧಿಕಾರಾವಧಿ ಬದಲಾವಣೆಯಾದರೂ ಈ ಕಾರ್ಯಕ್ರಮಕ್ಕೆ ಆರ್ಥಿಕ ನೆರವು ಸ್ಥಗಿತಗೊಳ್ಳುವುದಿಲ್ಲ. ಮಕ್ಕಳ ಬೆಳವಣಿಗೆ ಕುಂಠಿತ ತಡೆಗಟ್ಟುವುದು, ಬಡತನ ನಿರ್ಮೂಲನೆ, ಹವಾಮಾನ ಬದಲಾವಣೆ ತಡೆಗಟ್ಟುವಿಕೆ, ಪರಿಸರದಲ್ಲಿ ಇಂಗಾಲದ ಪ್ರಮಾಣವನ್ನು ಕಡಿಮೆ ಮಾಡುವುದು, ಸರಕಾರದ ಹಣಕಾಸಿನ ಸ್ಥಿತಿ ವಿಸ್ತರಣೆ, ಉತ್ಪಾದಕತೆ ಹೆಚ್ಚಿಸುವ ದೃಷ್ಟಿಯಲ್ಲಿ ಖಾಸಗಿ ಹೂಡಿಕೆಗೆ ಉತ್ತೇಜನ ನೀಡುವುದು ಈ ಕಾರ್ಯಕ್ರಮದ ಪ್ರಮುಖ ಭಾಗವಾಗಿವೆ. ಪಾಕಿಸ್ತಾನದ ಜೊತೆಗಿನ ಈ ಪಾಲುದಾರಿಕೆ ಚೌಕ ಟ್ಟಿಗೆ ಜನವರಿ 14ರಂದು ವಿಶ್ವ ಬ್ಯಾಂಕ್‌ನ ಆಡಳಿತ ಮಂಡಳಿಯು ಅಧಿಕೃತವಾಗಿ ಒಪ್ಪಿಗೆಯ ಮುದ್ರೆ ಒತ್ತಲಿದೆ.



### 2025 - 2035 ಶೀರ್ಷಿಕೆ

ಪ್ರಮುಖ ಆರು ವಲಯಗಳ ಅಭಿವೃದ್ಧಿಯನ್ನು ಗುರಿಯಾಗಿಟ್ಟುಕೊಂಡು ಪಾಕಿಸ್ತಾನಕ್ಕೆ ವಿಶ್ವಬ್ಯಾಂಕ್ ಪ್ಯಾಕೇಜ್ ಅನ್ನು ಪ್ರಕಟಿಸಿದೆ. ನಿಗದಿತ ಅವಧಿ ಮುಗಿಯುವವರೆಗೂ 20 ಬಿಲಿಯನ್ ಡಾಲರ್ ಅಂದರೆ 1.71 ಲಕ್ಷ ಕೋಟಿ ರೂಪಾಯಿ ಆರ್ಥಿಕ ನೆರವು ನೀಡಲಿದೆ. ಈ ಕಾರ್ಯಕ್ರಮಕ್ಕೆ ಪಾಕಿಸ್ತಾನ ರಾಷ್ಟ್ರೀಯ ಪಾಲುದಾರಿಕೆ ಚೌಕಟ್ಟು 2025 - 2035' ಎಂಬ ಶೀರ್ಷಿಕೆಯನ್ನು ನೀಡಲಾಗಿದೆ.

- ಪ್ರಮುಖ ಆರು ವಲಯಗಳ ಅಭಿವೃದ್ಧಿಯನ್ನು ಗುರಿಯಾಗಿಟ್ಟುಕೊಂಡು ಪಾಕಿಸ್ತಾನಕ್ಕೆ ಪ್ಯಾಕೇಜ್ ಪ್ರಕಟಿಸಿದೆ ವಿಶ್ವಬ್ಯಾಂಕ್
- ನಿಗದಿತ ಅವಧಿ ಮುಗಿಯುವವರೆಗೂ 20 ಬಿಲಿಯನ್ ಡಾಲರ್ ಅಂದರೆ 1.71 ಲಕ್ಷ ಕೋಟಿ ರೂಪಾಯಿ ಆರ್ಥಿಕ ನೆರವು
- ಈ ಕಾರ್ಯಕ್ರಮಕ್ಕೆ 'ಪಾಕಿಸ್ತಾನ ರಾಷ್ಟ್ರೀಯ ಪಾಲುದಾರಿಕೆ ಚೌಕಟ್ಟು 2025 - 2035' ಎಂಬ ಶೀರ್ಷಿಕೆ ನೀಡಿದೆ ವರ್ಲ್ಡ್‌ಬ್ಯಾಂಕ್

ಈ ಕಾರ್ಯಕ್ರಮದ ಅಂಗವಾಗಿ ವಿಶ್ವ ಬ್ಯಾಂಕ್‌ನ ದಕ್ಷಿಣ ಏಷ್ಯಾದ ಉಪಾಧ್ಯಕ್ಷ ಮಾರ್ಟಿನ್ ರೈಸರ್ ಇಸ್ಲಾಮಾಬಾದ್‌ಗೆ ಭೇಟಿ ನೀಡಲಿದ್ದಾರೆ. 20 ಬಿಲಿಯನ್ ಡಾಲರ್‌ನಲ್ಲಿ ವಿಶ್ವಬ್ಯಾಂಕ್‌ನ ರಿಯಾಯಿತಿಯ ಸಾಲ ನೀಡುವ ಅಂಗವಾದ ಇಂಟರ್ ನ್ಯಾಷನಲ್ ಡೆವಲಪ್‌ಮೆಂಟ್ ಅಸೋ ಸಿಯೇಷನ್ (ಐಡಿಎ) 14 ಬಿಲಿಯನ್ ಡಾಲರ್ ಸಾಲವನ್ನು ನೀಡಲಿದೆ. ಉಳಿದ 6 ಬಿಲಿಯನ್ ಡಾಲರ್ ಮೊತ್ತವನ್ನು ತುಲನಾತ್ಮಕವಾಗಿ ದುಬಾರಿ ಯಾದ ಇಂಟರ್‌ನ್ಯಾಷನಲ್ ಬ್ಯಾಂಕ್ ಫಾರ್ ರೀಕನ್‌ಸ್ಟ್ರಕ್ಷನ್ ಅಂಡ್ ಡೆವಲಪ್‌ಮೆಂಟ್ ನೀಡಲಿದೆ. ಪಾಕಿಸ್ತಾನ ಸರಕಾರಕ್ಕೆ ನೀಡಲಾಗುವ 20 ಬಿಲಿಯನ್ ಡಾಲರ್ ಸಾಲದ ಜೊತೆಗೆ ವಿಶ್ವ ಬ್ಯಾಂಕ್‌ನ ಇತರ ಎರಡು ಅಂಗಗಳಾದ ಇಂಟರ್‌ನ್ಯಾಷನಲ್ ಫೈನಾನ್ಸ್ ಕಾರ್ಪೊರೇಷನ್ (ಐಎಫ್‌ಸಿ) ಮತ್ತು ಮಲ್ಟಿಲ್ಯಾಟರಲ್ ಇನ್ವೆಸ್ಟ್‌ಮೆಂಟ್ ಗ್ಯಾರಂಟಿ ಏಜೆನ್ಸಿ (ಎಂಐಜಿಎ) ಮೂಲಕ 20 ಬಿಲಿಯನ್ ಡಾಲರ್ ಖಾಸಗಿ ಸಾಲ ನೀಡುವ ಗುರಿಯೂ ಇದೆ. ಇದರಿಂದ ಒಟ್ಟು ಪ್ಯಾಕೇಜ್ 40 ಬಿಲಿಯನ್ ಡಾಲರ್‌ಗೆ ತಲುಪಲಿದೆ, ಆದರೆ ಸಾಲದ ಮೊತ್ತ ಮಾತ್ರ 20 ಬಿಲಿಯನ್ ಡಾಲರ್ ಇರಲಿದೆ.


ಉದಯ ವಾಹಿನಿ

ದೇಶ/ವಿದೇಶ

ಮಂಗಳವಾರ 07 ಜನವರಿ 2025




## ಮಿನಿ ನ್ಯೂಸ್

### ಐಇಡಿ ಸ್ಫೋಟದಲ್ಲಿ ಒಂಭತ್ತು ಮಂದಿ ಭದ್ರತಾ ಸಿಬ್ಬಂದಿ ಹುತಾತ್ಮ

**ರಾಯಿಪುರ:** ಛತ್ತೀಸ್‌ಗಢದ ನಕ್ಸಲ್ ಪೀಡಿತ ಪ್ರದೇಶವಾದ ಬಿಜಾಪುರದಲ್ಲಿ ನಕ್ಸಲಿಯರು ಅಟ್ಟಹಾಸ ಮೆರೆದಿದ್ದು ಭದ್ರತಾ ಸಿಬ್ಬಂದಿ ತೆರಳುತ್ತಿದ್ದ ವಾಹನನ್ನು ಸ್ಫೋಟಿಸಿದ್ದಾರೆ. ಘಟನೆಯಲ್ಲಿ ಸುಮಾರು 9 ಮಂದಿ ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದು ಅನೇಕರು ಗಾಯಗೊಂಡಿದ್ದಾರೆ. ಕಾರ್ಯಾಚರಣೆ ಕೈಗೊಂಡು ವಾಪಸ್ ಬರುವಾಗ ಬಿಜಾಪುರ ಜಿಲ್ಲೆಯ ಬೇದ್ರೆ ಕುತ್ರ ರಸ್ತೆಯಲ್ಲಿ ಎಲ್ಲದಡಿ ಅಡಗಿಸಿಟ್ಟಿದ್ದ ಐಇಡಿ ಸ್ಫೋಟಗೊಂಡು ವಾಹನ ಚಿತ್ರಗೊಂಡಿದೆ. ಛತ್ತೀಸ್‌ಗಡದ ಬಸ್ತಾರ ಪ್ರದೇಶದಲ್ಲಿ ವರ್ದತಾ ಪಡೆಗಳು ಇತ್ತೀಚಿಗೆ ನಡೆಸಿದ್ದ ಎನ್‌ಕೌಂಟರ್ ನಲ್ಲಿ ಐವರ ಹತರಾಗಿದ್ದರು. ಇದರ ಪ್ರತೀಕಾರವಾಗಿ ನಕ್ಸಲರು ಅಟ್ಟಹಾಸ ಮೆರೆದಿದ್ದಾರೆ. ತಳಕ್ಕೆ ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದು ಹೆಚ್ಚುವರಿ ಪಡೆಗಳನ್ನು ರವಾನಿಸಲಾಗಿದೆ ಮತ್ತು ನಕ್ಸಲ್ ಶೋಧ ಕಾರ್ಯಾಚರಣೆ ನಡೆಯುತ್ತಿದೆ.

### ಮಹಾ ಡಿಸಿಎಂಗೆ ಶಿಂಧೆಗೆ ಜೀವಬೆದರಿಕೆ ಯುವಕನ ವಿರುದ್ಧ ಕೇಸ್

**ಥಾಣೆ:** ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರಿಗೆ ಹಾನಿ ಮಾಡುವುದಾಗಿ ಬೆದರಿಕೆ ಒಡ್ಡಿದ ಆರೋಪದ ಮೇಲೆ 26 ವರ್ಷದ ಯುವಕನ ವಿರುದ್ಧ ಥಾಣೆ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಥಾಣೆ ನಗರದ ವರ್ಲಿ ಪಾಡಾ ನಿವಾಸಿ ಹಿತೇಶ್ ಧೆಂಡೆ ಎಂಬ ಆರೋಪಿಗಾಗಿ ಶೋಧ ನಡೆಸಲಾಗಿದೆ ಎಂದು ಶ್ರೀ ನಗರ ಪೊಲೀಸ್ ಠಾಣೆಯ ಹಿರಿಯ ಇನ್ಸ್‌ಪೆಕ್ಟರ್ ಗುಲ್ಜಾರಿಲಾಲ್ ಫಡ್ತಾರೆ ಪಿಟಿಐಗೆ ತಿಳಿಸಿದ್ದಾರೆ. ಆರೋಪಿ ಸಾಮಾಜಿಕ ಜಾಲತಾಣದಲ್ಲಿ ಉಪ ಮುಖ್ಯಮಂತ್ರಿ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿದ್ದಾರೆ ಮತ್ತು ಕೊಲೆ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ.

ಶಿಂಧೆ ನೇತೃತ್ವದ ಶಿವಸೇನೆಯ ಕಾರ್ಯಕರ್ತರೊಬ್ಬರು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಆ ವ್ಯಕ್ತಿಯ ವಿರುದ್ಧ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 133 (ಮಹಾನ್ ಪ್ರಚೋದನೆ ಹೊರತುಪಡಿಸಿ ವ್ಯಕ್ತಿಯನ್ನು ಅವಮಾನಿಸುವ ಉದ್ದೇಶದಿಂದ ಹಲ್ಲೆ ಅಥವಾ ಕ್ರಿಮಿನಲ್ ಬಲ) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. (ಶಾಂತಿ ಭಂಗವನ್ನು ಪ್ರಚೋದಿಸುವ ಉದ್ದೇಶದಿಂದ ಉದ್ದೇಶಪೂರ್ವಕ ಅವಮಾನ), 351(1) (ಅಪರಾಧ ಬೆದರಿಕೆ) ಮತ್ತು 356 (2) (ಮಾನನಷ್ಟ), ಅಧಿಕಾರಿ ಹೇಳಿದರು. ಪ್ರಕರಣದ ತನಿಖೆ ನಡೆಯುತ್ತಿದೆ.

### ಮಹಾರಾಷ್ಟ್ರದ ಪಾಲ್ಘರ್‌ನಲ್ಲಿ 3.7 ತೀವ್ರತೆಯ ಕಂಪನ

**ಪಾಲ್ಘರ್:** ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯಲ್ಲಿ ಇಂದು ಮುಂಜಾನೆ 3.7 ತೀವ್ರತೆಯ ಕಂಪನ ಸಂಭವಿಸಿದೆ. ಯಾವುದೇ ಪ್ರಾಣಹಾನಿ, ಆಸ್ತಿ ಹಾನಿಯಾದ ಬಗ್ಗೆ ವರದಿಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲೆಯ ದಹಾನು ತಾಲ್ಲೂಕಿನಲ್ಲಿ ಮುಂಜಾನೆ 4.35ಕ್ಕೆ ಕಂಪನ ದಾಖಲಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಕೋಶದ ಮುಖ್ಯಸ್ಥ ವಿವೇಕಾನಂದ ಕದಂ ಅಧಿಕೃತ ವರದಿಯನ್ನು ಉಲ್ಲೇಖಿಸಿ ತಿಳಿಸಿದ್ದಾರೆ. ತಾಲ್ಲೂಕಿನ ಬೋರ್ಡಿ, ದಪ್ಚಾರಿ, ತಲಸರಿ ಭಾಗದ ಜನರು ಮುಂಜಾನೆ ಕಂಪಿಸಿದ ಅನುಭವವಾಗಿದೆ ಎಂದರು. ಜಿಲ್ಲೆಯಲ್ಲಿ ಈ ಹಿಂದೆಯೂ ಆಗಾಗ ಕಂಪನದ ಅನುಭವವಾಗಿದೆ, ಜನರು ಆತಂಕಗೊಂಡಿದ್ದಾರೆ.

### ಬಸ್ ಕಮರಿಗೆ ಬಿದ್ದು ಮೂವರ ಸಾವು

**ಇಡುಕ್ಕಿ:** ಪುಲ್ಲುಪಾರ ಬಳಿ ಸರ್ಕಾರಿ ಸ್ವಾಮ್ಯದ ಸಾರಿಗೆ ಬಸ್ ಕಮರಿಗೆ ಉರುಳಿಬಿದ್ದು ಮಹಿಳೆ ಸೇರಿದಂತೆ ಮೂವರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ. ಬಸ್‌ನಲ್ಲಿ 34 ಪ್ರಯಾಣಿಕರಿದ್ದರು,ಅದು ತಮಿಳುನಾಡಿನ ತಂಜಾವೂರಿಗೆ ತೆರಳಿ ಕೇರಳದ ಅಲಪ್ಪುಳ ಜಿಲ್ಲೆಯ ಮಾವೇಲಿಕರಕ್ಕೆ ಹಿಂದಿರುಗುತ್ತಿದ್ದಾಗ ಸೋಮವಾರ ಬೆಳಗ್ಗೆ 6 ಗಂಟೆ ಸುಮಾರಿಗೆ ಈ ಘಟನೆ ಸಂಭವಿಸಿದೆ ಎಂದು ಅವರು ಪೊಲೀಸರು ತಿಳಿಸಿದ್ದಾರೆ. ಮಾಹಿತಿ ತಿಳಿಯುತ್ತಿದಂತೆ ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಳ್ಳಲು ಪೊಲೀಸರು, ಅಗ್ನಿಶಾಮಕ ಮತ್ತು ರಕ್ಷಣಾ ಸೇವೆಗಳ ಸಿಬ್ಬಂದಿಯನ್ನು ಸ್ಥಳಕ್ಕೆ ದಾವಿಸಿ ಪರಿಹಾರ ಕಾರ್ಯದಲ್ಲಿ ತೊಡಗಿದ್ದಾರೆ. ಸ್ತಳದಲ್ಲೇ ಮೂವರು ಮೃತಪಟ್ಟಿದ್ದು ಅವರ ಶವಗಳನ್ನು ಮೇಲೆತ್ತಿ ಮುಂಡಕಾಯಂನಲ್ಲಿರುವ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಗಾಯಾಳುಗಳಿಗೆ ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಘಟನೆಗೆ ಕಾರಣ ತಿಳಿದುಬಂದಿಲ್ಲ, ತನಿಖೆ ನಡೆಸಲಾಗುತ್ತಿದೆ ಎಂದು ಹೇಳಿದರು.

### ಅರಣ್ಯದಲ್ಲಿ ಶವ ಪತ್ತೆ: ಭಾರತೀಯ ಮೂಲದ ಐವರ ಬಂಧನ

**ನ್ಯೂ ಜೆರ್ಸಿ:** ಅಮೆರಿಕದ ನ್ಯೂ ಜೆರ್ಸಿಯ ಅರಣ್ಯವೊಂದರಲ್ಲಿ ಭಾರತೀಯ ವ್ಯಕ್ತಿಯೊಬ್ಬರನ್ನು ಹತ್ಯೆಗೈದ ಪ್ರಕರಣದಲ್ಲಿ ಭಾರತೀಯ ಮೂಲದ ಐವರನ್ನು ಬಂಧಿಸಲಾಗಿದೆ. ಈ ಬಗ್ಗೆ ಸ್ಥಳೀಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಓಷನ್ ಕೌಂಟಿ ಪ್ರಾಸಿಕ್ಯೂಟರ್ ಬ್ರಾಡ್ಲಿ ಬಿಲ್ಲಿಮರ್ ಮತ್ತು ನ್ಯೂಜೆರ್ಸಿ ಪೊಲೀಸ್ ಕರ್ನಲ್ ಪ್ಯಾಟ್ರಿಕ್ ಕ್ಯಾಲಹನ್ ಶನಿವಾರ ಈ ಆರೋಪಿಗಳಲ್ಲಿ ಕೊನೆಯವನಾದ ಸಂದೀಪ್ ಕುಮಾರ್ ಅವರನ್ನು ಶುಕ್ರವಾರ ಬಂಧಿಸಲಾಗಿದೆ ಎಂದು ಹೇಳಿದ್ದಾರೆ.



ಕುಲದೀಪ್ ಕುಮಾರ್ ಅವರ ದೇಹವು ಡಿಸೆಂಬರ್ 14 ರಂದು ನ್ಯೂ ಜೆರ್ಸಿಯ ಗ್ರೀನ್‌ವುಡ್ ವನ್ಯಜೀವಿ ನಿರ್ವಹಣಾ ಪ್ರದೇಶದಲ್ಲಿ ಪತ್ತೆಯಾಗಿದೆ, ಅವರ ದೇಹದ ಮೇಲೆ ಗುಂಡಿನ ಗುರುತುಗಳಿವೆ. ಅಕ್ಟೋಬರ್ 26 ರಂದು ಅವರ ಕುಟುಂಬದವರು ಅವರು ಕಾಣೆಯಾಗಿದ್ದಾರೆ ಎಂದು ತಿಳಿಸಿದ್ದಾರೆ, ಸುಮಾರು ಎರಡು ತಿಂಗಳ ನಂತರ ಅವರ ಶವ ಪತ್ತೆಯಾಗಿದೆ. ಅಕ್ಟೋಬರ್ 22ರ ಸುಮಾರಿಗೆ ಕೊಲೆ ನಡೆದಿದೆ ಎನ್ನಲಾಗಿದೆ, ದೇಹ ಸಂಪೂರ್ಣ ಕೊಳೆತಿತ್ತು ಎಂದು ಪ್ರಾಸಿಕ್ಯೂಟರ್ ಕಚೇರಿ ತಿಳಿಸಿದೆ. ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ (ಎಫ್‌ಬಿಐ) ಪ್ರಕರಣ ಪತ್ತೆ ಮಾಡಿದೆ. ಪ್ರಾಸಿಕ್ಯೂಟರ್ ಕಚೇರಿಯ ಪ್ರಕಾರ, ಬಹು ಕಾನೂನು ಜಾರಿ ಸಂಸ್ಥೆಗಳು ನಡೆಸಿದ ತನಿಖೆಯು ಕೊಲೆಗೆ ಸಂಬಂಧಿಸಿದಂತೆ ಐದು ಆರೋಪಿಗಳನ್ನು ಬಂಧಿಸಿದೆ.ಈ ಪೈಕಿ ನಾಲ್ವರು ಆರೋಪಿಗಳು ಇಂಡಿಯಾನಾ ರಾಜ್ಯದ ಗ್ರೀನ್‌ವುಡ್ ಮೂಲದವರು. ಸೌರವ್ ಕುಮಾರ್ (23), ಗೌರವ್ ಸಿಂಗ್ (27), ನಿರ್ಮಲ್ ಸಿಂಗ್ (30), ಮತ್ತು ಗುರುದೀಪ್ ಸಿಂಗ್ (22) ಮತ್ತು ಒಬ್ಬ ಆರೋಪಿ ಸಂದೀಪ್ ಕುಮಾರ್ (34) ನ್ಯೂಯಾರ್ಕ್‌ನ ಓಜೋನ್ ಪಾರ್ಕ್‌ನವರು ಎನ್ನಲಾಗಿದೆ. ಯುಎಸ್ ಕಾನೂನಿನ ಪ್ರಕಾರ, ಆರೋಪಿಯನ್ನು ಬೇರೆ ರಾಜ್ಯದಲ್ಲಿ ಬಂಧಿಸಿದಾಗ, ಪ್ರಾಸಿಕ್ಯೂಟರ್‌ಗಳು ನ್ಯಾಯಾಲಯದಲ್ಲಿ ಹಸ್ತಾಂತರ ಪ್ರಕ್ರಿಯೆಯ ಮೂಲಕ ಹೋಗಬೇಕಾಗುತ್ತದೆ, ಇದರಲ್ಲಿ ಬಂಧಿತ ವ್ಯಕ್ತಿಯು ಹಸ್ತಾಂತರವನ್ನು ವಿರೋಧಿಸಬಹುದು.



## ಕಂಗನಾ ರಣಾವತ್ ನಟನೆಯ 'ಎಮರ್ಜೆನ್ಸಿ' ಚಿತ್ರದ ಟ್ರೈಲರ್ ರಿಲೀಸ್

ಬಾಲಿವುಡ್ ಬೆಡಗಿ ಕಂಗನಾ ರಣಾವತ್ ನಟನೆಯ 'ಎಮರ್ಜೆನ್ಸಿ' ಚಿತ್ರದ ಟ್ರೈಲರ್ ರಿಲೀಸ್ ಮಾಡಲಾಗಿದೆ. ಮಾಜಿ ಪಿಎಂ ಇಂದಿರಾ ಗಾಂಧಿ ಪಾತ್ರದಲ್ಲಿ ಕಂಗನಾ ಜೀವ ತುಂಬಿದ್ದಾರೆ. ಟ್ರೈಲರ್ ರಿಲೀಸ್ ಆದ ಕೆಲವೇ ಗಂಟೆಗಳಲ್ಲಿ ಭರ್ಜರಿ ವಿವ್ಸ್ ಗಿಟ್ಟಿಸಿಕೊಂಡಿದೆ. ಇಂದಿರಾ ಗಾಂಧಿ ಹೇರಿದ್ದ ತುರ್ತು ಪರಿಸ್ಥಿತಿಯ ದಿನಗಳನ್ನು ಕೇಂದ್ರವಾಗಿಟ್ಟುಕೊಂಡು 'ಎಮರ್ಜೆನ್ಸಿ' ಸಿನಿಮಾ ಮಾಡಲಾಗಿದೆ. ಈ ಚಿತ್ರದ 2ನೇ ಟ್ರೈಲರ್ ಇದಾಗಿದ್ದು, ಇಂದಿರಾ ಗಾಂಧಿ ಪಾತ್ರದಲ್ಲಿ ಕಂಗನಾ ಪರಕಾಯ ಪ್ರವೇಶ ಮಾಡಿದ್ದಾರೆ. ಖಡಕ್ ಆಗಿ ನಟಿ ಡೈಲಾಗ್ ಹೊಡೆದಿದ್ದಾರೆ.

1975ರಲ್ಲಿ ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಜಾರಿ ಮಾಡಿದ ಐತಿಹಾಸಿಕ ಸನ್ನಿವೇಶದ ಚಿತ್ರಣ ಹೊಂದಿರುವ ಸಿನಿಮಾ ಇದಾಗಿದೆ. ರಾಜಕೀಯ ಮತ್ತು ಭಾವನಾತ್ಮಕ ಸನ್ನಿವೇಶಗಳನ್ನು ಇಂದಿರಾ ಗಾಂಧಿ ಅವರು ಎದುರಿಸಿದ ರೀತಿಯನ್ನು ಟ್ರೈಲರ್ ಮೂಲಕ ಝಲಕ್ ತೋರಿಸಲಾಗಿದೆ. ತುರ್ತು ಪರಿಸ್ಥಿತಿ ಹೇರಿಕೆ ವಿರುದ್ಧ ರಾಷ್ಟ್ರ ವ್ಯಾಪಿ ನಡೆದ ಪ್ರತಿಭಟನೆಗಳು, ಕರ್ಫ್ಯೂ, ರಾಜಕೀಯ ವಿರೋಧ ಹೀಗೆ ಹಲವು ಸನ್ನಿವೇಶಗಳನ್ನು ಟ್ರೈಲರ್‌ನಲ್ಲಿ ಹೈಲೆಟ್ ಮಾಡಲಾಗಿದೆ. ಕಂಗನಾ 'ಇಂದಿರಾ ಗಾಂಧಿ' ಪಾತ್ರಕ್ಕೆ ಜೀವ ತುಂಬಿದ್ದಾರೆ. ಇಂಡಿಯಾ ಅಂದರೆ ಇಂದಿರಾ, ಇಂದಿರಾ ಅಂದರೆ ಇಂಡಿಯಾ ಎಂದಿದ್ದಾರೆ.

## ಮಂಗಳೂರಿಗೆ ಯಶ್ ಬಂದಿದ್ಯಾಕೆ



ನ್ಯಾಷನಲ್ ಸ್ಟಾರ್ ಯಶ್ 'ಟಾಕ್ಸಿಕ್' ಸಿನಿಮಾದ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಜ.8ರಂದು ಯಶ್ ಹುಟ್ಟುಹಬ್ಬದ ಹಿನ್ನೆಲೆ 'ಟಾಕ್ಸಿಕ್' ಕುರಿತು ಅಪ್‌ಡೇಟ್ ತಿಳಿಸೋದಾಗಿ ಅನೌನ್ಸ್ ಮಾಡಿದ್ರೆ, ಇದರ ನಡುವೆ ನಟ ಮಂಗಳೂರಿನ ವಿಮಾನ ನಿಲ್ದಾಣದಲ್ಲಿ ಕಾಣಿಸಿಕೊಂಡಿದ್ದಾರೆ.

ಮಂಗಳೂರಿನ ವಿಮಾನ ನಿಲ್ದಾಣದಲ್ಲಿ ಯಶ್ ಮುಖಕ್ಕೆ ಮಾಸ್ಕ್ ಹಾಕಿ ತೆರಳುವ ದೃಶ್ಯ ಸಖತ್ ವೈರಲ್ ಆಗುತ್ತಿದೆ. 'ಟಾಕ್ಸಿಕ್' ಸಿನಿಮಾದ ಮುಂದಿನ ಶೆಡ್ಯೂಲ್ ಶೂಟಿಂಗ್‌ಗಾಗಿ ಲೊಕೇಶನ್ ನೋಡಲು ನಟ ಮಂಗಳೂರಿಗೆ ಆಗಮಿಸಿದ್ದಾರೆ ಎನ್ನಲಾಗಿದೆ. ಯಾವ ಸ್ಥಳದಲ್ಲಿ ಚಿತ್ರೀಕರಣ ಮಾಡಬೇಕು ಏನೆಲ್ಲಾ ಯೋಜನೆಗಳಿವೆ ಎಂಬುದು ಇನ್ನೂ ಅಧಿಕೃತವಾಗಿ ತಿಳಿಯಬೇಕಿದೆ. ಇನ್ನೂ ಈ ಹಿಂದೆ ಕೂಡ 'ಕೆಜಿಫ್ 2' ಸಿನಿಮಾದ ಶೂಟಿಂಗ್ ಉಡುಪಿಯ ಮಲ್ಪೆ, ಪಡುಕೆರೆ ಭಾಗದಲ್ಲಿ ಮಾಡಲಾಗಿತ್ತು. ಶ್ರೀನಿಧಿ ಶೆಟ್ಟಿ ಜೊತೆಗಿನ ಕೆಲವು ದೃಶ್ಯಗಳನ್ನು ಉಡುಪಿಯಲ್ಲಿ ಶೂಟಿಂಗ್ ಮಾಡಿದ್ದರು.

ಇನ್ನೂ ಜ.8ರಂದು ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದ ಲುಕ್ ಅನಾವರಣ ಆಗಲಿದೆ. ಬೆಳಗ್ಗೆ 10:25ಕ್ಕೆ ಅನೌನ್ಸ್ ಆಗಲಿದೆ. ಈ ಕುರಿತು ಕೆವಿಎನ್ ನಿರ್ಮಾಣ ಸಂಸ್ಥೆ ತಿಳಿಸಿದೆ. ಇನ್ನೂ ಜ.8ರಂದು ಬೆಂಗಳೂರಿನಲ್ಲಿ ಇರುವುದಿಲ್ಲ ಬರ್ತ್‌ಡೇ ಆಚರಣೆ ಮಾಡಲ್ಲ ಎಂದು ಫ್ಯಾನ್ಸ್ ಯಶ್ ಈಗಾಗಲೇ ಮಾಹಿತಿ ನೀಡಿದ್ದಾರೆ.

ಪ್ರೀತಿಯ ಅಭಿಮಾನಿಗಳಿಗೆ ನಮಸ್ಕಾರ, ನಿಮ್ಮ ಅಭಿಮಾನದ ಅಪ್ಪುಗೆ ಮತ್ತೊಂದು ವರ್ಷವನ್ನು ಸಾರ್ಥಕಗೊಳಿಸಿದೆ ಹೊಸ ವರ್ಷ ಹೊಸ ಭರವಸೆಗಳೊಂದಿಗೆ ನಗು ನಗುತ್ತಾ ಬದುಕೋಣ. ಬದುಕನ್ನು ಮೆರಗುಗೊಳಿಸುವಂತಹ ಹೊಸ ಯೋಜನೆಗಳೊಂದಿಗೆ ಹೊಸ ವರ್ಷವನ್ನು ಸ್ವಾಗತಿಸೋಣ ಎಂದು ಯಶ್ ಸೋಶಿಯಲ್ ಮೀಡಿಯಾದಲ್ಲಿ ತಿಳಿಸಿದ್ದರು.

## ಹನಿ ರೋಸ್‌ಗೆ ಟಾರ್ಚರ್ ಕೊಟ್ಟ ಉದ್ಯಮಿ



ನಟಿ ಹನಿ ರೋಸ್ ಸೋಶಿಯಲ್ ಮೀಡಿಯಾದಲ್ಲಿ ಮಾಡಿರುವ ಪೋಸ್ಟ್ ಈಗ ವೈರಲ್ ಆಗುತ್ತಿದೆ. ವ್ಯಕ್ತಿಯೋರ್ವ ತನ್ನನ್ನು ಉದ್ದೇಶಪೂರ್ವಕವಾಗಿ ಹಿಂಬಾಲಿಸುತ್ತಿದ್ದು, ಕೆಟ್ಟ ಪದ ಬಳಸಿ ನಿಂದಿಸುತ್ತಿದ್ದ ಎಂದು ಆಕೆ ಹೇಳಿದ್ದಾರೆ. ಎರಡು ದಶಕಗಳಿಂದ ಚಿತ್ರರಂಗದಲ್ಲಿರುವ ತಾನು ಈ ಕಿರುಕುಳವನ್ನು ಯಾವುದೇ ಸಂದರ್ಭದಲ್ಲೂ ಸಹಿಸುವುದಿಲ್ಲ ಎಂದಿದ್ದಾರೆ.

ಕಾರ್ಯಕ್ರಮದಲ್ಲಿ ಭಾಗವಹಿಸಲು ವ್ಯಕ್ತಿಯನ್ನು ಆಹ್ವಾನಿಸಿದಾಗ ಹೋಗಲು ನಿರಾಕರಿಸಿದ್ದಕ್ಕಾಗಿ ಪ್ರತೀಕಾರವಾಗಿ ಅನೇಕ ಸ್ಥಳಗಳಲ್ಲಿ ತನಗೆ ಅವಮಾನ ಮಾಡಲಾಗಿದೆ ಎಂದು ಹನಿ ರೋಸ್ ತನ್ನ ಇನ್ ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ಅವಮಾನಿಸಿದ ವ್ಯಕ್ತಿಯ ಬಗ್ಗೆ ಬರೆದು ಕೊಂಡಿದ್ದಾರೆ.

ಆತನಿಂದ ನನಗೆ ಅವಮಾನವಾಗಿದ್ದು, ಕಾನೂನಾತ್ಮಕವಾಗಿ ಪ್ರತಿಕ್ರಿಯಿಸುತ್ತೇನೆ ಎಂದು ಹನಿ ರೋಸ್ ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಪದೇ ಪದೇ ಆತ ಕೆಟ್ಟ ರೀತಿಯಲ್ಲಿ ವ್ಯಂಗ್ಯ ಮಾಡಿದ್ದ. ಇದ್ರಿಂದ ನಾನು ಆತನ ಕಾರ್ಯಕ್ರಮಕ್ಕೆ ಹೋಗದನ್ನು ಬಿಟ್ಟೆ. ಹೆಣ್ಣನ್ನು ನಿಂದಿಸೋದು ಹಾಗೂ ಬ್ಯಾಡ್ ಕಮೆಂಟ್ ವಿರುದ್ಧ ಯುದ್ಧಕ್ಕೂ ಸಿದ್ಧ ಎಂದು ಹನಿ ರೋಸ್ ಬರೆದಿದ್ದಾರೆ.

## ಕಾಟನ್ ಕ್ಯಾಂಡಿ ಹಾಡಿಗೆ ಸಂಕಷ್ಟ!



ಕಳೆದ ಕೆಲವು ದಿನಗಳಿಂದ ರ್‍ಯಾಪರ್ ಚಂದನ್ ಶೆಟ್ಟಿ ಅವರ ಕಾಂಟನ್ ಕ್ಯಾಂಡಿ ಹಾಡು ಸಖತ್ ಸೌಂಡ್ ಮಾಡುತ್ತಿದೆ. ಬಹಳಷ್ಟು ಜನರು ಈ ಹಾಡಿಗೆ ರೀಲ್ಸ್ ಮಾಡಿ ಎಂಜಾಯ್ ಮಾಡುತ್ತಿದ್ದಾರೆ. ಹೀಗಿರುವಾಗಲೇ ಇತ್ತೀಚೆಗಷ್ಟೇ ರಿಲೀಸ್ ಆಗಿರುವ ಚಂದನ್ ನ್ಯೂ ಆಲ್ಬಂ ಸಾಂಗ್ ಕಾಂಟನ್ ಕ್ಯಾಂಡಿಗೆ ಹೊಸ ಸಂಕಷ್ಟ ಎದುರಾಗಿದೆ.

ಯುವರಾಜ್ ವೈಬುಲ್ ಕಾಟನ್ ಕ್ಯಾಂಡಿ ಹಾಡಿನ ಚರಣ ಕದ್ದಿದ್ದಾರೆ ಎಂದು ಆರೋಪ ಮಾಡಿದ್ದಾರೆ. 2018 ರಲ್ಲಿ ಪಾರ್ಟಿ ಸಾಂಗ್ ಮಾಡಿದ್ದೇ ನಾನು. ಬುಲ್ ಪಾರ್ಟಿ ಸಾಂಗಿನ ಚರಣವನ್ನು ಚಂದನ್ ಕಾಪಿ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಕಾಟನ್ ಕ್ಯಾಂಡಿ ಹಾಡು ಈಗ ಲಕ್ಷ ಲಕ್ಷ ವ್ಯೂಸ್ ಆಗಿದೆ. ನಾನು ಕಷ್ಟ ಪಟ್ಟು ಸಾಂಗ್ ಮಾಡಿದ್ದೀನಿ ನನಗೆ ನ್ಯಾಯ ಬೇಕು. ನಮ್ಮ ಆಡಿಯೋ ಸಂಸ್ಥೆಯವರು ಕಾಪಿ ರೈಟ್ಸ್ ಹಾಕೋಣ ಅಂದಿದ್ದರು. ಚಂದನ್ ಜೊತೆ ಮಾತಾಡೋಣ ಅಂತ ನಾನೇ ಬೇಡ ಅಂತ ಹೇಳಿದ್ದೆ ಎಂದಿದ್ದಾರೆ. ನನ್ನ ಸಾಂಗ್ ಮೂರೇ ಮೂರು ಪೆಗ್ಗಿಗೆ ಸಾಂಗ್ ಕಾಪಿ ಅಂತ ಚಂದನ್ ಹೇಳ್ತಿದ್ದಾರೆ ಅಂತ ಕೇಳ್ದೆ. ನಾನು ಹಾಡಿನಿಂದ ಸ್ಫೂರ್ತಿಯಾಗಿ ಸಾಂಗ್ ಮಾಡಿದ್ದೆ. ಆದರೆ ಆ ಸಾಂಗನ್ನು ಕದ್ದು ನನ್ನ ಪಾರ್ಟಿ ಸಾಂಗ್ ಮಾಡಿಲ್ಲ ಎಂದಿದ್ದಾರೆ.

ನಾನು ಟ್ಯೂಬ್ ಕದ್ದಿದ್ರೆ ಚಂದನ್ ಶೆಟ್ಟಿ ಯಾಕೆ ಕೇಸ್ ಹಾಕಲಿಲ್ಲ ಇಷ್ಟೆಲ್ಲ ಆದ್ಮೇಲೆ ನಾನು ಬಿಡಲ್ಲ. ಈಗ ನಾನು ಕಾಪಿ ರೈಟ್ಸ್ ಕೇಸ್ ಹಾಕ್ತಿನಿ ಎಂದು ಕಾಟನ್ ಕ್ಯಾಂಡಿ ಹಾಡಿನ ಬಗ್ಗೆ ಮಾತನಾಡಿದ ರ್‍ಯಾಪರ್ ಯುವರಾಜ್ ವೈಬುಲ್ ಹೇಳಿದ್ದಾರೆ.

ಚಂದನ್ ಶೆಟ್ಟಿ ತುಂಬಾ ಹಾಡುಗಳು ವಿಶೇಷಾಗಿಯೇ ಇರುತ್ತವೆ. 3 ಪೆಗ್ ಸಾಂಗ್ ಈಗಲೂ ಇಷ್ಟ ಆಗುತ್ತದೆ. ಟಕಿಲಾ, ಚಾಕೋಲೇಟ್ ಗರ್ಲ್, ಹೀಗೆ ಹಲವು ಹಾಡುಗಳನ್ನ ಕೊಟ್ಟಿದ್ದಾರೆ.

## ಸೀಮಂತದ ಸಂಭ್ರಮದಲ್ಲಿ ಹರಿಪ್ರಿಯಾ

ಮೊದಲ ಮಗು ಮನೆಗೆ ಎಂಟ್ರಿ



ಕನ್ನಡದ ನಟಿ ಹರಿಪ್ರಿಯಾ ಅವರು ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಹೀಗಿರುವಾಗ ಹರಿಪ್ರಿಯಾಗೆ ಅದ್ದೂರಿಯಾಗಿ ಸೀಮಂತ ಶಾಸ್ತ್ರ ಮಾಡಲಾಗಿದೆ.

ಹಸಿರು ಬಣ್ಣದ ಸೀರೆಯುಟ್ಟು ಮುದ್ದಾಗಿ ನಟಿ ಕಾಣಿಸಿಕೊಂಡಿದ್ದಾರೆ. ವಸಿಷ್ಠ ಸಿಂಹ ಮತ್ತು ಹರಿಪ್ರಿಯಾ ಜೋಡಿ ಮೊದಲ ಮಗು ಮನೆಗೆ ಎಂಟ್ರಿ ಕೊಡಲಿರುವ ಖುಷಿಯಲ್ಲಿದ್ದಾರೆ. ಸದ್ಯ ತುಂಬು ಗರ್ಭಿಣಿ ಯಾಗಿರುವ ನಟಿಗೆ ಸೀಮಂತ ಶಾಸ್ತ್ರ ಜರುಗಿದೆ. ಈ ಕಾರ್ಯಕ್ರಮದಲ್ಲಿ ಹಿರಿಯ ನಟಿ ತಾರಾ ಕೂಡ ಭಾಗವಹಿಸಿ ಹರಿಪ್ರಿಯಾ ಶುಭಕೋರಿದ್ದಾರೆ. ನಟಿಗೆ ಕುಂಕುಮ ಇಟ್ಟು ಗಿಫ್ಟ್ ನೀಡಿ ವಿಶ್ ಮಾಡಿದ್ದಾರೆ. ಆ ನಂತರ ವಸಿಷ್ಠ ಪತ್ನಿಗೆ ಮುದ್ದು ಮಾಡಿದ್ದಾರೆ. ಕಳೆದ ವರ್ಷ ಜ.26ರಂದು ಮೈಸೂರಿನಲ್ಲಿ ವಸಿಷ್ಠ ಸಿಂಹ ಜೊತೆ ನಟಿ ಹಸೆಮಣೆ ಏರಿದರು. ಹಲವು ವರ್ಷಗಳು ಪ್ರೀತಿಸಿ ಗುರುಹಿರಿಯರ ಒಪ್ಪಿಗೆ ಪಡೆದು ಮದುವೆಯಾದರು. ಇದೀಗ ಚೊಚ್ಚಲ ಮಗುವನ್ನು ಬರಮಾಡಿಕೊಳ್ಳುವ ತವಕದಲ್ಲಿದ್ದಾರೆ.

ಅಂದಹಾಗೆ, ವಸಿಷ್ಠ ಸಿಂಹ ಕನ್ನಡದ ಜೊತೆ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಹಲವು ಪಾತ್ರಗಳ ಮೂಲಕ ಗಮನ ಸೆಳೆಯಲು ಸಜ್ಜಾಗಿದ್ದಾರೆ. ಹರಿಪ್ರಿಯಾ ಪ್ರಸ್ತುತ ನಟನೆಯಿಂದ ಅಂತರ ಕಾಯ್ದುಕೊಂಡಿದ್ದಾರೆ.

## ಏಕದಿನ ಸರಣಿಗೆ ಟೀಂ ಇಂಡಿಯಾ ಪ್ರಕಟ

### ತಂಡದ ನಿಯಮಿತ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರಿಗೆ ಈ ಸರಣಿಯಿಂದ ವಿಶ್ರಾಂತಿ



ಸ್ಮೃತಿ ಮಂಧಾನಗೆ ತಂಡದ ನಾಯಕತ್ವ

ಒಂದೆಡೆ ಸತತ ಸೋಲುಗಳಿಂದ ಕಂಗೆಟ್ಟಿರುವ ಭಾರತ ಪುರುಷರ ಕ್ರಿಕೆಟ್ ತಂಡದಲ್ಲಿ ನಾಯಕತ್ವ ಬದಲಾಗಬೇಕು ಎಂಬ ಕೂಗು ಜೋರಾಗಿ ಕೇಳಿಬರುತ್ತಿರುವಾಗಲೇ, ಭಾರತ ಮಹಿಳಾ ಕ್ರಿಕೆಟ್ ತಂಡದಲ್ಲಿ ನಾಯಕಿಯ ಬದಲಾವಣೆ ನಡೆದಿದೆ. ಹೌದು, ಭಾರತ ಮಹಿಳಾ ತಂಡ ಇದೇ ಜನವರಿ 10 ರಿಂದ ಐರ್ಲೆಂಡ್ ವಿರುದ್ಧ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಆಡಬೇಕಿದೆ. ಈ ಸರಣಿಗೆ ಇದೀಗ ಭಾರತ ಮಹಿಳಾ ತಂಡವನ್ನು ಪ್ರಕಟಿಸಿದ್ದು, ತಂಡದ ನಾಯಕತ್ವವನ್ನು ಹರ್ಮನ್‌ಪ್ರೀತ್ ಕೌರ್ ಬದಲಿಗೆ ತಂಡದ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನಗೆ ವಹಿಸಲಾಗಿದೆ.

ವಾಸ್ತವವಾಗಿ ತಂಡದ ನಿಯಮಿತ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರಿಗೆ ಈ ಸರಣಿಯಿಂದ ವಿಶ್ರಾಂತಿ ನೀಡಲಾಗಿದೆ. ಹೀಗಾಗಿ ಅವರ ಅನುಪಸ್ಥಿತಿಯಲ್ಲಿ ತಂಡ ಉಪನಾಯಕಿಯಾಗಿರುವ ಸ್ಮೃತಿ ಮಂಧಾನ ಅವರಿಗೆ ನಾಯಕತ್ವ ನೀಡಲಾಗಿದೆ. ಉಪನಾಯಕತ್ವದ ಜವಬ್ದಾರಿವನ್ನು ಆಲ್‌ರೌಂಡರ್ ದೀಪ್ತಿ ಶರ್ಮಾ ಅವರಿಗೆ ವಹಿಸಲಾಗಿದೆ. ಈ ಸರಣಿಯಿಂದ ಹರ್ಮನ್‌ಪ್ರೀತ್ ಮಾತ್ರವಲ್ಲದೆ ಅನುಭವಿ ವೇಗದ ಬೌಲರ್ ರೇಣುಕಾ ಸಿಂಗ್ ಠಾಕೂರ್ ಅವರಿಗೂ ವಿಶ್ರಾಂತಿ ನೀಡಲಾಗಿದೆ.

ವಾಸ್ತವವಾಗಿ ಈ ಸರಣಿಗೂ ಮುನ್ನ ನಡೆದಿದ್ದ ವೆಸ್ಟ್ ಇಂಡೀಸ್ ವಿರುದ್ಧದ ಟಿ20 ಸರಣಿಯಲ್ಲೂ ಮಂಧಾನ ತಂಡವನ್ನು ಮುನ್ನಡೆಸಿದ್ದರು. ಆ ಸರಣಿಯಲ್ಲೂ ಹರ್ಮನ್‌ಪ್ರೀತ್ ಕೌರ್‌ಗೆ ವಿಶ್ರಾಂತಿ ನೀಡಲಾಗಿತ್ತು. ಇದೀಗ ಮತ್ತೊಮ್ಮೆ ಐರ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಹರ್ಮನ್‌ಪ್ರೀತ್ ಕೌರ್‌ಗೆ ವಿಶ್ರಾಂತಿ ನೀಡಲಾಗಿದೆ. ಇದೀಗ ಸ್ಮೃತಿ ಮಂಧಾನ ಅವರನ್ನು ಪೂರ್ಣಾವಧಿ ನಾಯಕಿಯನ್ನಾಗಿ ಮಾಡುವ ಚಿಂತನೆಯಲ್ಲಿದ್ದಾರೆ ಎಂಬುದನ್ನು ಆಯ್ಕೆಗಾರರ ಈ ತಂತ್ರ ಸ್ಪಷ್ಟವಾಗಿ ಸೂಚಿಸುತ್ತಿದೆ.

ನಾಯಕಿ ಸ್ಥಾನ ಪಡೆದ ನಂತರ ಒತ್ತಡ'ಕ್ಕೊಳಗಾಗದೆ ಇರುವುದು ಮಂಧಾನ ಅವರನ್ನು ನಾಯಕಿ ಸ್ಥಾನಕ್ಕೆ ಆಯ್ಕೆ ಮಂಡಳಿ ನೋಡುತ್ತಿರುವುದಕ್ಕೆ ಕಾರಣವಾಗಿದೆ.

ವೆಸ್ಟ್ ಇಂಡೀಸ್ ವಿರುದ್ಧದ ಟಿ20 ಸರಣಿಯ ಎಲ್ಲಾ ಮೂರು ಟಿ20 ಪಂದ್ಯಗಳಲ್ಲಿ ಮಂಧಾನ ಅರ್ಧಶತಕ ಗಳಿಸಿದ್ದರು. ಮೊದಲ ಟಿ20ಯಲ್ಲಿ 54 ರನ್, ಎರಡನೇ ಟಿ20ಯಲ್ಲಿ 62 ರನ್ ಮತ್ತು ಮೂರನೇ ಟಿ20ಯಲ್ಲಿ 77 ರನ್ ಗಳಿಸುವ ಮೂಲಕ ಹ್ಯಾಟ್ರಿಕ್ ಅರ್ಧಶತಕ ದಾಖಲಿಸಿದ್ದರು.

ಮಂಧಾನ ಟಿ20 ಸರಣಿಯಲ್ಲಿ ಮಾತ್ರವಲ್ಲದೆ ಏಕದಿನ ಸರಣಿಯ ಮೊದಲೆರಡು ಪಂದ್ಯಗಳಲ್ಲೂ ಅರ್ಧಶತಕ ಬಾರಿಸಿದ್ದರು. ಆದರೆ ಮೂರನೇ ಏಕದಿನ ಪಂದ್ಯದಲ್ಲಿ 4 ರನ್ ಗಳಿಸಿ ಔಟಾದರು.

| ಭಾರತ-ಐರ್ಲೆಂಡ್ ಏಕದಿನ ಸರಣಿ | | |
|---|---|---|
| 1ನೇ ಏಕದಿನ | ಜನವರಿ 10 | ರಾಜ್‌ಕೋಟ್ |
| 2ನೇ ಏಕದಿನ | 12 ಜನವರಿ | ರಾಜ್‌ಕೋಟ್ |
| 3ನೇ ಏಕದಿನ | 15 ಜನವರಿ | ರಾಜ್‌ಕೋಟ್ |

ಮಂಧಾನ ನಾಯಕತ್ವದಲ್ಲಿ ಟೀಂ ಇಂಡಿಯಾ ವೆಸ್ಟ್ ಇಂಡೀಸ್ ವಿರುದ್ಧ ಟಿ20 ಸರಣಿಯನ್ನು 3-0 ಅಂತರದಲ್ಲಿ ಕ್ಲೀನ್ ಸ್ವೀಪ್ ಮಾಡಿತ್ತು.

ಏಕದಿನ ಸರಣಿಯನ್ನೂ ತಂಡ 3-0 ಅಂತರದಲ್ಲಿ ಗೆದ್ದುಕೊಂಡಿತ್ತು.

ಇದೀಗ ಐರ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲೂ ಇದೇ ರೀತಿಯ ಪ್ರದರ್ಶನವನ್ನು ಭಾರತೀಯ ಅಭಿಮಾನಿಗಳು ನಿರೀಕ್ಷಿಸುತ್ತಿದ್ದಾರೆ.

**ಏಕದಿನ ಸರಣಿಗೆ ಭಾರತ ತಂಡ:** ಸ್ಮೃತಿ ಮಂಧಾನ (ನಾಯಕಿ), ದೀಪ್ತಿ ಶರ್ಮಾ (ಉಪನಾಯಕಿ), ಪ್ರತೀಕಾ ರಾವಲ್, ಹರ್ಲೀನ್ ಡಿಯೋಲ್, ಜೆಮಿಮಾ ರಾಡ್ರಿಗಸ್, ಉಮಾ ಚೆಟ್ರಿ (ವಿಕೆಟ್ ಕೀಪರ್), ರಿಚಾ ಘೋಷ್ (ವಿಕೆಟ್ ಕೀಪರ್), ತೇಜಲ್ ಹಸಬ್ನಿಸ್, ರಾಘ್ವಿ ಬಿಸ್ಟ್, ಮಿನ್ನು ಮಣಿ, ಪ್ರಿಯಾ ಮಿಶ್ರಾ, ತನುಜಾ ಕನ್ವರ್, ಟೈಟಾಸ್ ಸಾಧು, ಸೈಮಾ ಠಾಕೋರ್, ಸಯಾಲಿ ಸತ್ಘರೆ.

## ಇಂಗ್ಲೆಂಡ್ ವಿರುದ್ಧದ ಬುಮ್ರಾ ಅನುಮಾನ..!



ಏಕದಿನ ಸರಣಿಗೆ ಬುಮ್ರಾ ಅನಿವಾರ್ಯ

ಆಸ್ಟ್ರೇಲಿಯಾ ವಿರುದ್ಧ ಪ್ರತಿಷ್ಠಿತ ಬಾರ್ಡರ್- ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯನ್ನು ಸೋತಿರುವ ಟೀಂ ಇಂಡಿಯಾಕ್ಕೆ ಮತ್ತೊಂದು ಆಘಾತಕ್ಕಾರಿ ಸುದ್ದಿಯೊಂದು ಎದುರಾಗಿದೆ. ಸಿಡ್ನಿ ಟೆಸ್ಟ್‌ನ ಎರಡನೇ ದಿನದಾಟದ ವೇಳೆ ಬೆನ್ನು ನೋವಿಗೆ ತುತ್ತಾಗಿದ್ದ ತಂಡದ ಸ್ಟಾರ್ ವೇಗಿ ಜಸ್ಪ್ರೀತ್ ಬುಮ್ರಾರನ್ನು ಸ್ಕ್ಯಾನಿಂಗ್‌ಗಾಗಿ ಆಸ್ಪತ್ರೆಗೆ ಕಳುಹಿಸಲಾಗಿತ್ತು. ಆ ಬಳಿಕ ತಂಡವನ್ನು ಕೂಡಿಕೊಂಡಿದ್ದ ಬುಮ್ರಾ ಮೂರನೇ ದಿನದಾಟದಲ್ಲಿ ತಂಡದ ಪರ ಕಣಕ್ಕಿಳಿದಿರಲಿಲ್ಲ. ಇತ್ತ ಬೌಲಿಂಗ್ ಸಹ ಮಾಡಿರಲಿಲ್ಲ. ಇದರರ್ಥ ಬುಮ್ರಾ ಅವರ ಇಂಜುರಿ ಕೊಂಚ ಗಂಭೀರವಾಗಿರುವ ಸಾಧ್ಯತೆಗಳಿವೆ. ಈ ನಡುವೆ ಮತ್ತೊಂದು ಆಘಾತಕ್ಕಾರಿ ಸುದ್ದಿ ಹರಿದಾಡುತ್ತಿದ್ದು, ಇದೇ ಜನವರಿ 22 ರಿಂದ ಆರಂಭವಾಗಲಿರುವ ಇಂಗ್ಲೆಂಡ್ ವಿರುದ್ಧದ ತವರು ಸರಣಿಯಲ್ಲಿ ಬುಮ್ರಾ ಆಡುವುದು ಅನುಮಾನ ಎಂದು ಹೇಳಲಾಗುತ್ತಿದೆ.

**ಇಂಗ್ಲೆಂಡ್ ವಿರುದ್ಧ ಟಿ20 - ಏಕದಿನ ಸರಣಿ**

ಮೇಲೆ ಹೇಳಿದಂತೆ ಬಾರ್ಡರ್ ಗವಾಸ್ಕರ್ ಟ್ರೋಫಿ ನಂತರ ಇದೀಗ ಟೀಂ ಇಂಡಿಯಾ ಇಂಗ್ಲೆಂಡ್ ವಿರುದ್ಧ ಏಕದಿನ ಹಾಗೂ ಟಿ20 ಸರಣಿಗಳನ್ನು ಆಡಬೇಕಿದೆ. ಈ ಎರಡು ಸರಣಿಗಳಿಗೆ ಟೀಂ ಇಂಡಿಯಾ ಇನ್ನೂ ಪ್ರಕಟವಾಗಿಲ್ಲ. ಆದರೆ ಅದಕ್ಕೂ ಮೊದಲು ಬುಮ್ರಾ ಅವರ ಫಿಟ್ನೆಸ್ ತಂಡಕ್ಕೆ ದೊಡ್ಡ ತಲೆನೋವಾಗಿದೆ. ಹೀಗಾಗಿ ಸರಣಿ ವೇಳೆಗೆ ಬುಮ್ರಾ ಗುಣಮುಖರಾಗಿ ತಂಡದ ಪರ ಕಣಕ್ಕಿಳಿಯುತ್ತಾರಾ ಎಂಬುದು ಅಭಿಮಾನಿಗಳಲ್ಲಿ ಮೂಡಿರುವ ಪ್ರಶ್ನೆಯಾಗಿದೆ. ಒಂದು ವೇಳೆ ಸರಣಿ ಆರಂಭಕ್ಕೂ ಮುನ್ನ ಬುಮ್ರಾ ಸಂಪೂರ್ಣವಾಗಿ ಚೇತರಿಸಿಕೊಂಡರೆ ಟೀಂ ಇಂಡಿಯಾ ಕೊಂಚ ನಿರಾಳವಾಗಲಿದೆ. ಇಂಗ್ಲೆಂಡ್ ವಿರುದ್ಧ ಟೀಂ ಇಂಡಿಯಾ ಮೊದಲು ಐದು ಪಂದ್ಯಗಳ ಟಿ20 ಸರಣಿಯನ್ನು ಆಡಬೇಕಿದೆ. ಆ ಬಳಿಕ ಏಕದಿನ ಸರಣಿ ಆರಂಭವಾಗಲಿದೆ. ಒಂದು ವೇಳೆ ಬುಮ್ರಾ ಟಿ20 ಸರಣಿ ಆಡದಿದ್ದರೂ ಆಡಳಿತ ಮಂಡಳಿಗೆ ಯಾವುದೇ ಸಮಸ್ಯೆ ಇಲ್ಲ.

ಆದರೆ ಏಕದಿನ ಸರಣಿ ವೇಳೆಗೆ ಬುಮ್ರಾ ಗುಣಮುಖರಾಗಲೇಬೇಕು. ಏಕೆಂದರೆ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯ ಬಳಿಕ ಚಾಂಪಿಯನ್ಸ್ ಟ್ರೋಫಿ ಆರಂಭವಾಗಲಿದೆ. ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ಏಕದಿನ ಮಾದರಿಯಲ್ಲಿ ನಡೆಯುವುದರಿಂದ, ಈ ಟೂರ್ನಿಗೂ ಮುನ್ನ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿ ಟೀಂ ಇಂಡಿಯಾದ ತಯಾರಿಗೆ ಸಹಕಾರಿಯಾಗಲಿದೆ. ಹೀಗಾಗಿ ಈ ಸರಣಿಯಲ್ಲಿ ಬುಮ್ರಾ ಆಡುವುದು ಅನಿವಾರ್ಯವಾಗಿದೆ. ಹೀಗಾಗಿ ಏಕದಿನ ಸರಣಿ ವೇಳೆಗೆ ಬುಮ್ರಾ ಸಂಪೂರ್ಣವಾಗಿ ಫಿಟ್ ಆಗಿ ಮೈದಾನಕ್ಕೆ ಮರಳಬೇಕೆಂಬುದು ಅಭಿಮಾನಿಗಳ ಪ್ರಾರ್ಥನೆಯಾಗಿದೆ.

## ನೋ ನಿವೃತ್ತಿ ವಿರಾಟ್ ಕೊಹ್ಲಿ



ಪ್ರತಿಷ್ಠಿತ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಅತ್ಯಂತ ಕಳಪೆ ಪ್ರದರ್ಶನ ನೀಡಿದ ಪ್ರಮುಖರಲ್ಲಿ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಹೆಸರು ಮುಂಚೂಣಿಯಲ್ಲಿದೆ. ಈ ಇಬ್ಬರು ಹಿರಿಯ ಆಟಗಾರರಿಂದ ನಿರೀಕ್ಷಿತ ಪ್ರದರ್ಶನ ಮೂಡಿಬರದ ಕಾರಣ ನಿವೃತ್ತಿಯಾಗುವುದು ಉತ್ತಮ ಎಂಬ ಅಭಿಪ್ರಾಯಗಳು ಕೇಳಿ ಬಂದಿದ್ದವು. ಇದರ ಬೆನ್ನಲ್ಲೇ ಕಿಂಗ್ ಕೊಹ್ಲಿ ಸದ್ಯಕ್ಕಂತು ನಿವೃತ್ತರಾಗಲ್ಲ ಎಂಬ ವಿಚಾರ ಬೆಳಕಿಗೆ ಬಂದಿದೆ.

ಪಿಟಿಐ ವರದಿಗಳ ಪ್ರಕಾರ, ವಿರಾಟ್ ಕೊಹ್ಲಿ ಸದ್ಯ ನಿವೃತ್ತರಾಗುವ ಯಾವುದೇ ಮನಸ್ಥಿತಿಯಲ್ಲಿಲ್ಲ. ಬದಲಾಗಿ ಇನ್ನೂ ಮೂರು ವರ್ಷಗಳ ಕಾಲ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಮುಂದುವರೆಯುವ ಇರಾದೆಯಲ್ಲಿದ್ದಾರೆ. ಅಲ್ಲದೆ 2027 ರವರೆಗೆ ಟೀಮ್ ಇಂಡಿಯಾ ಪರ ಕಣಕ್ಕಿಳಿಯುವ ವಿಶ್ವಾಸ ಹೊಂದಿದ್ದಾರೆ. ಇಲ್ಲಿ ವಿರಾಟ್ ಕೊಹ್ಲಿ 2027ರ ಏಕದಿನ ವಿಶ್ವಕಪ್ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಲು ಪ್ಲ್ಯಾನ್ ರೂಪಿಸಿದ್ದಾರೆ ಎಂದು ತಿಳಿದು ಬಂದಿದೆ. ಹೀಗಾಗಿ ಕಿಂಗ್ ಕೊಹ್ಲಿಯನ್ನು ಇನ್ನೂ ಮೂರು ವರ್ಷಗಳ ಕಾಲ ಟೀಮ್ ಇಂಡಿಯಾದಲ್ಲಿ ಕಾಣಬಹುದು.

ಇದನ್ನು ಪುಷ್ಠೀಕರಿಸುವಂತೆ ಇತ್ತೀಚೆಗಷ್ಟೇ ವಿರಾಟ್ ಕೊಹ್ಲಿಯ ಬಾಲ್ಯದ ಕೋಚ್ ರಾಜ್ ಕುಮಾರ್ ಶರ್ಮಾ ಸಹ ಹೇಳಿಕೆ ನೀಡಿದ್ದಾರೆ. ವಿರಾಟ್ ಸದ್ಯ ನಿವೃತ್ತಿಯ ಯೋಚನೆಯಲ್ಲಿಲ್ಲ. ಅವರು ಇನ್ನೂ 5 ವರ್ಷಗಳ ಕಾಲ ಮೈದಾನದಲ್ಲಿ ಕಾಣಿಸಿಕೊಳ್ಳುವ ವಿಶ್ವಾಸವಿದೆ ತಿಳಿಸಿದ್ದರು. ಈ ಮೂಲಕ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಬಳಿಕ ಕೊಹ್ಲಿ ನಿವೃತ್ತಿ ನೀಡಲಿದ್ದಾರೆ ಎಂಬ ವದಂತಿಯನ್ನು ತಳ್ಳಿ ಹಾಕಿದ್ದರು. ಹಾಗೆಯೇ ಟೀಮ್ ಇಂಡಿಯಾದ ಮಾಜಿ ಕೋಚ್ ರವಿ ಶಾಸ್ತ್ರಿ ಕೂಡ ವಿರಾಟ್ ಕೊಹ್ಲಿ ಇನ್ನೂ ಮೂರು ವರ್ಷಗಳ ಕಾಲ ಭಾರತದ ಪರ ಕಣಕ್ಕಿಳಿಯಲಿದ್ದಾರೆ ಎಂದು ತಿಳಿಸಿದ್ದರು. ಇವೆಲ್ಲವನ್ನೂ ಗಮನಿಸಿದರೆ 2027 ರಲ್ಲಿ ಸೌತ್ ಆಫ್ರಿಕಾ, ನಮೀಬಿಯಾ ಹಾಗೂ ಝಿಂಬಾಬ್ವೆ ಜಂಟಿಯಾಗುವ ಆಯೋಜಿಸುವ ಏಕದಿನ ವಿಶ್ವಕಪ್ ಮೂಲಕ ವಿರಾಟ್ ಕೊಹ್ಲಿ ನಿವೃತ್ತಿ ಘೋಷಿಸಬಹುದು.

## ರೋಹಿತ್ ಶರ್ಮಾ ಮೇಲೆ ಅಪನಂಬಿಕೆ



ಚಾಂಪಿಯನ್ಸ್ ಟ್ರೋಫಿಗಾಗಿ ಸಿದ್ಧತೆಗಳು ಶುರುವಾಗಿದೆ. ಫೆಬ್ರವರಿ 19 ರಿಂದ ಆರಂಭವಾಗಲಿರುವ ಈ ಟೂರ್ನಿಗಾಗಿ ತಂಡಗಳನ್ನು ಪ್ರಕಟಿಸಲು ಜನವರಿ 12 ರವರೆಗೆ ಗಡುವು ನೀಡಲಾಗಿದೆ. ಇತ್ತ ಈ ಗಡುವಿನ ಬೆನ್ನಲ್ಲೇ ಬಿಸಿಸಿಐ ಆಯ್ಕೆ ಸಮಿತಿ ಟೀಮ್ ಇಂಡಿಯಾದಲ್ಲಿ ಮಹತ್ವದ ಬದಲಾವಣೆ ತರಲು ಚಿಂತನೆ ನಡೆಸಿದೆ. ಅದರಲ್ಲೂ ಚಾಂಪಿಯನ್ಸ್ ಟ್ರೋಫಿ ತಂಡದ ನಾಯಕನಾಗಿ ಜಸ್‌ಪ್ರೀತ್ ಬುಮ್ರಾ ಅವರನ್ನು ಪರಿಗಣಿಸಲು ಚರ್ಚೆ ನಡೆಸಿದೆ. ಇದಕ್ಕೆ ಮುಖ್ಯ ಕಾರಣ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರ ಕಳಪೆ ಫಾರ್ಮ್. ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಅತ್ಯಂತ ಹೀನಾಯ ಪ್ರದರ್ಶನ ನೀಡಿರುವ ರೋಹಿತ್ ಶರ್ಮಾ ಚಾಂಪಿಯನ್ಸ್ ಟ್ರೋಫಿ ಹೇಗೆ ಪ್ರದರ್ಶನ ನೀಡುತ್ತಾರೆ ಎಂಬುದೇ ಚಿಂತೆ. ಒಂದು ವೇಳೆ ಈ ಟೂರ್ನಿಯಲ್ಲೂ ಅವರು ಕಳಪೆ ಪ್ರದರ್ಶನ ನೀಡಿದರೆ ನಾಯಕತ್ವ ಬದಲಾವಣೆ ಅನಿವಾರ್ಯ.

ಆದರೆ ಪ್ರಸ್ತುತ ಭಾರತ ಏಕದಿನ ತಂಡದ ಉಪನಾಯಕ ಶುಭ್‌ಮನ್ ಗಿಲ್‌ಗೆ ಅನುಭವದ ಕೊರತೆಯಿದೆ. ಹೀಗಾಗಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಅವರಿಗೆ ಉಪನಾಯಕನ ಸ್ಥಾನ ನೀಡದಿರಲು ಬಿಸಿಸಿಐ ಆಯ್ಕೆ ಸಮಿತಿ ಚಿಂತಿಸಿದೆ. ಬದಲಾಗಿ ಜಸ್‌ಪ್ರೀತ್ ಬುಮ್ರಾ ಅವರನ್ನು ವೈಸ್ ಕ್ಯಾಪ್ಟನ್ ಆಗಿ ನೇಮಿಸಲು ಆಸಕ್ತಿ ಹೊಂದಿದೆ. ಈ ಮೂಲಕ ಚಾಂಪಿಯನ್ಸ್ ಟ್ರೋಫಿಯಲ್ಲಿ ರೋಹಿತ್ ಶರ್ಮಾ ವಿಫಲರಾದರೆ, ಆಡುವ ಬಳಗದಿಂದ ಅವರನ್ನು ಕೈ ಬಿಟ್ಟು ಜಸ್‌ಪ್ರೀತ್ ಬುಮ್ರಾಗೆ ಕ್ಯಾಪ್ಟನ್ ಪಟ್ಟ ನೀಡಲು ಬಿಸಿಸಿಐ ಪ್ಲ್ಯಾನ್ ರೂಪಿಸಿದೆ. ಹೀಗಾಗಿ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಗಿಲ್ ಬದಲಿಗೆ ಉಪನಾಯಕನಾಗಿ ಜಸ್‌ಪ್ರೀತ್ ಬುಮ್ರಾ ಕಾಣಿಸಿಕೊಳ್ಳುವುದು ಬಹುತೇಕ ಖಚಿತ ಎನ್ನಬಹುದು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**